ಸಂಪುಟ: 05 ಸಂಚಿಕೆ: 161 ಪುಟಗಳು: 08 ಭಾನುವಾರ 24 ಆಗಸ್ಟ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**

ನಮ್ಮ ನೈತಿಕ ಪ್ರಕೃತಿ ಎಷ್ಟು ಉನ್ನತ ಮಟ್ಟದ್ದಾಗಿರುತ್ತದೋ ನಮ್ಮ ಉನ್ನತಿಯೂ ಅಷ್ಟೇ ಎತ್ತರದ್ದಾಗಿರುತ್ತದೆ.

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ರಾಜ್ಯದಲ್ಲಿದ್ದಾರೆ 500 ಅಕ್ರಮ ನಿವಾಸಿಗಳು, ಈವರೆಗೆ 304 ಮಂದಿ ಗಡಿಪಾರು!

● ವಿದೇಶಿ ಪ್ರಜೆಗಳು ವಾಸವಿರುವ ಸ್ಥಳಗಳಲ್ಲಿ ನಿಗಾ ● 229 ಜನ ವಿದೇಶಿಗರ ವಿರುದ್ಧ 61 ಪ್ರಕರಣ ದಾಖಲು

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ವೀಸಾ ಅವಧಿ ಮೀರಿ ವಾಸವಾಗಿರುವ 500 ಮಂದಿ ಅಕ್ರಮ ನಿವಾಸಿಗಳನ್ನು ಪತ್ತೆ ಹಚ್ಚಲಾಗಿದೆ. ಈ ಪೈಕಿ ಬೆಂಗಳೂರು ನಗರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಅಕ್ರಮ ನಿವಾಸಿಗಳು ಇದ್ದಾರೆ. ಸದ್ಯ ಇರುವ 500 ಅಕ್ರಮ ನಿವಾಸಿಗಳ ಪೈಕಿ 304 ಮಂದಿಯನ್ನು ಈಗಾಗಲೇ ಗಡಿಪಾರು ಮಾಡಲಾಗಿದೆ.

**ವಿದೇಶಿಗರ ವಿರುದ್ಧ 61 ಪ್ರಕರಣ:** ಇನ್ನು ರಾಜ್ಯದಲ್ಲಿ 229 ಜನ ವಿದೇಶಿಗರ ವಿರುದ್ಧ ಒಟ್ಟು 61 ಪ್ರಕರಣಗಳನ್ನು ದಾಖಲು ಮಾಡಲಾಗಿದೆ. ವಿವಿಧ ಅಪರಾಧ ಕೃತ್ಯಗಳಲ್ಲಿ ಭಾಗಿಯಾದ ಹಿನ್ನಲೆಯಲ್ಲಿ ಹಾಗೂ ನಿಯಮ ಉಲ್ಲಂಘನೆ ಮಾಡಿದ ಹಿನ್ನಲೆಯಲ್ಲಿ ಈ ಪ್ರಕರಣ ದಾಖಲು ಮಾಡಲಾಗಿದೆ.

**ನಕಲಿ ಆಧಾರ್ ಕಾರ್ಡ್ ಪ್ರಕರಣ:** ಇನ್ನು ಅಕ್ರಮ ವಲಸಿಗರಿಗೆ ನಕಲಿ ಆಧಾರ್ ಕಾರ್ಡ್ ಸೇರಿದಂತೆ ಇನ್ನಿತರ ನಕಲಿ ದಾಖಲೆಗಳನ್ನು ಸೃಷ್ಟಿಸಿ ನೀಡಲು ಸಹಕರಿಸಿದ ಒಟ್ಟು 5 ಜನರ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ. ಬೆಂಗಳೂರು ನಗರದಲ್ಲಿ 1, ಬೆಂಗಳೂರು ಜಿಲ್ಲೆಯಲ್ಲಿ 3 ಹಾಗೂ



ಉಡುಪಿ ಜಿಲ್ಲೆಯಲ್ಲಿ 1 ಪ್ರಕರಣ ದಾಖಲಾಗಿದೆ.

**ಅಕ್ರಮ ನಿವಾಸಿಗಳ ವಿರುದ್ಧ ಕ್ರಮ ಏನು:** ರಾಜ್ಯದಲ್ಲಿ ಅಕ್ರಮ ವಲಸಿಗರನ್ನು ಪತ್ತೆ ಹಚ್ಚಲು ಪೊಲೀಸ್ ಠಾಣಾ ಮಟ್ಟದಲ್ಲಿ ಗುಪ್ತಚರ ಸಿಬ್ಬಂದಿ ಹಾಗೂ ಕ್ರೈಂ ಸಿಬ್ಬಂದಿಗಳು ವಿದೇಶೀಯರ ಚಲನವಲನಗಳ ಮೇಲೆ ನಿಗಾ ವಹಿಸುವಂತೆ ಸೂಕ್ತ ತಿಳುವಳಿಕೆ ನೀಡಲಾಗಿರುತ್ತದೆ. ರಾಜ್ಯದಲ್ಲಿ ಠಾಣಾ ಮಟ್ಟದಲ್ಲಿ ಚಿಂದಿ ಆಯುವ ಕೆಲಸ ಮಾಡುವ ವ್ಯಕ್ತಿಗಳ ಮೇಲೆ ಹಾಗೂ ನೆಲೆಸಿರುವ ಸ್ಥಳಗಳ ಬಳಿ ಹೆಚ್ಚಿನ ನಿಗಾವಹಿಸುವಂತೆ ಅವರ ಚಲನವಲನಗಳ ಮೇಲೆ ಸೂಕ್ತ ಗಮನಹರಿಸುವಂತೆ ಎಲ್ಲಾ ಘಟಕಾಧಿಕಾರಿಗಳಿಗೆ ಸೂಕ್ತ ತಿಳುವಳಿಕೆ ನೀಡಲಾಗಿರುತ್ತದೆ.

ರಾಜ್ಯದಲ್ಲಿ ಹೆಚ್ಚು ವಿದೇಶಿ ಪ್ರಜೆಗಳು ವಾಸಿಸುವ ಸ್ಥಳಗಳ ಬಳಿ ಸತತ ನಿಗಾವಹಿಸಲು ಮೀಸಲು ಪಡೆ ಹಾಗೂ ಸಿಬ್ಬಂದಿಗಳನ್ನು ನಿಯೋಜಿಸಿ ಕ್ರಮ ಜರುಗಿಸಲು ಎಲ್ಲಾ ಘಟಕಾಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ. ರಾಜ್ಯದಲ್ಲಿ ಅವಧಿ ಮೀರಿ ವಾಸವಾಗಿರುವ ಹಾಗೂ ಅಕ್ರಮವಾಗಿ ನೆಲೆಸಿರುವ ವಿದೇಶಿ ಪ್ರಜೆಗಳು ಪತ್ತೆಯಾದಲ್ಲಿ ಅಂತಹ ಆರೋಪಿಗಳನ್ನು ಅವರ ದೇಶದ ವಿದೇಶಿ ಮಂತ್ರಾಲಯದ ಮೂಲಕ ಆಯಾ ದೇಶಗಳಿಗೆ ಹಾಗೂ ವಿದೇಶಾಂಗ ವ್ಯವಹಾರಗಳ ಸಚಿವಾಲಯಗೆ ಮಾಹಿತಿಯನ್ನು ನೀಡಲಾಗುತ್ತಿದೆ.

**ಮತ್ತೊಂದು ಬಂಧನ ಕೇಂದ್ರವನ್ನು ತೆರೆಯುವ ಪ್ರಸ್ತಾವನೆ**

ರಾಜ್ಯದಲ್ಲಿ ನೆಲೆಸಿರುವ ವಿದೇಶೀ ಪ್ರಜೆಗಳ ವಿರುದ್ಧ ಪ್ರಕರಣ ದಾಖಲಿಸಿ ನ್ಯಾಯಾಲಯದಲ್ಲಿ ಇತ್ಯರ್ಥವಾಗುವವರೆಗೂ ಸಂಬಂಧಪಟ್ಟ ಇಲಾಖೆಯಿಂದ ನಿರ್ಗಮನ ಪರವಾನಗಿ ಯನ್ನು ಪಡೆಯುವವರೆಗೆ, ಸದರಿಯವರುಗಳನ್ನು ಫಾರಿನ್ ರಿಕ್ಷನ್ ಸೆಂಟರ್‌ನಲ್ಲಿ (FRC) ಇರಿಸಿ, ಪ್ರಕರಣ ಇತ್ಯರ್ಥವಾದ ನಂತರ ಸದರಿ ವಿದೇಶಿ ಪ್ರಜೆಯ ಗಡಿಪಾರು ನಿಯಮವನ್ನು ಪಾಲಿಸಲಾಗುತ್ತಿದೆ.

ರಾಜ್ಯದಲ್ಲಿ ವಿದೇಶಿ ಪ್ರಜೆಗಳು ಅಕ್ರಮವಾಗಿ ನೆಲೆಸಲು ಸಹಕಾರ ನೀಡಿರುವ ಮತ್ತು ಶೈಕ್ಷಣಿಕ ಸಂಸ್ಥೆಗಳ ವಿರುದ್ಧವೂ ಸಹ ಸೂಕ್ತ ಕಾನೂನು ಕ್ರಮ ಜರುಗಿಸಲಾಗುತ್ತಿದೆ. ವಿದೇಶಿಯರು ಅಕ್ರಮವಾಗಿ ನೆಲೆಸಿರುವ ಪತ್ತೆಯಾದಲ್ಲಿ ಸದರಿಯವರ FIPನಲ್ಲಿ ನಮೂದಿಸುವಂತೆ ಎಲ್ಲಾ ಘಟಕಾಧಿಕಾರಿಗಳಿಗೆ ಸೂಚಿಸಿದೆ.

ರಾಜ್ಯದಲ್ಲಿ ಅಕ್ರಮ ವಲಸಿಗರ ಬಂಧನದಲ್ಲಿಡಲು ಯಾವುದೇ ಕಾರಾಗೃಹವಿಲ್ಲ. ರಾಜ್ಯದಲ್ಲಿ ಅಕ್ರಮ ವಲಸಿಗರನ್ನು 2 ವಿದೇಶಿಯರ ಬಂಧನ ಬಂಧನದಲ್ಲಿಡಲು ಕೇಂದ್ರಗಳಿರುತ್ತವೆ. ಫಾರಿನರ್ಸ್ ಡಿಟೆಂನ್ಷನ್ ತಾಲ್ಲೂಕು, ಬೆಂಗಳೂರು ಜಿಲ್ಲೆ. ಸೆಂಟರ್ ಸೊಂಡೆಕೊಪ್ಪ, ನೆಲಮಂಗಲ

**ಕೇಂದ್ರದ 50 ಜನರ ಸಾಮರ್ಥ್ಯ:** ಫಾರಿನರ್ಸ್ ಡಿಟೆಂನ್ಷನ್ ಸೆಂಟರ್ ಮಹಿಳೆಯರಿಗೆ ತುಮಕೂರು ಜಿಲ್ಲೆಯಲ್ಲಿ 50 ಜನರ ಸಾಮರ್ಥ್ಯದ ಕೇಂದ್ರವಿದೆ. ಮತ್ತೊಂದು ಬಂಧನ ಕೇಂದ್ರವನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ ಎಂದು ಉತ್ತರಿಸಿದೆ.

## ಪ್ರಾದೇಶಿಕ ಭಾಷೆಗಳಲ್ಲೇ ಸ್ಪರ್ಧಾತ್ಮಕ ಪರೀಕ್ಷೆ ನಡೆಸಬೇಕು

• **ಉದಯವಾಹಿನಿ, ಬೆಂಗಳೂರು**

ಕನ್ನಡ ಸೇರಿದಂತೆ ಪ್ರಾದೇಶಿಕ ಭಾಷೆಗಳಿಗೆ ರಾಷ್ಟ್ರೀಯ ಭಾಷೆಯ ಸ್ಥಾನಮಾನ ನೀಡಬೇಕು. ಕೇಂದ್ರ ಲೋಕಸೇವಾ ಆಯೋಗ ಸೇರಿದಂತೆ ಎಲ್ಲಾ ಪರೀಕ್ಷಾ ಆಯೋಗ, ಪ್ರಾಧಿಕಾರಗಳು ಇಂಗ್ಲಿಷ್ ಕೈಬಿಟ್ಟು, ಪ್ರಾದೇಶಿಕ ಭಾಷೆಗಳಲ್ಲೇ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲು ನಿಯಮ ರೂಪಿಸಬೇಕು ಎಂದು ವಿಧಾನಪರಿಷತ್‌ನ ಬಿಜೆಪಿ ಸದಸ್ಯ ಎಚ್.ವಿಶ್ವನಾಥ್ ಒತ್ತಾಯಿಸಿದ್ದಾರೆ.

ಈ ಕುರಿತು ಕೇಂದ್ರ ಸರ್ಕಾರದ ಮೇಲೆ ಒತ್ತಡ ಹಾಕಬೇಕು ಎಂದು ಕೋರಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿರುವ ಅವರು, ಇಂಗ್ಲಿಷ್ ಒಂದು ವಿದೇಶಿ ಭಾಷೆ. ಸಂವಿಧಾನದ ಪ್ರಕಾರ ಭಾರತ ಸಾರ್ವಭೌಮ ರಾಷ್ಟ್ರ. ನೆಲ, ಜಲ, ಗಡಿಯ ವಿಚಾರದಲ್ಲಿ ಅದು ಸಾಬೀತಾಗಿದೆ. ಆದರೆ, ಆಡಳಿತ ಭಾಷೆಯ ವಿಚಾರದಲ್ಲಿ ಇಂಗ್ಲಿಷ್ ಅಗತ್ಯ ಏಕೆ ಎಂದು ಪ್ರಶ್ನಿಸಿದ್ದಾರೆ. ಜನರಿಗೆ ಬೇಕಿರುವುದು ಸ್ಥಳೀಯ ಭಾಷೆಯ ಆಡಳಿತ. ಸಂವಹನಕ್ಕೆ ಇಂಗ್ಲಿಷ್ ಜ್ಞಾನ ಅಗತ್ಯ ಎನ್ನುವುದಾದರೆ, ಆಯ್ಕೆಯಾದ ನಂತರ ಅಧಿಕಾರಿಗಳಿಗೆ ತರಬೇತಿ ಜತೆಗೆ ಇಂಗ್ಲಿಷ್ ಕಲಿಸಬಹುದು ಎಂದು ಸಲಹೆ ನೀಡಿದ್ದಾರೆ.

## ಡಿಸಿಇಟಿ: ಅಂತಿಮ ಸುತ್ತಿನ ಫಲಿತಾಂಶ ಪ್ರಕಟ; 860 ಮಂದಿಗೆ ಸೀಟು ಹಂಚಿಕೆ

• **ಉದಯವಾಹಿನಿ, ಬೆಂಗಳೂರು**

ಇಂಜಿನಿಯರಿಂಗ್ ಎರಡನೇ ವರ್ಷಕ್ಕೆ ನೇರ ಪ್ರವೇಶ ಕಲ್ಪಿಸುವ ಡಿಪ್ಲೊಮಾ ಸಿಇಟಿ ಅಂತಿಮ ಸುತ್ತಿನ ಸೀಟು ಹಂಚಿಕೆಯ ಫಲಿತಾಂಶವನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಪ್ರಕಟಿಸಿದೆ. ಕೊನೆ ಸುತ್ತಿನಲ್ಲಿ 860 ವಿದ್ಯಾರ್ಥಿಗಳಿಗೆ ವಿವಿಧ ವಿಭಾಗಗಳಿಗೆ ಸೀಟು ಹಂಚಿಕೆ ಮಾಡಲಾಗಿದ್ದು, ಆ.25ರಿಂದ 27ರವರೆಗೆ ಚಲನ್ ಡೌನ್‌ಲೋಡ್ ಮಾಡಿಕೊಂಡು, ಅ.28ರ ಒಳಗೆ ಶುಲ್ಕ ಪಾವತಿಸಬೇಕು. ಮುಂಗಡ ಠೇವಣಿ ಕಟ್ಟಿದವರ ಹಣವನ್ನು ಶುಲ್ಕದ ಜತೆ ಹೊಂದಾಣಿಕೆ ಮಾಡಿಕೊಳ್ಳಲಾಗುವುದು. ಸೀಟು ಖಾತರಿ ಚೀಟಿಯನ್ನು 29ರ ಒಳಗೆ ಡೌನ್‌ಲೋಡ್ ಮಾಡಿಕೊಂಡು 30ರ ಒಳಗೆ ಕಾಲೇಜುಗಳಿಗೆ ವರದಿ ಮಾಡಿಕೊಳ್ಳಬೇಕು ಎಂದು ಕೆಇಎ ಸೂಚಿಸಿದೆ.

**ಎಂಡಿಎಸ್ ಸೀಟು:** ಸ್ನಾತಕೋತ್ತರ ದಂತ ವೈದ್ಯಕೀಯ ಕೋರ್ಸ್‌ಗಳಿಗೆ ಲಭ್ಯವಿರುವ ಸೀಟುಗಳಿಗೆ ಕೊನೆಯ ಸುತ್ತಿನ ಸೀಟು ಹಂಚಿಕೆ ಮಾಡುತ್ತಿದ್ದು, ಅರ್ಹರು ಅ.24ರ ಒಳಗೆ ಅರ್ಜಿ ಸಲ್ಲಿಸಬಹುದು. 14 ಬಿಎಸ್‌ಸಿ ನರ್ಸಿಂಗ್, 12 ಆಯುರ್ವೇದ ಮತ್ತು ಎರಡು ವಾಸ್ತುಶಿಲ್ಪಶಾಸ್ತ್ರ ಕಾಲೇಜುಗಳು ಹೆಚ್ಚುವರಿಯಾಗಿ ಸೀಟು ಲಭ್ಯತಾ ಪಟ್ಟಿ ಸಲ್ಲಿಸಿದ್ದು. ಈ ಕಾಲೇಜುಗಳಲ್ಲಿ ಪ್ರವೇಶ ಪಡೆಯಲು ಆಸಕ್ತಿ ಇರುವವರು ಸೀಟುಗಳ ಮಾಹಿತಿ ಪಡೆದು ಆಯ್ಕೆ ದಾಖಲಿಸಬಹುದು ಎಂದು ಹೇಳಿದೆ.

## ಅಕ್ರಮ ಬೆಟ್ಟಿಂಗ್ ಕಂಪನಿ: ಶಾಸಕ ವೀರೇಂದ್ರ ಪಪ್ಪಿ ಬಂಧಿಸಿದ ಇ.ಡಿ

• **ಉದಯವಾಹಿನಿ, ಬೆಂಗಳೂರು**

ಅಕ್ರಮವಾಗಿ ಆನ್‌ಲೈನ್ ಬೆಟ್ಟಿಂಗ್ ಕಂಪನಿ ನಡೆಸುತ್ತಿದ್ದ ಆರೋಪದ ಪ್ರಕರಣಕ್ಕೆ ಸಂಬಂಧಿಸಿದಂತೆ ಚಿತ್ರದುರ್ಗದ ಕಾಂಗ್ರೆಸ್ ಶಾಸಕ ಕೆ.ಸಿ.ವೀರೇಂದ್ರ (ಪಪ್ಪಿ) ಅವರನ್ನು ಜಾರಿ ನಿರ್ದೇಶನಾಲಯದ (ಇ.ಡಿ) ಅಧಿಕಾರಿಗಳು ಸಿಕ್ಕಿಂನ ಗ್ಯಾಂಗ್ಟಕ್‌ನಲ್ಲಿ ಶನಿವಾರ ಬಂಧಿಸಿದ್ದಾರೆ.

ಚಿತ್ರದುರ್ಗದ 6, ಬೆಂಗಳೂರಿನ 10, ಗೋವಾದ 5, ಹುಬ್ಬಳ್ಳಿ, ಮುಂಬೈ, ಜೋಧಪುರದ ತಲಾ ಒಂದು ಕಡೆ ಮತ್ತು ಸಿಕ್ಕಿಂನಲ್ಲಿ ಐದು ಕಡೆ ಇ.ಡಿ ಅಧಿಕಾರಿಗಳು ಶುಕ್ರವಾರ ದಾಳಿ ನಡೆಸಿದ್ದರು. ಈ ವೇಳೆ 1 ಕೋಟಿ ವಿದೇಶಿ ಕರೆನ್ಸಿ ಸೇರಿದಂತೆ 12 ಕೋಟಿ ನಗದು ಹಾಗೂ 10 ಕೆ.ಜಿ. ಬೆಳ್ಳಿ ಸೇರಿ 6 ಕೋಟಿ ಮೌಲ್ಯದ ಆಭರಣಗಳನ್ನು ವಶಕ್ಕೆ ಪಡೆಯಲಾಗಿದೆ. ನಾಲ್ಕು ವಾಹನಗಳು, 17 ಬ್ಯಾಂಕ್ ಖಾತೆಗಳು, ಎರಡು ಬ್ಯಾಂಕ್ ಲಾಕರ್‌ಗಳನ್ನು ಜಪ್ತಿ ಮಾಡಲಾಗಿದೆ. ಇ.ಡಿ. ಅಧಿಕಾರಿಗಳು ವೀರೇಂದ್ರ ಅವರನ್ನು ಗ್ಯಾಂಗ್ಟಕ್‌ನ ಜಿಲ್ಲಾ ಮ್ಯಾಜಿಸ್ಟ್ರೇಟ್ ನ್ಯಾಯಾಲಯದಲ್ಲಿ ಹಾಜರುಪಡಿಸಿದರು. ಈ ವೇಳೆ, ಪ್ರಕರಣ ದಾಖಲಾಗಿರುವ ಬೆಂಗಳೂರು ನಗರ ನ್ಯಾಯಾಲಯದ ಎದುರು ಹಾಜರುಪಡಿಸಲು ಮ್ಯಾಜಿಸ್ಟ್ರೇಟ್ ಅನುಮತಿಸಿದ್ದಾರೆ.





## ಬಂಧನವಾದ ಮುಸುಕುಧಾರಿ

**ಧರ್ಮಸ್ಥಳ ಪ್ರಕರಣದ ಪಾತ್ರಧಾರಿ**

• **ಉದಯವಾಹಿನಿ, ಉಡುಪಿ**

ಧರ್ಮಸ್ಥಳ ಗ್ರಾಮದಲ್ಲಿ ನೂರಾರು ಶವಗಳನ್ನು ಹೂತು ಹಾಕಿದ್ದೇನೆ ಎಂದು ದೂರು ನೀಡಿದ್ದ ಮುಸುಕುಧಾರಿ ವ್ಯಕ್ತಿಯನ್ನು ಆರೋಪಗಳ ತನಿಖೆಗಾಗಿ ರಚಿಸಲಾಗಿದ್ದ ಎಸ್‌ಐಟಿ ಶನಿವಾರ ಬಂಧಿಸಿದೆ. ಬಂಧಿತ ವ್ಯಕ್ತಿಯನ್ನು ಬೆಳ್ತಂಗಡಿ ಕೋರ್ಟಿಗೆ ಹಾಜರುಪಡಿಸಿದ್ದು, ನ್ಯಾಯಾಧೀಶರು ಪೊಲೀಸರ ಕೋರಿಕೆಯಂತೆ 10 ದಿನ ಎಸ್‌ಐಟಿ ಕಸ್ಟಡಿಗೆ ನೀಡಿದ್ದಾರೆ. ಈ ಬಗ್ಗೆ ಉಡುಪಿಯಲ್ಲಿ ಗೃಹ ಸಚಿವ ಜಿ.ಪರಮೇಶ್ವರ್ ಅವರು ದೃಢಪಡಿಸಿದ್ದಾರೆ.

**ತಡರಾತ್ರಿವರೆಗೂ ವಿಚಾರಣೆ:** ವಿಶೇಷ ತನಿಖಾ ತಂಡ ಮತ್ತು ಅದರ ಮುಖ್ಯಸ್ಥರಾಗಿರುವ ಪ್ರಣವ್ ಮೊಹಂತಿ ಅವರು ಕಳೆದ ಶುಕ್ರವಾರ ತಡರಾತ್ರಿವರೆಗೆ ದೂರುದಾರರನ್ನು ವಿಚಾರಣೆ ನಡೆಸಿದ್ದಾರೆ. ಆದರೆ ದೂರುದಾರನ ಹೆಸರು ಬಹಿರಂಗಪಡಿಸಲಾಗಿಲ್ಲ. ದೂರುದಾರ ಪ್ರಕರಣದಲ್ಲಿ ನೀಡಿದ ಹೇಳಿಕೆಗಳು ಮತ್ತು ಒದಗಿಸಿದ ದಾಖಲೆಗಳಗಲ್ಲಿ ಹೊಂದಾಣಿಕೆ ಕಂಡುಬರದ ಹಿನ್ನಲೆಯಲ್ಲಿ ಆತನನ್ನು ಬಂಧನ ಮಾಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ವಿಷಯದ ಬಗ್ಗೆ ಎಸ್‌ಐಟಿ ತನ್ನ ತನಿಖೆಯನ್ನು ಮುಂದುವರೆಸಿದೆ. ದೂರುದಾರ – ಸಾಕ್ಷಿಯನ್ನು ದೀರ್ಘ ಗಂಟೆಗಳ ವಿಚಾರಣೆಯ ನಂತರ ವೈದ್ಯಕೀಯ ಪರೀಕ್ಷೆಗಾಗಿ ಆಸ್ಪತ್ರೆಗೆ ಕರೆದೊಯ್ಯಲಾಯಿತು.



**ಶಿವತಾಂಡವ ಫೋಟೋ ಪೋಸ್ಟ್ ಮಾಡಿದ ಧರ್ಮಸ್ಥಳ**

**ನೈರ್ಮಲ್ಯ ಕಾರ್ಮಿಕನ ಆರೋಪ ಮತ್ತು ದೂರಿನ ಹಿನ್ನೆಲೆ ಎಸ್‌ಐಟಿ ರಚನೆ :** ದೂರುದಾರ – ಸಾಕ್ಷಿಯಾಗಿರುವ ಮಾಜಿ ನೈರ್ಮಲ್ಯ ಕಾರ್ಮಿಕ, ಧರ್ಮಸ್ಥಳ ಗ್ರಾಮದಲ್ಲಿ ತಾನು ರಹಸ್ಯವಾಗಿ ಹಲವು ಮೃತದೇಹಗಳನ್ನು ವಿಲೇವಾರಿ ಮಾಡಿದ್ದೆ ಎಂದು ವಕೀಲರ ಮೂಲಕ ದ.ಕ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗೆ ದೂರು ನೀಡಿದ್ದ. ಈ ಹಿನ್ನೆಲೆಯಲ್ಲಿ ಧರ್ಮಸ್ಥಳ ಗ್ರಾಮದ ಪೊಲೀಸ್ ಠಾಣೆಯಲ್ಲಿ ಜುಲೈ 4ರಂದು ಪ್ರಕರಣ ದಾಖಲಾಗಿತ್ತು. ಈ ಪ್ರಕರಣವು ದೇಶಾದ್ಯಂತ ಸಂಚಲನ ಸೃಷ್ಟಿಸಿದೆ.

ಹಲವಾರು ಮೃತದೇಹಗಳನ್ನು ವಿಲೇವಾರಿ ಮಾಡಿದ್ದು, ಪ್ರಸ್ತುತ ತನಗೆ ಪಾಪಪ್ರಜ್ಞೆ ಕಾಡುತ್ತಿದೆ. ತನಗೆ ಹಾಗೂ ತನ್ನ ಕುಟುಂಬಕ್ಕೆ ಕಾನೂನಾತ್ಮಕವಾಗಿ ರಕ್ಷಣೆ ದೊರೆತ ಕೂಡಲೇ, ಈ ಅಪರಾಧ ಕೃತ್ಯಗಳನ್ನು ನಡೆಸಿದವರ ಸಂಪೂರ್ಣ ಮಾಹಿತಿಯನ್ನು ಹಾಗೂ ತಾನು ಮೃತದೇಹಗಳನ್ನು ವಿಲೇವಾರಿ ಮಾಡಿದ ಸ್ಥಳಗಳನ್ನು ಪೊಲೀಸರಿಗೆ ತೋರಿಸಲು ಸಿದ್ದವಿರುವುದಾಗಿ ಜುಲೈ 3ರಂದು ಪೊಲೀಸ್ ಅಧೀಕ್ಷಕರ ಕಚೇರಿಗೆ ಹಾಗೂ ಧರ್ಮಸ್ಥಳ ಪೊಲೀಸ್ ಠಾಣೆಗೆ ಸದ್ರಿ ವ್ಯಕ್ತಿಯಿಂದ ದೂರು ನೀಡಿದ್ದ ಈ ಬಗ್ಗೆ ದ.ಕ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಲಾಗಿತ್ತು.

ಈ ಬಗ್ಗೆ ಧರ್ಮಸ್ಥಳ ಪೊಲೀಸ್ ಠಾಣೆಯಲ್ಲಿ ಅಪರಾಧ ಕ್ರಮಾಂಕ: 39/2025, ಕಲಂ: 211(ಚಿ) ಬಿಎನ್‌ಎಸ್ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗಿತ್ತು. ಬಳಿಕ ರಾಜ್ಯ ಸರ್ಕಾರವು ಪ್ರಕರಣದ ತನಿಖೆಗೆ ರಾಜ್ಯದ ಆಂತರಿಕ ಭದ್ರತಾ ವಿಭಾಗದ ಪೊಲೀಸ್ ಮಹಾನಿರ್ದೇಶಕ ಡಾ.ಪ್ರಣವ್ ಮೊಹಂತಿ ನೇತೃತ್ವದ ನಾಲ್ವರು ಐಪಿಎಸ್ ಅಧಿಕಾರಿಗಳನ್ನು ಒಳಗೊಂಡ ವಿಶೇಷ ತನಿಖಾ ತಂಡವನ್ನು ರಚಿಸಿತ್ತು. ತದನಂತರ, ಅನಾಮಧೇಯನ ದೂರಿನ ಆಧಾರದ ಮೇಲೆ, ಧರ್ಮಸ್ಥಳ ಗ್ರಾಮದ ವಿವಿಧೆಡೆ ಆತ ಗುರುತಿಸಿರುವ ಸ್ಥಳಗಳಲ್ಲಿ ವಿಶೇಷ ತನಿಖಾ ತಂಡವು ಕಾರ್ಮಿಕರು ಹಾಗೂ ಹಿಟಾಚಿ ಬಳಸಿಕೊಂಡು ಅಗೆಯುವ ಕೆಲಸ ನಡೆಸಿದೆ. ಧರ್ಮಸ್ಥಳದ ನೇತ್ರಾವತಿ ಸ್ನಾನಘಟ್ಟದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ತಾನು ಮೃತದೇಹಗಳನ್ನು ಹೂತು ಹಾಕಿದ್ದೇನೆ ಎಂದು 13 ಸ್ಥಳಗಳನ್ನು ದೂರುದಾರ ಗುರುತಿಸಿದ್ದ.

**ಈ ಬಗ್ಗೆ ಸದನದಲ್ಲಿ ಹೇಳಿಕೆ ನೀಡಿದ್ದ ಗೃಹ ಸಚಿವರು:** ಇಲ್ಲಿಯವರೆಗೆ ಎರಡು ಸ್ಥಳಗಳಲ್ಲಿ ಕೆಲವು ಅಸ್ಥಿಪಂಜರ ಅವಶೇಷಗಳು ಕಂಡುಬಂದಿವೆ. ರಾಜ್ಯ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರು ಇತ್ತೀಚೆಗೆ ವಿಧಾನಸಭೆಯಲ್ಲಿ ದೂರುದಾರ–ಸಾಕ್ಷಿದಾರನ ಆರೋಪಗಳು ಸುಳ್ಳು ಎಂದು ಕಂಡು ಬಂದರೆ ಅವನ ವಿರುದ್ಧ ಕಾನೂನಿನಡಿಯಲ್ಲಿ ಕ್ರಮ ಕೈಗೊಳ್ಳಬಹುದು ಎಂದು ಹೇಳಿದ್ದರು. ಸದ್ಯ ಎಸ್‌ಐಟಿ ತಂಡ ದೂರುದಾರನನ್ನು ಬಂಧಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಿದೆ. ಆ.22ರಂದು ಮಂಗಳೂರು ಸಕ್ಷಮ ಪ್ರಾಧಿಕಾರದಿಂದ ಪ್ರೊಟೆಕ್ಷನ್ ಕಾಯ್ದೆಯನ್ನು ರದ್ದು ಮಾಡಿದ್ದಾರೆ.

1. ಮುಸುಕುದಾರಿ ದೂರುದಾರ ಚಿನ್ನಯ್ಯ ಬಂಧನ, 10 ದಿನ ಎಸ್‌ಐಟಿ ಕಸ್ಟಡಿಗೆ
2. ಜುಲೈ 29ರಿಂದ ನಿರಂತರವಾಗಿ ದೂರುದಾರ ಹೇಳಿದ ಶವ ಹೂತ ಜಾಗಗಳಲ್ಲಿ ಅಗೆಯುವ ಕಾರ್ಯ ನಡೆಯುತ್ತಿದೆ
3. ಜು.4ರಂದು ವಕೀಲರ ಮೂಲಕ ಅನಾಮಿಕ ವ್ಯಕ್ತಿ ಲಿಖಿತ ದೂರು ನೀಡಿದ್ದರು, 12 ಸ್ಥಳಗಳ ಶೋಧಕಾರ್ಯ ಮುಗಿದಿದೆ.

**ಅನಾಮಿಕನ ಸಂದರ್ಶನ**

ನಾನು ಶವ ಹೂತುಹಾಕಿದ್ದು ನಿಜ, ಈಗ ಕುರುಹು ಸಿಗದಿದ್ದರೆ ನಾನು ಹೊಣೆಗಾರ ಅಲ್ಲ ಎಂದು ರಾಷ್ಟ್ರೀಯ ಖಾಸಗಿ ಮಾಧ್ಯಮಕ್ಕೆ ಕೊಟ್ಟ ಸಂದರ್ಶನದಲ್ಲಿ ಹೇಳಿದ್ದಾನೆ. ನನ್ನ ಜೊತೆ ಕೆಲಸ ಮಾಡಿದವರನ್ನೂ ತನಿಖೆ ಮಾಡಬೇಕು ಎಂದು ಮನವಿ ಮಾಡಿದ್ದನು. ಎಲ್ಲಾ ಸ್ಥಳಗಳು ಈಗ ಬದಲಾಗಿವೆ, ಮರಗಳು ಬೆಳೆದಿವೆ, ಕಾಡಿನ ಪ್ರದೇಶ ಆದ ಕಾರಣ ಎಲ್ಲಾ ಕಡೆ ಅಗೆಯಲು ಸಾಧ್ಯವಿಲ್ಲ ಎಂದು ಹೇಳಿಕೆ ನೀಡಿದ್ದಾನೆ.




**ಗೃಹ ಸಚಿವರ ಪ್ರತಿಕ್ರಿಯೆ**

ಮುಸುಕುಧಾರಿ ವ್ಯಕ್ತಿಯ ಬಂಧನ ಕುರಿತಂತೆ ಉಡುಪಿಯಲ್ಲಿ ಮಾಧ್ಯಮದವರಿಗೆ ಪ್ರತಿಕ್ರಿಯಿಸಿದ ಗೃಹ ಸಚಿವ ಜಿ.ಪರಮೇಶ್ವರ್, ಬಂಧನ ಆಗಿರುವುದು ನಿಜ, ಆತ ಸದ್ಯ ಪೊಲೀಸ್ ಕಸ್ಟಡಿಯಲ್ಲಿ ಇದ್ದಾನೆ. ತನಿಖೆ ನಡೆಯುವುದರಿಂದ ಯಾವುದೇ ಮಾಹಿತಿ ನೀಡಲು ಸಾಧ್ಯವಿಲ್ಲ. ಅಧಿಕಾರಿಗಳು ತನಿಖೆ ಮುಂದುವರೆಸುತ್ತಾರೆ. ಎಸ್‌ಐಟಿ ಕಡೆಯಿಂದ ಹೆಚ್ಚಿನ ಮಾಹಿತಿ ಪಡೆಯುತ್ತೇನೆ. ತನಿಖೆ ಪೂರ್ಣಗೊಳ್ಳುವವರೆಗೆ ಹೆಚ್ಚಿನ ಮಾಹಿತಿ ನೀಡಲಾಗುವುದಿಲ್ಲ. ಇದರ ಹಿಂದೆ ಯಾವ ಜಾಲ ಇದೆ ಅನ್ನುವುದನ್ನು ಪತ್ತೆ ಮಾಡಲಾಗುವುದು ಎಂದು ತಿಳಿಸಿದರು.

## ಮಾಸ್ಕ್‌ಮ್ಯಾನ್ ಬಂಧಿಸಿದ ಎಸ್‌ಐಟಿ, 10 ದಿನ ಕಸ್ಟಡಿಗೆ

### ಎಲ್ಲಿಂದಲೋ ಬುರುಡೆ ತಂದು ಬುರುಡೆ ಬಿಟ್ಟಿದ್ದ ಚೆನ್ನಯ್ಯ!

**ಸುಜಾತ ಭಟ್ ನಿವಾಸಕ್ಕೆ ಹೆಚ್ಚಿನ ಭದ್ರತೆ**



ಇನ್ನೊಂದೆಡೆ, ಧರ್ಮಸ್ಥಳ ಗ್ರಾಮದಲ್ಲಿ 2003ರಲ್ಲಿ ವೈದ್ಯಕೀಯ ವಿದ್ಯಾರ್ಥಿನಿ ಆಗಿದ್ದ ಅನನ್ಯಾ ಭಟ್ ಹೆಸರಿನ ತಮ್ಮ ಮಗಳು ನಾಪತ್ತೆಯಾಗಿದ್ದಾಳೆ ಎಂದು ದೂರು ನೀಡಿದ್ದ ಸುಜಾತ ಭಟ್ ಅವರ ನಿವಾಸಕ್ಕೆ ಪೊಲೀಸ್ ಭದ್ರತೆ ಹೆಚ್ಚಿಸಲಾಗಿದೆ. ಬನಶಂಕರಿ ಬಳಿಯಿರುವ ಸುಜಾತ ಭಟ್ ನಿವಾಸದ ಬಳಿ ಬ್ಯಾರಿಕೇಡ್ ಅಳವಡಿಸಲಾಗಿದೆ. ಇನ್ಸ್‌ಪೆಕ್ಟರ್ ಕೊಟ್ರೇಶ್ ಅವರ ನೇತೃತ್ವದಲ್ಲಿ ಭದ್ರತೆ ಕೈಗೊಳ್ಳಲಾಗಿದೆ. ಸ್ಥಳಿಯ ಪೊಲೀಸ್ ಸಿಬ್ಬಂದಿ ಜೊತೆಗೆ ಸಿಎಆರ್ ಪೊಲೀಸ್ ತುಕಡಿಯನ್ನು ನಿಯೋಜಿಸಲಾಗಿದೆ.

## ಕರ್ನಾಟಕ ರಾಜ್ಯದಲ್ಲಿ 5 ವರ್ಷಗಳಲ್ಲಿ 75 ಹುಲಿಗಳ ಸಾವು!


■ ಅಸ್ವಾಭಾವಿಕವಾಗಿ ಪ್ರಾಣ ಕಳೆದುಕೊಂಡಿವೆ 13 ವ್ಯಾಘ್ರಗಳು ■ ಹುಲಿಗಳ ಸಂರಕ್ಷಣೆ ಇದೀಗ ರಾಜ್ಯ ಅರಣ್ಯ ಇಲಾಖೆಗೆ ಸವಾಲಾಗಿದೆ

• **ಉದಯವಾಹಿನಿ, ಬೆಂಗಳೂರು**

ಇತ್ತೀಚೆಗೆ ಮಲೆ ಮಹೇಶ್ವರ ಬೆಟ್ಟದಲ್ಲಿ 5 ಹುಲಿಗಳ ಅಸ್ವಾಭಾವಿಕ ಸಾವು ಪ್ರಕರಣ ದೇಶಾದ್ಯಂತ ಸದ್ದು ಮಾಡಿತ್ತು. ಹುಲಿಗಳಿಗೆ ವಿಷ ಪ್ರಾಶಣ ಮಾಡಿ ಹತ್ಯೆ ಮಾಡಲಾಗಿತ್ತು. ರಾಜ್ಯ ಸರ್ಕಾರ ಹಾಗೂ ಅರಣ್ಯ ಇಲಾಖೆ ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿತ್ತು. ಆರೋಪಿಗಳ ವಿರುದ್ಧ ಕ್ರಮ ಕೈಗೊಳ್ಳುವುದರ ಜೊತೆಗೆ ಕರ್ತವ್ಯ ಲೋಪದ ಆರೋಪದಲ್ಲಿ ಅಧಿಕಾರಿಗಳ ವಿರುದ್ಧವೂ ಸಹ ಕ್ರಮ ಕೈಗೊಳ್ಳಲಾಗಿತ್ತು.

ಈ ನಡುವೆ ರಾಜ್ಯದಲ್ಲಿ ಕಳೆದ 5 ವರ್ಷಗಳಲ್ಲಿ 75 ಹುಲಿಗಳು ಸಾವನ್ನಪ್ಪಿದ್ದು, ಈ ಪೈಕಿ 13 ಹುಲಿಗಳು ಅಸ್ವಾಭಾವಿಕವಾಗಿ ಮೃತಪಟ್ಟಿವೆ. ಇದರಲ್ಲಿ ಗುಂಡೇಟು, ಉರುಳಿಗೆ ಸಿಲುಕಿ, ವಿಷ ಪ್ರಾಶಣ ಹಾಗೂ ವಿದ್ಯುತ್ ಆಘಾತದಿಂದ ಹುಲಿಗಳು ಮೃತಪಟ್ಟಿವೆ. ಹುಲಿಗಳ ಸಾವಿಗೆ ಕಾರಣಕರ್ತರಾದವರ ವಿರುದ್ಧ ವನ್ಯಜೀವಿ ಸಂರಕ್ಷಣಾ ಕಾಯ್ದೆ 1972 ಅನ್ವಯ ಅಪರಾಧ ಪ್ರಕರಣ ದಾಖಲಿಸಿ ಕ್ರಮ ಕೈಗೊಳ್ಳಲಾಗಿದೆ.

**ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶ:** ● 2020-21- 2 ● 2021-22- 9 ● 2022-23- 3 ● 2023-24 -25 - ● 2024-25 -2 ● 2025-26- 2



**ಭದ್ರಾ ಹುಲಿ ಸಂರಕ್ಷಿತ ಪ್ರದೇಶ:** ● 2021-22-1 ● 2021-22- 1 **ಬಿಆರ್ ಟಿ ಹುಲಿ ಸಂರಕ್ಷಿತ ಪ್ರದೇಶ** ● 2020-21- 1 ● 2021-22- 1 ● 2022-23-2 ● 202425-1

**ಹಳಿಯಾಳ:** ● 2022-23 - 1

**ಹಾಸನ:** 2023-24 - 1

**ತಡೆಗಟ್ಟಲು ಕ್ರಮಗಳೇನು**

ಹುಲಿ ಹಾವಳಿ ಹೆಚ್ಚಾಗಿರುವ ಸೂಕ್ಷ್ಮ ಪ್ರದೇಶದಲ್ಲಿ ಬೋನುಗಳನ್ನು ಇರಿಸಿ ಸೆರೆ ಹಿಡಿದು ಸೂಕ್ತ ಆವಾಸಸ್ಥಾನಕ್ಕೆ ಸ್ಥಳಾಂತರಿಸಲು ಕ್ರಮವಹಿಸಲಾಗುತ್ತಿದೆ. ರೇಡಿಯೋ ಕಾಲರ್ ಅಳವಡಿಸಿರುವ ಹುಲಿಗಳ ಚಲನ ವಲನಗಳನ್ನು ದಿನನಿತ್ಯ ಗಮನಿಸಲು ಇಲಾಖಾವತಿಯಿಂದ ಹೆಜ್ಜೆ ಎಂಬ ಡ್ಯಾಶ್ ಬೋರ್ಡ್‌ನ್ನು ತಯಾರಿಸಲಾಗಿದೆ.

**ಮಡಿಕೇರಿ** ● 2020-21- 1 ● 2023-24- 1

**ಮಡಿಕೇರಿ ವನ್ಯಜೀವಿ:** ● 2023-24- 1

**ಎಂಎಂ ಹಿಲ್ಸ್:** ● 2025-26 -5

**ಮೈಸೂರು ಪ್ರಾದೇಶಿಕ** ● 2023-24 1 ● 2024-25 -1

**ನಾಗರಹೊಳೆ:** ● 2020-21- 3 ● 2021-22- 8 ● 2022-23- 8 ● 2023-24 -2 ● 2024-25- 4 ● 2025-26 -1

ಈ ಮೂಲಕ ಒಟ್ಟು 2020-21 ರಲ್ಲಿ 10, 2021-22 ರಲ್ಲಿ 19, 2022-23 ರಲ್ಲಿ 16, 2023-24 ರಲ್ಲಿ 12, 2024-2025 ರಲ್ಲಿ 10, 2025-26 ರಲ್ಲಿ 8 ಹುಲಿಗಳು ಸಾವನ್ನಪ್ಪಿವೆ.

ನಿಸ್ತಂತು ಜಾಲದ ಮೂಲಕ ಮಾಹಿತಿ ಸಂವಹನ ಮಾಡಲಾಗುತ್ತಿದೆ. ಅರಣ್ಯ ಪ್ರದೇಶಗಳಲ್ಲಿ ಹುಲ್ಲುಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿ ಮಾಡಲು ಹೆಚ್ಚಿನ ಅರಣ್ಯ ಪ್ರದೇಶಗಳಲ್ಲಿ ದಟ್ಟವಾಗಿ ಬೆಳೆದ ಲಂಟಾನ ಮತ್ತು ಯುಪಟೋರಿಯಂ ಕಳೆಗಳಿಂದಾಗಿ ಅಡಚಣೆಯಾಗಿ ಹುಲ್ಲಿನ ಬೆಳವಣಿಗೆಗೆ ತೀವ್ರ ಅರಣ್ಯದಲ್ಲಿ ಹುಲ್ಲಿನ ಲಭ್ಯತೆ ಗಣನೀಯವಾಗಿ ಕಡಿಮೆಯಾಗಿರುವುದರಿಂದ ಹುಲ್ಲು ಬೆಳೆಯವ ಪ್ರದೇಶಗಳಲ್ಲಿ ಬೆಳೆದಿರುವ ಲಂಟಾನ ಮತ್ತು ಯುಪಟೋರಿಯಂ ಕಳೆಗಳನ್ನು ಕಿತ್ತು ಸ್ವಚ್ಛಗೊಳಿಸಿ ಅರಣ್ಯಕ್ಕೆ ಪೂರಕವಾದ ಹುಲ್ಲು ಬೆಳೆಯಲು ಅನುವು ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಇದು ಸಸ್ಯಹಾರಿಗಳ ಸಂರಕ್ಷಣೆಗೆ ಕಾರಣವಾಗುತ್ತದೆ ಮತ್ತು ಹುಲಿಗಳಿಗೆ ಆಹಾರದ ಲಭ್ಯತೆಯನ್ನು ಖಚಿತಪಡಿಸುತ್ತದೆ.

ಹುಲಿಗಳ ಹಾವಳಿ ಹೆಚ್ಚಾಗಿರುವ ಪ್ರದೇಶದಲ್ಲಿ ಜನ ಸಂಪರ್ಕ ಸಭೆಯನ್ನು ಕರೆದು ಜನರಲ್ಲಿ ಅರಿವು ಮೂಡಿಸಲಾಗುತ್ತಿದೆ.

ಕಾಡಂಚಿನ ಗ್ರಾಮಗಳಲ್ಲಿ ಹುಲಿಗಳು ಬಂದಂತಹ ಸಂದರ್ಭಗಳಲ್ಲಿ ಸಾರ್ವಜನಿಕರಿಗೆ ಎಚ್ಚರಿಕೆ/ಮಾಹಿತಿ ನೀಡಲು Advance alert system ಅನ್ನು ತಯಾರಿಸಲಾಗಿದೆ. ಇದರಿಂದಾಗಿ ಸಾರ್ವಜನಿಕರಿಗೆ ನೇರವಾಗಿ ಸಂದೇಶಗಳನ್ನು ಕಳುಹಿಸಲಾಗುತ್ತಿದೆ. ಕರ್ನಾಟಕ ರಾಜ್ಯದಲ್ಲಿ ಹುಲಿಗಳು ಇರುವ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ಎಚ್ಚರಿಕೆ ಹಾಗೂ ಮಾಹಿತಿ ನೀಡಲಾಗುತ್ತಿದೆ.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹10,162/Gram24ct ₹9,315/Gram22ct ಬೆಳ್ಳಿ: ₹120.00/Gram

# ಬಿಬಿಎಂಪಿ ಸಾಮೂಹಿಕ ಸ್ವಚ್ಛತಾ ಕಾರ್ಯ, ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಸ್ವಚ್ಛತೆಯನ್ನು ಕಾಪಾಡಿಕೊಳ್ಳಲು ಬಿಬಿಎಂಪಿ ವ್ಯಾಪ್ತಿಯಲ್ಲಿ ಸಾಮೂಹಿಕ ಸ್ವಚ್ಛತಾ ಕಾರ್ಯ, ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆಯನ್ನು ನಡೆಸಲಾಯಿತು. ಪೂರ್ವ ವಲಯ ವ್ಯಾಪ್ತಿಯ ಪುಲಕೇಶಿನಗರ ವಿಭಾಗದ ರಿಚರ್ಡ್ಸ್ ಟೌನ್ ಹಾಗೂ ಎಚ್‌ಬಿಆರ್ ಉಪ ವಿಭಾಗದ ಟ್ಯಾನರಿ ರಸ್ತೆಯಲ್ಲಿ ಟ್ರ್ಯಾಕ್ಟರ್ ಹಾಗೂ ಜೆಸಿಬಿ ಬಳಸಿ ರಸ್ತೆಯ ಇಕ್ಕೆಲಗಳಲ್ಲಿದ್ದ ಕಟ್ಟಡದ ಭಗ್ನಾವಶೇಷಗಳು ಹಾಗೂ ತ್ಯಾಜ್ಯವನ್ನು ತೆರವುಗೊಳಿಸಲಾಯಿತು. ಸಿ.ವಿ. ರಾಮನ್ ನಗರ ವಿಭಾಗದ ಕಾಕ್ಸ್ ಟೌನ್ ಮಾರ್ಕೆಟ್‌ನ ಪಾದಚಾರಿ ಮಾರ್ಗದಲ್ಲಿದ್ದ ಅಂಗಡಿಗಳನ್ನು ತೆರವುಗೊಳಿಸಲಾಯಿತು. ಶಿವಾಜಿನಗರ ವಿಭಾಗದ ಹಲಸೂರು ಕೆರೆ ಹಾಗೂ ಕೆರೆಯ ಸುತ್ತಲಿನ ಪ್ರದೇಶಗಳಲ್ಲಿ ಗಣೇಶ ವಿಸರ್ಜನೆ ಸಂಬಂಧ ಸ್ವಚ್ಛತಾ ಕಾರ್ಯಕ್ರಮ ನಡೆಸಲಾಯಿತು.

ಪಶ್ಚಿಮ ವಲಯ ವ್ಯಾಪ್ತಿಯ ಗೋವಿಂದರಾಜನಗರ ವಿಭಾಗದ ನಾಗರಬಾವಿ, ಮಲ್ಲೇಶ್ವರ, ಅರಮನೆ ನಗರ, ಚಾಮರಾಜಪೇಟೆ ವಿಭಾಗದ ಪಾದರಾಯನಪುರ ವ್ಯಾಪ್ತಿಯ ಪೈಪ್ ಲೈನ್ ರಸ್ತೆಯಲ್ಲಿ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮ ನಡೆಸಲಾಯಿತು.

ರಾಜರಾಜೇಶ್ವರಿನಗರ ವಲಯದ ಕೆಂಗೇರಿ ವಿಭಾಗದ ಸಿಂಡಿಕೇಟ್ ಲೇಔಟ್‌ನಿಂದ (ಶಾಪ್ ರೈಟ್) ಅಂದ್ರಹಳ್ಳಿ ವೃತ್ತ, ಅಂದ್ರಹಳ್ಳಿ ಮುಖ್ಯರಸ್ತೆವರೆಗೆ ಹಾಗೂ ರಾಜರಾಜೇಶ್ವರಿನಗರ ವಿಭಾಗದ ಟಿವಿಎಸ್ ಕ್ರಾಸ್ ಜಂಕ್ಷನ್ ನಿಂದ ಪೀಣ್ಯ ಪೋಲಿಸ್ ಠಾಣೆ ಮಾರ್ಗವಾಗಿ ತುಮಕೂರು ರಸ್ತೆಯವರೆಗೆ ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆ ಹಾಗೂ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮ ನಡೆಸಲಾಯಿತು. ಕಾರ್ಯಾಚರಣೆ ವೇಳೆ ಏಕ ಬಳಕೆ ಪ್ಲಾಸ್ಟಿಕ್ ಬಳಸುತ್ತಿರುವ ಬಗ್ಗೆ ತಪಾಸಣೆ ನಡೆಸಿ, 47 ಪ್ರಕರಣಗಳಿಂದ ರೂ.71,500 ದಂಡ ವಸೂಲಿ ಮಾಡಲಾಗಿದೆ.


ಉದಯವಾಹಿನಿ ಚಿತ್ರ

ಯಲಹಂಕ ವಲಯದಲ್ಲಿ ಕೋಗಿಲು ಮುಖ್ಯರಸ್ತೆ, ಥಣಿಸಂದ್ರ ಮುಖ್ಯರಸ್ತೆಯಲ್ಲಿ ಸಾಮೂಹಿಕ ಸ್ವಚ್ಛತೆ ನಡೆಸಲಾಯಿತು.

ಮದರ್ ಡೇರಿ ಕ್ರಾಸ್, ವೀರ ಸಾವರ್ಕರ್ ಮೇಲೇತುವೆ ಕೆಳಭಾಗದಲ್ಲಿನ ತಳ್ಳುಗಾಡಿಗಳನ್ನು, ಯಲಹಂಕ ನ್ಯೂ ಟೌನ್‌ನ 4ನೇ ಮುಖ್ಯ ರಸ್ತೆ, 4ನೇ ಅಡ್ಡರಸ್ತೆಯ ಪಾದಚಾರಿ ಮಾರ್ಗದಲ್ಲಿನ ಅಂಗಡಿ ಸಾಮಗ್ರಿಗಳನ್ನು, ಅಂಗಡಿಗಳನ್ನು ಬೆಳ್ಳಹಳ್ಳಿಯ ಪಾದಚಾರಿ ಮಾರ್ಗದಲ್ಲಿನ ಅಡೆತಡೆಗಳನ್ನು ಜೆಸಿಬಿ ಬಳಸಿ ತೆರವುಗೊಳಿಸಲಾಯಿತು. ತಿರುಮೇನಹಳ್ಳಿ ಮುಖ್ಯರಸ್ತೆಯಲ್ಲಿರುವ ಬೇಕರಿಗಳಿಗೆ ಭೇಟಿ ನೀಡಿ ಸ್ವಚ್ಛತೆ ಪರಿಶೀಲನೆ ನಡೆಸಿ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದಿಂದ ಮಾನ್ಯತೆ ಪಡೆದ ಬಣ್ಣಗಳ ಬಳಕೆಯನ್ನು ಪರಿಶೀಲಿಸಿ, ಉಲ್ಲಂಘನೆಯಾದಲ್ಲಿ ನೋಟಿಸ್ ನೀಡಲಾಯಿತು. ಏಕ ಬಳಕೆ ಪ್ಲಾಸ್ಟಿಕ್ ಬಳಸುತ್ತಿದ್ದ 57 ಪ್ರಕರಣಗಳಿಂದ ರೂ.59,000 ದಂಡ ವಸೂಲಿ ಮಾಡಿ, 85 ಕೆ.ಜಿ ಏಕ ಬಳಕೆ ಪ್ಲಾಸ್ಟಿಕ್ ವಶಕ್ಕೆ ಪಡೆಯಲಾಯಿತು.

**ಗುಂಡಿ ದುರಸ್ತಿ:** ಮಹದೇವಪುರ ವಲಯ ವ್ಯಾಪ್ತಿಯಲ್ಲಿ ಹೊರಮಾವು ರಸ್ತೆ, ಕಾರ್ಮೆಲರನ್ ರಸ್ತೆ, ಕುಂದಲಹಳ್ಳಿ, ಬ್ರೂಕ್ ಫೀಲ್ಡ್ ರಸ್ತೆಗಳಲ್ಲಿ ಗುಂಡಿ ಮುಚ್ಚುವ ಹಾಗೂ ಪಾದಚಾರಿ ಒತ್ತುವರಿ ತೆರವು ಕಾರ್ಯಾಚರಣೆ ನಡೆಸಲಾಯಿತು. ಅಶ್ವತ್ಥ ನಗರ, ಮಾರತ್ ಹಳ್ಳಿ ಮುಖ್ಯರಸ್ತೆ ಹಾಗೂ ನಲ್ಲೂರಹಳ್ಳಿ ಮುಖ್ಯರಸ್ತೆಯಲ್ಲಿ ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆ ನಡೆಸಲಾಯಿತು.

## ಪೌರಕಾರ್ಮಿಕರಿಗೆ ರಕ್ಷಾ ಬಂಧನದ ರಕ್ಷೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ರಕ್ಷಾಬಂಧನದ ಅಂಗವಾಗಿ AVLGI ವತಿಯಿಂದ BBMP ಕಾರ್ಮಿಕರಿಗೆ ರಕ್ಷಾಬಂಧನ ಈ ವರ್ಷ ರಕ್ಷಾಬಂಧನವನ್ನು AVLGI ತ್ರಿನೇತ್ರಿನಿ ಕೆಂಗೇರಿ wing ವಿಶೇಷವಾಗಿ ಆಚರಿಸಿದರು. ನಮ್ಮ ನಗರವನ್ನು ಸ್ವಚ್ಛವಾಗಿಡಲು ದಿನರಾತ್ರಿ ಶ್ರಮಿಸುತ್ತಿರುವ BBMP ಕಾರ್ಮಿಕರಿಗೆ ಸಹೋದರ-ಸಹೋದರಿಯರ ಸಂಬಂಧದ ಪ್ರತೀಕವಾದ ರಾಖಿಯನ್ನು ಕಟ್ಟಿ, ಸಿಹಿ ಹಂಚಿಕೊಳ್ಳುವ ಮೂಲಕ ಗೌರವ ಸಲ್ಲಿಸಲಾಯಿತು. ಸಮಾಜದ ನಿಜವಾದ ರಕ್ಷಕರು ಎಂದರೆ ನಮ್ಮ ಬೀದಿ ಬೀದಿಗಳಲ್ಲಿ ದುಡಿಯುವ ಈ ಕಾರ್ಮಿಕರು. ಇವರ ದುಡಿಮೆಯಿಂದಲೇ ನಮಗೆ ಆರೋಗ್ಯಕರ ವಾತಾವರಣ ಸಿಗುತ್ತಿದೆ. AVLGI ವತಿಯಿಂದ ನಡೆದ ಈ ಕಾರ್ಯಕ್ರಮದಲ್ಲಿ ಎಲ್ಲಾ ಸದಸ್ಯರು ಭಾಗವಹಿಸಿ, ಧನ್ಯತೆ ಸೂಚಿಸಿದರು.

ಈ ರೀತಿಯ ಚಟುವಟಿಕೆಗಳು ಸಮಾಜದಲ್ಲಿ ಒಗ್ಗಟ್ಟನ್ನು ಬೆಳೆಸುವುದಲ್ಲದೆ, ಪ್ರತಿಯೊಬ್ಬರ ಶ್ರಮವನ್ನು ಗೌರವಿಸುವ ಸಂಸ್ಕೃತಿಯನ್ನು ಬೆಳೆಸುತ್ತವೆ.

# ಬೆಂಗಳೂರು ಗಣೇಶ ಉತ್ಸವಕ್ಕೆ ಸಕಲ ಸಿದ್ಧತೆ

## ಶ್ರೀ ವಿದ್ಯಾರಣ್ಯ ಯುವಕ ಸಂಘ ಆಯೋಜಿಸುವ ಪ್ರಸಿದ್ಧ ಗಣೇಶೋತ್ಸವ ಈಗ 63ನೇ ವರ್ಷಕ್ಕೆ ಕಾಲಿಟ್ಟಿದ್ದು, ತಿಂಗಳು ಅದ್ದೂರಿ ಆಚರಣೆ

• ಉದಯವಾಹಿನಿ, ಬೆಂಗಳೂರು

ಬಹುನಿರೀಕ್ಷಿತ ಬೆಂಗಳೂರು ಗಣೇಶ ಉತ್ಸವ (ಬಿಜಿಯು) ಮತ್ತೊಮ್ಮೆ ಬಂದಿದೆ. ಶ್ರೀ ವಿದ್ಯಾರಣ್ಯ ಯುವಕ ಸಂಘ ಆಯೋಜಿಸುವ ಈ ಪ್ರಸಿದ್ಧ ಗಣೇಶೋತ್ಸವ ಈಗ 63ನೇ ವರ್ಷಕ್ಕೆ ಕಾಲಿಟ್ಟಿದ್ದು, ಈ ತಿಂಗಳು ಅದ್ದೂರಿ ಆಚರಣೆಗೆ ವೇದಿಕೆ ಸಜ್ಜಾಗಿದೆ. ಆ.27ರಿಂದ ಸೆ.6ರವರೆಗೆ ನಡೆಯುವ ಉತ್ಸವದಲ್ಲಿ ಮತ್ತೊಮ್ಮೆ ಭಕ್ತಿ, ಸಂಗೀತ, ಕಲೆ, ಆಹಾರ, ಸಂಸ್ಕೃತಿಯ ಮೆರವಣಿಗೆ ನಡೆಸಲು ಬೆಂಗಳೂರು ಸಿದ್ಧಗೊಂಡಿದೆ.

ಈ ವರ್ಷದ ಗಣೇಶೋತ್ಸವವನ್ನು 11 ದಿನಗಳ ಕಾಲ ಅದ್ದೂರಿ ಸಾಂಸ್ಕೃತಿಕ ಯಾತ್ರೆಯ ರೂಪದಲ್ಲಿ ಆಚರಿಸಲು ಆಯೋಜಕರು ನಿರ್ಧರಿಸಿದ್ದಾರೆ. ಎಪಿಎಸ್ ಕಾಲೇಜು ಮೈದಾನ ಹಾಗೂ ಬಸವನಗುಡಿಯ ನ್ಯಾಷನಲ್ ಕಾಲೇಜು ಮೈದಾನದಲ್ಲಿಕಾರ್ಯಕ್ರಮಗಳು ನಡೆಯಲಿವೆ. ಎಂ.ಡಿ. ಪಲ್ಲವಿ, ಲಕ್ಷ್ಮಿ ಮತ್ತು ಇಂದು ನಾಗರಾಜ್, ಸೂರ್ಯಗಾಯತ್ರಿ, ಸುನಿತಾ ಉಪದ್ರಧಿಷ್ಟ, ಪಂಡಿತ್ ವೆಂಕಟೇಶ ಕುಮಾರ್, ವಿನಯ್ ವಾರಾಣಸಿ, ಬಾಲ ಕಲಾವಿದೆ ಗಂಗಾ ಶಶಿಧರನ್ ಮುಂತಾದ ಸುಪ್ರಸಿದ್ಧ ಕಲಾವಿದರಿಂದ ಭಕ್ತಿ ಸಂಗೀತ ಕಾರ್ಯಕ್ರಮಗಳು ಜರುಗಲಿವೆ. ಎಲ್ಲಾದಿನವೂ ಸಂಜೆಯ ಬಳಿಕ ಭಕ್ತಿ ಸಂಗೀತದ ಜತೆಗೆ ಯುವ ಜನತೆಗೆ ಪೂರಕವಾಗಿ ಆಧುನಿಕ ಮನರಂಜನಾ ಕಾರ್ಯಕ್ರಮಗಳು ನಡೆಯಲಿವೆ.

**ಗಣೇಶ ಮೂರ್ತಿ ಪ್ರತಿಷ್ಠಾಪನೆ: ಅನುಮತಿಗೆ 75 ಏಕಗವಾಕ್ಷಿ ಕೇಂದ್ರಗಳ ವ್ಯವಸ್ಥೆ:** ಬಿಬಿಎಂಪಿ ವ್ಯಾಪ್ತಿಯಲ್ಲಿ ಗಣೇಶ ಮೂರ್ತಿಗಳ ವಿಸರ್ಜನೆಗೆ 489 ಸಂಚಾರಿ ವಾಹನಗಳು (ಮೊಬೈಲ್ ಟ್ಯಾಂಕ್) 41 ಕೆರೆ ಅಂಗಳ ಮತ್ತು ತಾತ್ಕಾಲಿಕ ಕಲ್ಯಾಣಿಗಳಲ್ಲಿ ವ್ಯವಸ್ಥೆ ಮಾಡಲಾಗಿದೆ.

ಗೌರಿ ಗಣೇಶ ಚತುರ್ಥಿ ಹಿನ್ನೆಲೆಯಲ್ಲಿ ಎಲ್ಲಾ ರೀತಿಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದ್ದು, ಗಣೇಶ ಮೂರ್ತಿಗಳ ಪ್ರತಿಷ್ಠಾಪನೆಗೆ ಅನುಮತಿ ನೀಡಲು 75 ಏಕಗವಾಕ್ಷಿ ಕೇಂದ್ರಗಳನ್ನು ತೆರೆಯಲಾಗಿದೆ. ಪಾಲಿಕೆಯ ಪ್ರತಿಯೊಂದು ವಾರ್ಡ್‌ಗಳಲ್ಲೂ 489 ತಾತ್ಕಾಲಿಕ ಮೊಬೈಲ್ ಟ್ಯಾಂಕ್‌ಗಳು ಸಂಚರಿಸಲಿವೆ. ಗಣೇಶ ಮೂರ್ತಿಗಳ ವಿಸರ್ಜನೆಗೆ ಸಂಬಂಧಿಸಿದಂತೆ ಮೇಲ್ವಿಚಾರಣೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಈಗಾಗಲೇ ನೋಡಲ್ ಅಧಿಕಾರಿಗಳನ್ನೂ ನಿಯೋಜಿಸಲಾಗಿದೆ. ಬಿಬಿಎಂಪಿ ವೆಬ್‌ಸೈಟ್‌ಗೆ ಭೇಟಿ ನೀಡಿ, ನೋಡಲ್ ಅಧಿಕಾರಿಗಳ ವಿವರ ಪಡೆಯಬಹುದಾಗಿದೆ.

**ಯೇಸುದಾಸ್ ಪುತ್ರ ಸೇರಿ ಹಲವಾರು ಗಣ್ಯರ ಆಗಮನ**


ಉದಯವಾಹಿನಿ ಚಿತ್ರ

### ಖ್ಯಾತ ಗಾಯಕರಿಂದ ಕಛೇರಿ

**ಚಿತ್ರ ನಟ ಕ್ರೇಜಿಸ್ಟಾರ್ ರವಿಚಂದ್ರನ್ ಅವರು ಮಯೂರ ರಾಘವೇಂದ್ರ, ಪ್ರೇಕ್ಷಕರ ಜತೆಗೆ ವಿಶಿಷ್ಟ ಸಂವಾದ ನಡೆಸಿಕೊಡಲಿದ್ದಾರೆ. ಜತೆಗೆ ಮಂಜು ಡ್ರಮ್ಸ್ ಕಲೆಕ್ಟೀವ್ ತಂಡದಿಂದ ಸಂಗೀತ ಕಛೇರಿ ಇರಲಿದೆ. ಗ್ರ್ಯಾಮಿ ಪ್ರಶಸ್ತಿ ವಿಜೇತ ಗಾಯಕ ವಿಜಯ್ ಪ್ರಕಾಶ್, ರಾಜೇಶ್ ಕೃಷ್ಣನ್, ರಘು ದೀಕ್ಷಿತ್ ಸೇರಿದಂತೆ ಹಲವರು ಭಾಗವಹಿಸಲಿಧಿದ್ದಾರೆ. ಅಷ್ಟೇ ಅಲ್ಲ, ಪ್ರವೀಣ್ ಗೋಡ್ಖಿಂಡಿ, ಕೆ.ಜೆ.ಯೇಸುದಾಸ್ ಪುತ್ರ ವಿಜಯ್ ಯೇಸುದಾಸ್, ಪಂಡಿತ್ ಜಗದೀಶ್ ಡಿ. ಕುರ್ತಕೋಟಿ ಮತ್ತಿತರರು ಕಾರ್ಯಕ್ರಮ ನಡೆಸಿಕೊಡಲಿದ್ದಾರೆ. ಗಣೇಶೋತ್ಸವದಲ್ಲಿಭಾಗವಹಿಸುವ ಎಲ್ಲರಿಗೂ ಪ್ರವೇಶ ಉಚಿತವಾಗಿರಲಿದೆ.**

## ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕೌನ್ಸೆಲಿಂಗ್ ನಿಯಮಗಳಲ್ಲಿ ಬದಲಾವಣೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಎಂಜಿನಿಯರಿಂಗ್ ಸೀಟು ಕೌನ್ಸೆಲಿಂಗ್‌ನಲ್ಲಿ ಹಠಾತ್ ನಿಯಮ ಬದಲಾವಣೆ ಮಾಡಿರುವುದರಿಂದ ಸಾವಿರಾರು ವಿದ್ಯಾರ್ಥಿಗಳು ಮತ್ತು ಪೋಷಕರು ಇಕ್ಕಟ್ಟಿಗೆ ಸಿಲುಕಿದ್ದಾರೆ. ಹೊಸ ನಿಯಮವು ವೈದ್ಯಕೀಯ ವಿದ್ಯಾರ್ಥಿಗಳಿಗೆ ಮಾತ್ರ ಅನುಕೂಲಕರವಾಗಿದೆ ಎಂಬುದು ವೈದ್ಯಕೀಯ ವಿದ್ಯಾರ್ಥಿಗಳಿಗೆ ಮಾತ್ರ ಪ್ರಯೋಜನವಾಗಲಿದೆ. ಹೊಸ ನಿಯಮದಡಿಯಲ್ಲಿ, 2 ನೇ ಸುತ್ತಿನಲ್ಲಿ ಸೀಟು ಹಂಚಿಕೆಯಾದ ಯಾರಾದರೂ ಕಡ್ಡಾಯವಾಗಿ ಪ್ರವೇಶ ಪಡೆಯಲು ಮತ್ತು ತರಗತಿಗಳಿಗೆ ಹಾಜರಾಗಲು ಪ್ರಾರಂಭಿಸಬೇಕಾಗುತ್ತದೆ, ಆದರೆ 3ನೇ ಸುತ್ತಿನಲ್ಲಿ ಸಂಭವನೀಯ ಅಪ್‌ಗ್ರೇಡ್‌ಗಾಗಿ ಕಾಯುತ್ತಿದ್ದಾರೆ. ಕೆಸಿಇಟಿ, ಕಾಮೆಡ್ ಕೆ ಕೌನ್ಸೆಲಿಂಗ್ ವೇಳಾಪಟ್ಟಿಗಳ ನಡುವಿನ ಅತಿಕ್ರಮಣದಿಂದಾಗಿ ಪರಿಸ್ಥಿತಿ ಹೆಚ್ಚು ಜಟಿಲವಾಗಿದೆ ಎಂದು ವಿದ್ಯಾರ್ಥಿಗಳು ಹೇಳುತ್ತಾರೆ. ಕಾಮೆಡ್ ಕೆ ಸುತ್ತಿನ ಪ್ರವೇಶಕ್ಕೆ ಆಗಸ್ಟ್ 28 ಕೊನೆಯ ದಿನಾಂಕವಾಗಿದ್ದು, 2ನೇ ಸುತ್ತಿನ ಕೆಸಿಇಟಿಗೆ ಅಣಕು ಹಂಚಿಕೆ ಫಲಿತಾಂಶಗಳನ್ನು ಆಗಸ್ಟ್ 29 ರಂದು ಪ್ರಕಟಿಸಲಾಗುವುದು. ವಿದ್ಯಾರ್ಥಿಗಳು ನಂತರ ಕೆಸಿಇಟಿ ಸೀಟು ಪಡೆದರೆ ಶುಲ್ಕವನ್ನು ಮರುಪಾವತಿಸಲಾಗುವುದು ಎಂದು ಕಾಮೆಡ್ ಕೆ ಭರವಸೆ ನೀಡಿದ್ದರೂ, ವಿದ್ಯಾರ್ಥಿಗಳು ತಮ್ಮ ಕಾಮೆಡ್ ಕೆ ಸೀಟುಗಳನ್ನು ಬಿಟ್ಟುಕೊಡುವ ಹೊತ್ತಿಗೆ, ಅದರ ಕೌನ್ಸೆಲಿಂಗ್ ಸೆ.2 ರಂದು ಮುಕ್ತಾಯಗೊಳ್ಳಬೇಕಾಗುತ್ತದೆ, ಕೆಇಎ ಅಂತಹ ಬದಲಾವಣೆಗಳನ್ನು ತರಲು ಬಯಸಿದರೆ, ಕೌನ್ಸೆಲಿಂಗ್ ಪ್ರಾರಂಭವಾಗುವ ಮೊದಲೇ ಅದನ್ನು ಘೋಷಿಸಬೇಕಾಗಿತ್ತು ಎಂದು ಮತ್ತೊಬ್ಬ ವಿದ್ಯಾರ್ಥಿನಿ ಮೇಘನಾ ಎಸ್ ಹೇಳುತ್ತಾರೆ.

## ಕೇಂದ್ರದ ಅನುದಾನ, ತೆರಿಗೆ ಪಾಲು ಬಗ್ಗೆ ಶ್ವೇತ ಪತ್ರ ಮಂಡಿಸಲು ಸರ್ಕಾರ ಸಿದ್ಧ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಸರ್ಕಾರವು ಕೇಂದ್ರ ಪುರಸ್ಕೃತ ಯೋಜನೆಗಳಿಗೆ ರಾಜ್ಯಕ್ಕೆ ನೀಡುತ್ತಿರುವ ಅನುದಾನ ಹಾಗೂ ತೆರಿಗೆ ಪಾಲು ಕುರಿತು ಶ್ವೇತಪತ್ರ ಮಂಡಿಸಲು ರಾಜ್ಯಸರ್ಕಾರ ಸಿದ್ಧವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು.

ನಿಯಮ 69ರ ಅಡಿ ಕಾಂಗ್ರೇಸ್‌ನ ಸದಸ್ಯರಾದ ಕೆ.ಎಂ. ಶಿವಲಿಂಗೇಗೌಡ, ಎನ್.ಎಚ್.ಕೋನರೆಡ್ಡಿ, ಶರತ್ ಬಚ್ಚೇಗೌಡ ಈ ವಿಷಯ ಪ್ರಸ್ತಾಪಿಸಿ ಮಾತನಾಡಿದ್ದರು. ಇದಕ್ಕೆ ಸದನದಲ್ಲಿ ಉತ್ತರಿಸಿದ ಸಿಎಂ, ಕೇಂದ್ರದ ಅನುದಾನ, ತೆರಿಗೆ ಪಾಲು ಬಗ್ಗೆ ಶ್ವೇತ ಪತ್ರ ಹೊರಡಿಸಲು ಸರ್ಕಾರ ಸಿದ್ಧವಿದೆ ಎಂದು ಹೇಳಿದರು. ಕೆಲ ವರ್ಷಗಳ ಹಿಂದೆ ಕೇಂದ್ರ ಪುರಸ್ಕೃತ ಯೋಜನೆಗಳಿಗೆ ಕೇಂದ್ರ ಶೇ.75 ಮತ್ತು ರಾಜ್ಯ ಶೇ.25ರಷ್ಟು ಅನುಪಾತದಲ್ಲಿ ಅನುದಾನ ನೀಡಲಾಗುತ್ತಿತ್ತು. ಮೋದಿ ಅಧಿಕಾರಕ್ಕೆ ಬಂದ ಬಳಿಕ ಆ ಪ್ರಮಾಣವನ್ನು ಶೇ.40ಕ್ಕೆ ಇಳಿಸಲಾಗಿದೆ. ಇದರರ್ಥ ಕೇಂದ್ರವು ತನ್ನ ಪಾಲನ್ನು ಶೇ. 60 ರಷ್ಟು ಕಡಿತಗೊಳಿಸಿದೆ ಎಂದು ತಿಳಿಸಿದರು. ಈ ವೇಳೆ ಈ ಸಂಬಂಧ ಶ್ವೇತ್ರ ಪತ್ರ ಹೊರಡಿಸುವಂತೆ ಸದಸ್ಯರು ಆಗ್ರಹಿಸಿದರು. ಇದಕ್ಕೆ ಉತ್ತರಿಸಿದ ಸಿದ್ದರಾಮಯ್ಯ ಅವರು, ಶ್ವೇತ ಪತ್ರ ಹೊರಡಿಸಲು ರಾಜ್ಯ ಸರ್ಕಾರ ಸಿದ್ಧವಿದೆ. ಶೀಘ್ರದಲ್ಲೇ ಮಂಡಿಸುತ್ತೇವೆಂದು ಎಂದು ಹೇಳಿದರು.

## ಪ್ರಕರಣಗಳ ವಿಲೇವಾರಿಗೆ ಬೆಂಗಳೂರಿಗೆ 7 ವಿಶೇಷ ಡಿಸಿಗಳ ನೇಮಕ

• ಉದಯವಾಹಿನಿ, ಬೆಂಗಳೂರು

ನಗರ ಜಿಲ್ಲೆಯ ಜಿಲ್ಲಾಧಿಕಾರಿ ನ್ಯಾಯಾಲಯದಲ್ಲಿ ವಿಲೇವಾರಿಯಾಗದೇ ಬಾಕಿ ಉಳಿದಿರುವ' ಪ್ರಕರಣಗಳ ಸಂಖ್ಯೆ ಹೆಚ್ಚಿದ್ದು, ಕಾಲಮಿತಿಯೊಳಗೆ ವಿಲೇವಾರಿ ಮಾಡಲು ಏಳು ವಿಶೇಷ ಜಿಲ್ಲಾಧಿಕಾರಿಗಳನ್ನು ನೇಮಿಸಲಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.

ಐಎಎಸ್ ಅಧಿಕಾರಿಗಳಾದ ರಮೇಶ್ ಕೆ.ಎನ್. ಎಚ್.ಎನ್. ಗೋಪಾಲಕೃಷ್ಣ, ಮುಲ್ಲೆ ಮುಗಿಲನ್ ಎಂ.ಪಿ., ಅರುಂಧತಿ ಚಂದ್ರಶೇಖರ್, ಸೆಲ್ವಮಣಿ, ಹೊನ್ನಾಂಬ ಹಾಗೂ ವಿದ್ಯಾಕುಮಾರಿ ಅವರನ್ನು ವಿಶೇಷ ಜಿಲ್ಲಾಧಿಕಾರಿಗಳನ್ನಾಗಿ ನೇಮಿಸಲಾಗಿದೆ. ಈಗಾಗಲೇ ವಿಶೇಷ ಜಿಲ್ಲಾಧಿಕಾರಿಗಳಾಗಿರುವ ಎಸ್.ಎನ್. ಬಾಲಚಂದ್ರ. ಅರ್ಚನಾ ಮುಂದುವರಿಯಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ. ಮೇ 2023ರಲ್ಲಿ ಅಧಿಕಾರ ವಹಿಸಿಕೊಂಡ ಸಂದರ್ಭದಲ್ಲಿ ಬೆಂಗಳೂರು ನಗರ ಜಿಲ್ಲಾಧಿಕಾರಿಗಳ ನ್ಯಾಯಾಲಯಗಳಲ್ಲಿ 7,460 ಪ್ರಕರಣಗಳು ಬಾಕಿ ಇದ್ದವು. ಈ ಪೈಕಿ 1 ವರ್ಷಕ್ಕಿಂತ ಹೆಚ್ಚು ಅವಧಿಯಿಂದ ಬಾಕಿ ಇದ್ದ 6393 ಪ್ರಕರಣಗಳಿದ್ದವು. ಅದರಲ್ಲಿ 5 ವರ್ಷಕ್ಕೂ ಮೇಲ್ಪಟ್ಟ 4,894 ಪ್ರಕರಣಗಳಿದ್ದವು. ಎರಡು ವರ್ಷಗಳಲ್ಲಿ 3,729 ಬಾಕಿ ಇದ್ದ ತಕರಾರು ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ. ಇದೇ ಅವಧಿಯಲ್ಲಿ 1,545 ಹೊಸ ಪ್ರಕರಣಗಳು ದಾಖಲಾಗಿವೆ. ಪ್ರಸ್ತುತ 5276 ಪ್ರಕರಣಗಳು ಬಾಕಿ ಇವೆ' ಎಂದು ವಿವರ ನೀಡಿದ್ದಾರೆ.




**ಪ್ರತಿ ತಿಂಗಳು ಸರಾಸರಿ 143 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗುತ್ತಿದೆ. ಈ ಪ್ರಮಾಣದಲ್ಲಿ ಇತ್ಯರ್ಥ ಮಾಡುತ್ತಾ ಹೋದರೆ ವಿಲೇವಾರಿ ಮಾಡಲು ಹಲವು ವರ್ಷಗಳೇ ಬೇಕಾಗುತ್ತದೆ. ಅದಕ್ಕಾಗಿ ವಿಶೇಷ ಜಿಲ್ಲಾಧಿಕಾರಿಗಳ ಸಂಖ್ಯೆ ಹೆಚ್ಚಿಸಲಾಗಿದೆ. ಪ್ರತಿಯೊಬ್ಬರಿಗೂ 500ರಿಂದ 700 ಪ್ರಕರಣಗಳನ್ನು ನಿಗದಿಗೊಳಿಸಲಾಗಿದೆ. 6 ತಿಂಗಳ ಒಳಗೆ ಎಲ್ಲಾ ಬಾಕಿ ಪ್ರಕರಣಗಳನ್ನು ವಿಲೇವಾರಿ ಮಾಡುವ ಗುರಿ ಇಟ್ಟುಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.**

## ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಇಂದಿನಿಂದ ಪ್ರಾರಂಭ

• ಉದಯವಾಹಿನಿ, ಬೆಂಗಳೂರು

ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಹಿಂದುಳಿದ ವರ್ಗಗಳ ಸಾಮಾಜಿಕ ಶೈಕ್ಷಣಿಕ ಸಮೀಕ್ಷೆಯನ್ನು ಪ್ರಾರಂಭಿಸಲಿದೆ, ಸಮೀಕ್ಷೆ ವೇಳೆ ಯಾವುದೇ ಮನೆಗಳು ತಪ್ಪಿ ಹೋಗದಂತೆ ಯಶಸ್ವಿಯಾಗಿ ಸಮೀಕ್ಷೆ ಕೈಗೊಳ್ಳಲು ಸಹಕರಿಸುವಂತೆ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಅಧ್ಯಕ್ಷ ಮಧುಸೂಧನ್ ಆರ್ ನಾಯಕ್ ಅವರು ಮನವಿ ಮಾಡಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು, ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು 90 ದಿನಗಳಲ್ಲಿ ಪೂರ್ಣಗೊಳಿಸುವ ಬದ್ಧತೆಯನ್ನು ಗಮನದಲ್ಲಿಟ್ಟುಕೊಂಡು, ಅಗತ್ಯ ಕ್ರಮಗಳನ್ನು ವೇಗದಿಂದ, ಶ್ರದ್ಧಾಪೂರ್ವಕವಾಗಿ ಪ್ರಾರಂಭಿಸಿದ್ದೇವೆ ಎಂದು ಹೇಳಿದ್ದಾರೆ. ಮೊದಲ ಹಂತದಲ್ಲಿ, ಸಮೀಕ್ಷೆಗೆ ಸಂಬಂಧಿಸಿದ



ಪೂರ್ವಭಾವಿ ಕೆಲಸವು, ಮನೆ ಪಟ್ಟಿ ಮತ್ತು ಅವುಗಳ ನಕ್ಷೆ (ಮ್ಯಾಪಿಂಗ್) ಸಿದ್ಧಪಡಿಸುವ ಕಾರ್ಯವನ್ನು ಒಳಗೊಂಡಿರುತ್ತದೆ. ಅದು ರಾಜ್ಯದಾದ್ಯಂತ ಎಲ್ಲಾ ಮನೆಗಳ ಸಂಪೂರ್ಣ ಎಣಿಕೆ, ಅನುಕ್ರಮ ಸಂಖ್ಯೆಗಳನ್ನು ನೀಡುವುದು, ಮ್ಯಾಪಿಂಗ್ ಮಾಡುವ ಕೆಲಸವನ್ನು ಸಾಧ್ಯವಾಗಿಸುತ್ತದೆ. 2ನೇ ಹಂತದಲ್ಲಿ ಸಮೀಕ್ಷೆಯ ಕಾರ್ಯವನ್ನು ವ್ಯವಸ್ಥಿತವಾಗಿ, ವೈಜ್ಞಾನಿಕವಾಗಿ ಕಾರ್ಯಗತಗೊಳಿಸಲು ಅನುಕೂಲವಾಗುತ್ತದೆ.

ಸಮೀಕ್ಷೆಯ ಕಾರ್ಯವನ್ನು ದಸರಾ ರಜೆಯ ಅವಧಿಯಲ್ಲಿ ಸೆ.22ರಿಂದ ಅ.7ರ ವರೆಗೆ ನಡೆಸಲು ಗುರಿಯಾಗಿಟ್ಟುಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

## ಬೆಂಗಳೂರು-ಚೆನ್ನೈ ಎಕ್ಸ್‌ಪ್ರೆಸ್‌ವೇ 2026ಕ್ಕೆ ಉದ್ಘಾಟನೆ

• ಉದಯವಾಹಿನಿ, ಬೆಂಗಳೂರು

15,188 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ ಬೆಂಗಳೂರು-ಚೆನ್ನೈ ಎಕ್ಸ್‌ಪ್ರೆಸ್‌ವೇ ಡಿಸೆಂಬರ್ 2025-ಮಾರ್ಚ್ 2026ರ ನಡುವೆ ಪೂರ್ಣಗೊಳ್ಳುವ ನಿರೀಕ್ಷೆಯಿದೆ. ಲೋಕಸಭೆಯಲ್ಲಿ ಬೆಂಗಳೂರು ಕೇಂದ್ರ ಸಂಸದ ಪಿ.ಸಿ. ಮೋಹನ್ ಅವರ ಪ್ರಶ್ನೆಗೆ ಉತ್ತರಿಸಿದ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ, ಈ ಎಕ್ಸ್‌ಪ್ರೆಸ್‌ವೇ ಬೆಂಗಳೂರು ಚೆನ್ನೈ ಕೈಗಾರಿಕಾ ಕಾರಿಡಾರ್‌ನ ಭಾಗವಾಗಿದ್ದು, ಕಾಮಗಾರಿ ಪೂರ್ಣಗೊಂಡ ಬಳಿಕ ಎರಡು ನಗರಗಳ ನಡುವಿನ ಪ್ರಯಾಣದ ಅವಧಿ ಎರಡೂವರೆ ಗಂಟೆಗಳಿಗೆ ಇಳಿಯಲಿದೆ. 262.4 ಕಿ.ಮೀ. ಉದ್ದದ ಮಾರ್ಗಕ್ಕೆ ರೂ.15,188 ಕೋಟಿ ವೆಚ್ಚ ಮಾಡಲಾಗುತ್ತಿದೆ. ಸದ್ಯ 4 ಪ್ಯಾಕೇಜ್‌ಗಳ ಕೆಲಸ ಮುಗಿದಿದ್ದು, ಎಲ್ಲಾ ಪ್ಯಾಕೇಜ್‌ಗಳ ಕಾಮಗಾರಿಗಳು 2026ಕ್ಕೆ ಮುಗಿಯಲಿವೆ ಎಂದು ಹೇಳಿದರು.

ಕರ್ನಾಟಕದಲ್ಲಿ ಭೂಸ್ವಾಧೀನಕ್ಕೆ ಅಡೆತಡೆ, ತಮಿಳುನಾಡಿನಲ್ಲಿ ಜನವಸತಿ ಪ್ರದೇಶದಲ್ಲಿ ಕಾಮಗಾರಿಗೆ ಅಡ್ಡಿ ಎದುರಾದ ಹಿನ್ನೆಲೆಯಲ್ಲಿ ಕಾಮಗಾರಿ ವಿಳಂಬವಾಗಿದೆ. ಹೆಚ್ಚುವರಿ ಸರ್ವೀಸ್ ರಸ್ತೆಗಳು, ಧಾರ್ಮಿಕ ಪ್ರದೇಶಗಳಲ್ಲಿ ಮಾರ್ಗ ಬದಲಾವಣೆ, ಹೈಟೆನ್ಷನ್ ವಿದ್ಯುತ್ ಮಾರ್ಗಗಳ ಸ್ಥಳಾಂತರ, ಭೂ ಪರಿಹಾರ ನೀಡಿಕೆ ಸಮಸ್ಯೆಯಿಂದ ಕಾಮಗಾರಿ ವಿಳಂಬವಾಗಿದೆ ಎಂದು ವಿವರಿಸಿದರು. ಕೌಂಡಿನ್ಯ ವನ್ಯಜೀವಿ ಅಭಯಾರಣ್ಯದ 10 ಕಿ.ಮೀ. ಪರಿಸರ-ಸೂಕ್ಷ್ಮ ವಲಯದೊಳಗೆ ಕೆಲಸ ಮಾಡಲು ರಾಷ್ಟ್ರೀಯ ವನ್ಯಜೀವಿ ಮಂಡಳಿಯ ಸ್ಥಾಯಿ ಸಮಿತಿಯಿಂದ ಅನುಮತಿ ಅಗತ್ಯವಿರುವುದರಿಂದ ಆಂಧ್ರಪ್ರದೇಶದಲ್ಲಿ ಯೋಜನೆಯು ಆರಂಭಿಕ ಹಿನ್ನಡೆ ಎದುರಿಸುತ್ತಿದೆ.


ಉದಯವಾಹಿನಿ ಚಿತ್ರ

## ದೇಶದ ಅತ್ಯಂತ ಶ್ರೀಮಂತ ಮುಖ್ಯಮಂತ್ರಿಗಳ ಪಟ್ಟಿ ರಿಲೀಸ್

• ಉದಯವಾಹಿನಿ, ಬೆಂಗಳೂರು

ದೇಶದ ಅತ್ಯಂತ ಶ್ರೀಮಂತ ಮುಖ್ಯಮಂತ್ರಿಗಳ ಪಟ್ಟಿಯಲ್ಲಿ ಕರ್ನಾಟಕದ ಸಿಎಂ ಸಿದ್ದರಾಮಯ್ಯ ಅವರು ಮೂರನೇ ಸ್ಥಾನದಲ್ಲಿದ್ದಾರೆ.

ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್ ಬಿಡುಗಡೆ ಮಾಡಿದ ಪಟ್ಟಿಯಲ್ಲಿ ದೇಶದ ಅತ್ಯಂತ ಶ್ರೀಮಂತ ಮುಖ್ಯಮಂತ್ರಿಗಳ ಪೈಕಿ ಸಿಎಂ ಸಿದ್ದರಾಮಯ್ಯ ಅವರು 51 ಕೋಟಿ ರೂ. ಆಸ್ತಿ ಹೊಂದುವ ಮೂಲಕ ಮೂರನೇ ಸ್ಥಾನ ಪಡೆದುಕೊಂಡಿದ್ದಾರೆ. ದೇಶಾದ್ಯಂತ ಎಲ್ಲಾ ರಾಜ್ಯಗಳ ಮತ್ತು ಕೇಂದ್ರಾಡಳಿತ ಪ್ರದೇಶಗಳ 30 ಪ್ರಸ್ತುತ ಮುಖ್ಯಮಂತ್ರಿಗಳು ಸಲ್ಲಿಸಿರುವ ಪ್ರಮಾಣಪತ್ರಗಳನ್ನು ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್ ಎಡಿಆರ್ ವಿಶ್ಲೇಷಿಸಿ ಈ ಮಾಹಿತಿಯನ್ನು ನೀಡಿದೆ. ವಿಶ್ಲೇಷಣೆಯ ಪ್ರಕಾರ, ಮಣಿಪುರವನ್ನು ಹೊರತುಪಡಿಸಿ ಭಾರತದ ಎಲ್ಲಾ ರಾಜ್ಯಗಳು , ಕೇಂದ್ರಾಡಳಿತ ಪ್ರದೇಶಗಳು ಸೇರಿದಂತೆ 30 ಮುಖ್ಯಮಂತ್ರಿಗಳ ಸರಾಸರಿ ಆಸ್ತಿ 54.42 ಕೋಟಿ ರೂ.ಗಳಷ್ಟಿದೆ ಎಂದು ತಿಳಿದುಬಂದಿದೆ.

30 ಸಿಎಂಗಳ ಒಟ್ಟು ಆಸ್ತಿ 1,632 ಕೋಟಿ ರೂ.ಗಳಷ್ಟಿದ್ದು, ಆಂಧ್ರಪ್ರದೇಶದ ಸಿಎಂ ನಾರಾ ಚಂದ್ರಬಾಬು ನಾಯ್ಡು ಅವರು ಒಟ್ಟು 931 ಕೋಟಿ ರೂ. ಮೌಲ್ಯದ ಆಸ್ತಿ ಹೊಂದುವ ಮೂಲಕ ಮೊದಲ ಸ್ಥಾನದಲ್ಲಿದ್ದರೆ. ಅರುಣಾಚಲ ಪ್ರದೇಶದ ಸಿಎಂ ಪೆಮಾ ಖಂಡು ಅವರು 332 ಕೋಟಿ ರೂ.ಗೂ ಹೆಚ್ಚು ಆಸ್ತಿ ಹೊಂದುವ ಮೂಲಕ ಎರಡನೇ ಸ್ಥಾನದಲ್ಲಿದ್ದಾರೆ. ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 51 ಕೋಟಿ ರೂ. ಮೌಲ್ಯದ ಆಸ್ತಿ ಹೊಂದುವ ಮೂಲಕ ಮೂರನೇ ಸ್ಥಾನ ಪಡೆದುಕೊಂಡಿದ್ದಾರೆ. ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್ 1.18 ಕೋಟಿ ರೂ., ಕೇಂದ್ರಾಡಳಿತ ಪ್ರದೇಶದ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ 55.24 ಲಕ್ಷ ರೂ. ಗೂ ಹೆಚ್ಚು ಹಾಗೂ ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ 15.38 ಲಕ್ಷ ರೂ.ಗೂ ಹೆಚ್ಚು ಆಸ್ತಿ ಹೊಂದುವ ಮೂಲಕ ಅತಿ ಕಡಿಮೆ ಆಸ್ತಿ ಹೊಂದಿರುವ ಮುಖ್ಯಮಂತ್ರಿಗಳಾಗಿದ್ದಾರೆ.

ರಾಜಸ್ಥಾನದ ಮುಖ್ಯಮಂತ್ರಿ ಭಜನ್ ಲಾಲ್ ಶರ್ಮಾ (1.46 ಕೋಟಿ ರೂ.), ಉತ್ತರ ಪ್ರದೇಶದ ಯೋಗಿ ಆದಿತ್ಯನಾಥ್ (1.54 ಕೋಟಿ ರೂ.), ಬಿಹಾರದ ನಿತೀಶ್ ಕುಮಾರ್ (1.64 ಕೋಟಿ ರೂ.), ಪಂಜಾಬ್‌ನ ಭಗವಂತ್ ಮಾನ್ (1.97 ಕೋಟಿ ರೂ.), ಒಡಿಶಾದ ಮೋಹನ್ ಚರಣ್ ಮಾಝಿ (1.97 ಕೋಟಿ ರೂ.) ಮತ್ತು ಛತ್ತೀಸ್‌ಗಢದ ವಿಷ್ಣು ದೇವ್ ಸಾಯಿ (3.80 ಕೋಟಿ ರೂ.) ಕಡಿಮೆ ಆಸ್ತಿ ಹೊಂದಿರುವ ಇತರ ಸಿಎಂಗಳಾಗಿದ್ದಾರೆ.



# ಗುಲಾಬಿ ಮಾರ್ಗ ಆರಂಭ ದಿನಾಂಕ ಹೇಳಿದ ಡಿಕೆಶಿ; ಯಾವಾಗ?

## ಹೊಸಕೋಟೆ, ನೆಲಮಂಗಲ, ಹೊಸೂರು, ತಾವರೆಕೆರೆ ಭಾಗಕ್ಕೆ ನಮ್ಮ ಮೆಟ್ರೋ ವಿಸ್ತರಣೆ

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೋ ನಾಲ್ಕು ಮಾರ್ಗಗಳಲ್ಲಿ ವಿಸ್ತರಣೆ ಜತೆಗೆ ಬಹುನಿರೀಕ್ಷಿಯ ಗುಲಾಬಿ (ಪಿಂಕ್) ಮಾರ್ಗ ಆರಂಭದ ಸಂಭಾವ್ಯ ದಿನಾಂಕವನ್ನು ಡಿಕೆ ಶಿವಕುಮಾರ್ ಹೇಳಿದ್ದಾರೆ. ಬೆಂಗಳೂರು ಅಭಿವೃದ್ಧಿ ಕಾರ್ಯಗಳ ಸಮಸ್ಯೆಗಳು, ಅತಿವೃಷ್ಟಿಯಿಂದಾಗಿರುವ ನಷ್ಟ ಹಾಗೂ ಕೇಂದ್ರದ ಅನುದಾನಗಳ ಬಗ್ಗೆ ವಿಧಾನಸಭೆಯಲ್ಲಿ ನಿಯಮಾವಳಿ 69ರ ಅಡಿಯಲ್ಲಿ ನಡೆದ ವಿಶೇಷ ಚರ್ಚೆಗೆ ಅವರು ಉತ್ತರಿಸಿದರು.

**4 ಕಡೆ ನಮ್ಮ ಮೆಟ್ರೋ ವಿಸ್ತರಣೆಗೆ ಡಿಪಿಆರ್:** ಹೊಸಕೋಟೆ, ನೆಲಮಂಗಲ ಹೊಸೂರು, ತಾವರೆಕೆರೆ ಭಾಗಕ್ಕೆ ಮೆಟ್ರೋ ಸಂಪರ್ಕ ಕಲ್ಪಿಸಲು ಡಿಪಿಆರ್ ಕರೆಯಲಾಗಿದೆ. ಈ ಎಲ್ಲಾ ಯೋಜನೆಗಳ ಬಗ್ಗೆ ಪ್ರಧಾನಿಯವರಿಗೆ ತಿಳಿಸಿ ಸೂಕ್ತ ಅನುದಾನಕ್ಕೆ ಮನವಿ ಸಲ್ಲಿಸಿದ್ದೇನೆ ಎಲ್ಲರೂ ಒತ್ತಡ ಹಾಕಿಸಿದರೆ ನಿಮ್ಮ, ನಮ್ಮ ಬೆಂಗಳೂರು ಅಭಿವೃದ್ಧಿಯಾಗಲಿದೆ ಎಂದರು.

**ನಮ್ಮ ಮೆಟ್ರೋ ಗುಲಾಬಿ ಮಾರ್ಗ ಆರಂಭ ಯಾವಾಗ :** ಕಾಳೇನ ಅಗ್ರಹಾರದಿಂದ ತಾವರೆಕೆರೆಗೆ ಸಂಪರ್ಕ ಕಲ್ಪಿಸುವ ಗುಲಾಬಿ ಮಾರ್ಗವು 7.5 ಕಿಮೀ ಇದು ಡಿಸೆಂಬರ್ 2026 ರ ಹೊತ್ತಿಗೆ ಸಾರ್ವಜನಿಕ ಸೇವೆಗೆ ದೊರೆಯಲಿದೆ ಎಂದು ತಿಳಿಸಿದ್ದಾರೆ. ಈ ಮೂಲಕ ನಮ್ಮ ಮೆಟ್ರೋ 4ನೇ ಮಾರ್ಗವು ಜನರ ಸೇವೆಗೆ ಲಭ್ಯವಾಗಲಿದೆ.

**ರಸ್ತೆಗಳ ಅಭಿವೃದ್ಧಿಗೆ ಆದ್ಯತೆ:** ನಗರದಲ್ಲಿ ರಸ್ತೆ ಗುಂಡಿ ಸಮಸ್ಯೆ ಬಗೆಹರಿಸಲು ಎಲ್ಲೆಲ್ಲಿ ಗುಂಡಿಗಳಿವೆ ಎಂದು ಸಾರ್ವಜನಿಕರು ಕೂಡ ಅಧಿಕಾರಿಗಳ ಗಮನಕ್ಕೆ ತರಲು ಅಕಾಶ ಕಲ್ಪಿಸಿದ್ದೇವೆ. 'ಗುಂಡಿ ಗಮನ' ಯೋಜನೆ ತಂದು ಎಲ್ಲೆಲ್ಲಿ ರಸ್ತೆ ಗುಂಡಿಗಳಿವೆಯೋ ಅವುಗಳ ಪಟ್ಟಿಯನ್ನು ಸಿದ್ಧಪಡಿಸಲಾಗಿದೆ. ಪೊಲೀಸರು ಕೂಡ ರಸ್ತೆಗುಂಡಿಗಳ ಪಟ್ಟಿ ಮಾಡುವ ಅವಕಾಶ ಕಲ್ಪಿಸಿದ್ದೇವೆ. ಸುಮಾರು 10 ಸಾವಿರ ಗುಂಡಿಗಳನ್ನು ಗುರುತಿಸಲಾಗಿದ್ದು. ಇದರಲ್ಲಿ ಸುಮಾರು 5,377 ಗುಂಡಿಗಳನ್ನು ಮುಚ್ಚಲಾಗಿದೆ. ಉಳಿದ 5 ಸಾವಿರ ಗುಂಡಿಗಳನ್ನು ಮುಚ್ಚಲು ಕಾರ್ಯಕ್ರಮ ರೂಪಿಸಿದ್ದೇವೆ ಎಂದರು. ನಗರದಲ್ಲಿ 154 ಕಿಮೀ ನಷ್ಟು ವೈಟ್ ಟಾಪಿಂಗ್ ಕಾಮಗಾರಿಯನ್ನು ರೂ. 1,700 ಕೋಟಿ ವೆಚ್ಚದಲ್ಲಿ ಮಾಡುತ್ತಿದ್ದೇವೆ. ಈ ರಸ್ತೆಗಳು 30 ವರ್ಷಗಳ ಕಾಲ ಬಾಳಿಕೆ ಬರುತ್ತವೆ. ಉಪರಸ್ತೆಗಳನ್ನು ಸಹ ವೈಟ್ ಟಾಪಿಂಗ್ ಯೋಜನೆಯಡಿ ಕೈಗೆತ್ತಿಕೊಳ್ಳಲಾಗುವುದು. ಮೊದಲ ಹಂತದಲ್ಲಿ 632 ಕಿ.ಮೀ ಕೈಗೆತ್ತಿಕೊಳ್ಳಲಾಗುತ್ತಿದ್ದು, ಇದಕ್ಕೆ 7,500 ಕೋಟಿ ಖರ್ಚು ಮಾಡಲಾಗುತ್ತಿದೆ. ಒಟ್ಟಾರೆಯಾಗಿ ರಸ್ತೆಗಳ ಅಭಿವೃದ್ಧಿ ಹಾಗೂ ವೈಟ್ ಟಾಪಿಂಗ್‌ಗೆ ಸುಮಾರು 9 ಸಾವಿರ ಕೋಟಿ ವ್ಯಯಿಸಲು ಯೋಜನೆ ರೂಪಿಸಲಾಗಿದೆ. 450 ಕಿ.ಮೀ ಉದ್ದದ ಪ್ರಮುಖ ಹಾಗೂ ಉಪ ರಸ್ತೆಗಳಿಗೆ ಬ್ಲಾಕ್ ಟಾಪಿಂಗ್ ಮಾಡಲು 699 ಕೋಟಿಯ ಯೋಜನೆ ರೂಪಿಸಲಾಗಿದೆ. ಎಲ್ ಇಡಿ ಲೈಟ್ ಗಳನ್ನು ಅಳವಡಿಸಲು 4 ಪ್ಯಾಕೇಜ್ ಗಳಾಗಿ ರೂ. 180 ಕೋಟಿ ಮೊತ್ತದ ಯೋಜನೆ ರೂಪಿಸಲಾಗಿದ್ದು, ಕೆಲಸ ಪ್ರಾರಂಭವಾಗಿದೆ. ಜನರು ಸಹ ನಗರದಲ್ಲಿ ಎಲ್ಲೆ ರಸ್ತೆಗುಂಡಿ ಕಂಡು ಬಂದರೂ ಫೋಟೊ ತೆಗೆದು ಪಾಲಿಕೆಯ ನಿಗದಿತ ದೂರವಾಣಿ ಸಂಖ್ಯೆಗೆ ಕಳುಹಿಸಬಹುದು ಎಂದು ಹೇಳಿದರು.

**ಹೊಸ ರಸ್ತೆ ಜಾಲ:** ರಾಜಕಾಲುವೆಗಳ ಪಕ್ಕ 300 ಕಿಮೀ ಉದ್ದಕ್ಕೆ ರಸ್ತೆ ನಿರ್ಮಾಣ ಮಾಡಲು 3 ಸಾವಿರ ಕೋಟಿ ರೂಪಾಯಿಯಲ್ಲಿ ಯೋಜನೆ ರೂಪಿಸಲಾಗಿದೆ. ಡಬಲ್ ಡೆಕ್ಕರ್ ಯೋಜನೆಗೆ ಪ್ರತಿ ಕಿಮೀಗೆ 120 ಕೋಟಿ ವೆಚ್ಚವಾಗುತ್ತಿದ್ದು 9 ಸಾವಿರ ಕೋಟಿ ಮೊತ್ತದ ಯೋಜನೆ ರೂಪಿಸಲಾಗಿದೆ. ಒಟ್ಟು 44 ಕಿಮೀ ಉದ್ದ ಡಬಲ್ ಡೆಕ್ಕರ್ ನಿರ್ಮಾಣ ಮಾಡಲಾಗುವುದು. ಎಲಿವೇಟೆಡ್ ಕಾರಿಡಾರ್ ನಿರ್ಮಾಣಕ್ಕೆ 109 ಕೋಟಿ ಜಾಗ ಗುರುತಿಸಲಾಗಿದೆ. ಇದಕ್ಕೆ 15 ಸಾವಿರ ಕೋಟಿ ವೆಚ್ಚ ಮಾಡಲಾಗುವುದು ಎಂದರು.

**ಟನಲ್ ವೆಚ್ಚ ನಮ್ಮಲ್ಲಿಯೇ ಕಡಿಮೆ:** ಟನಲ್ ಯೋಜನೆ ವೆಚ್ಚ ಹೆಚ್ಚಾಯಿತು ಎಂದು ಟೀಕೆ ಮಾಡುತ್ತಿದ್ದಾರೆ. ಬೇರೆ ರಾಜ್ಯಗಳಿಗಿಂತ ನಮ್ಮಲ್ಲಿ ಶೇ.40 ರಷ್ಟು ಕಡಿಮೆ ವೆಚ್ಚದಲ್ಲಿ ನಿರ್ಮಾಣ ಮಾಡುತ್ತಿದ್ದೇವೆ. ನಮ್ಮಲ್ಲಿ 16.5 ಕಿಮೀ ಉದ್ದದ ಟನಲ್ ನಿರ್ಮಾಣ ಮಾಡುತ್ತಿದ್ದು ಪ್ರತಿ ಕಿ.ಮೀಗೆ 770 ಕೋಟಿ ವೆಚ್ಚ ಮಾಡಲಾಗುತ್ತಿದೆ. ಥಾನೆಯಲ್ಲಿನ ಟನಲ್ ರಸ್ತೆಗೆ ಪ್ರತಿ ಕಿ.ಮೀ ಗೆ 1,215 ಕೋಟಿ ವೆಚ್ಚ ಮಾಡಲಾಗಿದೆ. ಆರೆಂಜ್ ಗೇಟ್ 1,316 ಕೋಟಿ, ಗಾಯ್ ಮುಖ ಟನಲ್ ಗೆ 1,320 ಕೋಟಿಯನ್ನು ಪ್ರತಿ ಕಿ.ಮೀ ಖರ್ಚು ಮಾಡಲಾಗಿದೆ ಎಂದರು.




**ಸುಮಾರು 3.5 ಲಕ್ಷ ಜನರಿಗೆ ಅನುಕೂಲ**

### 6ನೇ ಹಂತದ ಕಾವೇರಿ ನೀರು ಯೋಜನೆ

**ಕಾವೇರಿ ಕುಡಿಯುವ ನೀರು ಪೂರೈಕೆ ಯೋಜನೆಯ 5 ನೇ ಹಂತವನ್ನು ಪೂರ್ಣಗೊಳಿಸಿ 110 ಹಳ್ಳಿಗಳಿಗೆ ನೀರು ನೀಡುತ್ತಿದ್ದೇವೆ. ನೀರಿನ ಸಂಪರ್ಕ ಶುಲ್ಕ ಕಟ್ಟಲು ಆಗದೇ ಇರುವವರಿಗೆ 12 ಕಂತುಗಳಲ್ಲಿ ಪಾವತಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಪ್ರತಿದಿನ 775 ಎಂಎಲ್‌ಡಿ ನೀರನ್ನು ಪೂರೈಸಲಾಗುತ್ತಿದೆ. ಸುಮಾರು 3.5 ಲಕ್ಷ ಜನರಿಗೆ ಅನುಕೂಲವಾಗುತ್ತಿದೆ. 2100 ಕಿಮೀ ಉದ್ದ ಸಂಪರ್ಕ ಜಾಲವನ್ನು ವಿಸ್ತರಿಸಲಾಗುತ್ತಿದೆ. ಇದರಿಂದ 50 ಲಕ್ಷ ಜನರಿಗೆ ಅನುಕೂಲವಾಗಲಿದೆ. 14 ವರ್ಷದಿಂದ ನೀರಿನ ದರ ಏರಿಕೆ ಮಾಡಿರಲಿಲ್ಲ ಆದ ಕಾರಣಕ್ಕೆ ಪೈಸೆಗಳ ಲೆಕ್ಕದಲ್ಲಿ ಏರಿಕೆ ಮಾಡಿದ್ದೇವೆ. ಅತ್ಯಂತ ಕಡಿಮೆ ದರಕ್ಕೆ ಕಾವೇರಿ ಆನ್ ವ್ಹೀಲ್ ಯೋಜನೆ ಮೂಲಕ ಮನೆ ಬಾಗಿಲಿಗೆ ಕಾವೇರಿ ನೀರು ಪೂರೈಕೆ ಮಾಡಲಾಗುತ್ತಿದೆ. ಈಗಾಗಲೇ 6 ನೇ ಹಂತಕ್ಕೂ ಯೋಜನೆ ರೂಪಿಸಲಾಗಿದೆ ಎಂದರು.**

# ಬಾನು ಮುಷ್ತಾಕ್ ದಸರಾ ಉದ್ಘಾಟಕಿ

## ಸಿಎಂ ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡುವ ವೇಳೆ ಅಧಿಕೃತವಾಗಿ ಘೋಷಣೆ

• **ಉದಯವಾಹಿನಿ, ಮೈಸೂರು**

ಈ ಬಾರಿ ವಿಶ್ವ ವಿಖ್ಯಾತ ದಸರಾ ಮಹೋತ್ಸವದ ಉದ್ಘಾಟಕರಾಗಿ ಬೂಕರ್ ಪ್ರಶಸ್ತಿ ಪುರಸ್ಕೃತ ಬಾನು ಮುಷ್ತಾಕ್ ಆಯ್ಕೆಯಾಗಿದ್ದಾರೆ. ಸಿಎಂ ಸಿದ್ದರಾಮಯ್ಯ ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡುವ ವೇಳೆ ಅಧಿಕೃತವಾಗಿ ಘೋಷಣೆ ಮಾಡುವ ಮೂಲಕ ಈ ಬಾರಿಯ ದಸರಾ ಉತ್ಸವವನ್ನು ಯಾರು ಉದ್ಘಾಟಿಸಲಿದ್ದಾರೆ ಎಂಬ ಕುತೂಲಹಕ್ಕೆ ತೆರೆ ಎಳೆದಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಇನ್‌ಫೋಸಿಸ್‌ನ ಸುಧಾಮೂರ್ತಿ, ಡಾ.ಗಂಗೂಬಾಯಿ ಹಾನಗಲ್, ಡಾ.ಬಿ.ಸರೋಜಾದೇವಿ ಬಳಿಕ ದಸರಾ ಉದ್ಘಾಟಿಸುತ್ತಿರುವ ಮಹಿಳೆ ಎಂಬ ಕೀರ್ತಿಗೆ ಭಾಜನರಾಗಿದ್ದಾರೆ. ಬಳಿಕ ಮಾತನಾಡಿದ ಅವರು, ದಸರಾ ಮಹೋತ್ಸವವನ್ನು ಬೂಕರ್ ಪ್ರಶಸ್ತಿ ಪುರಸ್ಕೃತ ಬಾನು ಮುಷ್ತಾಕ್ ಉದ್ಘಾಟಿಸಲಿದ್ದು, ಜಿಲ್ಲಾಡಳಿತದ ವತಿಯಿಂದ ಅವರನ್ನು ಗೌರವದಿಂದ ಆಹ್ವಾನಿಸಲಾಗುವುದು. ಬಾನು ಮುಷ್ತಾಕ್ ಅವರ ಕೃತಿ ಎದೆಯ ಹಣತೆಗೆ ಬೂಕರ್ ಪ್ರಶಸ್ತಿ ದೊರೆತಿದ್ದು, ಕರ್ನಾಟಕದ ಲೇಖಕಿಗೆ ಈ ಪ್ರಶಸ್ತಿ ದೊರೆತಿರುವುದು ಸಂತಸ ತಂದಿದೆ. ರೈತ ಸಂಘ, ಕನ್ನಡ ಚಳವಳಿಯ ಜತೆಗೆ ಹೋರಾಟದ ಹಿನ್ನೆಲೆಯುಳ್ಳ ಬಾನು ಮುಷ್ತಾಕ್, ಪ್ರಗತಿಪರ ಚಿಂತಕರೂ ಆಗಿದ್ದಾರೆ ಎಂದರು. ಈ ಬಾರಿ ಶಾಸ್ತ್ರದ ಪ್ರಕಾರ ಹನ್ನೊಂದು ದಿನ ದಸರಾ ನಡೆಯಲಿದೆ. ಅ.2ರಂದು ವಿಜಯದಶಮಿ ಜರುಗಲಿದೆ ಎಂದರು.

**ಶಿಕ್ಷಕಿಯಿಂದ ಸಾಹಿತಿಯವರೆಗೆ:** ಶಿಕ್ಷಕಿ, ಪತ್ರಕರ್ತೆ, ವಕೀಲೆ, ಸಾಹಿತಿಯಾಗಿ ಬಾನು ಮುಷ್ತಾಕ್ ಚಿರಪರಿಚಿತರಾಗಿದ್ದಾರೆ. ಉರ್ದು, ಹಿಂದಿ, ತಮಿಳು, ಮಲಯಾಳಂ ಮತ್ತು ಇಂಗ್ಲಿಷ್ ಭಾಷೆಯಲ್ಲಿಯೂ ಅವರ ಕೃತಿಗಳನ್ನು ಅನುವಾದಿಸಿ ಪ್ರಕಟಿಸಲಾಗಿದೆ.


ಉದಯವಾಹಿನಿ ಚಿತ್ರ

**ಅ.2ರಂದು ವಿಜಯ ದಶಮಿ**

**ದಬ್ಬಾಳಿಕೆ ವಿರುದ್ಧ ಹೋರಾಟ:** ಹಾರ್ಟ್ ಲ್ಯಾಂಪ್ 1990 ಮತ್ತು 2023ರ ನಡುವೆ ಬಾನು ಮುಷ್ತಾಕ್ ಅವರು ಬರೆದ 12 ಕಥೆಗಳ ಸಂಗ್ರಹ. ದೀಪಾ ಭಸ್ತಿ ಅವರು ಇದನ್ನು ಕನ್ನಡದಿಂದ ಇಂಗ್ಲಿಷ್‌ಗೆ ಅನುವಾದಿಸಿದ್ದಾರೆ. ಈ ಕಥೆಗಳು ದಕ್ಷಿಣ ಭಾರತದ ಮುಸ್ಲಿಂ ಸಮುದಾಯಗಳ ಮಹಿಳೆಯರ ದೈನಂದಿನ ಜೀವನದ ಅನುಭವಗಳನ್ನು, ವಿಶೇಷವಾಗಿ ಅವರ ಸ್ಥಿತಿಸ್ಥಾಪಕತ್ವ, ಪ್ರತಿರೋಧ ಮತ್ತು ಸಹೋದರತ್ವ ಎತ್ತಿ ತೋರಿಸುತ್ತವೆ. ಬಾನು ಮುಷ್ತಾಕ್ ತಮ್ಮ ಬರಹಗಳ ಮೂಲಕ ಧರ್ಮ, ಸಮಾಜ ಮತ್ತು ರಾಜಕೀಯ ಮಹಿಳೆಯರ ಮೇಲೆ ಹೇಗೆ ನಿರ್ಬಂಧಗಳನ್ನು ಹೇರುತ್ತವೆ ಎಂಬುದನ್ನು ಈ ಕೃತಿಯಲ್ಲಿ ಚಿತ್ರಿಸಿದ್ದಾರೆ.

**ಪ್ರಶಸ್ತಿ ಪುರಸ್ಕಾರಗಳು:** ಕನ್ನಡ ಸಾಹಿತ್ಯಕ್ಕೆ ಅವರು ನೀಡಿದ ಕೊಡುಗೆ ಅಪಾರ. ಹೀಗಾಗಿ ಕರ್ನಾಟಕ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಮತ್ತು ದಾನ ಚಿಂತಾಮಣಿ ಅತ್ತಿಮಬ್ಬೆ ಪ್ರಶಸ್ತಿ ದಕ್ಕಿವೆ. ಕುಬ, ಬಡವರ ಮಗಳು ಹೆಣ್ಣಲ್ಲ ಕಾದಂಬರಿ, ಹೆಜ್ಜೆ ಮೂಡಿದ ಹಾದಿ, ಬೆಂಕಿಮಳೆ, ಎದೆಯ ಹಣತೆ ಅವರು ಬರೆದ ಕಥಾಸಂಕಲನವಾಗಿದೆ.

**77 ವರ್ಷದ ಬಾನು ಮುಷ್ತಾಕ್ 1954 ಏ.3ರಂದು ಹಾಸನ ಜಿಲ್ಲೆಯ ವಲಭಬಾಯಿಯಲ್ಲಿ ಜನಿಸಿದರು. 8ನೇ ವಯಸ್ಸಿನಲ್ಲಿ ಮುಷ್ತಾಕ್ ಅವರನ್ನು ಶಿವಮೊಗ್ಗದಲ್ಲಿರುವ ಕನ್ನಡ ಭಾಷೆಯ ಮಿಷನರಿ ಶಾಲೆಗೆ ಸೇರಿಸಲಾಯಿತು. ಕನ್ನಡ ಬಾರದ ಅವರು ಪಟ್ಟು ಹಿಡಿದು ಆರು ತಿಂಗಳಲ್ಲಿ ಓದಲು ಮತ್ತು ಬರೆಯಲು ಕಲಿತರು. ಆನಂತರ ಬಿಎಸ್ಸಿ, ಎಲ್‌ಎಲ್‌ಬಿ ವ್ಯಾಸಂಗ ಪೂರ್ಣಗೊಳಿಸಿದರು. ಉದ್ಯೋಗ ಹರಿಸಿ ಲಂಕೇಶ್ ಪತ್ರಿಕೆಯಲ್ಲಿ ಜಿಲ್ಲಾ ವರದಿಗಾರರಾಗಿ ಸೇರಿದ ಅವರು, 9 ವರ್ಷ ತಮ್ಮ ಸೇವೆ ಸಲ್ಲಿಸಿದ್ದರು.**

ಪದ್ಮಭೂಷಣ ಬಿ.ಸರೋಜದೇವಿ ಸಾಹಿತ್ಯ ಪ್ರಶಸ್ತಿ, ಒಮ್ಮೆ ಹೆಣ್ಣಾಗು ಪ್ರಭುವೇ ನಾಟಕ ರೂಪಾಂತರಕ್ಕೆ ಇಂಟರ್ ನ್ಯಾಷನಲ್ ವುಮನ್ ಫಾರ್ ರೇಡಿಯೋ ಆಂಡ್ ಟೆಲಿವಿಷನ್ ಬಹುಮಾನ ದಕ್ಕಿತ್ತು. ಕರ್ನಾಟಕ ಕಲ್ಪವಲ್ಲಿ ಪ್ರಶಸ್ತಿ, ಕರ್ನಾಟಕ ಲೇಖಕಿಯರ ಸಂಘದ ಎಚ್.ವಿ.ಸಾವಿತ್ರಮ್ಮ ದತ್ತಿನಿಧಿ ಬಹುಮಾನ ಹಾಗೂ ಗುಡಿಬಂಡೆ ಪೂರ್ಣಿಮಾ ದತ್ತಿನಿಧಿ ಬಹುಮಾನ, ಶ್ರವಣಬೆಳಗೊಳ ಮಹಾಮಸ್ತಕಾಭಿಷೇಕ ಪ್ರಶಸ್ತಿ, ಸುಧಾಮೂರ್ತಿ ಪ್ರಶಸ್ತಿಗಳು ಅವರಿಗೆ ದಕ್ಕಿವೆ. ಬಾನು ಮುಷ್ತಾಕ್ ಅವರು ತನ್ನ ಓದುಗರಿಗಾಗಿ ಫಾರಸಿ ಕೃತಿ ತಾರೀಖ್-ಎ-ಫೆರಿಸ್ತಾವನ್ನು ಉರ್ದುವಿನಿಂದ ಕನ್ನಡೀಕರಿಸಿದ್ದರು. ಅವರು ಬರೆದ ಕರಿನಾಗರಗಳು ಎಂಬ ಕತೆಯನ್ನು ಆಧರಿಸಿ ಗಿರೀಶ್ ಕಾಸರವಳ್ಳಿ ಅವರು ಹಸೀನಾ ಎಂಬ ಚಿತ್ರ ನಿರ್ದೇಶಿಸಿದ್ದರು.

# ಸೌಜನ್ಯಳಿಗೆ ನ್ಯಾಯ ಕೊಡಿಸಲು ಒತ್ತಾಯ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಮೈಸೂರು**

ಸೌಜನ್ಯಳ ಸಾವಿಗೆ ನ್ಯಾಯ ಕೊಡಬೇಕು, ಹಲವಾರು ಹೆಣ್ಣು ಮಕ್ಕಳ ಸಾವಿನ ಕುರಿತು ಪಾರದರ್ಶಕ ತನಿಖೆಯಾಗಬೇಕು ಎಂದು ಒತ್ತಾಯಿಸಿ ಭಾರತ ಭೀಮ್ ಸೇನೆ ವತಿಯಿಂದ ಪಾದಯಾತ್ರೆ ನಡೆಸಲಾಯಿತು.

ನಗರದ ಟೌನ್ ಹಾಲ್ ಮುಂಭಾಗದ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಕಾಲ್ನಡಿಗೆ ಮೂಲಕ ನಜರ್ಬಾದ್‌ನಲ್ಲಿರುವ ಜಿಲ್ಲಾಧಿಕಾರಿ ಕಚೇರಿವರೆಗೆ ಮೆರವಣಿಗೆ ನಡೆಸಲಾಯಿತು. ಬಳಿಕ ಎಸ್‌ಐಟಿ ತನಿಖೆ ಪಾರದರ್ಶಕವಾಗಿ ಯಾರ ಒತ್ತಡ ಇಲ್ಲದೆ ನಡೆಯಬೇಕು. ಸೌಜನ್ಯಳ ಸಾವಿಗೆ ನ್ಯಾಯ ಕೊಡಿಸಬೇಕು ಎಂದು ಆಗ್ರಹಿಸಿ ಅಪರ ಜಿಲ್ಲಾಧಿಕಾರಿ ಶಿವರಾಜು ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಈ ವೇಳೆ ನಟ ಅಹಿಂಸಾ ಚೇತನ್ ಮಾತನಾಡಿ, ಧರ್ಮಸ್ಥಳದ ಸೌಜನ್ಯಳ ಸಾವಿಗೆ ನ್ಯಾಯ ಕೊಡಿಸಲೆಂದು ಹಲವಾರು ವರ್ಷಗಳಿಂದ ಹೋರಾಟ ಮಾಡುತ್ತಿದ್ದರು ಇನ್ನೂ ನ್ಯಾಯ ಸಿಕ್ಕಿಲ್ಲ. ಇದೀಗ ಮತ್ತೆ ಹೋರಾಟ ಆರಂಭವಾಗಿದೆ. ಸಂಘಟನಾತ್ಮಕ ಹೋರಾಟದ ಮೂಲಕ ನ್ಯಾಯ ಕೊಡಿಸಬೇಕು. ಪ್ರಜಾಪ್ರಭುತ್ವದಲ್ಲಿ ಹೋರಾಟದ ಹಾದಿಗಳು ಬಹಳ ಮುಖ್ಯ. ಅಭಿವ್ಯಕ್ತಿ ಸ್ವಾತಂತ್ರ್ಯ ಸರ್ಕಾರಗಳ ಕಪಿಮುಷ್ಠಿಗೆ ಒಳಗಾಗದೆ ಸಂವಿಧಾನದ ಮೂಲ ಆಶಯವಾಗುತ್ತದೆ.

ಜ್ಞಾನ ಆಸೆಗಳನ್ನು ಎತ್ತಿ ಹಿಡಿಯಬೇಕಾಗುತ್ತದೆ. ಅಭಿವ್ಯಕ್ತಿ ಸ್ವಾತಂತ್ರ್ಯ ಸರ್ಕಾರದ ಕಪಿಮುಷ್ಟಿಗೆ ಸಿಲುಕಿಕೊಂಡಿದೆ. ಕೂಡಲೇ ಸರ್ಕಾರ ಸೂಕ್ತ ತನಿಖೆ ನಡೆಸಿ ಸೌಜನ್ಯಳ ಸಾವಿಗೆ ನ್ಯಾಯ ಕೊಡಿಸಬೇಕೆಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಭಾರತ ಭೀಮ್ ಸೇನೆಯ ಅಧ್ಯಕ್ಷ ದಿನೇಶ್, ಮಾಜಿ ಮೇಯರ್ ಪುರುಷೋತ್ತಮ್, ಯಶ್ವಂತ್, ನಾಗೇಶ್, ಬಸವಣ್ಣ, ರವಿಕುಮಾರ್, ಮಹೇಶ್ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಮಿನಿ ನ್ಯೂಸ್

### ಗ್ರಾ.ಪಂ. ಉಪಾಧ್ಯಕ್ಷರಾಗಿ ಹುಲಿಯಪ್ಪ ಆಯ್ಕೆ

• **ಉದಯವಾಹಿನಿ, ಬಿಡದಿ**

ಹೋಬಳಿಯ ಗೋಪಹಳ್ಳಿ ಗ್ರಾಮ ಪಂಚಾಯಿತಿ ನೂತನ ಉಪಾಧ್ಯಕ್ಷರಾಗಿ ಕಾಂಗ್ರೆಸ್ ಬೆಂಬಲಿತ ಸದಸ್ಯ ಬಿ.ಕೆ. ಹುಲಿಯಪ್ಪ ಆಯ್ಕೆಯಾದರು. ಆರ್.ಎ. ಗೋಪಾಲ್ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ಪಂಚಾಯಿತಿ ಕಚೇರಿಯಲ್ಲಿ ಚುನಾವಣೆ ನಡೆಯಿತು. ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಯಾಗಿ ಗೋಪಹಳ್ಳಿ ಸದಸ್ಯ ಹುಲಿಯಪ್ಪ ಹಾಗೂ ಮಂಚೇಗೌಡನಪಾಳ್ಯದ ಜೆಡಿಎಸ್ ಬೆಂಬಲಿತ ಸದಸ್ಯ ವಿನೋದ್‌ಕುಮಾರ್ ನಾಮಪತ್ರ ಸಲ್ಲಿಸಿದ್ದರು. ಒಟ್ಟು 26 ಸದಸ್ಯರಲ್ಲಿ ಕಾಂಗ್ರೆಸ್ ಬೆಂಬಲಿತ 15 ಹಾಗೂ ಜೆಡಿಎಸ್ ಬೆಂಬಲಿತ 11 ಸದಸ್ಯರು ಚುನಾವಣೆಯಲ್ಲಿ ಭಾಗವಹಿಸಿದ್ದರು.

ಅಂತಿಮವಾಗಿ ಹುಲಿಯಪ್ಪ 13 ಮತಗಳನ್ನು ಪಡೆದು ಜಯಗಳಿಸಿದರು. ವಿನೋದ್‌ಕುಮಾರ್ 11 ಮತಗಳನ್ನು ಪಡೆದು ಪರಾಭವಗೊಂಡರು. 2 ಮತ ತಿರಸ್ಕೃತಗೊಂಡವು. ಕೈ ಬೆಂಬಲಿಗರು ಪಟಾಕಿ ಸಿಡಿಸಿ ಸಂಭ್ರಮಾಚರಿಸಿದರು.

### ಅಪ್ರಾಪ್ತ ಬಾಲಕಿಗೆ ವಿವಾಹ ಪೋಷಕರ ವಿರುದ್ಧ ದೂರು

• **ಉದಯವಾಹಿನಿ, ಕನಕಪುರ**

ಅಪ್ರಾಪ್ತ ಬಾಲಕಿಯೊಬ್ಬರಿಗೆ ಬಾಲ್ಯ ವಿವಾಹ ಮಾಡಿರುವ ಪ್ರಕರಣ ನಡೆದಿದೆ. ಬಾಲ್ಯ ವಿವಾಹಕ್ಕೆ ಕಾರಣರಾದ ಪೋಷಕರ ವಿರುದ್ಧ ಸಾತನೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ತಾಲ್ಲೂಕಿನ ಗ್ರಾಮವೊಂದರ ಯುವಕನೊಂದಿಗೆ ವಿವಾಹ ಮಾಡಿಕೊಡಲಾಗಿತ್ತು. ಜಿಲ್ಲಾ ಮಕ್ಕಳ ರಕ್ಷಣಾ ಹಕ್ಕುಗಳ ಘಟಕದ ಅಧಿಕಾರಿಗಳು ಗ್ರಾಮಕ್ಕೆ ಭೇಟಿ ನೀಡಿ ಬಾಲ್ಯ ವಿವಾಹ ನಡೆದಿರುವ ಬಗ್ಗೆ ಮಾಹಿತಿ ಪಡೆದಿದ್ದಾರೆ. ಪೋಷಕರು ಬಾಲಕಿಯೊಂದಿಗೆ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರಾಗುವಂತೆ ಮಕ್ಕಳ ರಕ್ಷಣಾ ಹಕ್ಕುಗಳ ಘಟಕದ ಅಧಿಕಾರಿಗಳು ಪೋಷಕರಿಗೆ ನೋಟಿಸ್ ಜಾರಿ ಮಾಡಿದ್ದಾರೆ.

### ಧರ್ಮಸ್ಥಳ ವಿರುದ್ಧ ಅಪಪ್ರಚಾರ ತುಮಕೂರಿನಲ್ಲಿ ಪ್ರತಿಭಟನೆ

• **ಉದಯವಾಹಿನಿ, ತುಮಕೂರು**

ಧರ್ಮಸ್ಥಳ, ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ವಿರುದ್ಧ ನಡೆಯುತ್ತಿರುವ ಅಪಪ್ರಚಾರವನ್ನು ಖಂಡಿಸಿ ಬಿಜೆಪಿ ಕಾರ್ಯಕರ್ತರು ನಗರದಲ್ಲಿ ಪ್ರತಿಭಟನೆ ನಡೆಸಿದರು. ಭದ್ರಮ್ಮ ವೃತ್ತದಲ್ಲಿರುವ ಸೋಮೇಶ್ವರ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ ನಂತರ ಮೆರವಣಿಗೆಯಲ್ಲಿ ತೆರಳಿ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟಿಸಿದರು. ಧರ್ಮಸ್ಥಳದ ವಿರುದ್ಧ ನಿರಂತರವಾಗಿ ಅಪಪ್ರಚಾರ ಮಾಡಲಾಗುತ್ತಿದೆ. ಕೊಲೆಗಳು ನಡೆದಿವೆ ಎಂದು ಅಪಪ್ರಚಾರ ಮಾಡಲಾಗುತ್ತಿದೆ. ಸುಳ್ಳು ಸುದ್ದಿ ಹರಡಿ, ಧಾರ್ಮಿಕ ಭಾವನೆಗೆ ಧಕ್ಕೆ ತಂದವರನ್ನು ಬಂಧಿಸಬೇಕು ಎಂದು ಆಗ್ರಹಿಸಿದರು. ಸಾಮಾಜಿಕ ಜಾಲ ತಾಣದಲ್ಲಿ ಧರ್ಮಸ್ಥಳ, ಧರ್ಮಾಧಿಕಾರಿಯನ್ನು ನಿಂದಿಸಲಾಗುತ್ತಿದೆ. ಇಂತಹವರ ವಿರುದ್ಧ ಕ್ರಮ ಕೈಗೊಳ್ಳುವುದರ ಜತೆಗೆ ಕುಮ್ಮಕ್ಕು ನೀಡುತ್ತಿರುವವರ ವಿರುದ್ಧವೂ ಕ್ರಮ ಜರುಗಿಸಬೇಕು. ಅನಾಮಿಕ ವ್ಯಕ್ತಿಯ ಹಿಂದಿರುವ ದುಷ್ಟ ವ್ಯಕ್ತಿಗಳನ್ನು ಬಂಧಿಸಬೇಕು ಎಂದು ಒತ್ತಾಯಿಸಿದರು.

### ಮದಲೂರು ಕೆರೆಗೆ ಹೇಮಾವತಿ ನೀರು ಹರಿಸಲು ಚಾಲನೆ

• **ಉದಯವಾಹಿನಿ, ಶಿರಾ**

ತಾಲ್ಲೂಕಿನ ಕಳ್ಳಂಬೆಳ್ಳ ಕೆರೆಯಿಂದ ಮದಲೂರು ಕೆರೆಗೆ ನೀರು ಹರಿಸಲು ಚಾಲನೆ ನೀಡಲಾಯಿತು. ತಾಲ್ಲೂಕಿನಲ್ಲಿ ಈ ಬಾರಿ ಮಳೆ ಬರದಿದ್ದರೂ ಹೇಮಾವತಿ ನೀರಿನಿಂದ ಶಿರಾ ದೊಡ್ಡ ಕೆರೆ ಹಾಗೂ ಕಳ್ಳಂಬೆಳ್ಳ ಕೆರೆ ಭರ್ತಿಯಾದ ಹಿನ್ನಲೆಯಲ್ಲಿ ಮದಲೂರು ಹಾಗೂ ಮಾರ್ಗ ಮಧ್ಯದ 11 ಕೆರೆಗಳಿಗೆ ನೀರು ಹರಿಸಲು ಶಾಸಕ ಟಿ.ಬಿ.ಜಯಚಂದ್ರ, ಅವರ ಸೂಚನೆ ಮೇರೆಗೆ ಅಧಿಕಾರಿಗಳು ಚಾಲನೆ ನೀಡಿದರು.

ಕಳ್ಳಂಬೆಳ್ಳ ಕೆರೆಯಿಂದ ಮದಲೂರು ಕೆರೆಗೆ ರೂ.59.85 ಕೋಟಿ ವೆಚ್ಚದಲ್ಲಿ 32 ಕಿ.ಮೀ ಉದ್ದದ ನಾಲೆ ನಿರ್ಮಿಸಲಾಗಿದೆ. ಕಳೆದ ನಾಲ್ಕು ಚುನಾವಣೆಯಲ್ಲಿ ಇದು ತಾಲ್ಲೂಕಿನ ಮಟ್ಟಿಗೆ ಪ್ರಮುಖ ಚುನಾವಣೆ ಅಸ್ತ್ರವಾಗಿತ್ತು. 2020ರಲ್ಲಿ ನಡೆದ ವಿಧಾನಸಭೆಯ ಉಪಚುನಾವಣೆಯಲ್ಲಿ ಮದಲೂರು ಕೆರೆಗೆ ಹೇಮಾವತಿ ಹರಿಸುವ ವಿಚಾರ ಹೆಚ್ಚು ಸದ್ದು ಮಾಡಿ ರಾಜ್ಯದ ಗಮನವನ್ನು ತನ್ನ ಕಡೆ ಸೆಳೆದಿತ್ತು. ಕಳೆದ ವರ್ಷ ಮದಲೂರು ಕೆರೆ ಭರ್ತಿಯಾಗಿದ್ದು, ಈ ಬಾರಿ ಸಹ ಕೆರೆ ತುಂಬಿಸುವುದಾಗಿ ಶಾಸಕ ಟಿ.ಬಿ.ಜಯಚಂದ್ರ, ಅವರು ಭರವಸೆ ನೀಡಿರುವುದು ಜನರಲ್ಲಿ ಸಂತಸ ಮೂಡಿಸಿದೆ.

# ಸದಸ್ಯರು, ಸಂಸ್ಥೆ ನಡುವೆ ಹೊಂದಾಣಿಕೆ ಮುಖ್ಯ

• **ಉದಯವಾಹಿನಿ, ಬೆಟ್ಟದಪುರ**

ಒಂದು ಸಂಸ್ಥೆ ಮತ್ತು ಅದರ ಸದಸ್ಯರ ನಡುವೆ ಉತ್ತಮ ಹೊಂದಾಣಿಕೆ ಇದ್ದಾಗ ಮಾತ್ರ ಆ ಸಂಸ್ಥೆ ಯಶಸ್ಸನ್ನು ಸಾಧಿಸಲು ಸಾಧ್ಯ ಎಂದು ಸಂಘದ ಅಧ್ಯಕ್ಷ ಹಾಗೂ ಮೈಸೂರು-ಚಾಮರಾಜನಗರ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿರ್ದೇಶಕ ಈ.ಪಿ ಲೋಕೇಶ್ ತಿಳಿಸಿದರು.

ಸಮೀಪದ ಬಾರಸೆ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದದಲ್ಲಿ ನಡೆದ ವಾರ್ಷಿಕ ಮಹಾಸಭೆಯನ್ನು ಉದ್ಘಾಟಿಸಿ ಬಳಿಕ ಮಾತನಾಡಿದ ಅವರು, 1966-67 ರಲ್ಲಿ ಪ್ರಾರಂಭವಾದ ಈ ಸಂಸ್ಥೆ 100 ರೂಗಳಿಂದ ಪ್ರಾರಂಭವಾಗಿ 6.5 ಕೋಟಿ ವ್ಯಾಪಾರ ವಹಿವಾಟು ನಡೆಸುತ್ತಿದೆ, ತಾಲ್ಲೂಕಿನಲ್ಲಿ ಮಾದರಿ ಸಂಘ ಎಂಬ ಹೆಗ್ಗಳಿಕೆಗೆ ಸಹ ಪಾತ್ರವಾಗಿದೆ, ಪ್ರತಿಯೊಬ್ಬರು ಸದಸ್ಯರು ಪಕ್ಷ ಭೇದ ಮಾಡದೆ ಸಂಸ್ಥೆಯ ಬೆಳವಣಿಗೆ ಸಹಕಾರ ನೀಡುತ್ತಿರುವುದೇ, ಇದಕ್ಕೆಲ್ಲ ಕಾರಣವಾಗಿದೆ ಎಂದರು.

ಮುಖ್ಯ ಕಾರ್ಯನಿರ್ವಣಾಧಿಕಾರಿ ನಂದೀಶ್ ಮಾತನಾಡಿ ರೈತರ ಸಹಕಾರ ಮತ್ತು ಬೆಂಬಲದಿಂದ ಈ ಬಾರಿ 2.95 ಲಕ್ಷ ನಿವ್ವಳ ಆದಾಯ ಗಳಿಸಿದೆ, ಸಂಸ್ಥೆಯ ಅಧ್ಯಕ್ಷರ ಮುಂದಾಲೋಚನೆಯಂತೆ ಸಂಘದಲ್ಲಿ ಗ್ರಾಮ ಒನ್ ಕೇಂದ್ರ ತೆರೆಯಲು ಸೂಚನೆ ನೀಡಿದ್ದು, ಸಾರ್ವಜನಿಕರು ಇದನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಮನವಿ ಮಾಡಿದರು.


ಉದಯವಾಹಿನಿ ಚಿತ್ರ

**ಸಂಘದಲ್ಲಿ ನೀಡುವ ಸಾಲ ಸೌಲಭ್ಯಗಳನ್ನು ಬಳಸಿಕೊಂಡು ನಿಗದಿತ ಸಮಯಕ್ಕೆ ಮರುಪಾವತಿ ಮಾಡಿದರೆ, ಸಂಘವು ಆರ್ಥಿಕವಾಗಿ ಮತ್ತಷ್ಟು ಪ್ರಬಲಗೊಳ್ಳುತ್ತದೆ, 5 ಲಕ್ಷದವರೆಗೆ 0% ಬಡ್ಡಿ ದರದಲ್ಲಿ ಸಾಲ ತೆಗೆದುಕೊಳ್ಳಲು ರೈತರಿಗೆ ಅವಕಾಶವಿದೆ, ಆದರೆ ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಯೋಜನೆಗಳನ್ನು ನೀಡುತ್ತಿರುವುದರಿಂದ 3 ಲಕ್ಷದ ವರೆಗೆ 0% ಬಡ್ಡಿ ದರದಲ್ಲಿ ಸಾಲ ತೆಗೆದುಕೊಳ್ಳಲು ಅವಕಾಶ ನೀಡಿದ್ದೇವೆ, ಮುಂದಿನ ದಿನಗಳಲ್ಲಿ 5 ಲಕ್ಷದವರೆಗೆ 0% ಬಡ್ಡಿ ದರದಲ್ಲಿ ಸಾಲ ಸೌಲಭ್ಯ ಪಡೆದುಕೊಳ್ಳಲು ಅವಕಾಶ ಕಲ್ಪಿಸಲಾಗುವುದು ಎಂದು ಹೇಳಿದರು.**

# ಆಹಾರ ಸುರಕ್ಷತೆ ಪರವಾನಗಿ ಕಡ್ಡಾಯ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಆಹಾರ ಉದ್ದಿಮೆದಾರರೆಲ್ಲರೂ ಆಹಾರ ಸುರಕ್ಷತೆ ಔಷಧಿ ಆಡಳಿತ ಇಲಾಖೆಯಿಂದ ನೋಂದಣಿ ಅಥವಾ ವ್ಯಾಪಾರ ಪರವಾನಗಿಯನ್ನು ಕಡ್ಡಾಯವಾಗಿ ಪಡೆದು ಕಾಲಕಾಲಕ್ಕೆ ನವೀಕರಣ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯಿಂದ ನಗರದಲ್ಲಿ ನಡೆದ 'ಆಹಾರ ಸುರಕ್ಷತೆ ತರಬೇತಿ ಮತ್ತು ಪ್ರಮಾಣೀಕರಣ' ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಜಿಲ್ಲೆಯ ಎಲ್ಲಾ ಹೋಟೆಲ್‌ಗಳು, ರೆಸ್ಟೋರೆಂಟ್‌ಗಳು, ಬೇಕರಿಗಳು, ಕೇಟರರ್ಸ್ ಹಾಗೂ ಬೀದಿಬದಿ ಆಹಾರ ಉದ್ದಿಮೆದಾರರು ಅಂಕಿತಾಧಿಕಾರಿಗಳ ಕಚೇರಿ, ಆಹಾರ ಸುರಕ್ಷತೆ ಮತ್ತು ಔಷಧಿ ಆಡಳಿತಯಿಂದ ನೋಂದಣಿ. ವ್ಯಾಪಾರ ಪರವಾನಗಿ, ಟ್ರೇಡ್ ಪಡೆಯುವುದು ಕಡ್ಡಾಯ. ಕಾಲಕಾಲಕ್ಕೆ ನವೀಕರಣ ಮಾಡಿಕೊಳ್ಳಬೇಕು ಎಂದು ಹೇಳಿದರು. ಆಹಾರದಲ್ಲಿ ಯಾವುದೇ ಕೃತಕ ಬಣ್ಣಗಳು ಹಾಗೂ ಟೇಸ್ಟಿಂಗ್ ಪೌಡರ್ ಬಳಸಬಾರದು. ಆಹಾರ ತಯಾರು ಮಾಡಲು ಉಪಯೋಗಿಸುವಂತಹ ತರಕಾರಿ ಹಾಗೂ ಆಹಾರ ಸಾಮಾಗ್ರಿಗಳ ಗುಣಮಟ್ಟವನ್ನು ಕಾಪಾಡಿಕೊಳ್ಳಬೇಕು ಎಂದು ಸೂಚಿಸಿದರು.


ಉದಯವಾಹಿನಿ ಚಿತ್ರ

**ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಹೇಳಿಕೆ**

ಹೆಚ್ಚುವರಿ ಜಿಲ್ಲಾಧಿಕಾರಿ ಡಾ. ಎನ್. ಭಾಸ್ಕರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಮಹೇಶ್ ಕುಮಾರ್, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತದ ಅಂಕಿತಾಧಿಕಾರಿ ಡಾ.ಕೆ.ಎಸ್. ಪ್ರಕಾಶ್, ಆಹಾರ ಸುರಕ್ಷತಾಧಿಕಾರಿಗಳಾದ ಡಾ. ಕೆ. ಮಂಜುಳಾ. ಡಾ.ರಾಮಚಂದ್ರರೆಡ್ಡಿ, ಡಾ.ವೆಂಕಟೇಶ್ ಮೂರ್ತಿ, ಡಾ.ಹೇಮಾ. ಡಾ.ಅಕ್ಷಯ್ ಶ್ರೀನಿವಾಸ್, ಡಾ.ಸತ್ಯನಾರಾಯಣರೆಡ್ಡಿ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ, ಉದ್ದಿಮೆದಾರರು, ವ್ಯಾಪಾರಸ್ಥರು ಪಾಲ್ಗೊಂಡಿದ್ದರು.

**ತಪ್ಪಿದಲ್ಲಿ ಎಫ್‌ಎಸ್‌ಎಸ್‌ಎಐ ಕಾಯ್ದೆ 2006 ಪ್ರಕಾರ ದಂಡ ವಿಧಿಸಲಾಗುವುದು. ಹೋಟೆಲ್ ಉದ್ದಿಮೆದಾರರು ಹೋಟೆಲ್ ಒಳಗೆ, ಹೊರಗೆ ಮತ್ತು ಶೌಚಾಲಯಗಳಲ್ಲಿ ಶುಚಿತ್ವ ಕಾಪಾಡುವ ವ್ಯವಸ್ಥೆಯ ಕುರಿತು ನಿರಂತರವಾಗಿ ನಿಗಾವಹಿಸಬೇಕು. ಅಡುಗೆ ಕೋಣೆಯಲ್ಲಿ ಕೆಲಸ ಮಾಡುವವರು, ಆಹಾರ ತಯಾರಕರು ಕಡ್ಡಾಯವಾಗಿ ತಲೆಗೆ ಕ್ಯಾಪ್, ಕೈಗೆ ಗೌಸ್, ಮಾಸ್ಕ್ ಧರಿಸಬೇಕು ಎಂದು ಹೇಳಿದರು.**

# ಬಿಜೆಪಿ ಭೂಮಿ ಪಡೆದಿಲ್ಲವೆ: ಕಾಂಗ್ರೆಸ್ ಪ್ರಶ್ನೆ

• **ಉದಯವಾಹಿನಿ, ತುಮಕೂರು**

ಬಿಜೆಪಿ, ಅದರ ಅಂಗ ಸಂಸ್ಥೆ, ಸಂಘಟನೆಗಳು ಸರ್ಕಾರದಿಂದ ಎಲ್ಲೂ ಭೂಮಿ ಪಡೆದುಕೊಂಡಿಲ್ಲವೆ ಆರ್‌ಎಸ್‌ಎಸ್‌ನ ಸಾಧನ ಭವನ, ಎಬಿವಿಪಿ ಭವನಗಳಲ್ಲಿ ಯಾವ ಕೌಶಲ ತರಬೇತಿ ನೀಡಲಾಗುತ್ತಿದೆ ಎಂದು ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷ ಜಿ.ಚಂದ್ರಶೇಖರ್‌ಗೌಡ ಇಲ್ಲಿ ಪ್ರಶ್ನಿಸಿದರು.

ಜಿಲ್ಲಾ ಕಾಂಗ್ರೆಸ್ ಭವನಕ್ಕೆ ಅಕ್ರಮವಾಗಿ ಭೂಮಿ ಮಂಜೂರು ಮಾಡಲಾಗಿದೆ ಎಂಬ ಬಿಜೆಪಿ ಆರೋಪಕ್ಕೆ ಪತ್ರಿಕಾಗೋಷ್ಠಿಯಲ್ಲಿ ಸ್ಪಷ್ಟನೆ ನೀಡಿದರು. ಬಿಜೆಪಿಯವರ ವರ್ತನೆಯನ್ನು ಖಂಡಿಸಿದರು. ಬಿಜೆಪಿಯವರು ಯಾವ ಭಾಗದಲ್ಲಿ ಎಷ್ಟು ಭೂಮಿ ಪಡೆದುಕೊಂಡಿದ್ದಾರೆ ಎಂಬುದು ನಮಗೂ ಗೊತ್ತಿದೆ. ಆದರೆ ಅವರ ಕಾರ್ಯಕ್ಕೆ ಅಡ್ಡಿಪಡಿಸುವ ಕೆಲಸವನ್ನು ನಾವು ಮಾಡುತ್ತಿಲ್ಲ. ನಮ್ಮ ಕೆಲಸಕ್ಕೂ ಅಡ್ಡಿ ಬರಬಾರದು ಎಂದರು.

ಕಾಂಗ್ರೆಸ್ ಭವನಕ್ಕೆ ಮಂಜೂರಾಗಿರುವ ಮರಳೂರಿನ ಜಾಗವನ್ನು 1904ರಲ್ಲಿ ಅಂದಿನ ಮೈಸೂರು ಮಹಾರಾಜರು ಕಸ ವಿಲೇವಾರಿಗೆ ದಾನವಾಗಿ ನೀಡಿದ್ದರು. ಅಂದಿನಿಂದಲೂ ಈ



ಜಾಗ ಮಹಾನಗರ ಪಾಲಿಕೆಯ ಸ್ವತ್ತಾಗಿಯೇ ಉಳಿದಿದೆ. ಇದಕ್ಕೆ ಸಂಬಂಧಿಸಿದ ವಿವಾದ ನ್ಯಾಯಾಲಯದಲ್ಲಿ ವಿಚಾರಣೆ ಹಂತದಲ್ಲಿದೆ.

ನ್ಯಾಯಾಲಯದ ಆದೇಶಕ್ಕೆ ಒಳಪಟ್ಟು, ಭೂಮಿಯ ಒಟ್ಟಾರೆ ಮೌಲ್ಯದ ಶೇ 5ರಷ್ಟು ಹಣವನ್ನು ಕಟ್ಟಿಸಿಕೊಂಡೇ ಭೂಮಿ ನೋಂದಣಿ ಮಾಡಿಕೊಡಲು ಆದೇಶಿಸಲಾಗಿದೆ. ಎಲ್ಲಿಯೂ ಕಾನೂನು ಗಾಳಿಗೆ ತೂರಿಲ್ಲ. ಬಿಜೆಪಿ ಮುಖಂಡರು ಮಾಡುತ್ತಿರುವ ಆರೋಪ ಸತ್ಯಕ್ಕೆ ದೂರವಾಗಿದೆ ಎಂದು ಹೇಳಿದರು. ಮುಖಂಡ ಆರ್.ರಾಮಕೃಷ್ಣ, 'ಕಾನೂನು ಪ್ರಕಾರವೇ ಜಾಗ ಪಡೆದುಕೊಂಡಿದ್ದು, ಈಗ ಮಂಜೂರಾಗಿರುವ ಜಾಗದಲ್ಲಿ ಕಾಂಗ್ರೆಸ್ ಭವನ ನಿರ್ಮಿಸಲಾಗುವುದು. ಯಾರಿಗೂ ಹೆದರುವ ಪ್ರಶ್ನೆಯೇ ಇಲ್ಲ ಎಂದು ಸವಾಲು ಹಾಕಿದರು. ಮಾಜಿ ಅಧ್ಯಕ್ಷ ಕೆಂಚಮಾರಯ್ಯ, ಬಿಜೆಪಿಯವರು ಸಂಘರ್ಷ ಮಾಡಿದರೆ ನಾವು ಸಂಯಮದಿಂದ ಕೆಲಸ ಮಾಡುತ್ತಿದ್ದೇವೆ.

ಎಲ್ಲದಕ್ಕೂ ಅವರ ಒಪ್ಪಿಗೆ ಪಡೆಯಬೇಕೆ ಎಂದು ಪ್ರಶ್ನಿಸಿದರು. ಪಂಚಾಕ್ಷರಯ್ಯ, ಅಸ್ಲಾಂಪಾಷ, ರೇವಣ್ಣಸಿದ್ದಯ್ಯ, ಮಹೇಶ್ ಉಪಸ್ಥಿತರಿದ್ದರು.

**ಬಿಜೆಪಿ ಪಕ್ಷದ ಭವನ ನಿರ್ಮಾಣಕ್ಕೆ ಜಮೀನು ಬೇಕಾದರೆ ಅರ್ಜಿ ಹಾಕಿ ಪಡೆದುಕೊಳ್ಳಲಿ. ಅದು ಬಿಟ್ಟು ಕಾಂಗ್ರೆಸ್ ಭವನ ನಿರ್ಮಾಣಕ್ಕೆ ಅಡ್ಡಿಪಡಿಸುವುದು ಸರಿಯಲ್ಲ ಎಂದರು. ಮಂಜೂರಾದ ಭೂಮಿಯನ್ನು ನೋಂದಣಿ ಮಾಡಿಸುವ ಸಮಯದಲ್ಲಿ ಉಪನೋಂದಣಾಧಿಕಾರಿ ಕಚೇರಿಯಲ್ಲಿ ಬಿಜೆಪಿಯವರು ಗೂಂಡಾಗಳಂತೆ ವರ್ತಿಸಿದ್ದಾರೆ. ಕೆಲಸಕ್ಕೆ ಅಡ್ಡಿ ಪಡಿಸಿದ್ದಾರೆ. ಪೊಲೀಸರ ಜತೆಗೂ ಅನುಚಿತವಾಗಿ ವರ್ತಿಸಿದ್ದಾರೆ ಎಂದು ಆರೋಪಿಸಿದರು.**

# ಮುಂದುವರೆದ ಬೀದಿನಾಯಿಗಳ ದಾಳಿ

• **ಉದಯವಾಹಿನಿ, ಶಿಡ್ಲಘಟ್ಟ**

ಬೀದಿ ನಾಯಿಗಳ ದಾಳಿ ಮತ್ತೆ ಮುಂದುವರೆದಿದೆ. ನಗರದ ದಿಟ್ಟೂರಹಳ್ಳಿ ರಸ್ತೆಯ ಚರ್ಚ್ ಸಮೀಪ ಎಎಲ್ ಎನ್ ಲೇಔಟ್‌ನ ಫಯಾಜ್ ಎನ್ನುವವರ 5 ವರ್ಷದ ಎಲ್‌ಕೆಜಿ ಓದುತ್ತಿರುವ ಝುವೇರಿ ಸುಲ್ತಾನಾಳ ಮೇಲೆ ಬೀದಿನಾಯಿಗಳು ದಾಳಿ ನಡೆಸಿ ಕಚ್ಚಿ ಗಾಯಗೊಳಿಸಿವೆ. ಬೀದಿನಾಯಿಗಳನ್ನು ನಿಯಂತ್ರಿಸದ ನಗರಸಭೆ ವಿರುದ್ಧ ನಾಗರಿಕರ ಆಕ್ರೋಶ ಮುಗಿಲು ಮುಟ್ಟಿದೆ. ನಗರದ ನೆಹರೂ ಕ್ರೀಡಾಂಗಣದಲ್ಲಿ ಆಟ ಆಡುತ್ತಿದ್ದ ಬಾಲಕನ ಮೇಲೆ ಬೀದಿ ನಾಯಿಗಳು ದಾಳಿ ನಡೆಸಿ ಕಚ್ಚಿ ಗಾಯಗೊಳಿಸಿದ ಘಟನೆ ಜನರ ಮನಸಲ್ಲಿ ಮಾಸುವ ಮುನ್ನವೇ ಮತ್ತೆ ಬೀದಿ ನಾಯಿಗಳ ದಾಳಿ ಮುಂದುವರೆದಿದೆ.

ಶಾಲೆಯಿಂದ ಮನೆಗೆ ಬಂದ ಝುವೇರಿ ಸುಲ್ತಾನಾ ಬಿಸ್ಕತ್ ತರಲೆಂದು ಅಂಗಡಿಗೆ ಹೋಗಿದ್ದು ಆಗ ದಾಳಿ ನಡೆಸಿದ ಬೀದಿ ನಾಯಿಗಳು ಆಕೆಯನ್ನು ಕಚ್ಚಿ ಗಾಯಗೊಳಿಸಿವೆ. ತಕ್ಷಣವೇ ಅಲ್ಲಿದ್ದವರು ಮಗುವನ್ನು ನಾಯಿಗಳಿಂದ ರಕ್ಷಿಸಿ ಚಿಕಿತ್ಸೆಗೆಂದು ಆಸ್ಪತ್ರೆಗೆ ದಾಖಲಿಸಿದ್ದಾರೆ. ಸ್ಥಳಕ್ಕೆ ನಗರಸಭೆ ಸದಸ್ಯ ಅನಿಲ್ ಕುಮಾರ್, ಕೃಷ್ಣಮೂರ್ತಿ, ಜೆಡಿಎಸ್ ಮುಖಂಡ ರಮೇಶ್ ಇನ್ನಿತರರು ಆಗಮಿಸಿ ಮಗುವಿಗೆ ಸೂಕ್ತ ಚಿಕಿತ್ಸೆಗೆ ವ್ಯವಸ್ಥೆ ಮಾಡಿ ಪೋಷಕರನ್ನು ಹಾಗೂ ಅಲ್ಲಿದ್ದವರನ್ನು ಸಮಾಧಾನಪಡಿಸುವ ಪ್ರಯತ್ನ ನಡೆಸಿದರಾದರೂ ಅಲ್ಲಿದ್ದವರ ಆಕ್ರೋಶದ ಕಟ್ಟೆ ಒಡೆದಿತ್ತು.

ಈಗಾಗಲೆ ಬೀದಿನಾಯಿಗಳ ಸಂತಾನ ಶಕ್ತಿ ಹರಣ ಶಸ್ತ್ರಚಿಕಿತ್ಸೆ ಹಾಗೂ ನಿಯಂತ್ರಿಸಲು ಅಗತ್ಯ ಕ್ರಮಗಳಿಗೆ ಟೆಂಡರ್ ಕರೆದಿದ್ದು ಶನಿವಾರದಿಂದಲೆ ಕಾರ್ಯಾಚರಣೆ ಆರಂಭವಾಗಲಿದೆ ಎಂದು ಹೇಳಿ ಸಮಾಧಾನ ಮಾಡುವ ಪ್ರಯತ್ನ ನಡೆಸಿದರು.


ಉದಯವಾಹಿನಿ ಚಿತ್ರ

**ಬೀದಿನಾಯಿಗಳ ದಾಳಿ ವಿಚಾರ ತಿಳಿಯುತ್ತಿದ್ದಂತೆ ಕ್ಷಣಾರ್ಧದಲ್ಲಿ ಬಾಲಕಿಯ ಕುಟುಂಬದವರು, ಅಕ್ಕಪಕ್ಕದ ನೂರಾರು ಜನರು ಸರ್ಕಾರಿ ಆಸ್ಪತ್ರೆ ಮುಂದೆ ಜಮಾಯಿಸಿದ್ದು ಬೀದಿನಾಯಿಗಳನ್ನು ನಿಯಂತ್ರಿಸದ ನಗರಸಭೆ ಆಡಳಿತ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.**

## ಧರ್ಮಸ್ಥಳದ ವಿರುದ್ಧ ಷಡ್ಯಂತ್ರ: ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ

• **ಉದಯವಾಹಿನಿ, ಮಂಡ್ಯ**

ಶ್ರೀಕ್ಷೇತ್ರ ಧರ್ಮಸ್ಥಳದ ವಿರುದ್ಧ ಕಿಡಿಗೇಡಿಗಳು ಷಡ್ಯಂತ್ರ ನಡೆಸುವ ಮೂಲಕ ಹಿಂದೂ ಧಾರ್ಮಿಕ ಭಾವನೆಗೆ ಧಕ್ಕೆ ತರುತ್ತಿದ್ದು, ಇದನ್ನು ನಿಲ್ಲಿಸಲು ಕಾನೂನು ಕ್ರಮ ತೆಗೆದುಕೊಳ್ಳಬೇಕು ಎಂದು ಆಗ್ರಹಿಸಿ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ನಗರದ ಜೆ.ಸಿ.ವೃತ್ತ ಬಳಿ ಜಮಾವಣೆಗೊಂಡ ಕಾರ್ಯಕರ್ತರು ಕೆಲಕಾಲ ಪ್ರತಿಭಟನೆ ನಡೆಸಿದರು. ನಂತರ ಹೆದ್ದಾರಿ ಮೂಲಕ ಜಿಲ್ಲಾಧಿಕಾರಿ ಕಚೇರಿವರೆಗೆ ಮೆರವಣಿಗೆ ನಡೆಸಿ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಕರ್ನಾಟಕವಲ್ಲದೇ ದೇಶದಾದ್ಯಂತ ಕೋಟ್ಯಂತರ ಭಕ್ತರನ್ನು ಹೊಂದಿದೆ. ಈ ಕ್ಷೇತ್ರಕ್ಕೆ ದಿನನಿತ್ಯ ಲಕ್ಷಾಂತರ ಜನ ಭಕ್ತರು ಆಗಮಿಸುತ್ತಾರೆ. ಹಿಂದೂಗಳಿಗೆ ಇದು ಪ್ರಮುಖ ಧಾರ್ಮಿಕ ಶ್ರದ್ಧೆಯ ಕೇಂದ್ರವಾಗಿದೆ. ಆದರೆ, ಹಿಂದೂಗಳ ಧಾರ್ಮಿಕ ಭಾವನೆಯನ್ನು ಅಪಮಾನಿಸುವ ದುರುದ್ದೇಶದಿಂದ ಕೆಲವು ಕಿಡಿಗೇಡಿಗಳು ಹಾಗೂ ಎಡ ಪಂಥೀಯರು ಸುಳ್ಳು ಪ್ರಚಾರ ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು. ಆರೋಪ ಮಾಡುತ್ತಿರುವುದರ ಹಿಂದೆ ಹಿಂದೂಗಳ ಶ್ರದ್ಧಾ ಭಕ್ತಿಯನ್ನು ಅತ್ಯಂತ ನಿಕೃಷ್ಟವಾಗಿ ಬಿಂಬಿಸುವ ಹುನ್ನಾರವಿದೆ. ಇಂತಹ ಕಿಡಿಗೇಡಿಗಳಿಗೆ ಕುಮ್ಮಕ್ಕು ನೀಡುವ ಷಡ್ಯಂತ್ರವು ನಡೆದಿದೆ. ಭಾರತದ ನ್ಯಾಯ ಸಂಹಿತೆ ಅಡಿಯಲ್ಲಿ ಅನಾಮಿಕ ವ್ಯಕ್ತಿಯೊಬ್ಬ ಯಾವುದೇ ಆಧಾರಗಳಿಲ್ಲದೇ ಮಾಡಿದ ಆರೋಪಕ್ಕೆ ರಾಜ್ಯ ಸರ್ಕಾರವು ಲಕ್ಷಾಂತರ ಹಣವನ್ನು ವ್ಯಯಿಸಿ ಆತ ಹೇಳಿದ ಕಡೆಗಳಲ್ಲೆಲ್ಲ ಗುಂಡಿಗಳನ್ನು ತೋಡಿದೆ. ಆದರೂ ಏನೂ ಸಿಗಲಿಲ್ಲ, ಈ ಅನಾಮಿಕನ ಹಿಂದಿರುವ ದುಷ್ಟ ವ್ಯಕ್ತಿಗಳು ಯಾರು ಎಂದು ಪ್ರಶ್ನಿಸಿದರು.


ಉದಯವಾಹಿನಿ ಚಿತ್ರ

**ಬಿಜೆಪಿ ಕಾರ್ಯಕರ್ತರ ಪ್ರತಿಭಟನೆ**

**ಕಾಂಗ್ರೆಸ್ ಸರ್ಕಾರ ಹಿಂದೂಗಳ ಭಕ್ತಿ ಭಾವನೆಗಳಿಗೆ ಧಕ್ಕೆ ತರುವ ಹುನ್ನಾರವನ್ನು ನಿರಂತರವಾಗಿ ಮಾಡುತ್ತಾ ಬಂದಿದೆ. ಇಂತಹ ದುಷ್ಕೃತ್ಯವನ್ನು ತಡೆಯುವಲ್ಲಿ ವಿಫಲವಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಗೃಹಮಂತ್ರಿ ಡಾ.ಜಿ.ಪರಮೇಶ್ವರ್ ರಾಜ್ಯದ ಜನತೆಯ ಕ್ಷಮೆಯಾಚನೆ ಮಾಡಬೇಕು. ಇಲ್ಲವಾದರೆ ಪ್ರತಿಭಟನೆ ತೀವ್ರಗೊಳಿಸುತ್ತೇವೆ ಎಂದು ಎಚ್ಚರಿಕೆ ನೀಡಿದರು.**

# ಅಧಿಕಾರಿಗಳ ನಿರ್ಲಕ್ಷ್ಯತೆಯಿಂದಾಗಿ ಮನೆಗಳ ಕಾಮಗಾರಿ ಸ್ಥಗಿತ

## ಐದು ವರ್ಷಗಳ ಹಿಂದೆ ಮನೆಗಳ ನಿರ್ಮಾಣ ಕಾಮಗಾರಿಗೆ ಚಾಲನೆ

• **ಉದಯವಾಹಿನಿ, ಬಂಗಾರಪೇಟೆ**

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಸತಿರಹಿತರಿಗೆ ವಸತಿ ಯೋಜನೆಯಡಿ ಸೂರು ಕಲ್ಪಿಸುವ ನಿಟ್ಟಿನಲ್ಲಿ ಐದು ವರ್ಷಗಳ ಹಿಂದೆಯೇ ರಾಮಕೃಷ್ಣ ಹೆಗಡೆ ಕಾಲೊನಿಯಲ್ಲಿ ಮನೆಗಳ ನಿರ್ಮಾಣ ಕಾಮಗಾರಿ ಕೈಗೊಳ್ಳಲಾಗಿದೆ. ಆದರೆ, ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳ ನಿರ್ಲಕ್ಷ್ಯತೆಯಿಂದಾಗಿ ಕಾಮಗಾರಿ ಅರ್ಧಕ್ಕೆ ಸ್ಥಗಿತಗೊಂಡಿದ್ದು, ಈ ಕಟ್ಟಡಗಳು ಇದೀಗ ಅನೈತಿಕ ಚಟುವಟಿಕೆಗಳ ತಾಣವಾಗಿ ಮಾರ್ಪಟ್ಟಿವೆ.

ಪಟ್ಟಣದಲ್ಲಿರುವ ವಸತಿ ರಹಿತರು, ಗುಡಿಸಲಿನಲ್ಲಿರುವವರಿಗೆ ವಸತಿ ಯೋಜನೆಯಡಿ ಮನೆ ಹಂಚಿಕೆ ಮಾಡುವುದಾಗಿ ಶಾಸಕ ಎಸ್.ಎನ್.ನಾರಾಯಣಸ್ವಾಮಿ ಎಂಟು ವರ್ಷಗಳ ಹಿಂದೆಯೇ ಭರವಸೆ ನೀಡಿದ್ದರು. ಈ ಪ್ರಕಾರ ಐದು ವರ್ಷಗಳ ಹಿಂದೆ ಮನೆಗಳ ನಿರ್ಮಾಣ ಕಾಮಗಾರಿಗೆ ಚಾಲನೆಯನ್ನೂ ನೀಡಲಾಗಿತ್ತು.

ಪಟ್ಟಣದ ರಾಮಕೃಷ್ಣ ಹೆಗಡೆ ಕಾಲೊನಿಯಲ್ಲಿ ಪ್ರಧಾನ ಮಂತ್ರಿ ಅವಾಸ್ ಯೋಜನೆಯಡಿ ಮನೆಗಳನ್ನು ನಿರ್ಮಿಸಲಾಗುತ್ತಿದ್ದು, ಈ ಮನೆಗಳನ್ನು ಹಂಚಿಕೆ ಮಾಡಲು 100 ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ. ಈ ಯೋಜನೆಯಡಿ ನಿರ್ಮಿಸಲಾಗುವ ಒಂದು ವಸತಿಗೆ ಒಟ್ಟಾರೆ ಸುಮಾರು 5 ಲಕ್ಷ ವೆಚ್ಚವಾಗುತ್ತದೆ. ಈ ಪೈಕಿ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯಿಂದ ರೂ.4.25 ಲಕ್ಷ ಭರಿಸಲಾಗುತ್ತದೆ. ಉಳಿದ ಸುಮಾರು ರೂ.60 ಸಾವಿರವನ್ನು ಫಲಾನುಭವಿಗಳೇ ಭರಿಸಿಕೊಳ್ಳಬೇಕು. ಆದರೆ, ಫಲಾನುಭವಿಗಳು ಕೇವಲ ರೂ.5,000 ಮಾತ್ರ ಪಾವತಿ ಮಾಡಿದ್ದಾರೆ. ಇದರಿಂದಾಗಿ ಈ ಕಾಮಗಾರಿ ವಿಳಂಬವಾಗಿದೆ ಎಂದು ಅಧಿಕಾರಿಯೊಬ್ಬರು ಆರೋಪಿಸಿದ್ದಾರೆ.

ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯಿಂದ ಒಂದು ಹಂತಕ್ಕೆ ಕಾಮಗಾರಿ ಪೂರ್ಣಗೊಂಡಿದೆ. ಆದರೆ, ಈ ಗುಂಪು ಮನೆಗಳಿಗೆ ಹೋಗಲು ಸಮರ್ಪಕ ರಸ್ತೆಯನ್ನು ಅಭಿವೃದ್ಧಿಪಡಿಸಿಲ್ಲ. ಬೀದಿದೀಪಗಳು ಇಲ್ಲ. ಗುಂಪು ಮನೆಗಳ ನಿರ್ಮಾಣದ ಜವಾಬ್ದಾರಿ ಹೊತ್ತಿರುವ ಕರ್ನಾಟಕ ಕೊಳಗೇರಿ ಅಭಿವೃದ್ಧಿಯೂ ಫಲಾನುಭವಿಗಳಿಗೆ ಮನೆಗಳನ್ನು ಹಸ್ತಾಂತರಿಸುವ ವಿಚಾರದಲ್ಲಿ ನಿರಾಸಕ್ತಿ ತೋರುತ್ತಿದೆ ಎಂದು ಸ್ಥಳೀಯರು ದೂರುತ್ತಾರೆ.

ಕಾಮಗಾರಿ ಸ್ಥಗಿತಗೊಂಡಿರುವುದರಿಂದ, ಜನರು ತೊಂದರೆ ಅನುಭವಿಸುವಂತಾಗಿದೆ. ವಸತಿ ವಿತರಣೆಗಾಗಿ ಫಲಾನುಭವಿಗಳಿಗೆ ಜಾತಕ ಪಕ್ಷಿಯಂತೆ ಕಾಯುತ್ತಿದ್ದಾರೆ ಎಂದು ಬೀದಿಬದಿ ವ್ಯಾಪಾರಿ ಹುಸೇನ್ ಎಂಬವರು ಹೇಳುತ್ತಾರೆ. ಪಟ್ಟಣದಲ್ಲಿ ನಿರ್ಮಾಣ ಹಂತದಲ್ಲಿರುವ ಮನೆಗಳ ಕಾಮಗಾರಿಗೆ ಫಲಾನುಭವಿಗಳೇ ರೂ.60 ನೀಡಬೇಕು. ಬಾಕಿ ರೂ.4.25 ಲಕ್ಷ ಕೊಳಗೇರಿ ಅಭಿವೃದ್ಧಿ ಮಂಡಳಿ ಭರಿಸಲಿದೆ. ಆದರೆ, ಫಲಾನುಭವಿಗಳು ವಂತಿಗೆ ನೀಡದ ಕಾರಣದಿಂದ ಕಾಮಗಾರಿ ವಿಳಂಬವಾಗಿದೆ ಎಂದು ಕೊಳಗೇರಿ ಅಭಿವೃದ್ಧಿ ಮಂಡಳಿಯ ಅಧಿಕಾರಿ ಸುಹೇಲ್ ಹೇಳುತ್ತಾರೆ. ಪುಂಡರ ಅಡ್ಡೆಯಾದ ಮನೆಗಳು ಬಡವರಿಗೆ ನೀಡುವ ಸದುದ್ದೇಶದಿಂದ ಪ್ರಧಾನಿ ಮಂತ್ರಿ ಅವಾಸ್ ಯೋಜನೆಯಡಿ ನಿರ್ಮಾಣವಾಗುತ್ತಿರುವ ಗುಂಪುಗಳ ಮನೆಗಳ ಕಾಮಗಾರಿ ಅರ್ಧಕ್ಕೆ ನಿಂತ ಕಾರಣ ಈ ಮನೆಗಳು ರಾತ್ರಿ ಹೊತ್ತು ಪುಂಡ ಪೋಕರಿಗಳ ಅಡ್ಡೆಯಾಗಿ ಪರಿವರ್ತಿತವಾಗಿದೆ. ಇಲ್ಲಿ ಪ್ರತಿನಿತ್ಯವೂ ಅನೈತಿಕ ಚಟುವಟಿಕೆಗಳು ನಡೆಯುತ್ತಿವೆ. ರಾತ್ರಿ ಹೊತ್ತು ಕುಡುಕರು ಮದ್ಯಪಾನ ಮಾಡುತ್ತಾರೆ. ಕುಡಿದು ಮದ್ಯದ ಖಾಲಿ ಬಾಟಲ್‌ಗಳನ್ನು ಎಲ್ಲೆಂದರಲ್ಲಿ ಬಿಸಾಕುತ್ತಿದ್ದಾರೆ. ಇದರಿಂದ ವಾತಾವರಣವು ಕಲುಷಿತಗೊಂಡಿದೆ. ಮನೆಗಳ ಸುತ್ತಲೂ ಬೇಲಿ ಹಾಕದ ಕಾರಣ ಈ ಪ್ರದೇಶವು ಪಾಳು ಬಿದ್ದಿದೆ. ಇದರಿಂದಾಗಿ ಈ ವಸತಿಗಳಿಗೆ ಹಣ ಪಾವತಿ ಮಾಡಲು ಫಲಾನುಭವಿಗಳು ಹಿಂದೇಟು ಹಾಕುತ್ತಿದ್ದಾರೆ ಎಂದು ಸ್ಥಳೀಯರೊಬ್ಬರು ಹೇಳುತ್ತಾರೆ.


ಉದಯವಾಹಿನಿ ಚಿತ್ರ

**ಸ್ವಂತ ಮನೆ ಕಟ್ಟಿಕೊಳ್ಳುವ ಪ್ರಯತ್ನದಲ್ಲಿದ್ದ ಜನರ ಕನಸು ಭಗ್ನವಾಗಿದೆ. ಯೋಜನೆಗೆ ಆಯ್ಕೆಯಾದ ಫಲಾನುಭವಿಗಳು ವಸತಿಗಳಿಗಾಗಿ ಪ್ರತಿನಿತ್ಯ ಪುರಸಭೆಗೆ ಅಲೆದಾಡುವಂತಾಗಿದೆ.**
**ಹುಣಸನಹಳ್ಳಿ ಎನ್. ವೆಂಕಟೇಶ್ ದಲಿತ ರೈತ ಸೇನೆ ರಾಜ್ಯ ಘಟಕದ ಅಧ್ಯಕ್ಷ**

**ಕೊಳಗೇರಿಗಳಲ್ಲಿ ವಾಸಿಸುವ ಪರಿಶಿಷ್ಟ ಜಾತಿ ಮತ್ತು ಪಂಗಡ ಹಾಗ ದುರ್ಬಲ ವರ್ಗಗವರಿಗೆ ನೀಡಲು ಉದ್ದೇಶಿಸಿರುವ ವಸತಿಗಳ ಕಾಮಗಾರಿಯನ್ನು ಶೀಘ್ರವೇ ಪೂರ್ಣಗೊಳಿಸಕು.**
**ಸತೀಶ್ ಕೊಳಗೇರಿ ಪ್ರದೇಶದ ನಿವಾಸಿ**

ಅಂತರಾಳದಿಂದ.. EDITORIAL

# ವಿವಿಗಳಲ್ಲಿ ನಾಯಕತ್ವದ

## ಕೊರತೆ-ಆಮೂಲಾಗ್ರ ಬದಲಾವಣೆ ಅಗತ್ಯ



ವಿಶ್ವವಿದ್ಯಾಲಯವೊಂದರ ಕುಲಪತಿ ಹುದ್ದೆಗೆ ಅರ್ಹ ಅಭ್ಯರ್ಥಿ ದೊರೆಯುತ್ತಿಲ್ಲ ಎನ್ನುವ ಸಚಿವರ ಮಾತು, ಉನ್ನತ ಶಿಕ್ಷಣದ ಗುಣಮಟ್ಟದ ಬಗ್ಗೆ ಕಳವಳ ಹುಟ್ಟಿಸುವಂತಿದೆ. ಇತ್ತೀಚಿನ ವರ್ಷಗಳಲ್ಲಿನ ಕುಲಪತಿ ಹುದ್ದೆಗಳ ನೇಮಕಾತಿಯನ್ನು ಗಮನಿಸಿದರೆ, ಸಂಗೀತ ವಿಶ್ವವಿದ್ಯಾಲಯದ ನಾಯಕತ್ವಕ್ಕೆ ಎದುರಾಗಿರುವ ಸಮರ್ಥ ಅಭ್ಯರ್ಥಿಗಳ ಕೊರತೆ ಎಲ್ಲಾ ವಿಶ್ವವಿದ್ಯಾಲಯಗಳ ಸಮಸ್ಯೆಯೂ ಆಗಿರುವಂತೆ ಕಾಣಿಸುತ್ತದೆ. ಐಐಟಿ, ಐಐಎಂಗಳ ಜೊತೆಗೆ ಪ್ರತಿಷ್ಠಿತ ವಿಶ್ವವಿದ್ಯಾಲಯಗಳನ್ನು ಹೊಂದಿರುವ ಮೂಲಕ 'ಭಾರತದ ಜ್ಞಾನಕೇಂದ್ರ' ಎಂದು ಪ್ರಸಿದ್ಧವಾಗಿರುವ ಕರ್ನಾಟಕದಲ್ಲಿ, ವಿಶ್ವವಿದ್ಯಾಲಯಗಳನ್ನು ಮುನ್ನಡೆಸಲಿಕ್ಕೆ ಸಮರ್ಥ ಅಭ್ಯರ್ಥಿಗಳ ಕೊರತೆಯಿದೆ ಎನ್ನುವುದು ಉನ್ನತ ಶಿಕ್ಷಣ ಕ್ಷೇತ್ರದ ಭವಿಷ್ಯದ ಬಗ್ಗೆ ಆತಂಕ ಉಂಟುಮಾಡುವಂತಿದೆ.

**ರಾಜ್ಯದ ವಿಶ್ವವಿದ್ಯಾಲಯಗಳು ನಾಯಕತ್ವದ ಕೊರತೆಯಿಂದ ಬಳಲುತ್ತಿವೆ. ಅವುಗಳನ್ನು ಬಲಗೊಳಿಸುವ ಹಾಗೂ ಸೃಜನಶೀಲಗೊಳಿಸುವ ಕೆಲಸ ನಡೆಯದೆ ಹೋದರೆ, ಉನ್ನತ ಶಿಕ್ಷಣ ಕ್ಷೇತ್ರ ತೀವ್ರ ಕುಸಿತ ಕಾಣಲಿದೆ. ಮೈಸೂರಿನ ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವ ವಿದ್ಯಾಲಯದ ಕುಲಪತಿ ಹುದ್ದೆಗೆ ಅರ್ಹ ಅಭ್ಯರ್ಥಿಗಳು ದೊರೆಯುತ್ತಿಲ್ಲ: ಎರಡು ಬಾರಿ ಅರ್ಜಿ ಕರೆದರೂ ಅರ್ಹರು ದೊರೆಯದ ಕಾರಣ ಮತ್ತೊಮ್ಮೆ ಅರ್ಜಿ ಕರೆಯಲಾಗುವುದು ಎಂದು ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್ ಅವರು ವಿಧಾನ ಪರಿಷತ್ತಿನಲ್ಲಿ ಹೇಳಿದ್ದಾರೆ.**

ಕನಿಷ್ಠ ಹತ್ತು ವರ್ಷಗಳ ಬೋಧನಾ ಅನುಭವದೊಂದಿಗೆ ಗಣನೀಯ ಶೈಕ್ಷಣಿಕ ಹಿನ್ನೆಲೆ ಹೊಂದಿರುವವರು ಕುಲಪತಿ ಹುದ್ದೆಗೆ ಅರ್ಹರು ಎಂದು ನಿಯಮ ಹೇಳುತ್ತದೆ. ಆದರೆ, ಈ ಸರಳ ನಿಯಮದ ಹಿಂದಿನ ಕಟು ವಾಸ್ತವ ಅಷ್ಟು ಸರಳವಾಗಿಲ್ಲ.

ಕುಲಪತಿ ಸ್ಥಾನಕ್ಕೆ ಸೂಕ್ತ ಅರ್ಹತೆ ಹೊಂದಿರುವವರು ಆ ಸ್ಥಾನಕ್ಕೆ ಅರ್ಜಿ ಸಲ್ಲಿಸಲು ಹಿಂಜರಿಯುವ ಸ್ಥಿತಿಯಿದೆ. ಆ ಹಿಂಜರಿಕೆಗೆ ಮಹತ್ವಾಕಾಂಕ್ಷೆಯ ಕೊರತೆ ಕಾರಣವಾಗಿರದೆ, ವ್ಯವಸ್ಥೆ ಯಲ್ಲಿನ ಓರೆಕೋರೆಗಳೇ ಕಾರಣವಾಗಿವೆ.

ಕುಲಪತಿ ಸ್ಥಾನಕ್ಕೆ ನೇಮಕಗೊಳ್ಳಲು ಜಾತಿ ಸಮೀಕರಣಗಳು, ರಾಜಕೀಯ ಪ್ರಭಾವದ ಜೊತೆಗೆ ಹಣಕಾಸಿನ ಲೆಕ್ಕಾಚಾರವೂ ಮುಖ್ಯ ಪಾತ್ರ ವಹಿಸುತ್ತಿದೆ ಹಾಗೂ ನೇಮಕಾತಿಗಳಲ್ಲಿ ಪಾರದರ್ಶಕತೆಯ ಪಾತ್ರ ಇಲ್ಲವೇ ಇಲ್ಲ ಎನ್ನುವ ಅಭಿಪ್ರಾಯ ಸಾರ್ವಜನಿಕ ವಲಯದಲ್ಲಿದೆ.ರಾಜ್ಯದಲ್ಲಿನ ವಿಶ್ವವಿದ್ಯಾಲಯಗಳು ಅನುದಾನದ ಕೊರತೆಯಿಂದ ಅಪೌಷ್ಟಿಕವಾಗಿವೆ. ರಾಜಕೀಯ ಹಸ್ತಕ್ಷೇಪ ಹಾಗೂ ದೀರ್ಘಕಾಲದಿಂದ ಖಾಲಿ ಉಳಿದಿರುವ ಹುದ್ದೆಗಳ ಕೊರತೆಯಿಂದಲೂ ವಿವಿಗಳು ದುರ್ಬಲಗೊಂಡಿವೆ. ಶೈಕ್ಷಣಿಕವಾಗಿ ಅತ್ಯುತ್ತಮ ಶೈಕ್ಷಣಿಕ ಅರ್ಹತೆ ಹೊಂದಿರುವ ವ್ಯಕ್ತಿ, ಅತ್ಯುತ್ತಮ ಶೈಕ್ಷಣಿಕ ಪರಿಸರವನ್ನು ರೂಪಿಸುವುದಕ್ಕಿಂತಲೂ ಹೆಚ್ಚಾಗಿ ಪತ್ಯೇತರ ಕರ್ತವ್ಯಗಳನ್ನು ನಿರ್ವಹಿಸುವುದಕ್ಕೆ ಸೀಮಿತಗೊಳ್ಳುವ ಪರಿಸ್ಥಿತಿ ವಿಶ್ವವಿದ್ಯಾಲಯಗಳಲ್ಲಿದೆ. ಸಂಶೋಧನಾ ಚಟುವಟಿಕೆಗಳ ಮೂಲಕ ಜನರ ಗಮನಸೆಳೆಯಬೇಕಾದ ವಿಶ್ವವಿದ್ಯಾಲಯಗಳು, ಹಗರಣಗಳ ಮೂಲಕ ಸುದ್ದಿಯಾಗುತ್ತಿವೆ. ಹಾಗಾಗಿಯೇ, ಅಂತರರಾಷ್ಟ್ರೀಯ ಮನ್ನಣೆ ಪಡೆದಿರುವ, ಸಂಶೋಧನೆಯ ಅರ್ಹತೆ ಹಾಗೂ ಮಾನ್ಯತೆ ಹೊಂದಿರುವ ರಾಜ್ಯದ ಪ್ರತಿಭಾಶಾಲಿಗಳು ತಮ್ಮ ವೈಯಕ್ತಿಕ ನೆಲೆಯಲ್ಲಿ ಶೈಕ್ಷಣಿಕ ಚಟುವಟಿಕೆಗಳಿಗೆ ಸೀಮಿತ ಆಗಬೇಕಿದೆ ಇಲ್ಲವೇ ಕೇಂದ್ರ ಸರ್ಕಾರದ ಸಂಸ್ಥೆಗಳಲ್ಲಿ ಹುದ್ದೆಗಳನ್ನು ಪಡೆಯಲು ಪ್ರಯತ್ನಿಸಬೇಕಾಗಿದೆ. ನಾಯಕತ್ವದ ಕೊರತೆಯನ್ನು ಸೃಜನಶೀಲ ಕಲ್ಪನೆಯೊಂದಿಗೆ ನಿರ್ವಹಿಸಬೇಕಾದ ಸಂದರ್ಭ ಇಂದಿನದು. ಉನ್ನತ ಶಿಕ್ಷಣ ಕ್ಷೇತ್ರದ ಸುಧಾರಣೆಯನ್ನು ರಾಜ್ಯ ಸರ್ಕಾರ ಆದ್ಯತೆಯ ವಿಷಯವನ್ನಾಗಿ ಪರಿಗಣಿಸಬೇಕಾಗಿದೆ. ಆ ನಿಟ್ಟಿನಲ್ಲಿ ಮುಖ್ಯವಾದುದು ಮತ್ತು ಅತ್ಯಂತ ನಿರ್ಣಾಯಕವಾದುದು. ನೇಮಕಾತಿಗಳಲ್ಲಿ ವಿಶ್ವಾಸಾರ್ಹತೆಯನ್ನು ಮರಳಿ ತರುವುದು. ರಾಜಕೀಯ ಲೆಕ್ಕಾಚಾರ ಅಥವಾ ಯಾವುದೇ ಬಾಹ್ಯ ಒತ್ತಡಗಳಿಗೆ ಆಸ್ಪದವಿಲ್ಲದೆ, ಶೈಕ್ಷಣಿಕ ಅರ್ಹತೆಯಷ್ಟೇ ನೇಮಕಕ್ಕೆ ಮಾನದಂಡ ಆಗಬೇಕು. ಶೈಕ್ಷಣಿಕ ಕೊಡುಗೆ ನೀಡಿರುವ ವಿವಿಧ ಕ್ಷೇತ್ರಗಳ ವೃತ್ತಿಪರರು, ಸಾರ್ವಜನಿಕ ಆಡಳಿತಗಾರರು ಹಾಗೂ ಕೈಗಾರಿಕೋದ್ಯಮಿಗಳನ್ನು ಕುಲಪತಿ ಸ್ಥಾನದ ಅರ್ಹತೆಯ ಚೌಕಟ್ಟಿನೊಳಗೆ ತರುವ ಬಗ್ಗೆ ವಿಶ್ವವಿದ್ಯಾಲಯ ಅನುದಾನಗಳ ಆಯೋಗ (ಯುಜಿಸಿ) ಈಗಾಗಲೇ ಸೂಚನೆ ನೀಡಿದೆ. ಆದರೆ, ವಿಶ್ವವಿದ್ಯಾಲಯದ ನಾಯಕತ್ವವನ್ನು ಸಮರ್ಥವಾಗಿ ನಿರ್ವಹಿಸಲಿಕ್ಕೆ ಶೈಕ್ಷಣಿಕ ಅರ್ಹತೆಯೇ ಮುಖ್ಯವಾಗ ಬೇಕಾದುದು ಅಗತ್ಯ. ಮೂಲ ಸೌಕರ್ಯಗಳ ಅಭಿವೃದ್ಧಿಯೊಂದಿಗೆ, ಕುಲಪತಿ ಹುದ್ದೆಯೂ ಸೇರಿದಂತೆ ಎಲ್ಲಾ ನೇಮಕಾತಿಗಳಲ್ಲಿ ಅರ್ಹತೆ ಹಾಗೂ ಪಾರದರ್ಶಕತೆ ಪಾಲನೆಯಾಗದೆ ಹೋದರೆ, ರಾಜ್ಯದ ವಿಶ್ವವಿದ್ಯಾಲಯಗಳ ಗುಣಮಟ್ಟ ಇನ್ನಷ್ಟು ಕುಸಿತ ಕಾಣುತ್ತದೆ ಹಾಗೂ 'ಭಾರತದ ಜ್ಞಾನಕೇಂದ್ರ' ಎನ್ನುವ ಹಿರಿಮೆಯನ್ನು ರಾಜ್ಯ ಕಳೆದುಕೊಳ್ಳುತ್ತದೆ.

# ರಾಮಾಯಣ



## ವಿರಾಧನು ರಾಮಲಕ್ಷ್ಮಣರನ್ನು ಎತ್ತಿಕೊಂಡು ಹೋದದ್ದು:

• ಹಿಂದಿನ ಸಂಚಿಕೆಯಿಂದ 116 ನೆಯ ಅಧ್ಯಾಯ

ಆಗ ಭುಜಗಳು ಭೇದಿಸಲ್ಪಟ್ಟ ವಿರಾಧನ ಕಂಗೆಟ್ಟು ತನುಕಾಂತಿಗುಂದಿ, ಕಾರ್ಮುಗಿಲಂತೆ ಭಯಂಕರವಾದ ಸ್ವರೂಪವುಳ್ಳವನಾಗಿ, ದೇವೇಂದ್ರನ ವಜ್ರಾಯುಧದಿಂದ ಕತ್ತರಿಸಲ್ಪಟ್ಟು ಬಿದ್ದ ಪರ್ವತದಂತೆ ಭೂಮಿಯ ಮೇಲೆ ಬಿದ್ದನು.

ರಾಮಲಕ್ಷ್ಮಣರು ವಿರಾಧನನ್ನು ಕೈಗಳಿಂದ ಗುದ್ದಿ ಮೊಳಕ್ಕೆ ಮೊಳಕಾಲುಗಳಿಂದ ತಿವಿದು ಮೇಲಕ್ಕೆತ್ತಿ ಭೂಮಿಯಮೇಲೆ ಅಪ್ಪಳಿಸಿ, ಶರೀರವನ್ನು ತುಳಿದು, ಸತ್ತ್ವಗೆಡಿಸಿ ಭೂಮಿಯ ಮೇಲೆ ಹಾಕಿ ಖಡ್ಗಗಳಿಂದ ಹೊಯ್ದರೂ ಪ್ರಾಣಹೋಗದಿರಲು, ಶ್ರೀರಾಮನು ಲಕ್ಷ್ಮಣನನ್ನು ಕುರಿತು ಎಲೈ ಲಕ್ಷ್ಮಣ, ಈ ರಾಕ್ಷಸನು ಬ್ರಹ್ಮದೇವನ ವರಪ್ರಸಾದದಿಂದ ಆಯುಧಗಳಿಂದ ಕೊಲ್ಲಲು ಸಾಧ್ಯನಲ್ಲ. ದೊಡ್ಡ ಹಳ್ಳವನ್ನು ತೆಗೆದು ಇವನನ್ನು ಹೂಳಿಬಿಡಬೇಕು ಎಂದು ನುಡಿದನು. ಆ ಮಾತನ್ನು ಕೇಳಿ ವಿರಾಧನು ಶ್ರೀರಾಮನನ್ನು ಕುರಿತು ಹೀಗೆಂದನು: ಎಲೈ ಪುರುಷೋತ್ತಮನಾದ ಶ್ರೀರಾಮನೆ, ನಾನು ನಿನ್ನ ಶಸ್ತ್ರಹತಿಗಳಿಂದ ಸತ್ಯವನೇ ಸರಿ. ಅಜ್ಞಾನದಿಂದ ಮೊದಲು ನಿನ್ನ ಸ್ವರೂಪವನ್ನು ತಿಳಿಯಲಿಲ್ಲ.

**ಪರಾಕ್ರಮಿ :** ಶೌರ್ಯದಲ್ಲಿ ದೇವೇಂದ್ರನಿಗೆ ಸಮಾನನು. ನಿನ್ನಂಥ ಪರಾಕ್ರಮಿಗಳಾದ ಮತ್ತಾರನ್ನೂ ಕಾಣೆನು. ನಿನ್ನ ತಾಯಿಯಾದ ಕೌಸಲ್ಯದೇವಿಯೇ ಕೃತಾರ್ಥಳು. ನಿನ್ನ ಸ್ವರೂಪವನ್ನು ಈಗ ಅರಿತೆನು. ಸೀತಾದೇವಿಯು ಪತಿವ್ರತಾಶಿರೋಮಣಿ, ಲಕ್ಷ್ಮಣನು ಮಹಾತ್ಮನು.

**ನನಗೆ ಈ ಅಜ್ಞಾನವು ಬಂದ ಕಾರಣವನ್ನು ಕೇಳು:** ನಾನು ಪೂರ್ವಜನ್ಮದಲ್ಲಿ ತುಂಬುರು ಎಂಬ ಗಂಧರ್ವ. ನನಗೆ ಒಂದು ಕಾರಣದಿಂದ ಕುಬೇರನ ಶಾಪವು ಬಂದಿತು. ನಾನು ರಂಭೆಯಲ್ಲಿ ಆಸಕ್ತನಾಗಿ ಕುಬೇರನ ಸೇವೆಯನ್ನು ಸರಿಯಾಗಿ ಮಾಡಲಿಲ್ಲವಾದ್ದರಿಂದ ಅವನು ನನ್ನನ್ನು ಶಪಿಸಿದನು. ಅವನ ಶಾಪದಿಂದ ನನಗೆ ಈ ಘೋರವಾದ ರಾಕ್ಷಸಶರೀರವು ಬಂದಿತು. ಆ ಸಮಯದಲ್ಲಿ ನಾನು ಕುಬೇರನಿಗೆ ಅಭಿನಂದಿಸಿ ನನ್ನಿಂದ ತಪ್ಪಾಯಿತು. ತಾಹಿ ತ್ರಾಹಿ ಎಂದು ಪ್ರಾರ್ಥನೆ ಮಾಡಿದೆನು. ಕುಬೇರನು ನನ್ನನ್ನು ಕುರಿತು ' ಒಂದು ಸಮಯದಲ್ಲಿ ದಶರಥರಾಯನ ಮಗನಾದ ಶ್ರೀರಾಮನು ಸೀತಾಲಕ್ಷ್ಮಣಸಮೇತನಾಗಿ ದಂಡಕಾರಣ್ಯಕ್ಕೆ ಬರುವನು, ಆಗ ಸೀತಾದೇವಿಯ ನಿಮಿತ್ತದಿಂದ ಆತನೊಡನೆ ನಿನಗೆ ಯುದ್ಧವುಂಟಾಗುವುದು. ಆಗ ಆತನ ಶಸ್ತ್ರಹತಿಯಿಂದ ನಿನಗೆ ರಾಕ್ಷಸಜನ್ಮವಿಮೋಚನವಾಗಿ ಗಂಧರ್ವಲೋಕಕ್ಕೆ ಹೋಗುವೆ ಎಂದು ಹೇಳಿದನು. ಈಗ ಆ ಸಮಯವು ಬಂದಿತು. ಈಗ ನಿನ್ನ ಶಸ್ತ್ರಹತಿಯಿಂದ ನಾನು ರಾಕ್ಷಸಶರೀರವನ್ನು ಬಿಟ್ಟು ಗಂಧರ್ವರೂಪದಿಂದ ನನ್ನ ಲೋಕಕ್ಕೆ ಹೋಗುತ್ತಿದ್ದೇನೆ. ನಿನಗೆ ಅನೇಕ ಶ್ರೇಯಸ್ಸಾಗಲಿ! ಇಲ್ಲಿಂದ ಮುಂದೆ ಅರೆಗಾವುದ ದಾರಿಯಲ್ಲಿ ಶರಭಂಗಮುನೀಶ್ವರನು ನಿನಗೆ ಅನೇಕ ಶ್ರೇಯಸ್ಸನ್ನುಂಟು ಮಾಡುವನು.

ಶ್ರೀರಾಮ, ಲೋಕದಲ್ಲಿ ರಾಕ್ಷಸರ ಶರೀರಗಳನ್ನು ಹಳ್ಳದಲ್ಲಿ ಹಾಕಿ ಹೂಳಬೇಕೆಂಬ ವಿಧಿಯುಂಟು. ಆದಕಾರಣ ನೀನು ಈ ಶರೀರವನ್ನು ಹಳ್ಳದಲ್ಲಿ ಹಾಕಿ ಹೂಳಿ ಸುಖವಾಗಿ ಮುಂದಕ್ಕೆ ತೆರಳಿಹೋಗು ಎಂದು ಹೇಳಿ ತನ್ನ ಶರೀರವನ್ನು ಬಿಟ್ಟು ಸ್ವರ್ಗಲೋಕವನ್ನೈದಿದನು.

ಮುಂದುವರಿಯುವುದು...



ಕಲಾ ಸಾಹಿತ್ಯ
ವೈ.ಕೆ. ಸಂಧ್ಯಾ ಶರ್ಮ
ಲೇಖಕರು
ರಂಗಕರ್ಮಿ ಹಾಗೂ ನೃತ್ಯ ನಾಟಕಗಳ ವಿಮರ್ಶಕರು

# ಬಹುಮುಖ ಪ್ರತಿಭೆ ಶ್ರೇಯಾ ಹಿರೇಮಠ್ ರಂಗಪ್ರವೇಶ

'ಯಥಾ ಗುರು ತಥಾ ಶಿಷ್ಯ' ಎಂಬ ನಾಣ್ಣುಡಿಗೆ ಅನ್ವಯರಾಗಿರುವ ನೃತ್ಯಗುರು ವಿ. ಮೇದಿನಿ ಭರತ್ ಮತ್ತು ಕಲಾವಿದೆ ಕು. ಶ್ರೇಯಾ ರಾಜಶೇಖರ್ ಹಿರೇಮಠ್ ಇಬ್ಬರೂ ಬಹುಮುಖ ಪ್ರತಿಭಾನ್ವಿತರು. ನೃತ್ಯಕಲಾವಿದೆ ಹಾಗೂ ಗುರುವಾಗಿ ಬದ್ಧತೆಯಿಂದ 'ಚಿತ್ಕಲಾ ಕಲಾಶಾಲೆ' ನೃತ್ಯಸಂಸ್ಥೆಯ ಮೂಲಕ ನೂರಾರು ಉದಯೋನ್ಮುಖ ಕಲಾವಿದರನ್ನು ರೂಪಿಸುತ್ತಿರುವ ಮೇದಿನಿಯವರ ನುರಿತ ಗರಡಿಯಲ್ಲಿ ತರಬೇತಿ ಪಡೆಯುತ್ತಿರುವ ಕಲಾಶಿಲ್ಪ ಈ ಶ್ರೇಯಾ. ಶ್ರೀ ರಾಜಶೇಖರ್ ಹಿರೇಮಠ ಮತ್ತು ಬಿ.ಹೆಚ್. ರೇಣುಕಾರ ಪುತ್ರಿ ಶ್ರೇಯಾ, ಕಳೆದ ಹಲವಾರು ವರ್ಷಗಳಿಂದ ಭರತನಾಟ್ಯಾಭ್ಯಾಸ ಮಾಡುತ್ತಿದ್ದು, ಈಗಾಗಲೇ ಇವಳು ಅಖಿಲ ಭಾರತ ಗಂಧರ್ವ ಮಹಾವಿದ್ಯಾಲಯ ಮಂಡಲ ನೃತ್ಯ ಪರೀಕ್ಷೆಗಳಲ್ಲಿ ತೇರ್ಗಡೆಯಾಗಿದ್ದು ಅನೇಕ ವೇದಿಕೆಗಳಲ್ಲಿ ತನ್ನ ಪ್ರತಿಭಾ ಪ್ರದರ್ಶನ ಮಾಡಿದ್ದಾಳೆ. ರಂಗಭೂಮಿ- ಚಲನಚಿತ್ರಗಳ ಅಭಿನಯ ತರಬೇತಿ ಹೊಂದಿರುವ ಶ್ರೇಯಾಗೆ ಬರವಣಿಗೆ ಮತ್ತು ಕರ್ನಾಟಕ ಶಾಸ್ತ್ರೀಯ ಸಂಗೀತ ಕೂಡ ಹವ್ಯಾಸ. ಬೆಂಗಳೂರಿನ ಕ್ರೈಸ್ಟ್ ವಿಶ್ವವಿದ್ಯಾಲಯದಲ್ಲಿ ಪದವಿ ತರಗತಿಯಲ್ಲಿ ಓದುತ್ತಿರುವ ಶ್ರೇಯಾ, ಇದೇ ತಿಂಗಳ 30 ಶನಿವಾರ ಸಂಜೆ 5.30 ಕ್ಕೆ ನಗರದ ಜೆ.ಎಸ್.ಎಸ್. ಆಡಿಟೋರಿಯಂ ನಲ್ಲಿ ವಿದ್ಯುಕ್ತವಾಗಿ ತನ್ನ ರಂಗಪ್ರವೇಶವನ್ನು ನೆರವೇರಿಸಿಕೊಳ್ಳುತ್ತಿದ್ದಾಳೆ. ಇವಳ ನೃತ್ಯ ಕಲಾನೈಪುಣ್ಯವನ್ನು ಕಣ್ತುಂಬಿಕೊಳ್ಳಲು ಸರ್ವರಿಗೂ ಆದರದ ಸ್ವಾಗತ.

ಮೂಲತಃ ಬಿಜಾಪುರದವರಾದ ರಾಜಶೇಖರ್ ಹಿರೇಮಠ ದಂಪತಿಗಳ ಪುತ್ರಿಯಾದ ಶ್ರೇಯಾಗೆ ನೃತ್ಯ ಬಾಲ್ಯದ ಒಲವು. ಆರುವರ್ಷದ ಬಾಲೆಯಾಗಿದ್ದಾಗಲೇ ನೃತ್ಯ ಪರಂಪರೆಯ ಕಲಾಕ್ಷೇತ್ರ, ಸ್ವಾತಿಲೇಖಾ ಡೇ ಅವರಲ್ಲಿ ಭರತನಾಟ್ಯ ಕಲಿಯಲು ಸೇರ್ಪಡೆಯಾದಳು. ಹತ್ತುವರ್ಷಗಳ ಕಲಿಕೆಯ ನಂತರ ಶ್ರೇಯಾ ಮುಂದೆ ವಿದುಷಿ, ಮೇದಿನಿ ಭರತ್ ಅವರಲ್ಲಿ ನೃತ್ಯ ಮುಂದುವರಿಸಿ ಪರಿಶ್ರಮದಿಂದ ವಿದ್ಯಾರ್ಜಿಸುತ್ತಿದ್ದಾಳೆ. ನೃತ್ಯದಲ್ಲಿ, ಅಭಿನಯ ಮತ್ತು ಭರತನಾಟ್ಯದ ಪಠ್ಯ ವಿಷಯ ಅವಳ ಮೆಚ್ಚಿನ ಭಾಗಗಳು. ರಂಗಶಂಕರ ಮತ್ತು ನಾಗತಿಹಳ್ಳಿ ಚಂದ್ರಶೇಖರ್ ಸ್ಕೂಲ್ ಆಫ್ ಆಕ್ಟಿಂಗ್ ಮತ್ತು ಇನ್ನಿತರ ಸಂಸ್ಥೆಗಳಲ್ಲಿ ರಂಗಭೂಮಿಯ ತರಬೇತಿ ಪಡೆದಿರುವುದು ಇವಳ ವಿಶೇಷ. ಜೊತೆಗೆ ನಾಡಿನ ಅನೇಕ ದೇವಾಲಯಗಳಲ್ಲಿ ನರ್ತಿಸಿ ತನ್ನ ನಾಟ್ಯಪ್ರತಿಭೆ ಪ್ರದರ್ಶಿಸಿದ್ದಾಳೆ.



**ಸದಾ ಕ್ರಿಯಾಶೀಲ ವ್ಯಕ್ತಿತ್ವ**

ಜೈನ್ ಪಬ್ಲಿಕ್ ಶಾಲೆ ಮತ್ತು ಸುರಾನ ಕಾಲೇಜಿನಲ್ಲಿ ಪಿಯೂಸಿ ಓದಿರುವ ಶ್ರೇಯಾ, ಪ್ರಸಕ್ತ ಓದುತ್ತಿರುವ ಕ್ರೈಸ್ಟ್ ಯೂನಿವರ್ಸಿಟಿಯ ಕಾಲೇಜಿನ ( ಪದವಿ ತರಗತಿ- ಇಂಗ್ಲೀಷ್ ಮತ್ತು ಕಲ್ಚುರಲ್ ಸ್ಟಡೀಸ್) ಎಲ್ಲಾ ಸಾಂಸ್ಕೃತಿಕ ಚಟುವಟಿಕೆಗಳಲ್ಲೂ ಭಾಗವಹಿಸಿ ಬಹುಮಾನಗಳನ್ನು ಗಳಿಸಿರುವುದು ಅವಳ ವೈಶಿಷ್ಟ್ಯ. ಕ್ರೈಸ್ಟ್ ಯೂನಿವರ್ಸಿಟಿಯ ಶಾಸ್ತ್ರೀಯ ನೃತ್ಯ ತಂಡದ ನೇತೃತ್ವವನ್ನೂ ವಹಿಸಿರುವ ಅಗ್ಗಳಿಕೆ ಶ್ರೇಯಾಳದು. ಕ್ರಿಯಾಶೀಲಳಾಗಿರುವ ಇವಳು, ಕವನಗಳ ರಚನೆ ಮತ್ತು ಅಕಾಡೆಮಿಕ್ ಬರವಣಿಗೆಯಲ್ಲಿ ತೊಡಗಿಕೊಂಡಿದ್ದಾಳೆ ಕೂಡ. ಸದಾ ಸೃಜನಾತ್ಮಕವಾಗಿ ಆಲೋಚಿಸುವ ಇವಳದು ಸಾಧಕ ಮನಸ್ಸು.

# ಅರಳೆ ಎಲೆಯನ್ನು ಈ ರೀತಿ ಬಳಸಿದ್ರೆ ಗಾಯ ಗುಣವಾಗುತ್ತೆ, ಕೀಲು ನೋವು ನಿವಾರಣೆಯಾಗುತ್ತೆ

ಕ್ಯಾಸ್ಟರ್ ಎಲೆ ದೇಹಕ್ಕೆ ತುಂಬಾ ಉಪಯುಕ್ತವೆಂದು ನಿಮಗೆ ತಿಳಿದಿದೆಯೇ? ಅಂತಹ ಪರಿಸ್ಥಿತಿಯಲ್ಲಿ ನಿಮ್ಮ ಉತ್ತಮ ಆರೋಗ್ಯಕ್ಕಾಗಿ ಕ್ಯಾಸ್ಟರ್ ಎಲೆಗಳನ್ನು ಹೇಗೆ ಬಳಸಬಹುದು ಎಂಬುವುದನ್ನು ತಿಳಿಯೋಣ. ಅರಳೆಣ್ಣೆ ನಾನಾ ರೀತಿಯಲ್ಲಿ ಆರೋಗ್ಯಕ್ಕೆ ಪ್ರಯೋಜನಕಾರಿಯಾಗಿದೆ. ಆದರೆ ಅರಳೆಕಾಯಿಯ ಗಿಡದ ಎಲೆಯಿಂದ ಎಷ್ಟೆಲ್ಲಾ ಪ್ರಯೋಜನಗಳಿವೆ ಎನ್ನುವುದು ನಿಮಗೆ ಗೊತ್ತಾ? ಕ್ಯಾಸ್ಟರ್ ಎಲೆಗಳನ್ನು ಅನೇಕ ಸಮಸ್ಯೆಗಳನ್ನು ನಿವಾರಿಸಲು ಬಳಸಲಾಗುತ್ತದೆ. ಇದರ ಎಲೆಗಳನ್ನು ಕುದಿಸಿ ಅದರ ನೀರನ್ನು ಕುಡಿದರೆ, ಅನೇಕ ಆರೋಗ್ಯ ಸಮಸ್ಯೆಗಳು ಸಹ ಗುಣವಾಗುತ್ತವೆ ಎನ್ನಲಾಗುತ್ತದೆ. ಅರಳೆ ಗಿಡದ ಎಲೆಯನ್ನು ಯಾವುದಕ್ಕೆಲ್ಲಾ ಬಳಸಬಹುದು ಗೊತ್ತಾ?



**ಕೀಲು ನೋವು ನಿವಾರಿಸುತ್ತದೆ:** ಕೆಲವರಿಗೆ ಕೀಲು ನೋವು ಇದ್ದರೆ, ಕೆಲವರಿಗೆ ಕಾಲುಗಳಲ್ಲಿ ನೋವು ಇದ್ದರೆ, ಅಂತಹ ಪರಿಸ್ಥಿತಿಯಲ್ಲಿ, ಯಾವುದೇ ರೀತಿಯ ನೋವು ಇದ್ದರೂ, ಕ್ಯಾಸ್ಟರ್ ಎಲೆಗಳು ಆ ನೋವನ್ನು ನಿವಾರಿಸುತ್ತದೆ. ಮೊದಲು ಸಾಸಿವೆ ಎಣ್ಣೆಯನ್ನು ಬಿಸಿ ಮಾಡಿ. ಈಗ ಆ ಬಿಸಿ ಎಣ್ಣೆಯನ್ನು ಕ್ಯಾಸ್ಟರ್ ಎಣ್ಣೆಯ ಮೇಲೆ ಹಾಕಿ. ಈಗ ಬಾಧಿತ ಪ್ರದೇಶದ ಮೇಲೆ ಕ್ಯಾಸ್ಟರ್ ಎಲೆಗಳೊಂದಿಗೆ ಎಣ್ಣೆಯನ್ನು ಕಟ್ಟಿಕೊಳ್ಳಿ. ಹೀಗೆ ಮಾಡುವುದರಿಂದ ಎರಡು ಅಥವಾ ಮೂರು ದಿನಗಳಲ್ಲಿ ನೋವು ಕಡಿಮೆಯಾಗುತ್ತದೆ.

**ಗಾಯವನ್ನು ಗುಣಪಡಿಸಲು:** ಕ್ಯಾಸ್ಟರ್ ಎಲೆಗಳ ಒಳಗೆ ಗಾಯವನ್ನು ತ್ವರಿತವಾಗಿ ಗುಣಪಡಿಸಲು ಉಪಯುಕ್ತವಾಗುವಂತಹ ಅನೇಕ ಗುಣಲಕ್ಷಣಗಳು ಕಂಡುಬರುತ್ತವೆ. ನೀವು ಗಾಯದ ಸ್ಥಳದಲ್ಲಿ ಕ್ಯಾಸ್ಟರ್ ಎಲೆಗಳನ್ನು ಕಟ್ಟಿರಿ. ಹೀಗೆ ಮಾಡುವುದರಿಂದ, ಗಾಯವು ಬೇಗನೆ ಗುಣವಾಗುತ್ತದೆ.

**ಊತವನ್ನು ಕಡಿಮೆ ಮಾಡುತ್ತದೆ:** ಕ್ಯಾಸ್ಟರ್ ಎಲೆಗಳ ಒಳಗೆ ಉರಿಯೂತದ ಗುಣಗಳು ಸಹ ಇರುತ್ತವೆ. ಇದು ಉರಿಯೂತವನ್ನು ತೆಗೆದುಹಾಕುವಲ್ಲಿ ಉಪಯುಕ್ತವಾಗಿದೆ. ಇದಕ್ಕೆ ಸಂಬಂಧಿಸಿದ ಸಂಶೋಧನೆಯೊಂದು ಬೆಳಕಿಗೆ ಬಂದಿದ್ದು ಈ ಎಲೆಗಳು ಉರಿಯೂತದ ಗುಣಗಳನ್ನು ಹೊಂದಿವೆ. ದೇಹದ ಯಾವುದೇ ಭಾಗದಲ್ಲಿ ಊತವಿದ್ದರೆ, ಆ ಭಾಗದಲ್ಲಿ ಕ್ಯಾಸ್ಟರ್ ಎಲೆಗಳನ್ನು ಕಟ್ಟಿದರೆ, ಬೇಗನೆ ಊತವನ್ನು ಕಡಿಮೆ ಮಾಡುತ್ತದೆ.



# 78 ಸ್ಕೈ ವಾಕ್ ನಿರ್ಮಿಸಲು ಪ್ರಸ್ತಾವ: ಬಿಬಿಎಂಪಿಗೆ ಪೊಲೀಸರಿಂದ ಪತ್ರ



• ಉದಯವಾಹಿನಿ, ಬೆಂಗಳೂರು

ನಗರದ ಪ್ರಮುಖ ರಸ್ತೆಗಳಲ್ಲಿ ಇನ್ನೂ 78 ಸ್ಕೈವಾಕ್ ನಿರ್ಮಾಣ ಮಾಡುವಂತೆ ಕೋರಿ ಬಿಬಿಎಂಪಿಗೆ ನಗರ ಸಂಚಾರ ಪೊಲೀಸರು ಪತ್ರ ಬರೆದಿದ್ದಾರೆ. ನಗರದ ವಿವಿಧ ಜಂಕ್ಷನ್‌ಗಳಲ್ಲಿ ಪ್ರಸ್ತುತ 82 ಸ್ಥಳಗಳಲ್ಲಿ ಸ್ಕೈವಾಕ್‌ಗಳಿವೆ. ಅವುಗಳ ಸಂಖ್ಯೆಯನ್ನು ಹೆಚ್ಚಿಸುವಂತೆ ಕೋರಿ ನಗರ ಸಂಚಾರ ವಿಭಾಗದ ಜಂಟಿ ಪೊಲೀಸ್ ಕಮಿಷನರ್ ಕಾರ್ತಿಕ್ ರೆಡ್ಡಿ ಅವರು ಬಿಬಿಎಂಪಿ ಕಮಿಷನರ್ ಎಂ.ಮಹೇಶ್ವರ್ ರಾವ್ ಅವರಿಗೆ ಪತ್ರ ಬರೆದಿದ್ದಾರೆ ಎಂದು ಗೊತ್ತಾಗಿದೆ. ಪ್ರಮುಖ ರಸ್ತೆ, ಜಂಕ್ಷನ್‌ಗಳಲ್ಲಿ ಸ್ಕೈವಾಕ್‌ಗಳು ಇಲ್ಲ. ಇದರಿಂದ ಸಾವು ನೋವು ಸಂಭವಿಸುತ್ತಿದೆ. ಕಳೆದ ಮೂರು ವರ್ಷಗಳಲ್ಲಿ ರಸ್ತೆದಾಟುವ ಸಂದರ್ಭದಲ್ಲಿ ಸಂಭವಿಸಿದ ಅವಘಡದಲ್ಲಿ 768 ಪಾದಚಾರಿಗಳು ಮೃತಪಟ್ಟಿದ್ದಾರೆ ಎಂದು ಸಂಚಾರ ವಿಭಾಗದ ಪೊಲೀಸರು ಹೇಳಿದರು. ದಟ್ಟಣೆ ಹಾಗೂ ರಸ್ತೆದಾಟುವ ಪಾದಚಾರಿಗಳ ಸಂಖ್ಯೆಯನ್ನು ಆಧರಿಸಿ 78 ಸ್ಥಳಗಳನ್ನು ಗುರುತಿಸಲಾಗಿದೆ. ಬಳ್ಳಾರಿ ರಸ್ತೆಯ ಏಳು, ಹಳೇ ಮದ್ರಾಸ್ ರಸ್ತೆಯ ಆರು ಸ್ಥಳಗಳಲ್ಲಿ ಸ್ಕೈವಾಕ್ ನಿರ್ಮಿಸುವ ಅಗತ್ಯವಿದೆ' ಎಂದು ಕಾರ್ತಿಕ್ ರೆಡ್ಡಿ ಹೇಳಿದರು. ಕೆಲವು ಜಂಕ್ಷನ್‌ಗಳಲ್ಲಿ ಸದಾ ವಿಪರೀತ ವಾಹನ ದಟ್ಟಣೆ ಇರುತ್ತದೆ. ಜೀಬ್ರಾ ಕ್ರಾಸಿಂಗ್ ವ್ಯವಸ್ಥೆ ಇದ್ದರೂ ಪಾದಚಾರಿಗಳು ರಸ್ತೆದಾಟಲು ಪರದಾಡುತ್ತಿದ್ದಾರೆ. ಅಲ್ಲದೇ ಪಾದಚಾರಿಗಳು ರಸ್ತೆದಾಟುವ ಸಂದರ್ಭದಲ್ಲೂ ವಾಹನ ದಟ್ಟಣೆ ಆಗುತ್ತಿದೆ. ವಾಕ್ ನಿರ್ಮಿಸಿದರೆ ಸಮಸ್ಯೆಗೆ ಪರಿಹಾರ ಸಿಗಲಿದೆ' ಎಂದು ಸಂಚಾರ ಪೊಲೀಸರು ಹೇಳಿದರು.

# ಪುರಾಣ ಪ್ರಸಿದ್ಧ ಗಣೇಶ ದೇವಾಲಯಗಳು!

ವಿಶ್ವಾಸ್.ಡಿ.ಗೌಡ
ಉದಯವಾಹಿನಿ, ವಿಶೇಷ



**1) ಮುಂಬೈನಲ್ಲಿರುವ ಸಿದ್ಧಿವಿನಾಯಕ ದೇವಾಲಯ:** ಮುಂಬೈನಲ್ಲಿರುವ ಅತ್ಯಂತ ಪ್ರಸಿದ್ಧವಾದ ದೇವಾಲಯವೆಂದರೆ ಸಿದ್ಧಿವಿನಾಯಕ ದೇವಾಲಯ. ಇದು ಗಣೇಶನಿಗೆ ಅರ್ಪಿತವಾದ ಪೂಜ್ಯ ದೇವಾಲಯವಾಗಿದ್ದು, ಪ್ರಭಾದೇವಿ ನೆರೆಹೊರೆಯಲ್ಲಿದೆ.ಈ ಗಣೇಶನು ನಮ್ಮ ಇಷ್ಟಾರ್ಥಗಳನ್ನು ಪೂರೈಸುವನು ಎಂದು ಹೇಳಲಾಗುತ್ತದೆ.ಇಲ್ಲಿನ ಗಣಪತಿಯ ಪೂಜೆ ನೋಡುವುದಕ್ಕೆ ಬಲು ಚೆಂದ.ದೇವಸ್ಥಾನವು ಪ್ರತಿದಿನವೂ ಭಕ್ತರಿಂದ ತುಂಬಿರುತ್ತದೆ. ಮಂಗಳವಾರ ವಿಶೇಷ ಪೂಜೆ,ಉತ್ಸವಗಳು ಇರುತ್ತವೆ.ಪ್ರಮುಖ ರಾಜಕಾರಣಿಗಳು ಮತ್ತು ಸೆಲೆಬ್ರಿಟಿಗಳು ಆಗಾಗ್ಗೆ ಸಿದ್ಧಿವಿನಾಯಕ ದೇವಸ್ಥಾನಕ್ಕೆ ಭೇಟಿ ನೀಡುವುದು ಅದರ ಆಕರ್ಷಣೆಗೆ ಪ್ರಮುಖ ಕಾರಣವಾಗಿದೆ.

**2)ತಮಿಳುನಾಡಿನ ಆದಿ ವಿನಾಯಕ ದೇವಸ್ಥಾನ:** ತಿಲತರ್ಪಣಪುರಿಗೆ ಸಮೀಪದಲ್ಲಿರುವ ತಮಿಳುನಾಡಿನ ಮುಕ್ತೇಶ್ವರರ್ ದೇವಾಲಯದಲ್ಲಿ ಈ ದೇವಾಲಯವಿದೆ.

ಈ ದೇವಾಲಯವನ್ನು ಆದಿ ವಿನಾಯಕ ಎಂದೂ ಕರೆಯಲಾಗುತ್ತದೆ.ಆದಿ ವಿನಾಯಕನಿಗೆ ನರಮುಖ ವಿನಾಯಕ ಎಂದೂ ಕರೆಯಯವರು.

ಏಕೆಂದರೆ ಈ ಗಣೇಶನ ಪ್ರತಿಮೆಯು ಗಜಾನನ ಅಥವಾ ಆನೆಯ ಮುಖದ ಬದಲು ಮನುಷ್ಯನ ಮುಖವನ್ನು ಹೋಲುತ್ತದೆ. ಗಣೇಶನ ಪ್ರತಿಮೆಯು ನಿಜವಾಗಿಯೂ ಆಕರ್ಷಕವಾಗಿದ್ದು, ಕೊಡಲಿ, ಹಗ್ಗ, ಮೋದಕ ಮತ್ತು ಕಮಲವನ್ನು ಹಿಡಿದಿದ್ದಾನೆ.



**3) ರಾಜಸ್ಥಾನದ ರಣಥಂಬೋರ್ ಗಣೇಶ ದೇವಾಲಯ:** ತ್ರಿನೇತ್ರ ಗಣೇಶ ದೇವಾಲಯವು ರಾಜಸ್ಥಾನದಲ್ಲಿರುವ ಗಣೇಶನ ಅತ್ಯಂತ ಪ್ರಸಿದ್ಧ ಮತ್ತು ಐತಿಹಾಸಿಕ ದೇವಾಲಯವಾಗಿದ್ದು, ಅವನ ಇಡೀ ಕುಟುಂಬವನ್ನು ಒಂದೇ ಸ್ಥಳದಲ್ಲಿ ನೋಡಬಹುದು. ಇದು ರಾಜಸ್ಥಾನ ರಾಜ್ಯದ ರಣಥಂಬೋರ್ ಕೋಟೆಯಲ್ಲಿದೆ.

ಸವಾಯಿ ಮಾಧೋಪುರದಿಂದ ಸುಮಾರು 12 ಕಿಲೋಮೀಟರ್ ದೂರದಲ್ಲಿದೆ. ಪ್ರಪಂಚದಾದ್ಯಂತದ ಭಕ್ತರು ವರ್ಷವಿಡೀ ಈ ದೇವಾಲಯಕ್ಕೆ ಬರುತ್ತಾರೆ. ಮನೆಯನ್ನು ನಿರ್ಮಿಸುವ ಬಯಕೆಯಿರುವವರು ಇಲ್ಲಿಗೆ ಬಂದು ಗಣೇಶನ ಆಶೀರ್ವಾದ ಪಡೆಯುತ್ತಾರೆ.

**4) ಪುಣೆಯಲ್ಲಿರುವ ಶ್ರೀಮಂತ್ ದಗ್ದುಶೇತ್ ಹಲ್ವಾಯಿ ಗಣಪತಿ ದೇವಸ್ಥಾನ:** ಇದು ಮಹಾರಾಷ್ಟ್ರದ ಪುಣೆಯಲ್ಲಿದ್ದು, ಧಾರ್ಮಿಕ ಆಚರಣೆಗಳಿಗೆ ಹೆಸರುವಾಸಿಯಾಗಿದೆ. ಏಳೂವರೆ ಅಡಿ ಎತ್ತರ ಮತ್ತು ನಾಲ್ಕು ಅಡಿ ಅಗಲವನ್ನು ಹೊಂದಿರುವ ಪ್ರತಿಮೆಗೆ ಸುಮಾರು ಎಂಟು ಕಿಲೋಗ್ರಾಂಗಳಷ್ಟು ಚಿನ್ನದ ಆಭರಣವನ್ನು ಹೊದಿಸಲಾಗಿದೆ. ದೇವಾಲಯವು ರೋಮಾಂಚಕ ದೀಪಗಳಿಂದ ಭವ್ಯವಾಗಿ ಅಲಂಕರಿಸಲ್ಪಟ್ಟಿದೆ.

**5) ಸಿಕ್ಕಿಂನ ಗಣೇಶ ಟೋಕ್ ದೇವಾಲಯ :** ಈ ದೇವಾಲಯವು ಒಂದು ಸಣ್ಣ ಗಣೇಶ ದೇವಸ್ಥಾನವಾಗಿದ್ದು, ದೇವಾಲಯದೊಳಗೆ ಒಮ್ಮೆ ಒಬ್ಬ ವ್ಯಕ್ತಿ ಮಾತ್ರ ಹೋಗಬಹುದು. ಇದು ಗ್ಯಾಂಗ್‌ಟಾಕ್‌ನಿಂದ 7 ಕಿಲೋಮೀಟರ್ ದೂರದಲ್ಲಿದ್ದು,ಇಲ್ಲಿಂದ ಭಕ್ತರು ಇಡೀ ಗ್ಯಾಂಗ್ಟಾಕ್ ಪಟ್ಟಣದ ವಿಹಂಗಮ ನೋಟವನ್ನು,ರಾಜಭವನ ಸಂಕೀರ್ಣ ಮತ್ತು ಕಾಂಚನಜುಂಗಾ ಪರ್ವತವನ್ನು ನೋಡಬಹುದು. 6500 ಮೀಟರ್ ದೂರದಲ್ಲಿರುವ ಗಣೇಶ್ ಟೋಕ್ ವ್ಯೂಪಾಯಿಂಟ್ ಹಿಮದಿಂದ ಆವೃತವಾದ ಹಿಮಾಲಯದ ರುದ್ರರಮಣೀಯ ದೃಶ್ಯವನ್ನು ನೋಡಲು ಅನುವು ಮಾಡಿಕೊಡುತ್ತದೆ. ಈ ಪ್ರದೇಶವು ತುಂಬಾ ಜನದಟ್ಟಣೆಯಿಂದ ಕೂಡಿದೆ.

## ಇಂದೋರ್‌ನಲ್ಲಿರುವ ಖಜರಾನ ಗಣೇಶ ದೇವಸ್ಥಾನ


ಇದು ಭಾರತದ ಅತ್ಯಂತ ಪ್ರಸಿದ್ಧ ಹಿಂದೂ ದೇವಾಲಯಗಳಲ್ಲಿ ಒಂದಾಗಿದೆ. ಗಣೇಶನ ಮುಖ್ಯ ವಿಗ್ರಹವನ್ನು ರಚಿಸಲು ಇಟ್ಟಿಗೆಗಳು,ಬೆಲ್ಲ, ಸುಣ್ಣದ ಕಲ್ಲು, ಮಣ್ಣು, ನೀರು ಮತ್ತು ಇತರ ವಸ್ತುಗಳನ್ನು ಬಳಸಲಾಗಿದೆ. ಇದರ ಧಾರ್ಮಿಕ ಪ್ರಾಮುಖ್ಯತೆ ಮತ್ತು ಸುದೀರ್ಘ ಇತಿಹಾಸದಿಂದಾಗಿ, ಈ ದೇವಾಲಯವು ಇಡೀ ನಗರದಲ್ಲಿ ಅತಿ ಹೆಚ್ಚು ಪ್ರವಾಸಿಗರನ್ನು ಸೆಳೆಯುತ್ತದೆ. ಈ ಸ್ಥಳಕ್ಕೆ ಭೇಟಿ ನೀಡುವಾಗ ಯಾರಾದರೂ ತಮ್ಮ ಆಸೆಗಳನ್ನು ಬೇಡಿ ಕೊಂಡರೆ ಅವರ ಕೋರಿಕೆ ಶೀಘ್ರದಲ್ಲೇ ಈಡೇರಲಿದೆ ಎಂಬ ನಂಬಿಕೆ ಭಕ್ತರಲ್ಲಿದೆ

# ಶ್ರೀ ಗಣೇಶಮೂರ್ತಿಯ ವಿವಿಧ ಭಾಗಗಳ ಅರ್ಥಗಳು

**ಬಲಗಡೆಯ ಸೊಂಡಿಲು :** ಬಲಬದಿಗೆ ಸೊಂಡಿಲಿರುವ ಗಣಪತಿಯ ಮೂರ್ತಿ ಎಂದರೆ ದಕ್ಷಿಣಾಭಿಮುಖಿಮೂರ್ತಿ. ದಕ್ಷಿಣ ಎಂದರೆ ದಕ್ಷಿಣ ದಿಕ್ಕು ಅಥವಾ ಬಲಬದಿ. ದಕ್ಷಿಣ ದಿಕ್ಕು ಯಮಲೋಕದ ಕಡೆಗೆ ಕರೆದೊಯ್ಯುವುದಾಗಿದೆ ಬಲಬದಿಯಲ್ಲಿ ಸೂರ್ಯನಾಡಿಯಿದೆ.

ಯಾರು ಯಮಲೋಕದ ದಿಕ್ಕನ್ನು ಎದುರಿಸಬಲ್ಲರೋ ಅವರು ಶಕ್ತಿಶಾಲಿಯಾಗಿರುತ್ತಾರೆ. ಹಾಗೆಯೇ ಸೂರ್ಯನಾಡಿಯು ಕಾರ್ಯನಿರತವಾಗಿರುವವನು ತೇಜಸ್ವಿಯಾಗಿರುತ್ತಾನೆ. ಇವೆರಡೂ ಅರ್ಥಗಳಲ್ಲಿ ಬಲಗಡೆಗೆ ಸೊಂಡಿಲಿರುವ ಗಣಪತಿಯನ್ನು 'ಜಾಗೃತ' ಗಣಪತಿ ಎಂದು ಹೇಳುತ್ತಾರೆ. ದಕ್ಷಿಣ ದಿಕ್ಕಿನಲ್ಲಿರುವ ಯಮಲೋಕದಲ್ಲಿ ಪಾಪ-ಪುಣ್ಯಗಳ ಪರಿಶೋಧನೆ ಆಗುತ್ತದೆ, ಆದುದರಿಂದ ದಕ್ಷಿಣ ದಿಕ್ಕು ನಮಗೆ ಬೇಡವೆನಿಸುತ್ತದೆ. ಮೃತ್ಯುವಿನ ನಂತರ ದಕ್ಷಿಣ ದಿಕ್ಕಿಗೆ ಹೋದಾಗ ಯಾವ ರೀತಿಯ ಪರಿಶೋಧನೆಯಾಗುತ್ತದೆಯೋ, ಅದೇ ರೀತಿಯ ಪರಿಶೋಧನೆಯು ದಕ್ಷಿಣ ದಿಕ್ಕಿಗೆ ಮುಖಮಾಡಿ ಕುಳಿತರೆ ಅಥವಾ ಕಾಲುಚಾಚಿ ಮಲಗಿದರೆ ಆಗುತ್ತದೆ. ದಕ್ಷಿಣಾಭಿಮುಖಿಮೂರ್ತಿಯ ಪೂಜೆಯನ್ನು ನಿತ್ಯದ ಪದ್ಧತಿಯಂತೆ ಮಾಡುವುದಿಲ್ಲ. ಏಕೆಂದರೆ, ದಕ್ಷಿಣದಿಂದ 'ತಿರ್ಯಕ್' ಲಹರಿಗಳು ಬರುತ್ತವೆ. ಇಂತಹ ಮೂರ್ತಿಯ ಪೂಜೆಯನ್ನು, ಕರ್ಮಕಾಂಡದಲ್ಲಿನ ಎಲ್ಲಾ ಪೂಜಾವಿಧಿಯ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಮಾಡಬೇಕಾಗುತ್ತದೆ. ಅದರಿಂದ ಸಾತ್ತ್ವಿಕತೆಯು ಹೆಚ್ಚುತ್ತದೆ ಮತ್ತು ದಕ್ಷಿಣ ದಿಕ್ಕಿನಿಂದ ಬರುವ ರಜ-ತಮ ಲಹರಿಗಳಿಂದ ತೊಂದರೆಯಾಗುವುದಿಲ್ಲ.

**ಎಡಗಡೆಯ ಸೊಂಡಿಲು :** ಎಡಬದಿಗೆ ಸೊಂಡಿಲಿರುವ ಮೂರ್ತಿ ಎಂದರೆ ವಾಮಮುಖಿ ಗಣಪತಿ. ವಾಮ ಎಂದರೆ ಎಡಬದಿ ಅಥವಾ ಉತ್ತರದಿಕ್ಕು. ಎಡಬದಿಗೆ ಚಂದ್ರನಾಡಿಯು ಇರುತ್ತದೆ ಮತ್ತು ಅದು ಶೀತಲತೆಯನ್ನು ಕೊಡುತ್ತದೆ, ಹಾಗೆಯೇ ಉತ್ತರ ದಿಕ್ಕು ಅಧ್ಯಾತ್ಮಕ್ಕೆ ಪೂರಕವಾಗಿದೆ, ಆನಂದದಾಯಕವಾಗಿದೆ; ಆದುದರಿಂದಲೇ ವಾಮಮುಖಿ ಗಣಪತಿಯನ್ನು ಪೂಜೆಯಲ್ಲಿ ಇಡುತ್ತಾರೆ. ಈ ಗಣಪತಿಯ ಪೂಜೆಯನ್ನು ದಿನನಿತ್ಯದ ಪೂಜೆಯಂತೆ ಮಾಡುತ್ತಾರೆ.



## ಸಂಪೂರ್ಣ ಮೂರ್ತಿ ಓಂಕಾರ, ನಿರ್ಗುಣ

**ಮೋದಕ:** 'ಮೋದ' ಎಂದರೆ ಆನಂದ ಮತ್ತು 'ಕ' ಎಂದರೆ ಚಿಕ್ಕ ಭಾಗ. ಮೋದಕವೆಂದರೆ ಆನಂದದ ಚಿಕ್ಕ ಭಾಗ. ಮೋದಕದ ಆಕಾರವು ತೆಂಗಿನಕಾಯಿಯಂತೆ, ಎಂದರೆ 'ಖ' ಈ ಬ್ರಹ್ಮರಂಧ್ರದಲ್ಲಿನ ಟೊಳ್ಳಿನಂತಿರುತ್ತದೆ. ಕುಂಡಲಿನಿಯು 'ಖ'ದವರೆಗೆ ತಲುಪಿದಾಗ ಆನಂದದ ಅನುಭೂತಿಯು ಬರುತ್ತದೆ. ಕೈಯಲ್ಲಿ ಹಿಡಿದ ಮೋದಕವೆಂದರೆ, ಆನಂದವನ್ನು ಪ್ರದಾನಿಸುವ ಶಕ್ತಿ.

ಮೋದಕವು ಜ್ಞಾನದ ಪ್ರತೀಕವಾಗಿದೆ; ಆದುದರಿಂದ ಅದನ್ನು ಜ್ಞಾನಮೋದಕವೆಂದೂ ಕರೆಯುತ್ತಾರೆ. ಮೊದಲು, ಜ್ಞಾನವು ಸ್ವಲ್ಪವೇ ಇದೆ ಎಂದೆನಿಸುತ್ತದೆ (ಮೋದಕದ ತುದಿಯು ಇದರ ಪ್ರತೀಕ ವಾಗಿದೆ); ಆದರೆ ಅಧ್ಯಯನ ಮಾಡತೊಡಗಿದಾಗ ಜ್ಞಾನವು ಬಹಳ ವಿಶಾಲವಾಗಿದೆ ಎಂಬುದು ತಿಳಿಯುತ್ತದೆ. (ಮೋದಕದ ಕೆಳಭಾಗವು ಇದರ ಪ್ರತೀಕವಾಗಿದೆ) ಮೋದಕವು ಸಿಹಿಯಾಗಿರುತ್ತದೆ ಅದೇ ರೀತಿ ಜ್ಞಾನದ ಆನಂದವೂ ಸಿಹಿಯಾಗಿರುತ್ತದೆ.

**ಅಂಕುಶ :** ಆನಂದ ಮತ್ತು ವಿದ್ಯೆಯನ್ನು ಸಂಪಾದಿಸುವ ಮಾರ್ಗದಲ್ಲಿ ವಿಘ್ನಗಳನ್ನು ತರುವ ಕೆಟ್ಟ ಶಕ್ತಿಗಳ ವಿನಾಶ ಮಾಡಲು


**ಪಾಶ :** ಶ್ರೀ ಗಣಪತಿಯು ಕೆಟ್ಟ ವಿಷಯಗಳನ್ನು ಪಾಶದ ಸಹಾಯದಿಂದ ದೂರ ಮಾಡುತ್ತಾನೆ.

**ಸೊಂಟಕ್ಕೆ ಕಟ್ಟಿರುವ ನಾಗ :** ವಿಶ್ವಕುಂಡಲಿನಿ

**ನಾಗದ ಹೆಡೆ :** ಜಾಗೃತವಾಗಿರುವ ಕುಂಡಲಿನಿ

**ಇಲಿ / ಮೂಷಿಕ :** ಮೂಷಿಕ, ಇದರ ಅರ್ಥ ರಜೋಗುಣವು ಗಣಪತಿಯ ನಿಯಂತ್ರಣದಲ್ಲಿದೆ.

# ತಮೊಹಾ ಆರ್ಟ್ಸ್ ಫೌಂಡೇಶನ್ 9ನೇ ವಾರ್ಷಿಕೋತ್ಸವ



• ಉದಯವಾಹಿನಿ, ಬೆಂಗಳೂರು

ತಮೊಹಾ ಆರ್ಟ್ಸ್ ಫೌಂಡೇಶನ್ ತನ್ನ 9ನೇ ವಾರ್ಷಿಕೋತ್ಸವವನ್ನು ನಗರದ ಜೆ.ಸಿ. ರಸ್ತೆಯಲ್ಲಿರುವ ರವೀಂದ್ರ ಕಲಾಕ್ಷೇತ್ರದಲ್ಲಿ ಇದೇ ಭಾನುವಾರ, 24 ಆಗಸ್ಟ್ 2025, ಸಂಜೆ 6.00 ಗಂಟೆಗೆ ಭವ್ಯವಾಗಿ ಆಚರಿಸುತ್ತಿದೆ. ಈ ವರ್ಷ ವಿದ್ಯಾರ್ಥಿಗಳಿಂದ ವಿಶೇಷವಾಗಿ ದಶರೂಪ ವೈಭವಂ ಶ್ರೀಮಹಾವಿಷ್ಣುವಿನ ದಶಾವತಾರಗಳ ಕಥಾನಕ'' ಎಂಬ ನೃತ್ಯನಾಟಕವನ್ನು 80 ಕಲಾವಿದರು ವೇದಿಕೆಯ ಮೇಲೆ ಪ್ರದರ್ಶಿಸಲಿದ್ದಾರೆ. ಈ ಸಾಂಸ್ಕೃತಿಕ ಸಮಾರಂಭಕ್ಕೆ ಡಾ. ದರ್ಶಿನಿ ಮಂಜುನಾಥ್ (ಕಲಾ ನಿರ್ದೇಶಕಿ, ನೃತ್ಯ ದಿಶಾ ಟ್ರಸ್ಟ್) ಹಾಗೂ ಗುರು ಶಶಿಕಲಾ ವೆಂಕಟೇಶ್ (ಕಲಾ ನಿರ್ದೇಶಕಿ, ನೃತ್ಯಸುಧಾ ಕಲಾ ಶಾಲೆ) ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಭರತನಾಟ್ಯ ರೂಪದಲ್ಲಿ ಶ್ರೀಮಹಾವಿಷ್ಣುವಿನ ದಿವ್ಯ ಕಥಾನಕವನ್ನು ಅನಾವರಣಗೊಳಿಸುವ ಈ ಉತ್ಸವ ಭಕ್ತಿ, ಸಂಪ್ರದಾಯ ಮತ್ತು ಕಲಾತ್ಮಕತೆಯ ಅಸಾಧಾರಣ ಸವಿಯನ್ನು ಪ್ರೇಕ್ಷಕರಿಗೆ ನೀಡಲಿದೆ ಎಂದು ತಮೋಹಾ ಆರ್ಟ್ಸ್ ಫೌಂಡೇಶನ್ ನಿರ್ದೇಶಕಿ ವಿದುಷಿ ಶ್ರೀಮತಿ ಗಾಯತ್ರಿ ಮಯ್ಯಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 04:30 ರಿಂದ 06:00 |
| ಗುಳಿಕ ಕಾಲ | ಮಧ್ಯಾಹ್ನ | 03:00 ರಿಂದ 04:30 |
| ಯಮಗಂಡ ಕಾಲ | ಬೆಳಿಗ್ಗೆ | 12:00 ರಿಂದ 01:30 |

**ಮೇಷ**: ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ನಿಮ್ಮ ತೂಕದ ಮೇಲೆ ಹಿಡಿತ ಹೊಂದಿರಿ. ಹೆಚ್ಚು ಖರೀದಿಸಲು ಧಾವಿಸುವ ಮೊದಲು ನೀವು ಈಗಾಗಲೇ ಹೊಂದಿರುವುದನ್ನು ಬಳಸಿ. ನಿಮ್ಮ ಕುಟುಂಬದ ಜೊತೆ ಕಟ್ಟುನಿಟ್ಟಾಗಿ ವರ್ತಿಸಬೇಡಿ ಇದು ಶಾಂತಿ ಭಂಗವುಂಟುಮಾಡಬಹುದು.

**ವೃಷಭ**: ಆರೋಗ್ಯದ ಬಗ್ಗೆ ಸ್ವಲ್ಪ ಗಮನ ನೀಡಬೇಕು. ನಿಮಗೆ ತಿಳಿದ ಜನರ ಮೂಲಕ ಆದಾಯದ ಹೊಸ ಮೂಲಗಳು ಕಂಡುಬರುತ್ತವೆ. ಪ್ರತಿಯೊಬ್ಬರೂ ಇಂದು ನಿಮ್ಮ ಸ್ನೇಹಿತರಾಗಬಯಸುತ್ತಾರೆ, ನಿಮಗೆ ಇದರಿಂದ ಸಂತೋಷವೆನಿಸುತ್ತದೆ. ನಿಮ್ಮ ಪ್ರೀತಿಪಾತ್ರರೊಡನೆ ಪ್ರಯಾಣಕ್ಕೆ ಹೋಗುವ ಮೂಲಕ ನಿಮ್ಮ ಅಮೂಲ್ಯ ಕ್ಷಣಗಳನ್ನು ಪುನಃ ಜೀವಿಸಿ.

**ಮಿಥುನ**: ಜೀವನದ ವಾಹನವನ್ನು ಚೆನ್ನಾಗಿ ಚಾಲನೆ ಮಾಡಲು ಬಯಸುತ್ತಿದ್ದರೆ, ಇಂದು ನೀವು ಹಣದ ಬಗ್ಗೆ ವಿಶೇಷ ಗಮನ ಹರಿಸಬೇಕು. ನಿಮ್ಮ ಸಂಬಂಧಿಕರು, ಸ್ನೇಹಿತರು ನಿಮ್ಮ ಹಣಕಾಸನ್ನು ನಿರ್ವಹಿಸಿದರೆ ನೀವು ಶೀಘ್ರದಲ್ಲೇ ನಿಮ್ಮ ಬಜೆಟ್ ಮೀರಬಹುದಾದ್ದರಿಂದ ಹಣಗಳನ್ನು ಬಿಡಬೇಡಿ.

**ಕರ್ಕಾಟಕ**: ನಿಮ್ಮ ಆರೋಗ್ಯದ ಸಲುವಾಗಿಯಾದರೂ ಕೂಗಬೇಡಿ. ಯಾವುದೇ ಆಪ್ತ ಸಂಬಂಧಿಕರ ಬೆಂಬಲದಿಂದ ನೀವು ನಿಮ್ಮ ವ್ಯಾಪಾರದಲ್ಲಿ ಉತ್ತಮವಾಗಿ ಮಾಡಬಹುದು. ಇದು ನಿಮಗೆ ಆರ್ಥಿಕ ಲಾಭವನ್ನು ನೀಡುತ್ತದೆ. ನಿಮ್ಮ ಜೊತೆಗಿರುವ ಯಾರಾದರೂ ನಿಮ್ಮ ಇತ್ತೀಚಿನ ಕ್ರಮಗಳಿಂದ ಕಿರಿಕಿರಿಗೊಳ್ಳಬಹುದು.

**ಸಿಂಹ**: ನೀವು ದೀರ್ಘಕಾಲೀನ ಅನಾರೋಗ್ಯದಿಂದ ಬಳಲಬಹುದು. ಕೆಲವು ಪ್ರಮುಖ ಯೋಜನೆಗಳನ್ನು ಕಾರ್ಯಗತಗೊಳಿಸಲಾಗುತ್ತದೆ ಹಾಗೂ ಅವು ನಿಮಗೆ ಹೊಸ ಆರ್ಥಿಕ ಲಾಭ ತರುತ್ತವೆ. ನಿಮ್ಮ ಜೊತೆಗಿರುವ ಯಾರಾದರೂ ನಿಮ್ಮ ಇತ್ತೀಚಿನ ಕ್ರಮಗಳಿಂದ ಕಿರಿಕಿರಿಗೊಳ್ಳಬಹುದು.

**ಕನ್ಯಾ**: ಸೃಜನಶೀಲ ಆಸಕ್ತಿಗಳು ನಿಮ್ಮನ್ನು ಶಾಂತವಾಗಿರಿಸುತ್ತವೆ. ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ. ಗೃಹ ಜೀವನ ಶಾಂತಿಯುತ, ಉತ್ತಮ ಆಗಿರುತ್ತದೆ ಅನಿರೀಕ್ಷಿತ ಪ್ರಣಯ ಪ್ರಸಂಗಗಳು ಇಂದು ಎದುರಾಗಬಹುದು. ಈ ರಾಶಿಚಕ್ರದ ಜನರು ಇಂದು ತಮ್ಮ ಸಹೋದರರೊಂದಿಗೆ ಮನೆಯಲ್ಲಿ ಚಲನಚಿತ್ರ ನೋಡಬಹುದು.

**ತುಲಾ**: ಉತ್ತಮ ಆರೋಗ್ಯ ಏನಾದರೂ ಅಸಾಮಾನ್ಯವಾಗಿದ್ದನ್ನು ಸಾಧಿಸಲು ಸಾಧ್ಯವಾಗಿಸುವ ಒಂದು ವಿಶೇಷದಿನ. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಇಂದು ಪೂರ್ಣಗೊಳ್ಳಬಹುದು. ಇಂದು ನೀವು ಸೂಕ್ತವಾಗಿ ಉಳಿಸಲು ಸಾಧ್ಯವಾಗುತ್ತದೆ. ಪೋಷಕರ ಆರೋಗ್ಯ ಸುಧಾರಿಸುತ್ತದೆ.

**ವೃಶ್ಚಿಕ**: ಅತಿಯಾಗಿ ತಿನ್ನುವುದು ಮತ್ತು ಹೆಚ್ಚಿನ ಕ್ಯಾಲೊರಿ ಆಹಾರವನ್ನು ತಪ್ಪಿಸಬೇಕು. ಇಂದು ನಿಮ್ಮ ಸಹೋದರ ಸಹೋದರಿಯರು ನಿಮ್ಮಿಂದ ಆರ್ಥಿಕ ಬೆಂಬಲವನ್ನು ಕೇಳಬಹುದು ಮತ್ತು ಅವರಿಗೆ ಸಹಾಯ ಮಾಡಿ ನೀವು ಸ್ವತಃ ಆರ್ಥಿಕ ಒತ್ತಡಕ್ಕೆ ಬರಬಹುದು. ಅದಾಗ್ಯೂ ಪರಿಸ್ಥಿತಿ ಬೇಗ ಸುಧಾರಿಸುತ್ತದೆ.

**ಧನಸ್ಸು**: ಕೆಲಸದಲ್ಲಿ ಹಿರಿಯರಿಂದ ಒತ್ತಡ, ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆ ತೊಂದರೆ ತರಬಹುದು. ಸಂಬಂಧಿಕರಿಂದ ಹಣದ ಸಾಲವನ್ನು ತೆಗೆದುಕೊಂಡಿರುವ ಜನರು, ಯಾವುದೇ ಪರಿಸ್ಥಿತಿಯಲ್ಲಿಯೂ ಸಾಲವನ್ನು ಮರುಪಾವತಿ ಮಾಡಬೇಕಾಗುತ್ತದೆ . ನಿಮ್ಮ ಪತ್ನಿಯೊಂದಿಗೆ ನಿಮ್ಮ ಸಂಬಂಧಗಳನ್ನು ಉತ್ತಮಗೊಳಿಸಲು ಒಂದು ದಿನ.

**ಮಕರ**: ನಿರಾಶಾದಾಯಕ ಮನೋಭಾವವು ನಿಮ್ಮ ಆಶಾವಾದವನ್ನು ಸೀಮಿತಗೊಳಿಸುವುದಲ್ಲದೇ ದೇಹದ ಸಾಮರ್ಥ್ಯವನ್ನೂ ಭಂಗಪಡಿಸುವುದರಿಂದ ಅದನ್ನು ತಡೆಯಬೇಕು. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು.

**ಕುಂಭ**: ಇಂದಿನ ಮನರಂಜನೆ ಕ್ರೀಡಾ ಚಟುವಟಿಕೆಗಳು, ಹೊರಾಂಗಣ ಕಾರ್ಯಕ್ರಮಗಳನ್ನು ಒಳಗೊಂಡಿರಬೇಕು. ನಿಮ್ಮ ಆಪಾದಿತ ಯೋಜನೆ ಹಣದ ಕೊರತೆಗೆ ಕಾರಣವಾಗಬಹುದಾಗಿದೆ. ನಿಮ್ಮ ಮನೆಯ ಪರಿಸ್ಥಿತಿ ಸ್ವಲ್ಪ ಅನಿರೀಕ್ಷಿತವಾಗಿರುತ್ತದೆ. ನೀವು ಇಂದು ಪ್ರೀತಿಯ ಸಮೃದ್ಧ ಚಾಕೊಲೇಟ್‌ನ ರುಚಿ ಸವಿಯುತ್ತೀರಿ.

**ಮೀನ**: ಆರೋಗ್ಯ ದೃಷ್ಟಿಯಿಂದ ಉತ್ತಮವಾದ ದಿನ. ನಿಮ್ಮ ಹರ್ಷಚಿತ್ತದ ಮನಸ್ಸು ರಾಜ್ಯದ ನೀವು ಬಯಸಿದ ಟಾನಿಕ್ ನೀಡುತ್ತದೆ, ನಿಮಗೆ ಆತ್ಮವಿಶ್ವಾಸ ತರುತ್ತದೆ. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ.

# ವಿಶ್ವ ಸಹೋದರತ್ವ ದಿನಾಚರಣೆಯ ಮಹಾರಕ್ತದಾನ ಶಿಬಿರ

• ಉದಯವಾಹಿನಿ, ಮುದ್ದೇಬಿಹಾಳ

ರಕ್ತದಾನದಿಂದ ಆರೋಗ್ಯ ವೃದ್ಧಿ, ಜೀವ ರಕ್ಷಣೆ ಮಾಡುವ ಮೂಲಕ ನಿಜವಾದ ಜೀವ ರಕ್ಷಕರಾಗಬಹುದು ಎಂದು ಮುದ್ದೇಬಿಹಾಳ ಪ್ರಜಾಪಿತ ಬ್ರಹ್ಮಕುಮಾರಿ ವಿಶ್ವವಿದ್ಯಾಲಯದ ರಾಜಯೋಗಿನಿ ಬ್ರಹ್ಮಕುಮಾರಿ ಮಂಜುಳಾ ಹಾಗೂ ರಾಜಯೋಗಿನಿ ರೇಣುಕಾ ಬ್ರಹ್ಮಕುಮಾರಿ ಶನಿವಾರ ತಿಳಿಸಿದರು.

ಮುದ್ದೇಬಿಹಾಳ ಓಂ ಶಾಂತಿ ಭವನದಲ್ಲಿ ವಿಶ್ವ ಸಹೋದರತ್ವ ದಿನಾಚರಣೆಯ ಜೊತೆಗೆ ದಾದಿ ಪ್ರಕಾಶಮಣಿಜೀ ಅವರ 18ನೇ ಪುಣ್ಯಸ್ಮರಣೆಯ ಅಂಗವಾಗಿ ಸಾಮಾಜಿಕ ಸೇವಾ ವಿಭಾಗದ ವತಿಯಿಂದ ಮಹಾರಕ್ತದಾನ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು.



ರಕ್ತದಾನದಿಂದ ಜೀವ ಉಳಿಸಿ

ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ಮಾತನಾಡಿದ ಅವರು, ರಸ್ತೆ ಅಪಘಾತದ ವೇಳೆ ಗಾಯಾಳುಗಳು, ಹೆರಿಗೆ ಸಂದರ್ಭದ ಗರ್ಭಿಣಿಯರಿಗೆ ತುರ್ತು ಪರಿಸ್ಥಿತಿಯಲ್ಲಿ ರಕ್ತ ಅವಶ್ಯಕವಾಗುತ್ತದೆ. ಇಂತಹ ಸಂದರ್ಭಗಳಲ್ಲಿ ರಕ್ತದಾನಿಗಳ ಸೇವೆ ಅನನ್ಯವಾಗಿರುತ್ತದೆ ಎಂದು ಹೇಳಿದರು. ಪುರಸಭೆ ಅಧ್ಯಕ್ಷ ಮಹೆಬೂಬ ಗೊಳಸಂಗಿ, ರೆಡ್ ಕ್ರಾಸ್ ರಕ್ತನಿಧಿಯ ವಿಭಾಗ ತಜ್ಞ ವೀರಣ್ಣ ಜಂಬಗಿ, ಉದ್ಯಮಿ ರಾಜೇಂದ್ರ, ಭೋಸಲೆ, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಅನಸೂಯ ತೆರದಾಳ, ಕಾಂಗ್ರೆಸ್ ಮಹಿಳಾ ಜಿಲ್ಲಾ ಉಪಾಧ್ಯಕ್ಷೆ ಸರಸ್ವತಿ ಪೀರಾಪೂರ ಮೊದಲಾದವರು ಮಾತನಾಡಿ, ರಕ್ತದಾನದಿಂದ ದೇಹದ ಕೆಟ್ಟ ಕೊಲೆಸ್ಟ್ರಾಲ್ ಮಟ್ಟ ಕಡಿಮೆಯಾಗುತ್ತದೆ, ರಕ್ತದೊತ್ತಡ ಮತ್ತು ಕಬ್ಬಿಣದ ಮಟ್ಟ ಸಮತೋಲನದಲ್ಲಿರುತ್ತದೆ ಎಂದರು.

ಆರೋಗ್ಯವಂತ ಯುವಜನರು ಪ್ರತಿ ಮೂರು ತಿಂಗಳಿಗೊಮ್ಮೆ ಯಾವುದೇ ಹಾನಿಯಿಲ್ಲದೆ ರಕ್ತದಾನ ಮಾಡಬಹುದು. ಇದರಿಂದ ದೇಹದಲ್ಲಿ ಹೊಸ ರಕ್ತಕಣಗಳ ಉತ್ಪತ್ತಿ ನಡೆಯುತ್ತದೆ ಹಾಗೂ ದೇಹ ಹಸನುಹಸನಾಗುತ್ತದೆ ಎಂದು ತಿಳಿಸಿದರು.

ಈ ಶಿಬಿರದಲ್ಲಿ ಒಟ್ಟು 45 ಜನರು ರಕ್ತದಾನ ಮಾಡಿ ಮಾನವೀಯತೆಯ ಸಂದೇಶ ಹರಿಸಿದರು. ಕಾರ್ಯಕ್ರಮದಲ್ಲಿ ನೀಲಪ್ಪ ಢವಳಗಿ, ನೇತಾಜಿ ಭೋಸಲೆ, ಪ್ರಶಾಂತ ರಾಂಪೂರ, ಡಾ.ಈರಣ್ಣ ಉಳ್ಳಿ, ಮಲ್ಲನಗೌಡ ಬಿರಾದಾರ, ಗುರನಾಥಗೌಡ ಬಿರಾದಾರ, ಮುರಿಗೆಪ್ಪ ಹಡಲಗೇರಿ, ಪವನ ಸುಕಾಲಿ, ಅಕ್ಕಮಹಾದೇವಿ ಮೊಟಗಿ, ಭಾರತಿ ಬೋಸಲೆ, ಲಕ್ಷ್ಮೀ ಪೂಲೇಶಿ, ಶಿವು ಬಿದರಕುಂದಿ, ಮಲ್ಲಣ್ಣ ನವಲಿ, ಬಸವರಾಜ ಹುಣಸಗಿ, ಪೂಜಾ ಸುಕಾಲಿ, ಪವಿತ್ರ ಸುಕಾಲಿ, ಐಶ್ವರ್ಯ ಬೂದಿಹಾಳಮಠ, ಸುನಂದಾ ಭೋಸಲೆ, ರವಿ ಭೋವಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಮುಸುಕುಧಾರಿ ಚಿನ್ನಯ್ಯನ ಅಣ್ಣನನ್ನೂ ವಶಕ್ಕೆ ಪಡೆದ ಎಸ್‌ಐಟಿ

## ಬುರುಡೆ ಗ್ಯಾಂಗ್ ಕುರಿತು ಹೆಚ್ಚಿನ ಮಾಹಿತಿಯನ್ನು ಸಂಗ್ರಹಿಸುವ ಪ್ರಕ್ರಿಯೆ ಆರಂಭ

• ಉದಯವಾಹಿನಿ, ಬೆಳ್ತಂಗಡಿ

ಧರ್ಮಸ್ಥಳದಲ್ಲಿ ನೂರಾರು ಶವಗಳನ್ನು ಹೂತು ಹಾಕಲಾಗಿದೆ ಎಂದು ತಲೆಬುರುಡೆ ಸಮೇತ ದೂರು ನೀಡಿ ರಾಜ್ಯಾದ್ಯಂತ ಸಂಚಲನ ಮೂಡಿಸಿದ್ದ ಪ್ರಕರಣವು ಶನಿವಾರ ಮಹತ್ವದ ತಿರುವು ಪಡೆದುಕೊಂಡಿದೆ. ತನಿಖೆಗೆ ಸುಳ್ಳು ಮಾಹಿತಿ ಮತ್ತು ಸಾಕ್ಷ್ಯ ನೀಡಿದ ಆರೋಪದ ಮೇಲೆ ಪ್ರಕರಣದ ದೂರುದಾರನಾಗಿದ್ದ ಮುಸುಕುಧಾರಿ ಸಿ.ಎನ್. ಚಿನ್ನಯ್ಯನನ್ನೇ ವಿಶೇಷ ತನಿಖಾ ದಳ (ಎಸ್‌ಐಟಿ) ಬಂಧಿಸಿದೆ. ಇದರ ಬೆನ್ನಲ್ಲೇ, ಹೆಚ್ಚಿನ ತನಿಖೆಗಾಗಿ ಆತನ ಸಹೋದರ ತಾನಾಸಿಯನ್ನೂ ಶನಿವಾರ ವಶಕ್ಕೆ ಪಡೆಯಲಾಗಿದೆ. ಈ ಪ್ರಕರಣದಲ್ಲಿ ಆರಂಭದಲ್ಲಿ ಸಾಕ್ಷಿದಾರನಾಗಿದ್ದ ಚಿನ್ನಯ್ಯನಿಗೆ ಸಾಕ್ಷಿ ಸಂರಕ್ಷಣಾ ಕಾಯ್ದೆಯಡಿ ರಕ್ಷಣೆಯನ್ನು ನೀಡಲಾಗಿತ್ತು. ಆದರೆ, ಎಸ್‌ಐಟಿ ನಡೆಸಿದ ನಿರಂತರ ವಿಚಾರಣೆಯ ವೇಳೆ ಆತ ಗೊಂದಲಕಾರಿ ಮತ್ತು ಸುಳ್ಳು ಹೇಳಿಕೆಗಳನ್ನು ನೀಡುತ್ತಿರುವುದು ಬಯಲಾಗಿದೆ. ತಾನೇ ಅಗೆದು ತಲೆಬುರುಡೆ ತಂದಿರುವುದಾಗಿ ಈ ಹಿಂದೆ ನ್ಯಾಯಾಲಯಕ್ಕೆ ಹೇಳಿಕೆ ನೀಡಿದ್ದ ಚಿನ್ನಯ್ಯ, ನಂತರ ತನ್ನ ಹೇಳಿಕೆ ಬದಲಿಸಿ, ಬುರುಡೆ ಗ್ಯಾಂಗ್ ಒಂದು ಇದರ ಹಿಂದೆ ಇದೆ ಎಂದು ಬಾಯಿಬಿಟ್ಟಿದ್ದ ಎನ್ನಲಾಗಿದೆ.

ಈ ಹಿನ್ನೆಲೆಯಲ್ಲಿ, ಆಗಸ್ಟ್ 22ರಂದು ಆತನಿಗೆ ನೀಡಲಾಗಿದ್ದ ಸಾಕ್ಷಿ ರಕ್ಷಣೆಯನ್ನು ರದ್ದುಪಡಿಸಲಾಗಿತ್ತು. ಬಳಿಕ, ಶನಿವಾರ ಮುಂಜಾನೆ ಎಸ್‌ಐಟಿ ಅಧಿಕಾರಿಗಳು ಚಿನ್ನಯ್ಯನನ್ನು ಬಂಧಿಸಿ,



ಉದಯವಾಹಿನಿ ಚಿತ್ರ

ಬೆಳ್ತಂಗಡಿಯ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದರು. ನ್ಯಾಯಾಲಯವು ಹೆಚ್ಚಿನ ವಿಚಾರಣೆಗಾಗಿ ಚಿನ್ನಯ್ಯನನ್ನು 10 ದಿನಗಳ ಕಾಲ ಎಸ್‌ಐಟಿ ಕಸ್ಟಡಿಗೆ ಒಪ್ಪಿಸಿದೆ.

**ಸಹೋದರನ ವಿಚಾರಣೆ:** ಚಿನ್ನಯ್ಯನ ಬಂಧನದ ನಂತರ, ತನಿಖೆಯನ್ನು ಮತ್ತಷ್ಟು ಚುರುಕುಗೊಳಿಸಿರುವ ಎಸ್‌ಐಟಿ ಅಧಿಕಾರಿಗಳು, ಶನಿವಾರ ಬೆಳಿಗ್ಗೆ ಕೆಲಸಕ್ಕೆ ತೆರಳಿದ್ದ ಆತನ ಅಣ್ಣ ತಾನಾಸಿಯನ್ನು ವಶಕ್ಕೆ ಪಡೆದಿದ್ದಾರೆ. ಈತನನ್ನು ವಿಚಾರಣೆ ನಡೆಸುತ್ತಿದ್ದಾರೆ. ಚಿನ್ನಯ್ಯ, ಬುರುಡೆ ಗ್ಯಾಂಗ್ ಕುರಿತು ಹೆಚ್ಚಿನ ಮಾಹಿತಿ ಸಂಗ್ರಹಿಸುವುದು ಈ ವಿಚಾರಣೆಯ ಉದ್ದೇಶವಾಗಿದೆ ಎಂದು ಮೂಲಗಳು ಹೇಳಿವೆ. ಧರ್ಮಸ್ಥಳ ಗ್ರಾಮದ ವಿವಿಧ ಕಡೆಗಳಲ್ಲಿ ನೂರಾರು ಮೃತದೇಹಗಳನ್ನು ಹೂಳಲಾಗಿದೆ ಎಂದು ಚಿನ್ನಯ್ಯ ಅನಾಮಿಕನಾಗಿ ದೂರು ನೀಡಿದ್ದ. ಹೀಗೆ ದೂರು ನೀಡಿ 13 ಸ್ಥಳಗಳನ್ನೂ ಗುರುತಿಸಿದ್ದ. ಈ ಸ್ಥಳಗಳಲ್ಲಿ ಎಸ್‌ಐಟಿ ತಂಡವು ಉತ್ಖನನವನ್ನೂ ನಡೆಸಿತ್ತು. ಆದರೆ, ಒಂದೆರಡು ಕಡೆ ಮಾನವನ ಅಸ್ಥಿಪಂಜರದ ಕೆಲವು ತುಣುಕುಗಳು ಪತ್ತೆಯಾಗಿದ್ದು ಬಿಟ್ಟರೆ, ಬೇರೆ ಯಾವುದೇ ಮಹತ್ವದ ಸಾಕ್ಷ್ಯಗಳು ಲಭಿಸಿರಲಿಲ್ಲ. ಇದರ ಜೊತೆಗೆ ದೂರು ನೀಡಿದ್ದ ಸುಜಾತಾ ಭಟ್‌ನಂತವರೂ ಉಲ್ಟಾ ಹೊಡೆದಿದ್ದರು. ಇದೀಗ ದೂರುದಾರನೇ ಆರೋಪಿಯಾಗುವ ಮೂಲಕ ಪ್ರಕರಣಕ್ಕೆ ಹೊಸ ತಿರುವು ಸಿಕ್ಕಿದೆ.

### ಹೇಳಿಕೆಗಳು ಗೊಂದಲಮಯ

**ಧರ್ಮಸ್ಥಳದಲ್ಲಿ ನೂರಾರು ಶವಗಳನ್ನು ಹೂತು ಹಾಕಲಾಗಿದೆ ಎಂದು ದೂರು ನೀಡಿದ್ದ ಸಿ.ಎನ್. ಚಿನ್ನಯ್ಯನನ್ನೇ ಇದೀಗ ಸುಳ್ಳು ಮಾಹಿತಿ ಮತ್ತು ಸಾಕ್ಷ್ಯ ನೀಡಿದ ಆರೋಪದ ಮೇಲೆ ಎಸ್‌ಐಟಿ ಬಂಧಿಸಿದೆ. ತನಿಖೆಗೆ ಆತ ನೀಡಿದ ಹೇಳಿಕೆಗಳು ಗೊಂದಲಮಯವಾಗಿದ್ದವು ಮತ್ತು ಆತನೇ ತಲೆಬುರುಡೆಗಳನ್ನು ತಂದಿರುವುದಾಗಿಯೂ ಹೇಳಿದ್ದ. ಆದರೆ, ಇದೆಲ್ಲ ಸುಳ್ಳು ಎಂದು ತನಿಖೆ ವೇಳೆ ತಿಳಿದು ಬಂದಿದ್ದು, ಈ ಪ್ರಕರಣದ ಹೆಚ್ಚಿನ ತನಿಖೆಗಾಗಿ ಆತನ ಸಹೋದರ ತಾನಾಸಿಯನ್ನು ಸಹ ವಶಕ್ಕೆ ಪಡೆಯಲಾಗಿದೆ.**

# ವರದಾ-ಬೇಡ್ತಿ ನದಿಗಳ ಜೋಡಣೆಗೆ ಕೇಂದ್ರದ ತಾತ್ವಿಕ ಒಪ್ಪಿಗೆ

• ಉದಯವಾಹಿನಿ, ಹಾವೇರಿ

ವರದಾ ಬೇಡ್ತಿ ನದಿಗಳ ಜೋಡಣೆ ವಿಚಾರದಲ್ಲಿ ಕೇಂದ್ರ ಸರ್ಕಾರವು ತಾತ್ವಿಕ ಒಪ್ಪಿಗೆ ನೀಡಿದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು. ನಗರದಲ್ಲಿ ಕಾರ್ಯಕ್ರಮವೊಂದರಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ತುಂಗಭದ್ರಾ ನದಿಯಲ್ಲಿ ಬೇಸಿಗೆಯ 3-4 ತಿಂಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆ ಆಗುತ್ತದೆ. ಅದಕ್ಕೆ ವರದಾ ಬೇಡ್ತಿ ನದಿಯ ಜೋಡಣೆ ಅಗತ್ಯವಿದೆ ಎಂದರು.

ನದಿಗಳ ಜೋಡಣೆಗೆ ಕೇಂದ್ರ ಸರ್ಕಾರ ತಾತ್ವಿಕ ಒಪ್ಪಿಗೆ ಕೊಟ್ಟಿದ್ದು, ರಾಜ್ಯ ಸರ್ಕಾರ ಈ ಪ್ರಕ್ರಿಯೆಯನ್ನು ಮುಂದಕ್ಕೆ ತೆಗೆದುಕೊಂಡು ಹೋಗಬೇಕು. ನನ್ನ ಈ ಆಗ್ರಹವನ್ನು ರಾಜ್ಯ ಸರ್ಕಾರ ಸಹ ಒಪ್ಪಿಕೊಂಡಿದೆ. ಯೋಜನೆ ಜಾರಿಯಾದರೆ ಸುಮಾರು 18 ಟಿಎಂಸಿ ನೀರು ಬರುತ್ತದೆ. ಅದರಿಂದ ನೀರಿನ ಸಮಸ್ಯೆ ನಿವಾರಣೆಯಾಗಲಿದೆ. ಯೋಜನೆ ಜಾರಿಗೆ ನಾವೆಲ್ಲರೂ ಒಟ್ಟಾಗಿ ಕೆಲಸ ಮಾಡಬೇಕು ಎಂದರು.

# ರಾಜ್ಯ ಸರ್ಕಾರ ನೆರೆ ಸಂತ್ರಸ್ತರ ನೆರವಿಗೆ ಧಾವಿಸಲಿ

• ಉದಯವಾಹಿನಿ, ಬೆಳಗಾವಿ

ಜಿಲ್ಲೆಯಲ್ಲಿ ಘಟಪ್ರಭಾ, ಕೃಷ್ಣಾ ನದಿಗಳ ಪ್ರವಾಹದಿಂದ ಸಮಸ್ಯೆ ಎದುರಿಸುತ್ತಿರುವವರ ನೆರವಿಗೆ ರಾಜ್ಯ ಸರ್ಕಾರ ಧಾವಿಸಬೇಕು. ಸಚಿವರು ಸಂತ್ರಸ್ತರ ಬಳಿ ಹೋಗಿ ಸಮಸ್ಯೆ ಆಲಿಸಬೇಕು ಎಂದು ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಒತ್ತಾಯಿಸಿದರು.

ಇಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಈ ವರ್ಷ ವಾಡಿಕೆಗಿಂತ ಹೆಚ್ಚಿನ ಮಳೆ ಸುರಿದಿದೆ. ಕೃಷ್ಣಾ ಮತ್ತು ಘಟಪ್ರಭಾ ನದಿಗಳ ಜಲಾನಯನ ಪ್ರದೇಶದಲ್ಲಿ ಉತ್ತಮ ಮಳೆಯಾದ ಕಾರಣ, ನೆರೆ ರಾಜ್ಯದ ಜಲಾಶಯಗಳಿಂದ ಹೆಚ್ಚಿನ ಪ್ರಮಾಣದಲ್ಲಿ ನೀರು ಹೊರಬಿಡಲಾಗುತ್ತಿದೆ. ಇದರಿಂದ ನದಿಪಾತ್ರದ ಗ್ರಾಮಗಳಲ್ಲಿ ಪ್ರವಾಹ ಸ್ಥಿತಿ ಉಂಟಾಗಿದ್ದು, ಮನೆ, ರಸ್ತೆ ಮತ್ತು ಬೆಳೆಗಳಿಗೂ ಹಾನಿಯಾಗಿದೆ ಎಂದರು. 2019ರಲ್ಲಿ ಮನೆ ಕಳೆದುಕೊಂಡವರ ಪೈಕಿ ಜಿಲ್ಲೆಯಲ್ಲಿ 1,800 ಕುಟುಂಬದವರಿಗೆ, ಕಾಂಗ್ರೆಸ್ ಸರ್ಕಾರ ಇನ್ನೂ ಪೂರ್ಣ ಪರಿಹಾರ ಕೊಟ್ಟಿಲ್ಲ. ಹಾಗಾಗಿ ಮನೆಗಳ ನಿರ್ಮಾಣ ಕಾಮಗಾರಿ ಅರ್ಧಕ್ಕೆ ನಿಂತಿದೆ. ಎಲ್ಲರಿಗೂ ನ್ಯಾಯಯುತ ಪರಿಹಾರ ಒದಗಿಸಿ, ಸಮಸ್ಯೆ ಬಗೆಹರಿಸಬೇಕು ಎಂದು ಒತ್ತಾಯಿಸಿದರು. ರೈತರ ನೆರವಿಗೆ ಧಾವಿಸುವ ದೃಷ್ಟಿಯಿಂದ ಬಿಜೆಪಿ ಸರ್ಕಾರವು ಎಸ್‌ಡಿಆರ್‌ಎಫ್ ಮಾರ್ಗಸೂಚಿಯಂತೆ ಬೆಳೆಹಾನಿ ಪರಿಹಾರ ನೀಡುವ ಜತೆಗೆ, ಪ್ರತಿ ಎಕರೆಗೆ 10 ಸಾವಿರ ಹೆಚ್ಚುವರಿಯಾಗಿ ಕೊಟ್ಟಿತ್ತು. ಕಾಂಗ್ರೆಸ್ ಸರ್ಕಾರವೂ ಇದನ್ನು ಅನುಸರಿಸಬೇಕು ಎಂದು ಆಗ್ರಹಿಸಿದರು. ರಾಜ್ಯದಿಂದ ಮನವಿ ಸಲ್ಲಿಕೆಯಾದ ನಂತರ, ಬೆಳೆ ಮತ್ತು ಮೂಲಸೌಕರ್ಯಗಳ ಹಾನಿ ಪರಿಶೀಲಿಸಲು ಕೇಂದ್ರದ ತಂಡ ಬರುತ್ತವೆ. ಆ ಪರಿಸ್ಥಿತಿ ಇನ್ನೂ ಉದ್ಭವಿಸಿಲ್ಲ. ಹಾಗಾಗಿ ಬೆಳೆಹಾನಿ ಪರಿಹಾರ ವಿತರಣೆಗಾಗಿ ರಾಜ್ಯ ಸರ್ಕಾರ ಕೇಂದ್ರದ ಅನುಮತಿಗಾಗಿ ಕಾಯುವ ಅಗತ್ಯವಿಲ್ಲ. ಮೊದಲು ಪರಿಹಾರ ನೀಡಿ, ಕೇಂದ್ರಕ್ಕೆ ರಸೀದಿ ಕಳುಹಿಸಬೇಕು. ಸಚಿವ ಸತೀಶ ಜಾರಕಿಹೊಳಿ ಅವರು, ಕೆಳಹಂತದ ಸೇತುವೆಗಳ ಎತ್ತರ ಹೆಚ್ಚಿಸಲು ಕ್ರಮ ವಹಿಸಬೇಕು ಎಂದು ಆಗ್ರಹಿಸಿದರು.



**2019ರಲ್ಲಿ ಜಿಲ್ಲೆಯಲ್ಲಿ ಪ್ರವಾಹ ಸ್ಥಿತಿ ತಲೆದೋರಿದಾಗ, ಪೂರ್ಣ ಮನೆ ಬಿದ್ದವರಿಗೆ ತಲಾ 5 ಲಕ್ಷ, ಭಾಗಶಃ ಮನೆ ಬಿದ್ದವರಿಗೆ 3 ಲಕ್ಷ ಪರಿಹಾರವನ್ನು ಬಿಜೆಪಿ ಸರ್ಕಾರ ಘೋಷಿಸಿತ್ತು. ನೆರೆ ಸಂತ್ರಸ್ತರಿಗೆ 10 ಸಾವಿರ ತಾತ್ಕಾಲಿಕವಾಗಿ ಪರಿಹಾರ ನೀಡಿತ್ತು. ಆದರೆ, ಈಗ ಕಾಂಗ್ರೆಸ್ ಸರ್ಕಾರ ಕಡಿಮೆ ಪರಿಹಾರ ನೀಡುತ್ತಿರುವುದು ಸರಿಯಲ್ಲ. ಬಿಜೆಪಿ ಸರ್ಕಾರದ ಮಾದರಿಯಲ್ಲೇ ಪರಿಹಾರ ಕೊಡಬೇಕು ಎಂದು ಆಗ್ರಹಿಸಿದರು.**

# ನದಿಯಲ್ಲಿದ್ದ ಕೃಷಿ ಪಂಪ್‌ಸೆಟ್ ತೆಗೆಯಲು ಹೋದ ವ್ಯಕ್ತಿ ಸಾವು

• ಉದಯವಾಹಿನಿ, ಕುಳಗೇರಿ ಕ್ರಾಸ್

ಸಮೀಪದ ಕಳಸ ಗ್ರಾಮದ ಮಲಪ್ರಭಾ ನದಿಯಲ್ಲಿ ಅಳವಡಿಸಿದ್ದ ನೀರೆತ್ತುವ ಯಂತ್ರವನ್ನು (ಕೃಷಿ ಪಂಪಸೆಟ್) ತೆಗೆಯಲು ಹೋಗಿದ್ದ ವ್ಯಕ್ತಿಯೊಬ್ಬರು ನೀರಿನಲ್ಲಿ ಮುಳುಗಿ ಮೃತಪಟ್ಟಿರುವ ಘಟನೆ ನಡೆದಿದೆ. ವಡವಟ್ಟಿ ಗ್ರಾಮದ ರಾಮನಗೌಡ ಬ. ಬೂದಿಹಾಳ (ಅಂಗಡಿ) (42) ಮೃತಪಟ್ಟವರು. ವಡವಟ್ಟಿ ಗ್ರಾಮದಿಂದ 2 ಕಿ.ಮೀ ದೂರದಲ್ಲಿರುವ ಕಳಸ ಗ್ರಾಮದ ಹೊರವಲಯದಲ್ಲಿರುವ ಮಲಪ್ರಭಾ ನದಿಯಲ್ಲಿ ಕೃಷಿ ಜಮೀನಿನ ಉಪ ಯೋಗಕ್ಕಾಗಿ 10 ಲಕ್ಷ ವೆಚ್ಚದಲ್ಲಿ ನೀರೆತ್ತುವ ಯಂತ್ರವನ್ನು ಅಳವಡಿಸಿದ್ದರು.

ಹೊಟ್ಟೆಗೆ ಹಗ್ಗವನ್ನು ಕಟ್ಟಿಕೊಂಡು ನದಿ ನೀರಿನಲ್ಲಿ ಸಾಗಿದ ರಾಮನಗೌಡ ನೀರಿನಲ್ಲಿ ಸಾಗಿದಾಗ ಹೊಟ್ಟೆಗೆ ಕಟ್ಟಿದ ಹಗ್ಗ ಕಾಲಿಗೆ ಸಿಲುಕಿ ಸುತ್ತಿಕೊಂಡು ಪಕ್ಕದಲ್ಲಿ ತಂತಿಗೆ ಸಿಲುಕಿದ್ದರಿಂದ ಮೇಲಕ್ಕೆ ಬರಲಾಗಲಿಲ್ಲ ಎನ್ನಲಾಗಿದೆ. ಮಧ್ಯಾಹ್ನ ಅವಘಡ ನಡೆದಿದ್ದು ಬಾದಾಮಿ ತಹಶೀಲ್ದಾರ್ ಕಾವ್ಯಾಶ್ರೀ ಎಚ್. ಭೇಟಿ ನೀಡಿ ತಕ್ಷಣ ಅಗ್ನಿಶಾಮಕ ದಳದ ಜೊತೆ ಮಾತನಾಡಿ ಬೋಟ್ ತರಿಸಿ ಕಾರ್ಯಾಚರಣೆ ನಡೆಸಿದರು. ಕಳಸ ಗ್ರಾಮದ ಈಜುಗಾರರು ನೀರಿನಲ್ಲಿ ಸಾಗಿ ಸಂಜೆ 7ರ ಹೊತ್ತಿಗೆ ಮೃತದೇಹವನ್ನು ಹೊರ ತೆಗೆದರು.

# ಘಟಪ್ರಭಾ ನದಿ ಪ್ರವಾಹ ಯಥಾಸ್ಥಿತಿ

• ಉದಯವಾಹಿನಿ, ಮಹಾಲಿಂಗಪುರ

ಘಟಪ್ರಭಾ ನದಿಯಿಂದ ತಲೆದೋರಿರುವ ಪ್ರವಾಹ ಪರಿಸ್ಥಿತಿ ಯಥಾಸ್ಥಿತಿಯಲ್ಲಿದ್ದು, ಸಮೀಪದ ಢವಳೇಶ್ವರ ಗ್ರಾಮದಿಂದ ಮಾರಾಪುರ. ಮುಧೋಳಕ್ಕೆ ತೆರಳುವ ಒಳರಸ್ತೆ ಸಂಪರ್ಕ ಸ್ಥಗಿತಗೊಂಡಿದೆ.

ಢವಳೇಶ್ವರ ಗ್ರಾಮದಲ್ಲಿ ತ್ಯಾಜ್ಯ ವಿಲೇವಾರಿ ಘಟಕ, ಲಕ್ಷ್ಮೀ ದೇವಿ, ದುರ್ಗಾದೇವಿ ದೇವಸ್ಥಾನಗಳು, ಅಂಗನವಾಡಿ ಕೇಂದ್ರ ನೀರಿನಿಂದ ಆವೃತವಾಗಿವೆ. ಹಳೇ ನಂದಗಾಂವ ಗ್ರಾಮ ನಡುಗಡ್ಡೆಯಾಗಿದೆ. ಒಟ್ಟು 49 ಕುಟುಂಬಗಳಲ್ಲಿ 20ಕ್ಕೂ ಹೆಚ್ಚು ಕುಟುಂಬಗಳು ಸ್ಥಳಾಂತರವಾಗಿವೆ. ನೀರು ಹಿಂದಕ್ಕೆ ಸರಿಯಬಹುದೆಂಬ ನಿರೀಕ್ಷೆಯಿಂದ ಕೆಲ ಕುಟುಂಬಗಳು ಅಲ್ಲೇ ಉಳಿದುಕೊಂಡಿವೆ. ಗೋಕಾಕ ಹತ್ತಿರದ ದುಪದಾಳ ಜಲಾಶಯ ಮಾರ್ಗವಾಗಿ 35,415 ಕ್ಯುಸೆಕ್ ನೀರನ್ನು ಘಟಪ್ರಭಾ ನದಿಗೆ ಹರಿಸಲಾಗುತ್ತಿದೆ. ಬಳ್ಳಾರಿ ನಾಲಾ 1,881 ಕ್ಯುಸೆಕ್, ಮಾರ್ಕಂಡೇಯ ಜಲಾಶಯದಿಂದ 4,021 ಕ್ಯುಸೆಕ್ ನೀರು ಸೇರಿದಂತೆ ಘಟಪ್ರಭಾ ನದಿಗೆ ಒಟ್ಟು 41,317 ಕ್ಯುಸೆಕ್ ನೀರು ಹರಿದುಬರುತ್ತಿದೆ.

# ಇಬ್ಬರ ಅಂತಾರಾಜ್ಯ ಕಳ್ಳರನ್ನು ಬಂಧಿಸಿದ ಪೊಲೀಸ್ ವಿಶೇಷ ತಂಡ

• ಉದಯವಾಹಿನಿ, ಸಿಂಧನೂರು

ಗ್ರಾಮೀಣ ಪೋಲೀಸ ಠಾಣೆಯ ಪೋಲೀಸರು ಅಂತಾರಾಜ್ಯ ಇಬ್ಬರು ಕಳ್ಳರನ್ನು ಬಂಧಿಸಿ ಬಂಗಾರ ಹಣ ತೆ ಮತ್ತು ಎರಡು ಬೈಕಗಳನ್ನು ವಶಪಡಿಸಿಕೊಂಡು ಆರೋಪಿಗಳನ್ನು ನ್ಯಾಯಾಂಗ ಬಂಧನ ವ್ಯವಸ್ಥೆಗೆ ಕಳಿಸಲಾಗಿದೆ ಎಂದು ಪೋಲಿಸ್ ಮೂಲಗಳು ಮಾಹಿತಿ ನೀಡಲಾಗಿದೆ.

ಗ್ರಾಮೀಣ ಪೋಲೀಸ ಠಾಣೆಯ ಪೋಲೀಸರು ಮಿಂಚಿನ ಕಾರ್ಯಾಚರಣೆ ನಡೆಸಿ ದಿ 21ರಂದು ಆರೋಪಿತರಾದ ರಮೇಶ್ ಕುಮಾರ್ ಯಾದವ್ ಮಧುರೈ ತಮಿಳುನಾಡು ಮೂಲ ಶಿಕಾರಿಪುರ ಶಿವಮೊಗ್ಗ, ವೇಣು ಗೋಪಾಲ್ ಕೊಪ್ಪ ಪಟ್ಟಣ ಚಿಕ್ಕಮಂಗಳೂರು ಪತ್ತೆ ಹಚ್ಚಿ ಇವರುಗಳಿಂದ ಮೂರು ಲಕ್ಷ ನಗದು ಹಣ, ತಮಗೆ ಉಪಯೋಗಿಸಿದ ಮೋಟಾರ್ ಸೈಕಲ್ ವಶಪಡಿಸಿಕೊಂಡು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ತಿಳಿಸಿದರು. ಬಂಗಾರಿ ಕ್ಯಾಂಪ ಕೆ ಸತ್ಯನಾರಾಯಣ ಬ್ಯಾಂಕಿನಲ್ಲಿ 3 ಲಕ್ಷ 30 ಸಾವಿರ ಹಣ ಡ್ರಾಮಾಡಿಕೊಂಡು



ಉದಯವಾಹಿನಿ ಚಿತ್ರ

ಮಿಂಚಿನ ಕಾರ್ಯಾಚರಣೆ

ತನ್ನ ಬೈಕ್ ನಲ್ಲಿ ಇಟ್ಟು ತಾಲ್ಲೂಕಿನ ಹೊಸಳ್ಳಿ ಇಜೆ ಕ್ಯಾಂಪನಲ್ಲಿ ಬೈಕ್ ನಿಲ್ಲಿಸಿ ಹೆಣ್ಣು ತೆಗೆದುಕೊಳ್ಳುವ ಸಂದರ್ಭದಲ್ಲಿ ಅವರು ಬೈಕ್ ಸೈಡ್ ತೆಗೆದು ಹಣವನ್ನು ದೋಚಿ ಅಲ್ಲಿಂದ ಪರಾರಿಯಾಗಿದ್ದಾರೆ. 17.5.2025 ರಂದು ಕೆ. ಸತ್ಯನಾರಾಯಣ ನೀಡಿದ ದೂರಿನ ಮೇರೆಗೆ ಗ್ರಾಮೀಣ ಪೋಲೀಸ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಜಿಲ್ಲಾ ಪೋಲೀಸ ವರಿಷ್ಠಾಧಿಕಾರಿಗಳಾದ ಪುಟ್ಟ ಮಾದಯ್ಯ, ಹೆಚ್ಚುವರಿ ಎಸ ಪಿ ಹರೀಶ. ಕುಮಾರ ಸ್ವಾಮಿ.ಮಾರ್ಗ ದರ್ಶನದಲ್ಲಿ, ಬಿ ಎಸ. ತಳವಾರ ನೇತೃತ್ವದಲ್ಲಿ ಗ್ರಾಮೀಣ ಪೋಲೀಸ ಠಾಣೆಯ ಪಿಎಸ್ಐ ಮೌನೇಶ ರಾಠೋಡ. ಪೊಲೀಸ ಪೇದೆಗಳಾಧ ಗೋಪಾಲ, ಶರಣಪ್ಪ, ಅನಿಲ್ ಕುಮಾರ. ಅಫೀಜ್ ವುಲ್ಲಾ. ಅಮರೇಗೌಡ. ತಿಪ್ಪಣ್ಣ. ಸುನೀತಾ ಅಜಿಮ್.ಪಾಷಾ. ಸಿಡಿಆರ್. ಈ ತಂಡವನ್ನು ರಚಿಸಲಾಗಿದೆ. ವಿಶೇಷ ತಂಡ ಹುಡುಕಾಟ ಜಾದವ, ನಡೆಸಿ ತಮಿಳುನಾಡಿನ ರಮೇಶ ತಂದೆ ಕುಮಾರ ವೇಣುಗೋಪಾಲ ತಂದೆ ಹನುಮಂತಪ್ಪ ಚಿಕ್ಕಮಂಗಳೂರು ಈ ಆರೋಪಿಗಳನ್ನು, 21.8.2025 ರಂದು ಬಂಧಿಸಿ 3 ಲಕ್ಷ 30 ಸಾವಿರ ಹಣ ಕಳ್ಳತನ ಮಾಡಲು ಬಳಕೆ ಮಾಡಿದ ಎರಡು ಬೈಕಗಳು ವಶಕ್ಕೆ ತೆಗೆದುಕೊಂಡು ಇಬ್ಬರು ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಳಪಡಿಸಲಾಗಿದೆ ಇನ್ನೊಬ್ಬ ಆರೋಪಿ ಬಂಧನಕ್ಕಾಗಿ ಪೋಲೀಸರು ಹುಡುಕಾಟ ನಡೆಸುತ್ತಿದ್ದಾರೆ. ಕಳ್ಳತನ ಮಾಡಿದ ಇಬ್ಬರು ಆರೋಪಿಗಳನ್ನು ಬಂಧಿಸಿ ಹಣ ಬೈಕಗಳನ್ನು ವಶಪಡಿಸಿಕೊಂಡ ವಿಶೇಷ ಪೊಲೀಸ ತಂಡದ ಕಾರ್ಯವನ್ನು ಎಸ್ ಪಿ ಪುಟ್ಟ ಮಾದಯ್ಯ ವ್ಯಕ್ತಪಡಿಸಿದ್ದಾರೆ ಎಂದು ಹೇಳಿದರು.

# ಅಕ್ರಮ ಬೆಟ್ಟಿಂಗ್ ಕಂಪನಿ: ಇಡಿ ಅಧಿಕಾರಿಗಳಿಂದ ಚಿತ್ರದುರ್ಗ ಶಾಸಕ ವೀರೇಂದ್ರ ಪಪ್ಪಿ ಬಂಧನ

• ಉದಯವಾಹಿನಿ, ಚಿತ್ರದುರ್ಗ

ಅಕ್ರಮವಾಗಿ ಆನ್‌ಲೈನ್ ಬೆಟ್ಟಿಂಗ್ ಕಂಪನಿ ನಡೆಸುತ್ತಿದ್ದ ಆರೋಪದ ಪ್ರಕರಣಕ್ಕೆ ಸಂಬಂಧಿಸಿದಂತೆ ಚಿತ್ರದುರ್ಗದ ಕಾಂಗ್ರೆಸ್ ಶಾಸಕ ಕೆ.ಸಿ.ವೀರೇಂದ್ರ (ಪಪ್ಪಿ) ಅವರನ್ನು ಜಾರಿ ನಿರ್ದೇಶನಾಲಯದ (ಇಡಿ) ಅಧಿಕಾರಿಗಳು ಸಿಕ್ಕಿಂನ ಗ್ಯಾಂಗ್ಟಕ್‌ನಲ್ಲಿ ಶನಿವಾರ ಬಂಧಿಸಿದ್ದಾರೆ.





ಚಿತ್ರದುರ್ಗ ಜಿಲ್ಲೆಯ ಶಾಸಕ ಶ್ರೀ ಕೆ.ಸಿ. ವೀರೇಂದ್ರ ಮತ್ತು ಇತರರ ವಿರುದ್ಧ ಅಕ್ರಮ ಆನ್‌ಲೈನ್ ಮತ್ತು ಆಫ್‌ಲೈನ್ ಬೆಟ್ಟಿಂಗ್ ಪ್ರಕರಣದಲ್ಲಿ ಗ್ಯಾಂಗ್ಟಾಕ್, ಚಿತ್ರದುರ್ಗ ಜಿಲ್ಲೆ, ಬೆಂಗಳೂರು ನಗರ, ಹುಬ್ಬಳ್ಳಿ, ಜೋಧ್‌ಪುರ, ಮುಂಬೈ ಮತ್ತು ಗೋವಾ ಸೇರಿದಂತೆ ಭಾರತದಾದ್ಯಂತ 31 ಸ್ಥಳಗಳಲ್ಲಿ (ಪಪ್ಪೀಸ್ ಕ್ಯಾಸಿನೊ ಗೋಲ್ಡ್, ಓಷನ್ ರಿವರ್ಸ್ ಕ್ಯಾಸಿನೊ, ಪಪ್ಪೀಸ್ ಕ್ಯಾಸಿನೊ ಪ್ರೈಡ್, ಓಷನ್ 7 ಕ್ಯಾಸಿನೊ, ಬಿಗ್ ಡ್ಯಾಡಿ ಕ್ಯಾಸಿನೊ ಸೇರಿದಂತೆ 5 ಕ್ಯಾಸಿನೊಗಳು ಸೇರಿದಂತೆ) ಬೆಂಗಳೂರಿನ ಇಡಿ 22-08-2025 ಮತ್ತು 23.08.2025 ರಂದು ಶೋಧ ಕಾರ್ಯಾಚರಣೆ ನಡೆಸಿದೆ. ಶೋಧ ಕಾರ್ಯಾಚರಣೆಯ ಸಮಯದಲ್ಲಿ, ವಿವಿಧ ಅಪರಾಧ ದಾಖಲೆಗಳು, 12 ಕೋಟಿ ರೂ. ನಗದು (ಅಂದಾಜು), ಇದರಲ್ಲಿ (ಅಂದಾಜು) 1 ಕೋಟಿ ವಿದೇಶಿ ಕರೆನ್ಸಿ, 6 ಕೋಟಿ ರೂ. ಮೌಲ್ಯದ ಚಿನ್ನಾಭರಣ (ಅಂದಾಜು), ಸುಮಾರು 10 ಕೆಜಿ ಬೆಳ್ಳಿ ವಸ್ತುಗಳು, ಆಸ್ತಿ ಸಂಬಂಧಿತ ದಾಖಲೆಗಳು ಮತ್ತು ನಾಲ್ಕು ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ, ಇದಲ್ಲದೆ, 17 ಬ್ಯಾಂಕ್ ಖಾತೆಗಳು ಮತ್ತು 2 ಬ್ಯಾಂಕ್ ಲಾಕರ್‌ಗಳನ್ನು ಸಹ ಸ್ಥಗಿತಗೊಳಿಸಲಾಗಿದೆ. ಶ್ರೀ. ಕೆ ಸಿ ವೀರೇಂದ್ರ ಅವರನ್ನು 23.08.2025 ರಂದು ಗ್ಯಾಂಗ್ ಟಾಕ್‌ನಿಂದ ಬಂಧಿಸಿ ಸಿಕ್ಕಿಂನ ಗ್ಯಾಂಗ್‌ಟಾಕ್‌ನ ನ್ಯಾಯಾಂಗ ಮ್ಯಾಜಿಸ್ಟ್ರೇಟ್ ಮುಂದೆ ಹಾಜರುಪಡಿಸಲಾಯಿತು ಮತ್ತು ಬೆಂಗಳೂರಿನ ನ್ಯಾಯವ್ಯಾಪ್ತಿಯ ನ್ಯಾಯಾಲಯದ ಮುಂದೆ ಹಾಜರುಪಡಿಸಲು ಟ್ರಾನ್ಸಿಟ್ ರಿಮಾಂಡ್ ಪಡೆಯಲಾಗಿದೆ.

# ಸಮಾಜ ವಿರೋಧಿಗಳಿಗೆ ಕಠಿಣ ಶಿಕ್ಷೆ ನೀಡಿ: ರಾಜು ಕುರಡಗಿ ಆಗ್ರಹ

• ಉದಯವಾಹಿನಿ, ಗದಗ

ಹಿಂದೂಗಳ ಧಾರ್ಮಿಕ ಶ್ರದ್ಧಾ ಕೇಂದ್ರಗಳನ್ನು ಅಪಮಾನಿಸುತ್ತಿರುವ ಸಮಾಜವಿರೋಧಿ ಶಕ್ತಿಗಳನ್ನು ಪತ್ತೆ ಹಚ್ಚಿ, ಅವರನ್ನು ಕಠಿಣ ಶಿಕ್ಷೆಗೆ ಒಳಪಡಿಸಬೇಕು ಎಂದು ಬಿಜೆಪಿ ಗದಗ ಜಿಲ್ಲಾ ಘಟಕದ ಅಧ್ಯಕ್ಷ ರಾಜು ಕುರಡಗಿ ಆಗ್ರಹಿಸಿದರು. ಧರ್ಮಸ್ಥಳದ ಹೆಸರಿಗೆ ಅಪಪ್ರಚಾರ ಮಾಡುತ್ತಿದ್ದಾರೆ ಎಂದು ಆರೋಪಿಸಿ ಪಕ್ಷದ ಗದಗ ನಗರ ಮಂಡಲ, ಗ್ರಾಮೀಣ ಮಂಡಲದ ವತಿಯಿಂದ ನಗರದ ಗಾಂಧಿ ವೃತ್ತದಲ್ಲಿ ನಡೆದ ಪ್ರತಿಭಟನೆಯ ನೇತೃತ್ವ ವಹಿಸಿ ಮಾತನಾಡಿದರು. ಧರ್ಮಸ್ಥಳ ಕ್ಷೇತ್ರಕ್ಕೆ ಕರ್ನಾಟಕವಷ್ಟೇ ಅಲ್ಲದೇ ದೇಶದಾದ್ಯಂತ ಕೋಟ್ಯಂತರ ಭಕ್ತರು ನಡೆದುಕೊಳ್ಳುತ್ತಾರೆ. ಇದು ಹಿಂದೂಗಳ ಪ್ರಮುಖ ಧಾರ್ಮಿಕ ಶ್ರದ್ಧಾ ಕೇಂದ್ರ.



ಉದಯವಾಹಿನಿ ಚಿತ್ರ


ಈ ಕಾರಣಕ್ಕೆ ಹಿಂದೂಗಳ ಧಾರ್ಮಿಕ ಭಾವನೆಯನ್ನು ಅಪಮಾನಿಸುವ ದುರುದ್ದೇಶದಿಂದ ಕೆಲವು ಕಿಡಿಗೇಡಿಗಳು ಹಾಗೂ ಎಡಪಂಥೀಯರು ಅಪಪ್ರಚಾರ ಮಾಡುತ್ತಿದ್ದಾರೆ. ಧರ್ಮಸ್ಥಳವನ್ನು ಅತ್ಯಂತ ನಿಕೃಷ್ಟವಾಗಿ ಬಿಂಬಿಸುವ ಹುನ್ನಾರ ನಡೆಸಿದ್ದಾರೆ ಎಂದು ಕಿಡಿಕಾರಿದರು. ಅನಾಮಿಕ ವ್ಯಕ್ತಿಯೊಬ್ಬ ಯಾವುದೇ ಆಧಾರಗಳಿಲ್ಲದೇ ಮಾಡಿದ ಆರೋಪಕ್ಕೆ ರಾಜ್ಯ ಸರ್ಕಾರ ಲಕ್ಷಾಂತರ ರೂಪಾಯಿಗಳನ್ನು ವ್ಯಯಿಸಿ. ಆತ ಹೇಳಿದ ಕಡೆಗಳೆಲ್ಲೆಲ್ಲ ಗುಂಡಿಗಳನ್ನು ತೋಡಿದೆ. ಆದರೂ ಏನೂ ಸಿಗಲಿಲ್ಲ. ಈ ಅನಾಮಿಕ ವ್ಯಕ್ತಿಯ ಹಿಂದಿರುವವರು ಯಾರು? ಅವರು ಮಾಡುತ್ತಿರುವ ಸಂಚುಗಳೇನು ಎಂಬುದನ್ನು ಸರ್ಕಾರ ಬಹಿರಂಗಪಡಿಸಬೇಕು ಎಂದು ಒತ್ತಾಯಿಸಿದರು.

> **ರಾಜ್ಯ ಕಾಂಗ್ರೆಸ್ ಸರ್ಕಾರ ಹಿಂದೂಗಳ ಭಾವನೆಗೆ ಧಕ್ಕೆ ತರುವ ಹುನ್ನಾರವನ್ನು ನಿರಂತರವಾಗಿ ಮಾಡುತ್ತ ಬಂದಿದೆ. ಇದು ಖಂಡನೀಯ.**
> **-ಲಿಂಗರಾಜ ಪಾಟೀಲ**
> **ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ**

# ಅಮರೇಶ್ವರ ಮಹಾರಾಜರ ಮನವೊಲಿಕೆ ಸಫಲ

• ಉದಯವಾಹಿನಿ, ಅಥಣಿ

ಆಧ್ಯಾತ್ಮಿಕ ಪಂಥವೊಂದರ ಮಾರುಹೋಗಿ ಸೆ. 8ರಂದು ದೇಹತ್ಯಾಗಕ್ಕೆ ಸಿದ್ಧವಾಗಿದ್ದ ತಾಲ್ಲೂಕಿನ ಅನಂತಪುರ ಗ್ರಾಮದ ತುಕಾರಾಮ ಇರಕರ ಕುಟುಂಬದ ನಾಲ್ವರು ಸದಸ್ಯರು, ಅನ್ಯರಾಜ್ಯಗಳ ಐವರ ಮನವೊಲಿಸುವಲ್ಲಿ ಕವಲಗುಡ್ಡದ ಅಮರೇಶ್ವರ ಮಹಾರಾಜರು, ಚಿಕ್ಕೋಡಿ ಉಪವಿಭಾಗಾಧಿಕಾರಿ ಸುಭಾಷ ಸಂಪಗಾವಿ ಯಶಸ್ವಿ ಆಗಿದ್ದಾರೆ. ಸಂತ ಹರಿಯಾಣದ ಬಾಬಾ ರಾಮಪಾಲ್ ಅವರ ಪ್ರವಚನದಿಂದ ಪ್ರೇರಣೆಗೊಂಡಿದ್ದ ತುಕಾರಾಮ ಇರಕರ, ಅವರ ಪತ್ನಿ ಸಾವಿತ್ರಿ, ಪುತ್ರ ರಮೇಶ, ಸೊಸೆ ವೈಷ್ಣವಿ ಮತ್ತು ಬೇರೆ ರಾಜ್ಯಗಳ ಐವರು, ದೇಹತ್ಯಾಗಕ್ಕೆ ನಿರ್ಧರಿಸಿದ್ದರು. ನಾವು ಇಲ್ಲಿ ಇರಲ್ಲ. ಬಾಬಾ ನಮ್ಮನ್ನು ಕೈಲಾಸಕ್ಕೆ ಕರೆದೊಯ್ಯುವರು. ನಮಗೆ ಮೋಕ್ಷ ಕೊಡಿಸುವರು ಎಂದು ಘೋಷಿಸಿದ್ದರು. ಈ ಸುದ್ದಿ ಜಿಲ್ಲೆಯಾದ್ಯಂತ ಹಬ್ಬಿದ ಹಿನ್ನೆಲೆಯಲ್ಲಿ ಅಮರೇಶ್ವರ ಮಹಾರಾಜರು, ಸುಭಾಷ ಸಂಪಗಾವಿ ಅವರು, ಶನಿವಾರ ಅನಂತಪುರಕ್ಕೆ ಹೋಗಿ ಆಪ್ತ ಸಮಾಲೋಚನೆ ನಡೆಸಿದರು.



ಉದಯವಾಹಿನಿ ಚಿತ್ರ

**ದೇಹತ್ಯಾಗ ನಿರ್ಧಾರದಿಂದ ಹಿಂದಕ್ಕೆ ಸರಿದ ಜನರು**

ಬಾಬಾ ರಾಮಪಾಲ್ ಮಹಾರಾಷ್ಟ್ರದಲ್ಲಿ ಪೊಲೀಸರ ವಶದಲ್ಲಿದ್ದಾರೆ. ಯಾವುದೇ ಮೌಢ್ಯಕ್ಕೆ ಬಲಿಯಾಗದೆ, ಉತ್ತಮ ಜೀವನ ಸಾಗಿಸಿ ಎಂದು ತಿಳಿವಳಿಕೆ ಹೇಳಿದರು. ದೇಹತ್ಯಾಗಕ್ಕೆ ಮುಂದಾದವರು, ತಮ್ಮ ನಿರ್ಧಾರ ಬದಲಿಸಿದರು.

# ಮಹೇಶ್ ಶೆಟ್ಟಿ ತಿಮರೋಡಿಗೆ ಜಾಮೀನು ಮಂಜೂರು, ಷರತ್ತುಬದ್ಧ ಬೇಲ್ ನೀಡಿದ ನ್ಯಾಯಾಲಯ

# ಆರೋಪದ ಮೇಲೆ ಬಂಧಿತರಾಗಿದ್ದ ಸೌಜನ್ಯ ಪರ ಹೋರಾಟಗಾರ

• ಉದಯವಾಹಿನಿ, ಉಡುಪಿ

ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಬಿ.ಎಲ್. ಸಂತೋಷ್ ಅವರ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ ಆರೋಪದ ಮೇಲೆ ಬಂಧಿತರಾಗಿದ್ದ, ಸೌಜನ್ಯ ಪರ ಹೋರಾಟಗಾರ ಹಾಗೂ ರಾಷ್ಟ್ರೀಯ ಹಿಂದೂ ಜಾಗರಣ ವೇದಿಕೆ ನಾಯಕ ಮಹೇಶ್ ಶೆಟ್ಟಿ ತಿಮರೋಡಿ ಅವರಿಗೆ ಉಡುಪಿಯ ನ್ಯಾಯಾಲಯವು ಶನಿವಾರ ಷರತ್ತುಬದ್ಧ ಜಾಮೀನು ಮಂಜೂರು ಮಾಡಿದೆ. ದಿನವಿಡೀ ನಡೆದ ನಾಟಕೀಯ ಬೆಳವಣಿಗೆಗಳ ಬಳಿಕ, ಉಡುಪಿಯ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು, ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದ ನ್ಯಾಯಾಧೀಶರಾದ ನಾಗೇಶ್ ಎನ್.ಎ. ಅವರು ಈ ಆದೇಶವನ್ನು ಹೊರಡಿಸಿದ್ದಾರೆ.

ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಬಿ.ಎಲ್. ಸಂತೋಷ್ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ ಆರೋಪದ ಮೇಲೆ ಮಹೇಶ್ ಶೆಟ್ಟಿ ತಿಮರೋಡಿ ಅವರು ಬಂಧನಕ್ಕೊಳಗಾಗಿದ್ದರು. ಇದೀಗ ಸೌಜನ್ಯ ಪರ ಹೋರಾಟಗಾರ ತಿಮರೋಡಿ ಅವರಿಗೆ ಉಡುಪಿ ನ್ಯಾಯಾಲಯವು ಶನಿವಾರ ಷರತ್ತುಬದ್ಧ ಜಾಮೀನು ಮಂಜೂರು ಮಾಡಿದೆ. ದಿನವಿಡೀ ನಡೆದ ವಿಚಾರಣೆಯ ನಂತರ ನ್ಯಾಯಾಧೀಶರು ಈ ಆದೇಶ ಹೊರಡಿಸಿದ್ದು, ನ್ಯಾಯಾಲಯದಲ್ಲಿ ವಾದ ವಿವಾದಗಳನ್ನು ಆಲಿಸಿದ ಬಳಿಕ ಜಾಮೀನು ನೀಡಲಾಗಿದೆ.

**ಷರತ್ತು ವಿಧಿಸಿ ಜಾಮೀನು ಮಂಜೂರು**

**ನ್ಯಾಯಾಲಯದಲ್ಲಿ ನಡೆದದ್ದೇನು?:** ಶನಿವಾರ ಬೆಳಿಗ್ಗೆ 11:30ಕ್ಕೆ ತಿಮರೋಡಿ ಅವರ ಜಾಮೀನು ಅರ್ಜಿಯನ್ನು ವಿಚಾರಣೆಗೆ ಕೈಗೆತ್ತಿಕೊಳ್ಳಲಾಯಿತು. ಈ ವೇಳೆ, ಆಕ್ಷೇಪಣೆ ಸಲ್ಲಿಸಲು ಸರ್ಕಾರಿ ಅಭಿಯೋಜಕರು ಕಾಲಾವಕಾಶ ಕೋರಿದರು. ಇದೇ ವೇಳೆ ದೂರುದಾರರ ಪರವಾಗಿ ವಕೀಲ ಶಂಭು ಶರ್ಮಾ ಅವರು ವಕಾಲತ್ತು ಸಲ್ಲಿಸಿ, ಅಭಿಯೋಜನೆಗೆ ಸಹಕರಿಸಲು ಅನುಮತಿ ಕೇಳಿದರು. ಇದನ್ನು ಆರೋಪಿ ಪರ ವಕೀಲರು ಆಕ್ಷೇಪ ವ್ಯಕ್ತಪಡಿಸಿದಾಗ, ನ್ಯಾಯಾಲಯವು ವಿಚಾರಣೆಯನ್ನು ಮಧ್ಯಾಹ್ನ 3 ಗಂಟೆಗೆ ಮುಂದೂಡಿತು.



ಉದಯವಾಹಿನಿ ಚಿತ್ರ

ಈ ವೇಳೆ, ಕಸ್ಟಡಿಗೆ ಕೋರಿ ಅರ್ಜಿ ಸಲ್ಲಿಸಲು ವಿಳಂಬ ಮಾಡಿದ್ದಕ್ಕೆ ಪೊಲೀಸರನ್ನು ತೀವ್ರ ತರಾಟೆಗೆ ತೆಗೆದುಕೊಂಡ ನ್ಯಾಯಾಧೀಶರು, ನಿಮ್ಮ ಕಡೆಯಲ್ಲೇ ವೈಫಲ್ಯಗಳಿರುವಾಗ ಮತ್ತೆ ಕಸ್ಟಡಿಗೆ ಏಕೆ ಬೇಕು? ಎಂದು ಖಾರವಾಗಿ ಪ್ರಶ್ನಿಸಿದರು.

ಬಳಿಕ 3.30ಕ್ಕೆ ಮತ್ತೆ ಕೋರ್ಟ್‌ಗೆ ಹಾಜರುಪಡಿಸುವಂತೆ ಸೂಚನೆ ನೀಡಿ ವಿಚಾರಣೆಯನ್ನು ಮುಂದೂಡಿದರು. ಬಳಿಕ, ಮತ್ತೆ ನ್ಯಾಯಾಲಯಕ್ಕೆ ಹಾಜರುಪಡಿಸಲಾಯಿತು. ಅಂತಿಮವಾಗಿ, ವಾದ-ವಿವಾದಗಳನ್ನು ಆಲಿಸಿದ ನ್ಯಾಯಾಧೀಶರು ಮಹೇಶ್ ಶೆಟ್ಟಿ ತಿಮರೋಡಿ ಅವರಿಗೆ ಷರತ್ತುಗಳನ್ನು ವಿಧಿಸಿ ಜಾಮೀನು ಮಂಜೂರು ಮಾಡಿ ಆದೇಶ ಹೊರಡಿಸಿದರು.

### ಪೊಲೀಸರಿಗೆ ನ್ಯಾಯಾಧೀಶರ ಚಾಟಿ

**ಇದಾದ ಬಳಿಕ ದೂರುದಾರ ರಾಜೀವ್ ಕುಲಾಲ್ ಪರವಾಗಿ ಅಭಿಯೋಜನೆಗೆ ಸಹಕರಿಸುವ ನಿಟ್ಟಿನಲ್ಲಿ ವಾದ ಮಂಡಿಸಲು ಹೈಕೋರ್ಟ್‌ನಿಂದ ವಕೀಲರ ಆಗಮಿಸಿತು. ಈ ಸಂದರ್ಭದಲ್ಲಿ, ಮಹೇಶ್ ಶೆಟ್ಟಿ ಅವರನ್ನು ತನಿಖೆಗಾಗಿ ನಾಲ್ಕು ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ನೀಡುವಂತೆ ಸರ್ಕಾರಿ ಅಭಿಯೋಜಕರು ಮನವಿ ಮಾಡಿದರು. ಹೀಗಾಗಿ ಮಧ್ಯಾಹ್ನ 1 ಗಂಟೆಯ ಒಳಗೆ ತಿಮರೋಡಿ ಅವರನ್ನು ನ್ಯಾಯಾಲಯಕ್ಕೆ ಹಾಜರುಪಡಿಸುವಂತೆ ನ್ಯಾಯಾಧೀಶರು ಪೊಲೀಸರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಅದರಂತೆ, ಬ್ರಹ್ಮಾವರ ಪೊಲೀಸ್ ಉಪನಿರೀಕ್ಷಕ ಅಶೋಕ್ ಮಾಳಬಗಿ ನೇತೃತ್ವದ ತಂಡವು ಬಿಗಿ ಬಂದೋಬಸ್ತ್‌ನಲ್ಲಿ ತಿಮರೋಡಿ ಅವರನ್ನು ನ್ಯಾಯಾಲಯಕ್ಕೆ ಕರೆತಂದಿತು.**

ಉದಯ ವಾಹಿನಿ
ಪ್ರಾದೇಶಿಕ
ಭಾನುವಾರ 24 ಆಗಸ್ಟ್ 2025
07

# ಅಕ್ರಮ ಬೆಟ್ಟಿಂಗ್ ಪ್ರಕರಣ: ಕೈ ಶಾಸಕ ವೀರೇಂದ್ರ ಪಪ್ಪಿ ಬಂಧನ

## 12 ಕೋಟಿ ರೂ. ನಗದು, 6 ಕೋಟಿ ಮೌಲ್ಯದ ಚಿನ್ನ ವಶ, ವಿರೇಂದ್ರ ಪಪ್ಪಿ ಅವರಿಗೆ ಸಂಬಂಧಿಸಿದ್ದು ಎನ್ನಲಾದ 30 ಕಟ್ಟಡಗಳ ಮೇಲೆ ದಾಳಿ

**ನವದೆಹಲಿ:** ಅಕ್ರಮ ಆನ್‌ಲೈನ್, ಬೆಟ್ಟಿಂಗ್‌ನಲ್ಲಿ ಭಾಗಿಯಾಗಿರುವ ಆರೋಪದ ಮೇಲೆ ಕರ್ನಾಟಕದ ಚಿತ್ರದುರ್ಗದ ಕಾಂಗ್ರೆಸ್ ಶಾಸಕ ಕೆ. ಸಿ. ವೀರೇಂದ್ರ ಪಪ್ಪಿ ಅವರನ್ನು ಜಾರಿ ನಿರ್ದೇಶನಾಲಯ ಶನಿವಾರ ಗ್ಯಾಂಗ್ಟಾಕ್‌ನಲ್ಲಿ ಬಂಧಿಸಿದೆ. ಇದೇ ವೇಳೆ ದಾಳಿಯ ವೇಳೆ ಭಾರೀ ಪ್ರಮಾಣದ ನಗದು, ಚಿನ್ನಾಭರಣಗಳು ಪತ್ತೆಯಾಗಿದೆ.

**12 ಕೋಟಿ ರೂ.ನಗದು ವಶ:** ವಿರೇಂದ್ರ ಪಪ್ಪಿ ತನ್ನ ಸಹಚರರೊಂದಿಗೆ ಸಿಕ್ಕಿಂನ ಗ್ಯಾಂಗ್ಟಾಕ್‌ಗೆ ಪ್ರಯಾಣಿಸಿದ್ದರು. ಅಲ್ಲಿ ಅವರು ಕ್ಯಾಸಿನೊಗಾಗಿ ಒಂದು ತುಂಡು ಭೂಮಿಯನ್ನು ಗುತ್ತಿಗೆಗೆ ಪಡೆಯುತ್ತಿದ್ದರು ಎಂದು ಆರೋಪಿಸಲಾಗಿದೆ. ಅಕ್ರಮ ಹಣ ವರ್ಗಾವಣೆ ತಡೆ ಸಂಸ್ಥೆಯು ವಿರೇಂದ್ರ ಪಪ್ಪಿ ಅವರಿಗೆ ಸಂಬಂಧಿಸಿದ್ದು ಎನ್ನಲಾದ 30 ಕಟ್ಟಡಗಳ ಮೇಲೆ ದಾಳಿ ನಡೆಸಿದ ಒಂದು ದಿನದ ನಂತರ, ಸುಮಾರು ಒಂದು ಕೋಟಿ ವಿದೇಶಿ ಕರೆನ್ಸಿ, ಸುಮಾರು 6 ಕೋಟಿ ಮೌಲ್ಯದ ಚಿನ್ನದ ಆಭರಣಗಳು ಸುಮಾರು 10 ಕೆಜಿ ತೂಕದ ಬೆಳ್ಳಿ ವಸ್ತುಗಳು, ನಾಲ್ಕು ವಾಹನಗಳು ಸೇರಿದಂತೆ 12 ಕೋಟಿ ನಗದು ವಶಪಡಿಸಿಕೊಳ್ಳಲಾಗಿದೆ.

ಕೇಂದ್ರ ತನಿಖಾ ಏಜೆನ್ಸಿಯು 17 ಬ್ಯಾಂಕ್ ಖಾತೆಗಳು, ಎರಡು ಬ್ಯಾಂಕ್ ಲಾಕರ್‌ಗಳನ್ನು ಸಹ ಸ್ಥಗಿತಗೊಳಿಸಿದೆ. ವೀರೇಂದ್ರ ಪಪ್ಪಿ ಅವರ ಸಹೋದರ ಕೆ. ಸಿ. ನಾಗರಾಜ್, ಅವರ ಮಗ ಪೃಥ್ವಿ ಎನ್. ರಾಜ್ ಅವರ ಮನೆಗಳಿಂದ ಆಸ್ತಿಗೆ ಸಂಬಂಧಿಸಿದ ಅನೇಕ



ಅಕ್ರಮ ಹಣ ವರ್ಗಾವಣೆ ತಡೆ

ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದೆ. ಇತರ ಸಹಚರರಾದ ಸಹೋದರ ಕೆ. ಸಿ. ತಿಪ್ಪೆಸ್ವಾಮಿ, ಪೃಥ್ವಿ ಎನ್. ರಾಜ್ ಅವರು ದುಬೈಯಿಂದ ಆನ್‌ಲೈನ್ ಗೇಮಿಂಗ್ ಕಾರ್ಯಾಚರಣೆಗಳನ್ನು ನಿರ್ವಹಿಸುತ್ತಿದ್ದರು ಎಂದು ಆರೋಪಿಸಲಾಗಿದೆ.

ದಾಳಿಯ ವೇಳೆ ಭಾರೀ ಪ್ರಮಾಣದ ಹಣ, ಚಿನ್ನಾಭರಣಗಳು ಪತ್ತೆಯಾಗಿರುವುದು ಪ್ರಕರಣದ ತೀವ್ರತೆಯನ್ನು ಸೂಚಿಸುತ್ತಿದೆ. ಬೆಟ್ಟಿಂಗ್ ದಂಧೆಯಿಂದ ಸಂಪಾದಿಸಿದ ಆದಾಯವನ್ನು ಮತ್ತಷ್ಟು ಗುರುತಿಸಲು ವೀರೇಂದ್ರನನ್ನು ಬಂಧಿಸಿ ಗ್ಯಾಂಗ್ಟಾಕ್ ನ್ಯಾಯಾಂಗ ಮ್ಯಾಜಿಸ್ಟ್ರೇಟ್ ಮುಂದೆ ಹಾಜರುಪಡಿಸಲಾಯಿಗಿದೆ.

**ವಿವಿಧ ಹೆಸರಿನಲ್ಲಿ ಗೇಮಿಂಗ್, ಬೆಟ್ಟಿಂಗ್ ದಂಧೆ:** ಗೋವಾದಲ್ಲಿ, ಅಕ್ರಮ ಹಣ ವರ್ಗಾವಣೆ ಪ್ರಕರಣದ ಭಾಗವಾಗಿ ವಿರೇಂದ್ರ ಪಪ್ಪಿಗೆ ಸಂಬಂಧಿಸಿದ ಐದು ಕ್ಯಾಸಿನೊಗಳಾದ ಪಪ್ಪೀಸ್ ಕ್ಯಾಸಿನೊ ಗೋಲ್ಡ್, ಓಷನ್ ರಿವರ್ಸ್ ಕ್ಯಾಸಿನೊ, ಪಪ್ಪೀಸ್ ಕ್ಯಾಸಿನೊ ಪ್ರೈಡ್, ಓಷನ್ 7 ಕ್ಯಾಸಿನೊ, ಬಿಗ್ ಡ್ಯಾಡಿ ಕ್ಯಾಸಿನೊಗಳಲ್ಲಿ ಇಡಿ ಶೋಧ ನಡೆಸಿದೆ.

ಆರೋಪಿತ ಕೆ. ಸಿ. ವೀರೇಂದ್ರ ಪಪ್ಪಿ ಅವರು ಕಿಂಗ್ 567, ರಾಜಾ 567, ಪಪ್ಪೀಸ್ 003 ಮತ್ತು ರತ್ನಾ ಗೇಮಿಂಗ್ ನಂತಹ ಹಲವಾರು ಆನ್‌ಲೈನ್ ಬೆಟ್ಟಿಂಗ್ ಸೈಟ್‌ಗಳನ್ನು ನಡೆಸುತ್ತಿರುವುದು ಶೋಧ ಕಾರ್ಯಾಚರಣೆಯ ವೇಳೆ ಬಹಿರಂಗವಾಗಿದೆ. ಇದಲ್ಲದೆ, ಆರೋಪಿಯ ಸಹೋದರ ಕೆ. ಸಿ. ತಿಪ್ಪೇಸ್ವಾಮಿ ದುಬೈಯಿಂದ ಡೈಮಂಡ್ ಸಾಫ್ಟೆಕ್, ಟಿಆರ್‌ಎಸ್ ಟೆಕ್ನಾಲಜೀಸ್, ಪ್ರೈಮ್ ಟೆಕ್ನಾಲಜಿ ಎಂಬ ಮೂರು ವ್ಯಾಪಾರ ಘಟಕಗಳನ್ನು ನಿರ್ವಹಿಸುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ. ಈ ಘಟಕಗಳು ಕೆ. ಸಿ. ವೀರೇಂದ್ರ ಅವರ ಕಾಲ್ ಸೆಂಟರ್‌ಗಳು ಮತ್ತು ಗೇಮಿಂಗ್ ವ್ಯವಹಾರಕ್ಕೆ ಸಂಬಂಧಿಸಿವೆ ಎನ್ನಲಾಗಿದೆ.

### 17 ಬ್ಯಾಂಕ್ ಖಾತೆಗಳನ್ನು ಸ್ಥಗಿತ

ಕ್ಯಾಸಿನೊವೊಂದಕ್ಕೆ ಭೂಮಿಯನ್ನು ಗುತ್ತಿಗೆಗೆ ನೀಡಿದ ಆರೋಪದ ಮೇಲೆ ಕರ್ನಾಟಕದ ಚಿತ್ರದುರ್ಗದ ಕಾಂಗ್ರೆಸ್ ಶಾಸಕ ಕೆ. ಸಿ. ವೀರೇಂದ್ರ ಅವರನ್ನು ಜಾರಿ ನಿರ್ದೇಶನಾಲಯ (ಇಡಿ) ಸಿಕ್ಕಿಂ ರಾಜ್ಯದ ಗ್ಯಾಂಗ್ಟಾಕ್‌ನಲ್ಲಿ ಬಂಧಿಸಿದೆ. ಇದೇ ವೇಳೆ ಇಡಿಯು ವೀರೇಂದ್ರ ಪಪ್ಪಿ ಅವರಿಗೆ ಸಂಬಂಧಿಸಿದ 30 ಆಸ್ತಿಗಳ ಮೇಲೆ ದಾಳಿ ನಡೆಸಿದ್ದು, ವಿದೇಶಿ ಕರೆನ್ಸಿ, 6 ಕೋಟಿ ಮೌಲ್ಯದ ಚಿನ್ನದ ಆಭರಣಗಳು, 10 ಕೆಜಿ ಬೆಳ್ಳಿ ಸೇರಿದಂತೆ 12 ಕೋಟಿ ನಗದು ಪತ್ತೆಯಾಗಿದೆ. ಇಡಿ 17 ಬ್ಯಾಂಕ್ ಖಾತೆಗಳನ್ನು ಸ್ಥಗಿತಗೊಳಿಸಿದೆ, ಆಸ್ತಿ ದಾಖಲೆಗಳನ್ನು ವಶಪಡಿಸಿಕೊಂಡಿದೆ. ಈ ಪ್ರಕರಣ ಈಗ ಭಾರೀ ಸಂಚಲನ ಮೂಡಿಸಿದೆ.

- ಅಕ್ರಮ ಆನ್‌ಲೈನ್, ಬೆಟ್ಟಿಂಗ್‌ನಲ್ಲಿ ಭಾಗವಹಿಸುವ ಆರೋಪಗಳ ಹಿನ್ನೆಲೆಯಲ್ಲಿ ಚಿತ್ರದುರ್ಗದ ಕಾಂಗ್ರೆಸ್ ಶಾಸಕ ಕೆ. ಸಿ. ವೀರೇಂದ್ರ ಪಪ್ಪಿ ಅವರನ್ನು ಇಡಿ ಸಿಕ್ಕಿಂನ ಗ್ಯಾಂಗ್ಟಾಕ್‌ನಲ್ಲಿ ಬಂಧಿಸಿದೆ.
- ದಾಳಿಯ ವೇಳೆ 12 ಕೋಟಿ ರೂಪಾಯಿಯ ನಗದು, 6 ಕೋಟಿ ರೂಪಾಯಿಯ ಚಿನ್ನಾಭರಣಗಳು, 10 ಕೆಜಿ ಬೆಳ್ಳಿಯ ವಸ್ತುಗಳು ವಶಪಡಿಸಿಕೊಳ್ಳಲಾಗಿದೆ.
- ಕೆ. ಸಿ. ವೀರೇಂದ್ರ ಪಪ್ಪಿ ಅವರ ಬಂಧನದಿಂದ 17 ಬ್ಯಾಂಕ್ ಖಾತೆಗಳು ಮತ್ತು 2 ಬ್ಯಾಂಕ್ ಲಾಕರ್ಗಳನ್ನು ಸ್ಥಗಿತಗೊಳಿಸಲಾಗಿದೆ, ಅವರ ಸಂಬಂಧಿಕರ ಮನೆಗಳಿಂದ ಅನೇಕ ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದೆ.

# ಖನಿಜ ವಿನಿಮಯ ಕೇಂದ್ರ ತೆರೆಯಲು ಸರ್ಕಾರ ಸಜ್ಜು: ಕಲ್ಲಿದ್ದಲು ಸಚಿವ ಕಿಶನ್ ರೆಡ್ಡಿ



**ಹೈದರಾಬಾದ್:** ಕೇಂದ್ರ ಸರ್ಕಾರವು ಶೀಘ್ರದಲ್ಲೇ ಖನಿಜ ವಿನಿಮಯ ಕೇಂದ್ರ ಸ್ಥಾಪಿಸಲಿದೆ ಎಂದು ಕೇಂದ್ರ ಕಲ್ಲಿದ್ದಲು ಮತ್ತು ಗಣಿ ಸಚಿವ ಜಿ. ಕಿಶನ್ ರೆಡ್ಡಿ ಶನಿವಾರ ಹೇಳಿದ್ದಾರೆ. ಮಾಧ್ಯಮದವರೊಂದಿಗೆ ಮಾತನಾಡಿರುವ ಅವರು, ಭಾರತೀಯ ಷೇರುಪೇಟೆ ನಿಯಂತ್ರಣ ಮಂಡಳಿಯ (ಸೆಬಿ) ನಿಯಮಗಳಿಗೆ ಅನುಸಾರವಾಗಿ ಖನಿಜ ವಿನಿಮಯ ಕೇಂದ್ರ ಸ್ಥಾಪಿಸಲಾಗುವುದು ಎಂದು ಮಾಹಿತಿ ನೀಡಿದ್ದಾರೆ. ಲಂಡನ್ ಲೋಹ ವಿನಿಮಯ ಕೇಂದ್ರದ ಮಾದರಿಯಲ್ಲಿಯೇ ಭಾರತದಲ್ಲಿ ಖನಿಜ ವಿನಿಮಯ ಕೇಂದ್ರ ಸ್ಥಾಪಿಸಲಿದ್ದೇವೆ ಎಂದು ಅವರು ತಿಳಿಸಿದ್ದಾರೆ.

ಪ್ರಸ್ತಾವಿತ ಕೇಂದ್ರವು ಕೈಗಾರಿಕೆಗಳು, ವ್ಯಾಪಾರಿಗಳು ಮತ್ತು ಇತರ ಪಾಲುದಾರರು ಉತ್ತಮ ಬೆಲೆಗೆ ಖನಿಜಗಳನ್ನು ಖರೀದಿಸಲು ನೆರವಾಗಬಹುದು ಎಂದು ನಿರೀಕ್ಷಿಸಲಾಗಿದೆ ಎಂದಿದ್ದಾರೆ. ಅಮೆರಿಕದ ಸುಂಕ ನೀತಿಯಿಂದಾಗಿ ದೇಶೀಯ ಕಲ್ಲಿದ್ದಲು ಉದ್ಯಮದ ಮೇಲೆ ಪರಿಣಾಮ ಉಂಟಾಗಿದೆಯೇ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವ, ಅಷ್ಟೇನೂ ಪರಿಣಾಮವಾಗಿಲ್ಲ. ಭಾರತದಿಂದ ಅಮೆರಿಕಕ್ಕೆ ಅಲ್ಪ ಪ್ರಮಾಣದಲ್ಲಿ ಅಲ್ಯೂಮಿನಿಯಂ ರಫ್ತಾಗುತ್ತದೆ ಎಂದು ತಿಳಿಸಿದ್ದಾರೆ.

# ಬಸ್ ಪಲ್ಟಿ: ಭಾರತೀಯರು ಸೇರಿ ಐವರ ಸಾವು

## ನ್ಯೂಯಾರ್ಕ್ ಗವರ್ನರ್ ಕ್ಯಾಥಿ ಹೋಚುಲ್, ಹಿರಿಯ ಸೆನೆಟರ್ ಚಕ್ ಶೂಮರ್ ಸಂತಾಪ

**ನ್ಯೂಯಾರ್ಕ್:** ಅಮೆರಿಕದಲ್ಲಿ ರಸ್ತೆ ಅಪಘಾತ ಸಂಭವಿಸಿದ್ದು, ಬಸ್ ಪಲ್ಟಿ ಹೊಡೆದು ಐವರು ಸ್ಥಳದಲ್ಲಿಯೇ ಸಾವನ್ನಪ್ಪಿದ್ದಾರೆ. ನ್ಯೂಯಾರ್ಕ್‌ನ ಹೆದ್ದಾರಿಯಲ್ಲಿ ಚಾಲಕನ ನಿಯಂತ್ರಣ ತಪ್ಪಿದ ಬಸ್ ಪಲ್ಟಿ ಹೊಡೆದಿದೆ. ಪ್ರವಾಸಿಗರು ನಯಾಗರಾ ಫಾಲ್ಸ್ ವೀಕ್ಷಿಸಿ ನ್ಯೂಯಾರ್ಕ್ ನಗರಕ್ಕೆ ಹಿಂತಿರುಗುತ್ತಿದ್ದಾಗ ಈ ಘಟನೆ ನಡೆದಿದ್ದು, ಈ ಬಸ್‌ನಲ್ಲಿ ಭಾರತೀಯರು ಇದ್ದರು ಎಂದು ತಿಳಿದುಬಂದಿದೆ.

ಬಫಲೋ ನಗರದಿಂದ ಪೂರ್ವಕ್ಕೆ ಸುಮಾರು 40 ಕಿಲೋ ಮೀಟರ್ ದೂರದಲ್ಲಿ ಅಪಘಾತ ಸಂಭವಿಸಿದೆ. ಮೃತಪಟ್ಟ ಪ್ರಯಾಣಿಕರನ್ನು ಭಾರತ, ಚೀನಾ, ಫಿಲಿಪಿನ್ಸ್ ಮೂಲದವರೆಂದು ಗುರುತಿಸಲಾಗಿದೆ. ಮೃತರ ವಿವರ ಇನ್ನೂ ತಿಳಿದುಬಂದಿಲ್ಲ. ಚಾಲಕನ ಗಮನ ಬೇರೆಡೆ ಹರಿದು, ನಿಯಂತ್ರಣ ತಪ್ಪಿದ ಕಾರಣ ಬಸ್ ಪಲ್ಟಿಯಾಗಿದೆ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ. ಅಪಘಾತದಲ್ಲಿ ಬೇರೆ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ ಎಂದು ನ್ಯೂಯಾರ್ಕ್ ರಾಜ್ಯ ಪೊಲೀಸ್ ಕಮಾಂಡರ್ ಮೇಜರ್ ಆಂಡ್ರೆ ರೇ ಹೇಳಿದ್ದಾರೆ.

**ಬಸ್‌ನಲ್ಲಿದ್ದರು 54 ಪ್ರಯಾಣಿಕರು:** ಬಸ್‌ನಲ್ಲಿದ್ದ ಬಹುತೇಕ ಪ್ರಯಾಣಿಕರಿಗೆ ಚಿಕಿತ್ಸೆ ನೀಡಿ ಡಿಸ್ಚಾರ್ಜ್ ಮಾಡಲಾಗಿದೆ. ಬಸ್‌ನಲ್ಲಿ ಒಟ್ಟು 54 ಪ್ರಯಾಣಿಕರಿದ್ದರು, ಮೃತಪಟ್ಟವರಲ್ಲಿ



ಯಾವುದೇ ಮಕ್ಕಳಿಲ್ಲ ಎಂದು ಅಮೆರಿಕದ ಮಾಧ್ಯಮಗಳು ವರದಿ ಮಾಡಿವೆ. ಕೆನಡಾ ಗಡಿಯಲ್ಲಿರುವ ನಯಾಗರಾ ಫಾಲ್ಸ್‌ಗೆ ಒಂದು ದಿನದ ಪ್ರವಾಸ ಮುಗಿಸಿ ವಾಪಸಾಗುತ್ತಿದ್ದಾಗ ಪೆಂಬ್ರೋಕ್ ಬಳಿಯ ಹೆದ್ದಾರಿಯಲ್ಲಿ ಈ ಅಪಘಾತ ಸಂಭವಿಸಿದೆ.

ಎಂಟು ಹೆಲಿಕಾಪ್ಟರ್ ಬಳಸಿ ರಕ್ಷಣಾ ಕಾರ್ಯಾಚರಣೆ ನಡೆಸಲಾಗಿದ್ದು, ಹೆಲಿಕಾಪ್ಟರ್‌ಗಳನ್ನು ಏರ್ ಆಂಬುಲೆನ್ಸ್ ಸೇವಾ ಸಂಸ್ಥೆ ಮರ್ಸಿ ಫ್ಲೈಟ್ ಕಳುಹಿಸಿತ್ತು. ಚಾಲಕ ಜೀವಂತವಾಗಿದ್ದು, ಆರೋಗ್ಯವಾಗಿದ್ದಾರೆ. ಬಸ್ ನಿಯಂತ್ರಣ ಕಳೆದುಕೊಳ್ಳಲು ಕಾರಣವೇನು ಎಂಬುದರ ಬಗ್ಗೆ ಸ್ಪಷ್ಟ ಚಿತ್ರಣ ಸಿಕ್ಕಿದೆ.


ಚಾಲಕನ ವಿಚಾರಣೆ ನಡೆಸುತ್ತಿದ್ದು, ಎಲ್ಲಾ ವಿವರಗಳನ್ನು ಸಮಗ್ರವಾಗಿ ಪರಿಶೀಲಿಸುತ್ತಿದ್ದೇವೆ ಎಂದು ಪೊಲೀಸರು ಹೇಳಿದ್ದಾರೆ. ಅಪಘಾತಕ್ಕೆ ತಾಂತ್ರಿಕ ದೋಷ ಅಥವಾ ಮದ್ಯಪಾನ ಕಾರಣವಲ್ಲ, ಚಾಲಕನ ವಿರುದ್ಧ ಇನ್ನೂ ಯಾವುದೇ ಆರೋಪಗಳನ್ನು ದಾಖಲಿಸಿಲ್ಲ ಎಂದು ಹೇಳಿದ್ದಾರೆ.

ನ್ಯೂಯಾರ್ಕ್ ಗವರ್ನರ್ ಕ್ಯಾಥಿ ಹೋಚುಲ್ ಅವರು ತಮ್ಮ ತಂಡವು ರಾಜ್ಯ ಪೊಲೀಸ್ ಮತ್ತು ಸ್ಥಳೀಯ ಅಧಿಕಾರಿಗಳೊಂದಿಗೆ ಸಮನ್ವಯದೊಂದಿಗೆ ಕೆಲಸ ಮಾಡುತ್ತಿದೆ. ರಕ್ಷಣೆ ಮತ್ತು ಸಹಾಯ ಒದಗಿಸಲು ನಾವು ಶ್ರಮಿಸುತ್ತಿದ್ದೇವೆ ಎಂದಿದ್ದಾರೆ. ಅಪಘಾತದ ಹಿನ್ನೆಲೆಯಲ್ಲಿ ರಕ್ತದಾನ ಮಾಡುವಂತೆ ಕನೆಕ್ಟ್ ಲೈಫ್ ಎಂಬ ರಕ್ತ ಮತ್ತು ಅಂಗಾಂಗ ದಾನಿಗಳ ಜಾಲವು ಸಾರ್ವಜನಿಕರಲ್ಲಿ ಮನವಿ ಮಾಡಿದೆ.

ಇನ್ನು, ನ್ಯೂಯಾರ್ಕ್‌ನ ಹಿರಿಯ ಸೆನೆಟರ್ ಚಕ್ ಶೂಮರ್ ಸಂತಾಪ ಸೂಚಿಸಿದ್ದು, ಅಪಘಾತದಲ್ಲಿ ಮೃತಪಟ್ಟ, ಗಾಯಗೊಂಡವರಿಗಾಗಿ ನನ್ನ ಹೃದಯ ಮಿಡಿಯುತ್ತಿದೆ. ಅವರ ಕುಟುಂಬಗಳಿಗೆ ದುಃಖ ತಡೆದುಕೊಳ್ಳುವ ಶಕ್ತಿ ನೀಡಲಿ ಎಂದು ನಾನು ಪ್ರಾರ್ಥಿಸುತ್ತೇನೆ. ಘಟನಾ ಸ್ಥಳದಲ್ಲಿನ ರಕ್ಷಣಾ ಸಿಬ್ಬಂದಿಗೆ ಧನ್ಯವಾದಗಳನ್ನು ಅರ್ಪಿಸಿದ್ದಾರೆ.

# ಆರ್‌ಜೆಡಿ ನಾಯಕ ತೇಜಸ್ವಿ ಯಾದವ್ ವಿರುದ್ಧ ಎಫ್‌ಐಆರ್

**ಶಹಜಹಾನ್‌ಪುರ:** ಪ್ರಧಾನಿ ನರೇಂದ್ರ ಮೋದಿ ಅವರ ಮೇಲೆ ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಕುರಿತು ರಾಷ್ಟ್ರೀಯ ಜನತಾ ದಳ ನಾಯಕ ತೇಜಸ್ವಿ ಯಾದವ್ ವಿರುದ್ಧ ಇಲ್ಲಿನ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ. ಈ ಸಂಬಂಧ ಬಿಜೆಪಿ ನಗರಾಧ್ಯಕ್ಷೆ ಶಿಲ್ಪಿ ಗುಪ್ತಾ ದೂರು ದಾಖಲಿಸಿ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ರಾಜೇಶ್ ದ್ವಿವೇದಿ ಹೇಳಿದ್ದಾರೆ.



ಪ್ರಧಾನಿ ವಿರುದ್ಧ ಯಾದವ್ ಅವರ ಅಸಭ್ಯ ಹೇಳಿಕೆ ದೇಶದ ಜನರಲ್ಲಿ ಅಪಾರ ಕೋಪವನ್ನು ಉಂಟುಮಾಡಿದೆ ಎಂದು ಗುಪ್ತಾ ಅವರ ದೂರಿನಲ್ಲಿ ಆರೋಪಿಸಲಾಗಿತ್ತು. ಸದರ್ ಬಜಾರ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಎಫ್‌ಐಆರ್, ಪೋಸ್ಟ್ ಸಾರ್ವಜನಿಕರು ಮತ್ತು ಬಿಜೆಪಿ ಕಾರ್ಯಕರ್ತರಲ್ಲಿ ಅಸಮಾಧಾನವನ್ನು ಸೃಷ್ಟಿಸಿದೆ ಎಂದು ಆರೋಪಿಸಿದೆ.ಈ ಪೋಸ್ಟ್ ಅನ್ನು ಅಧಿಕೃತ ಆರ್‌ಜೆಡಿ ಖಾತೆಯಿಂದ ಮಾಡಲಾಗಿದೆ ಎಂದು ಗುಪ್ತಾ ಹೇಳಿದರು. ಇಂದು, ಮತ ಕಳ್ಳ ಬಿಹಾರದ ಗಯಾಕ್ಕೆ ಬರುತ್ತಾನೆ ಮತ್ತು ಬಿಹಾರಿಗಳ ಮುಂದೆ ಸುಳ್ಳಿನ ಮೇಲೆ ಸುಳ್ಳು ಹೇಳುತ್ತಾನೆ ಎಂದು ಯಾದವ್ ಪೋಸ್ಟ್ ಹಾಕಿದ್ದರು. ಬಿಹಾರದ ಮಾಜಿ ಉಪಮುಖ್ಯಮಂತ್ರಿಯ ವಿರುದ್ಧ ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್ 353(2) (ವದಂತಿಗಳನ್ನು ಹರಡುವುದು), 197(1)ಂ (ಚಿತ್ರದ ಮೂಲಕ ಆರೋಪ ಮಾಡುವುದು) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಏತನ್ಮಧ್ಯೆ, ಸ್ಥಳೀಯ ಶಾಸಕ ಮಿಲಿಂದ್ ನರೋಟೆ ಅವರ ದೂರಿನ ಮೇರೆಗೆ ಮಹಾರಾಷ್ಟ್ರದ ಗಡ್ಚಿರೋಲಿ ಜಿಲ್ಲೆಯಲ್ಲಿ ಯಾದವ್ ವಿರುದ್ಧ ಪ್ರತ್ಯೇಕ ಎಫ್‌ಐಆರ್ ದಾಖಲಿಸಲಾಗಿದೆ. ಯಾದವ್ ವಿರುದ್ಧ ಬಿಎನ್‌ಎಸ್ ಸೆಕ್ಷನ್ 196, 356 (ಮಾನನಷ್ಟ), 352, ಮತ್ತು 353 ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

# ಗಾಜಾದಲ್ಲಿ ಕ್ಷಾಮ ತಲೆದೋರಿದೆ: ವಿಶ್ವಸಂಸ್ಥೆ ಘೋಷಣೆ

**ಜರುಸಲೇಂ:** ಗಾಜಾದಲ್ಲಿ ಕ್ಷಾಮ ತಲೆದೋರಿದೆ ಎಂದು ವಿಶ್ವಸಂಸ್ಥೆ ಘೋಷಿಸಿದೆ. ಇಸ್ರೇಲ್ ಮಾನವೀಯ ನೆರವು ನೀಡಲು ವ್ಯವಸ್ಥಿತವಾಗಿ ಅಡ್ಡಿ ಮಾಡಿದ್ದೇ ಇಂಥ ಸ್ಥಿತಿಗೆ ಕಾರಣ ಎಂದು ಅದು ಆರೋಪಿಸಿದೆ. ಯುದ್ಧವನ್ನು ನಿಲ್ಲಿಸುವಂತೆ ಹಮಾಸ್ ಬಂಡುಕೋರರು ವಿಶ್ವಸಂಸ್ಥೆ ಮತ್ತು ಭದ್ರತಾ ಮಂಡಳಿಯನ್ನು ಒತ್ತಾಯಿಸಿದ್ದರು. ಅನಿರ್ಬಂಧಿತ ಆಹಾರ, ಔಷಧ, ನೀರು, ಇಂಧನ ಪೂರೈಕೆಗೆ ಮನವಿ ಮಾಡಿದ್ದರು.

**ವ್ಯಾಪಿಸುವ ಸಾಧ್ಯತೆ:** ಗಾಜಾ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕ್ಷಾಮ ತಲೆದೋರಿದೆ. ಕದನ ವಿರಾಮ ಘೋಷಣೆಯಾಗದಿದ್ದರೆ ಮತ್ತು ಮಾನವೀಯ ನೆರವು ನೀಡಲು ಇರುವ ನಿರ್ಬಂಧ ಅಂತ್ಯಗೊಳ್ಳದಿದ್ದರೆ ಇತರ ಪ್ರದೇಶಗಳಿಗೂ ಕ್ಷಾಮ ಹಬ್ಬುವ ಸಾಧ್ಯತೆ ಇದೆ ಎಂದು ಆಹಾರ ಬಿಕ್ಕಟ್ಟು ಕುರಿತ ಸಂಸ್ಥೆ ಎಚ್ಚರಿಸಿದೆ. ಸಮಗ್ರ ಆಹಾರ ಭದ್ರತಾ ವರ್ಗೀಕರಣ (ಐಪಿಸಿ)



ಸಂಸ್ಥೆಯು, ಇಸ್ರೇಲ್‌ನಿಂದ ನಿರಂತರ ಆಕ್ರಮಣ, ಆಹಾರ ಮತ್ತು ಮಾನವೀಯ ನೆರವಿಗೆ ನಿರ್ಬಂಧ, ವ್ಯಾಪಕ ಸ್ಥಳಾಂತರ, ಉತ್ಪಾದನೆಯ ಕುಸಿತವು ಪ್ಯಾಲೆಸ್ಟೀನಿಯನ್ನರನ್ನು ಹಸಿವು, ಬರಗಾಲಕ್ಕೆ ದೂಡಿದೆ ಎಂದು ಹೇಳಿದೆ.


5 ಲಕ್ಷಕ್ಕೂ ಅಧಿಕ ಮಂದಿ ಅತ್ಯಂತ ಹಸಿವಿನಿಂದ ನಲುಗುತ್ತಿದ್ದಾರೆ, ಹಲವರು ಅಪೌಷ್ಟಿಕತೆ ಯಿಂದ ಸಾಯುವ ಹಂತ ತಲುಪಿದ್ದಾರೆ. ಸೆಪ್ಟೆಂಬರ್ ಅಂತ್ಯದ ವೇಳೆ ಈ ಸಂಖ್ಯೆಯು 6.41 ಲಕ್ಷಕ್ಕೆ ಏರಿಕೆಯಾಗುವ ಸಾಧ್ಯತೆ ಇದೆ ಎಂದು ಐಪಿಸಿ ಹೇಳಿದೆ.

**ಷರತ್ತಿಗೆ ಒಪ್ಪದಿದ್ದರೆ ಗಾಜಾ ನಾಶ:** ಇಸ್ರೇಲ್ ಹಮಾಸ್ ಬಂಡುಕೋರರು ಇಸ್ರೇಲ್ ಷರತ್ತುಗಳಿಗೆ ಒಪ್ಪದಿದ್ದರೆ ಗಾಜಾ ನಗರವನ್ನೇ ನಾಶ ಮಾಡಬೇಕಾಗುತ್ತದೆ ಎಂದು ಇಸ್ರೇಲ್ ರಕ್ಷಣಾ ಸಚಿವ ಕಟ್ಸ್ ಎಚ್ಚರಿಸಿದ್ದಾರೆ.

> ಗಾಜಾದಲ್ಲಿನ ಕ್ಷಾಮವು ಮಾನವನಿರ್ಮಿತ ದುರಂತ, ನೈತಿಕತೆಯ ಅಧಃಪತನ, ಮಾನವೀಯತೆಯ ವೈಫಲ್ಯ. ಕೂಡಲೇ ಕದನ ವಿರಾಮ ಘೋಷಣೆಯಾಗಲಿ.
>
> –ಆ್ಯಂಟೋನಿಯೊ ಗುಟೆರಸ್, ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ

# ಶ್ರೀಮಂತ ಸಿಎಂ ಆಗಿ ಹೊರಹೊಮ್ಮಿದ ಚಂದ್ರಬಾಬು ನಾಯ್ಡು

**ನವದೆಹಲಿ:** ಅಸೋಸಿಯೇಷನ್ ಫಾರ್ ಡೆಮಾಕ್ರೆಟಿಕ್ ರಿಫಾರ್ಮ್ಸ್ ದೇಶದ ಸಿಎಂಗಳ ಆಸ್ತಿಯನ್ನು ಪಟ್ಟಿ ಮಾಡಿದ್ದು, ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಮತ್ತೊಮ್ಮೆ ದೇಶದ ಅತ್ಯಂತ ಶ್ರೀಮಂತ ಮುಖ್ಯಮಂತ್ರಿ ಆಗಿ ಹೊರಹೊಮ್ಮಿದ್ದಾರೆ. ಎನ್. ಚಂದ್ರಬಾಬು ನಾಯ್ಡು ಅವರು 931 ಕೋಟಿ ಆಸ್ತಿಯೊಂದಿಗೆ ಅತ್ಯಂತ ಶ್ರೀಮಂತ, ಪಶ್ಚಿಮ ಬಂಗಾಳದ ಮಮತಾ ಬ್ಯಾನರ್ಜಿ ಅವರು ಕಡಿಮೆ ಆಸ್ತಿ ಹೊಂದಿರುವ ಸಿಎಂ ಆಗಿದ್ದಾರೆ ಎಂದು ವರದಿಯಲ್ಲಿ ಹೇಳಲಾಗಿದೆ. ವಿಧಾನಸಭಾ ಚುನಾವಣೆಗೆ ಮುನ್ನ ಮುಖ್ಯಮಂತ್ರಿಗಳು ಸಲ್ಲಿಸಿದ



ಅಫಿಡವಿಟ್‌ಗಳನ್ನು ಆಧರಿಸಿದ ಎಡಿಆರ್ ವರದಿ ಮಾಡಿದೆ. 1992ರಲ್ಲಿ ಚಂದ್ರಬಾಬು ನಾಯ್ಡು ಅವರು 7,000 ಮೂಲ ಬಂಡವಾಳದೊಂದಿಗೆ ನವೀಕರಿಸಬಹುದಾದ ಇಂಧನ ಉತ್ಪಾದನೆ, ಹಾಲು, ಹಾಲಿನ ಉತ್ಪನ್ನಗಳ ಮಾರಾಟಕ್ಕಾಗಿ ಹೆರಿಟೇಜ್ ಫುಡ್ಸ್ ಲಿಮಿಟೆಡ್ ಕಂಪನಿ ಸ್ಥಾಪಿಸಿದ್ದರು. ಈ ಕಂಪನಿಯಲ್ಲಿ ನಾಯ್ಡು ಯಾವುದೇ ಷೇರುಗಳನ್ನು ಹೊಂದಿಲ್ಲವಾದರೂ, ಅವರ ಪತ್ನಿ ನಾರಾ ಭುವನೇಶ್ವರಿ ಶೇಕಡ 24.37ರಷ್ಟು ಪಾಲನ್ನು ಹೊಂದಿದ್ದಾರೆ. ಹೆರಿಟೇಜ್ ಫುಡ್ಸ್ ಲಿಮಿಟೆಡ್ ಕಂಪನಿಯಲ್ಲಿ ನಾರಾ ಕುಟುಂಬ ಒಟ್ಟು ಶೇ 41.3ರಷ್ಟು ಪಾಲನ್ನು ಹೊಂದಿದ್ದು, 1995ರಲ್ಲಿ ಕೇವಲ 25 ಕೋಟಿಯಷ್ಟಿದ್ದ ಸಂಪತ್ತಿನ ಮೌಲ್ಯ ಇದೀಗ 6,755 ಕೋಟಿ ಮುಟ್ಟಿದೆ.

> 1994ರಲ್ಲಿ ನಾಯ್ಡು ಕಂಪನಿಗೆ ರಾಜೀನಾಮೆ ನೀಡಿ ಆಂಧ್ರಪ್ರದೇಶ ಸರ್ಕಾರದಲ್ಲಿ ಸಚಿವರಾಗಿ ನಂತರ ಮುಖ್ಯಮಂತ್ರಿಯಾಗಿ ನೇಮಕಗೊಂಡ ಬಳಿಕ ಭುವನೇಶ್ವರಿ ಅವರು ಹೆರಿಟೇಜ್ ಕಂಪನಿಯ ಜವಾಬ್ದಾರಿ ವಹಿಸಿಕೊಂಡಿದ್ದರು. ನಾಯ್ಡು ಅವರ ಸೊಸೆ, ನಾರಾ ಲೋಕೇಶ್ ಅವರ ಪತ್ನಿ ಬ್ರಹ್ಮಣಿ ಅವರು ಕಂಪನಿಯ ವ್ಯವಸ್ಥಾಪಕ ನಿರ್ದೇಶಕರಾಗಿದ್ದಾರೆ.

# ಪತ್ರಕರ್ತರ ವಿರುದ್ಧದ ಎಫ್‌ಐಆರ್‌ನಲ್ಲಿ ಸತ್ಯಪಾಲ್ ಹೆಸರು ಉಲ್ಲೇಖ

**ಗುವಾಹಟಿ:** ದೇಶದ್ರೋಹ ಪ್ರಕರಣ ಸಂಬಂಧ ದಿ ವೈರ್‌ನ ಪತ್ರಕರ್ತರಾದ ಸಿದ್ದಾರ್ಥ್ ವರದರಾಜನ್, ಕರಣ್ ಥಾಪರ್, ಅಶುತೋಷ್ ಭಾರದ್ವಾಜ್, ಅಭಿಸರ್ ಶರ್ಮಾ ವಿರುದ್ಧ ಗುವಾಹಟಿ ಪೊಲೀಸರು ದಾಖಲಿಸಿರುವ ಎಫ್‌ಐಆರ್‌ನಲ್ಲಿ ಜಮ್ಮು ಮತ್ತು ಕಾಶ್ಮೀರದ ಮಾಜಿ ರಾಜ್ಯಪಾಲ ದಿವಂಗತ ಸತ್ಯಪಾಲ್ ಮಲಿಕ್, ಪಾಕ್ ಪತ್ರಕರ್ತ ನಜಮ್ ಸೇಥಿ ಸೇರಿದಂತೆ ಅಪರಿಚಿತ ವ್ಯಕ್ತಿಗಳ ಹೆಸರನ್ನು ಉಲ್ಲೇಖಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ದೇಶದ್ರೋಹ ಪ್ರಕರಣ ಸಂಬಂಧ ಮೋರಿಗಾಂವ್ ಪೊಲೀಸರು ಆಗಸ್ಟ್ 22ರಂದು ವಿಚಾರಣೆಗೆ ಹಾಜರಾಗುವಂತೆ ವರದರಾಜನ್ ಮತ್ತು ಥಾಪರ್ ಅವರಿಗೆ ಸಮನ್ಸ್ ಜಾರಿ ಮಾಡಿದ್ದರು. ಆದರೆ, ವರದರಾಜನ್ ಹಾಗೂ ಥಾಪರ್ ವಿರುದ್ಧ ಬಲವಂತದ ಕ್ರಮ ಜರುಗಿಸದಂತೆ ಸುಪ್ರೀಂ ಕೋರ್ಟ್ ರಕ್ಷಣೆ ನೀಡಿತ್ತು. ವರದರಾಜನ್, ಥಾಪರ್ ಸೇರಿದಂತೆ ಹಲವರ ವಿರುದ್ಧ ಪೊಲೀಸರು ಭಾರತೀಯ ನ್ಯಾಯ ಸಂಹಿತೆ (ಬಿಎನ್‌ಎಸ್) ಸೆಕ್ಷನ್ 152, 196, 197 (1), 353, 45, 61ರ ಅಡಿಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

ಪ್ರಕರಣದಲ್ಲಿ ಪಾಕ್‌ನ ನಜಮ್ ಸೇಥಿ ಅವರ ಪಾತ್ರವು ಭಾರತದ ಸಾಂವಿಧಾನಿಕ ಪ್ರಜಾಪ್ರಭುತ್ವವನ್ನು ದುರ್ಬಲಗೊಳಿಸುವ... ಭಾರತದ ಸಾಂವಿಧಾನಿಕ ಪ್ರಜಾಪ್ರಭುತ್ವವನ್ನು ದಬ್ಬಾಳಿಕೆಯೆಂದು ಬಿಂಬಿಸುವ ಅಂತರರಾಷ್ಟ್ರೀಯ ಆಯಾಮವಾಗಿದೆ ಎಂದು ದೂರುದಾರರು ಆರೋಪಿಸಿದ್ದಾರೆ. ಕರಣ್ ಥಾಪರ್ ಅವರು ನಜಮ್ ಸೇಥಿ, ಅಶುತೋಷ್ ಭಾರದ್ವಾಜ್ ಮತ್ತು ಜಮ್ಮು ಮತ್ತು ಕಾಶ್ಮೀರದ ಮಾಜಿ ರಾಜ್ಯಪಾಲ ಸತ್ಯಪಾಲ್ ಮಲಿಕ್ ಅವರೊಂದಿಗೆ ಸರಣಿ ಸಂದರ್ಶನಗಳನ್ನು ಆಯೋಜಿಸಿದ್ದರು ಎಂದು ದೂರುದಾರರು ಆರೋಪಿಸಿದ್ದಾರೆ.

ಕಾಶ್ಮೀರದ ಪೆಹಲ್ಗಾಮ್ ಭಯೋತ್ಪಾದಕ ದಾಳಿ ಬೆನ್ನಲ್ಲೇ ಸೇಥಿ, ಭಾರದ್ವಾಜ್ ಸೇರಿದಂತೆ ಇತರರು ಭಾರತ ಸರ್ಕಾರದ ವಿರುದ್ಧ ಗಂಭೀರ ಮತ್ತು ಆಕ್ರಮಣಕಾರಿ ಹೇಳಿಕೆಗಳನ್ನು ನೀಡಿದ್ದರು ಎಂದು ದೂರುದಾರರು ಉಲ್ಲೇಖಿಸಿದ್ದಾರೆ.

# ಭಾರತದ ರಾಯಭಾರಿಯಾಗಿ ಸರ್ಜಿಯೊ ಗೋರ್ ನೇಮಕ

## ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಂದ ಗೋರ್ ನೇಮಕ ಬಗ್ಗೆ ಘೋಷಣೆ, ಟ್ರಂಪ್ 'ದಂಡ ನಾಯಕ' ದಿಲ್ಲಿಗೆ

**ವಾಷಿಂಗ್ಟನ್:** ಭಾರತದ ಜೊತೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸುಂಕ ಸಮರ ನಡೆಸುತ್ತಿದ್ದಾರೆ. ಇಂತಹ ಸಮಯದಲ್ಲಿಯೇ ತಮ್ಮ ಆಪ್ತ ರಾಜಕೀಯ ಸಹಾಯಕ ಮತ್ತು ಶ್ವೇತಭವನದ ಪ್ರಮುಖ ಅಧಿಕಾರಿಯಾದ ಸರ್ಜಿಯೊ ಗೋರ್ ಅವರನ್ನು ಭಾರತಕ್ಕೆ ಅಮೆರಿಕದ ಮುಂದಿನ ರಾಯಭಾರಿಯಾಗಿ ಟ್ರಂಪ್ ನೇಮಕ ಮಾಡಿದ್ದಾರೆ. ಭಾರತದೊಂದಿಗೆ ಅಮೆರಿಕ ಸಂಬಂಧ ಸೂಕ್ಷ್ಮ ಹಂತದಲ್ಲಿರುವಾಗ ಟ್ರಂಪ್ ತಮ್ಮ ಅತ್ಯಂತ ನಂಬಿಕಸ್ಥ ಅಧಿಕಾರಿಯನ್ನು ಈ ಮಹತ್ವದ ಹುದ್ದೆಗೆ ಆಯ್ಕೆ ಮಾಡಿದ್ದಾರೆ. ಗೋರ್ ಅವರನ್ನು ಭಾರತ ರಾಯಭಾರಿ ಮಾತ್ರವಲ್ಲದೇ ದಕ್ಷಿಣ, ಮಧ್ಯ ಏಷ್ಯಾಕ್ಕೆ ರಾಯಭಾರಿಯಾಗಿಯೂ ಟ್ರಂಪ್ ನೇಮಿಸಿದ್ದಾರೆ.

ತಮ್ಮ ಟ್ರೂತ್ ಸೋಶಿಯಲ್ ವೇದಿಕೆಯಲ್ಲಿ ಈ ಬಗ್ಗೆ ಪ್ರಕಟಿಸಿರುವ ಡೊನಾಲ್ಡ್ ಟ್ರಂಪ್, ವಿಶ್ವದ ಅತ್ಯಂತ ಜನನಿಬಿಡ ಪ್ರದೇಶದಲ್ಲಿ ನನ್ನ ಕಾರ್ಯಸೂಚಿಯನ್ನು ಜಾರಿಗೊಳಿಸಲು, ಅಮೆರಿಕವನ್ನು ಮತ್ತೆ ಶ್ರೇಷ್ಠವಾಗಿಸಲು ನಾನು ಸಂಪೂರ್ಣವಾಗಿ ವಿಶ್ವಾಸ ಇಡಬಹುದಾದ ವ್ಯಕ್ತಿ ಇರುವುದು ಮುಖ್ಯ. ಆದ್ದರಿಂದ ಸರ್ಜಿಯೊ ಗೋರ್‌ಅನ್ನು ಭಾರತದ ರಾಯಭಾರಿಯಾಗಿ ನೇಮಿಸುತ್ತಿದ್ದು, ಸರ್ಜಿಯೊ ಅದ್ಭುತ ರಾಯಭಾರಿಯಾಗಲಿದ್ದಾರೆ ಎಂದಿದ್ದಾರೆ. ಈ ಮೂಲಕ ಸಾಂಪ್ರದಾಯಿಕ ರಾಯಭಾರಿಗಳನ್ನು ಸೈಡ್‌ಲೈನ್ ಮಾಡಿ ತಮ್ಮ ಆಪ್ತರಿಗೆ ಮಹತ್ವದ ಜವಾಬ್ದಾರಿಗಳನ್ನು ಕೊಡುವುದನ್ನು ಟ್ರಂಪ್ ಮುಂದುವರೆಸಿದ್ದಾರೆ.

**ಯಾರು ಈ ಸರ್ಜಿಯೊ ಗೋರ್:** 38 ವರ್ಷದ ಸರ್ಜಿಯೊಗೋರ್



ಟ್ರಂಪ್ ಲೆಕ್ಕಾಚಾರ ಉಲ್ಟಾ ಪಲ್ಟಾ

ಅಮೆರಿಕ ರಾಜಕೀಯದಲ್ಲಿ ವೇಗವಾಗಿ ಉನ್ನತಿ ಕಂಡಿದ್ದು, ಶ್ವೇತಭವನದ ಅತ್ಯಂತ ಶಕ್ತಿಶಾಲಿ ಅಧಿಕಾರಿಗಳಲ್ಲಿ ಒಬ್ಬರಾಗಿದ್ದಾರೆ.

ಡೊನಾಲ್ಡ್ ಟ್ರಂಪ್ ಆಡಳಿತದಲ್ಲಿ ಸುಮಾರು 4,000 ನೇಮಕಾತಿಗಳನ್ನು ಪರಿಶೀಲಿಸಿ, ಅವರೆಲ್ಲರೂ ಅಧ್ಯಕ್ಷರಿಗೆ ನಿಷ್ಠರಾಗಿರುವುದನ್ನು ಖಚಿತಪಡಿಸಿಕೊಳ್ಳುವ ಜವಾಬ್ದಾರಿಯನ್ನು ಗೋರ್ ಹೊತ್ತಿದ್ದರು. ಶ್ವೇತಭವನದಲ್ಲಿ ಪ್ರಭಾವ ಹೊಂದಿರುವ ಗೋರ್‌ಗೆ ವಿದೇಶಾಂಗ ನೀತಿಯಲ್ಲಿ ವ್ಯಾಪಕ ಅನುಭವವಿಲ್ಲ. ಆದರೆ, ಅವರು ಅನೇಕ ವಿದೇಶಿ ಪ್ರವಾಸಗಳಲ್ಲಿ ಭಾಗವಹಿಸಿದ್ದಾರೆ. ಜೊತೆಗೆ ರಾಷ್ಟ್ರೀಯ ಭದ್ರತಾ ಮಂಡಳಿಯ ಕೆಲವು ಸಿಬ್ಬಂದಿಯನ್ನು ಅವರ ನಿಲುವುಗಳ ಬಗ್ಗೆ ಸಂಶಯ ವ್ಯಕ್ತಪಡಿಸಿ ಅವರನ್ನು ತೆಗೆದುಹಾಕುವಲ್ಲ ಪ್ರಮುಖ ಪಾತ್ರ ವಹಿಸಿದ್ದರು. ಟೆಕ್ ದೈತ್ಯ ಸ್ಪೇಸ್ ಎಕ್ಸ್ ಸಂಸ್ಥಾಪಕ ಎಲಾನ್ ಮಸ್ಕ್ ಅವರಂತಹ ಪ್ರಬಲ ವಿರೋಧಿಗಳನ್ನೂ ಸರ್ಜಿಯೊ ಗೋರ್ ಹೊಂದಿದ್ದಾರೆ. ನಾಸಾದ ಮುಖ್ಯಸ್ಥರನ್ನಾಗಿ ಮಾಡಲು ಮಸ್ಕ್ ಸೂಚಿಸಿದ್ದ ಹೆಸರನ್ನು ಗೋರ್ ತಿರಸ್ಕರಿಸಿದ ನಂತರ, ಮಸ್ಕ್ ಅವರನ್ನು ಹಾವು ಎಂದು ಟೀಕಿಸಿದ್ದರು. ಇದಲ್ಲದೇ ಗೋರ್ ಅವರು ಡೊನಾಲ್ಡ್ ಟ್ರಂಪ್ ಜೂನಿಯರ್ ಅವರೊಂದಿಗೆ ವಿನ್ನಿಂಗ್ ಟೀಮ್ ಪಬ್ಲಿಷಿಂಗ್ ಎಂಬ ಪ್ರಕಾಶನ ಸಂಸ್ಥೆಯನ್ನು ಸ್ಥಾಪಿಸಿದ್ದು, ಇದು ಟ್ರಂಪ್ ಅವರ ಎರಡು ಪುಸ್ತಕಗಳನ್ನು ಪ್ರಕಟಿಸಿದೆ. ಅಲ್ಲದೇ, ಟ್ರಂಪ್ ಅವರ ಪ್ರಚಾರವನ್ನು ಬೆಂಬಲಿಸುವ ಅತಿದೊಡ್ಡ ಸೂಪರ್ ಪಿಎಸಿಗಳಲ್ಲಿ ಒಂದನ್ನು ಗೋರ್ ನಡೆಸಿದ್ದಾರೆ.

**8 ತಿಂಗಳಿನಿಂದ ಖಾಲಿ ಇದ್ದ ಹುದ್ದೆ:** ಅತ್ತ ಡೊನಾಲ್ಡ್ ಟ್ರಂಪ್ ಘೋಷಣೆ ಬೆನ್ನಲ್ಲೇ ಅಮೆರಿಕದ ರಾಜ್ಯ ಕಾರ್ಯದರ್ಶಿ ಮಾರ್ಕೊ ರೂಬಿಯೊ ಅವರು ಎಕ್ಸ್ ವೇದಿಕೆಯಲ್ಲಿ ಗೋರ್ ನೇಮಕವನ್ನು ಅನುಮೋದಿಸಿದರು. ನಮ್ಮ ದೇಶದ ಪ್ರಮುಖ ಮಿತ್ರರಾಷ್ಟ್ರ ಭಾರತದಲ್ಲಿ ಸರ್ಜಿಯೊ ಗೋರ್ ಅಮೆರಿಕದ ಅತ್ಯುತ್ತಮ ಪ್ರತಿನಿಧಿಯಾಗಲಿದ್ದಾರೆ ಎಂದು ಹೇಳಿದ್ದಾರೆ. ಇನ್ನು, ತಮ್ಮ ನೇಮಕದ ಬಗ್ಗೆ ಪ್ರತಿಕ್ರಿಯಿಸಿರುವ ಗೋರ್, ಈ ಆಡಳಿತದ ಶ್ರೇಷ್ಠ ಕೆಲಸದ ಮೂಲಕ ಅಮೆರಿಕದ ಜನರಿಗೆ ಸೇವೆ ಸಲ್ಲಿಸುವುದಕ್ಕಿಂತ ಹೆಮ್ಮೆಯ ವಿಷಯ ಬೇರೊಂದಿಲ್ಲ. ಅಮೆರಿಕವನ್ನು ಪ್ರತಿನಿಧಿಸುವುದು ನನ್ನ ಜೀವನದ ಗೌರವವಾಗಿರುತ್ತದೆ ಎಂದು ಎಕ್ಸ್‌ನಲ್ಲಿ ಕೃತಜ್ಞತೆ ಸಲ್ಲಿದ್ದಾರೆ.

ಸೆನೆಟ್‌ನಿಂದ ಅನುಮೋದನೆಗೊಳ್ಳುವವರೆಗೂ ಗೋರ್ ತಮ್ಮ ಪ್ರಸ್ತುತ ಶ್ವೇತಭವನದ ಹುದ್ದೆಯಲ್ಲಿ ಮುಂದುವರಿಯಲಿದ್ದಾರೆ. ಅವರು ಮೇ 11, 2023 ರಿಂದ ಜನವರಿ 20, 2025 ರವರೆಗೆ ಭಾರತದ ರಾಯಭಾರಿಯಾಗಿ ಸೇವೆ ಸಲ್ಲಿಸಿದ ಎರಿಕ್ ಗಾರ್ಸೆಟ್ಟಿ ಅವರ ಉತ್ತರಾಧಿಕಾರಿಯಾಗಲಿದ್ದಾರೆ. ಗಾರ್ಸೆಟ್ಟಿ ನಿರ್ಗಮನದ ನಂತರ, ಜೋರ್ಗಾನ್ ಕೆ ಆಂಡ್ರ್ಯೂಸ್ ಅವರು ಹಂಗಾಮಿ ರಾಯಭಾರಿಯಾಗಿ ಭಾರತದಲ್ಲಿನ ಅಮೆರಿಕ ರಾಯಭಾರ ಕಚೇರಿಯನ್ನು ಮುನ್ನಡೆಸುತ್ತಿದ್ದಾರೆ.

### ಮತ್ತೆ ಅಮೆರಿಕ-ಭಾರತ ಸಂಬಂಧ ಉತ್ತಮವಾಗುತ್ತಾ?

ಇತ್ತೀಚಿನ ದಶಕದಲ್ಲಿ ಭಾರತ – ಅಮೆರಿಕ ನಡುವಿನ ಸಂಬಂಧ ಭಾರೀ ಉದ್ವಿಗ್ನಗೊಂಡಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ರಷ್ಯಾದೊಂದಿಗೆ ಇಂಧನ ಖರೀದಿಸುತ್ತಿರುವ ಕಾರಣಕ್ಕೆ ಭಾರತದ ಮೇಲೆ ಶೇ.25 ಹಾಗೂ ಶೇ.25 ಸುಂಕ ವಿಧಿಸಿದ್ದು, ಅಮೆರಿಕ-ಭಾರತದ ಬಾಂಧವ್ಯವನ್ನು ಹದಗೆಡಿಸಿದೆ. ಇದರ ನಡುವೆಯೇ ಭಾರತವು ಇತ್ತೀಚೆಗೆ ರಷ್ಯಾ ಮತ್ತು ಚೀನಾದೊಂದಿಗೆ ಉನ್ನತ ಮಟ್ಟದ ಸಭೆಗಳನ್ನು ನಡೆಸಿದ್ದು, ಚೀನಾದೊಂದಿಗೆ ಸಂಬಂಧವನ್ನು ಉತ್ತಮಪಡಿಸಿಕೊಳ್ಳುತ್ತಿದೆ. ಇದು ಅಮೆರಿಕವನ್ನು ಕಂಗೆಡಿಸಿದ್ದು, ಚೀನಾದ ವಿರುದ್ಧ ಭಾರತವನ್ನು ನೋಡುತ್ತಿದ್ದ ಟ್ರಂಪ್ ಲೆಕ್ಕಾಚಾರ ಉಲ್ಟಾ ಪಲ್ಟಾ ಆಗಿದೆ. ಈ ವೇಳೆ ಸರ್ಜಿಯೊ ಗೋರ್ ಭಾರತದ ರಾಯಭಾರಿಯಾಗಿರುವುದು ಭಾರತ, ಅಮೆರಿಕ ಸಂಬಂಧ ಉತ್ತಮಗೊಳ್ಳುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ.

# ಮಿನಿ ನ್ಯೂಸ್

## ಟ್ಯಾಂಕರ್‌ಗೆ ಆಟೋ ಡಿಕ್ಕಿಯಾಗಿ 8 ಮಂದಿ ದುರ್ಮರಣ

**ಪಾಟ್ನಾ:** ಆಟೋರಿಕ್ಷಾ ಮತ್ತು ಟ್ಯಾಂಕರ್ ನಡುವೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ 8 ಜನ ಮೃತಪಟ್ಟಿರುವ ಘಟನೆ ರಾಜಧಾನಿ ಪಾಟ್ನಾದ ಶಹಜಹಾನ್‌ಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.ಘಟನೆಯಲ್ಲಿ ಹಲವರು ಗಾಯಗೊಂಡಿದ್ದಾರೆ. ಎಲ್ಲರೂ ಗಂಗಾನದಿಯಲ್ಲಿ ಸ್ನಾನ ಮಾಡಲು ಆಟೋದಲ್ಲಿ ಹೋಗುತ್ತಿದ್ದರು ಎಂದು ತಿಳಿದುಬಂದಿದೆ.

ಸಾವನ್ನಪ್ಪಿದವರೆಲ್ಲರೂ ನಳಂದ ಹಿಲ್ಸ್ ಪೊಲೀಸ್ ಠಾಣಾ ವ್ಯಾಪ್ತಿ ಪ್ರದೇಶದ ಮಾಲಗಾಂವ್ ಗ್ರಾಮದ ನಿವಾಸಿಗಳು ಎಂದು ತಿಳಿದುಬಂದಿದೆ. ಮೃತಪಟ್ಟವರಲ್ಲಿ 5 ಮಹಿಳೆಯರು ಮತ್ತು ಒಬ್ಬ ಆಟೋ ಚಾಲಕ ಮತ್ತು ಇಬ್ಬರು ಪುರುಷರು ಸೇರಿದ್ದಾರೆ. ಎಲ್ಲರೂ ಒಂದೇ ಕುಟುಂಬದವರು ಎಂದು ಹೇಳಲಾಗುತ್ತಿದೆ. ಗಾಯಾಳುಗಳನ್ನು ಸ್ಥಳೀಯರ ಸಹಾಯದಿಂದ ಪಾಟ್ನಾದ ಪಿಎಂಸಿಎಚ್‌ಗೆ ದಾಖಲಿಸಲಾಗಿದೆ. ಘಟನೆಯ ಬಗ್ಗೆ ಮಾಹಿತಿ ಪಡೆದ ಪೊಲಿಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿ ಶವಗಳನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸಿದ್ದಾರೆ. ಟ್ಯಾಂಕರ್ ಅತಿವೇಗದಲ್ಲಿ ಬರುತ್ತಿದ್ದು, ಚಾಲಕನ ನಿಯಂತ್ರಣ ಕಳೆದುಕೊಂಡಿದ್ದರಿಂದ ಈ ಅಪಘಾತ ಸಂಭವಿಸಿದೆ ಎಂದು ಸ್ಥಳೀಯರು ಮಾಹಿತಿ ನೀಡಿದ್ದಾರೆ.

## ಶಾಲೆ ಸ್ಫೋಟಿಸುವುದಾಗಿ ಬೆದರಿಕೆ ಹಾಕಿದ 14 ವರ್ಷದ ವಿದ್ಯಾರ್ಥಿ

**ರುದ್ರಾಪುರ:** ಹದಿನಾಲ್ಕು ವರ್ಷದ ವಿದ್ಯಾರ್ಥಿಯೊಬ್ಬ ತನ್ನ ಶಾಲೆಯನ್ನೇ ಸ್ಫೋಟಿಸುವುದಾಗಿ ಬೆದರಿಕೆ ಹಾಕಿರುವ ಘಟನೆ ರಾಜ್ಯದ ಉದಂಸಿಂಗ್ ನಗರದಲ್ಲಿ ನಡೆದಿದ್ದಾರೆ. ಉದಂಸಿಂಗ್ ನಗರ ಜಿಲ್ಲೆಯ ಕಾಶಿಪುರದಲ್ಲಿ 9ನೇ ತರಗತಿಯ ವಿದ್ಯಾರ್ಥಿಯೊಬ್ಬ ತನ್ನ ಶಿಕ್ಷಕರ ಮೇಲೆ ಗುಂಡು ಹಾರಿಸಿದ ಘಟನೆ ನಡೆದ ಒಂದು ದಿನದ ಅಂತರದಲ್ಲಿ ನಿನ್ನೆ ಬಾಜ್ಪುರ ಪ್ರದೇಶದಲ್ಲಿ 14 ವರ್ಷದ ವಿದ್ಯಾರ್ಥಿಯೊಬ್ಬ ತನ್ನ ಶಾಲೆಯನ್ನು ಸ್ಫೋಟಿಸುವುದಾಗಿ ಬೆದರಿಕೆ ಹಾಕಿದ್ದನು. ಪೊಲೀಸರು ಆತನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ.

ಶಾಲಾ ಆಡಳಿತ ಮಂಡಳಿ ಬಾಂಬ್ ಸ್ಫೋಟದ ಇ–ಮೇಲ್ ಅನ್ನು ಸ್ವೀಕರಿಸಿ ತಕ್ಷಣವೇ ಪೊಲೀಸರಿಗೆ ಮಾಹಿತಿ ನೀಡಿತ್ತು. ಪೊಲೀಸ್ ದಂಡ ಶ್ವಾನದಳದ ಸಹಾಯದಿಂದ ನೈನಿತಾಲ್ ರಸ್ತೆಯಲ್ಲಿರುವ ಶಾಲಾ ಆವರಣದಲ್ಲಿ ಸಂಪೂರ್ಣ ಶೋಧ ನಡೆಸಿತ್ತು. ಯಾವುದೇ ಅನುಮಾನಸ್ಪದ ವಸ್ತು ಸಿಗದೇ ಹೋದ ಕಾರಣ ಇದು ಹುಸಿಬಾಂಬ್ ಬೆದರಿಕೆ ಎಂದು ಘೋಷಿಸಿದ್ದರು. ಬಳಿಕ ಶಾಲಾ ಆಡಳಿತ ಮಂಡಳಿ ಬೆದರಿಕೆ ಹಾಕಿದ 14 ವರ್ಷದ ವಿದ್ಯಾರ್ಥಿಯನ್ನು ಹಿಡಿದು ಪೊಲೀಸರಿಗೆ ಒಪ್ಪಿಸಿದ್ದರು. ಪೊಲೀಸರು ಬಾಲಕನನ್ನು ಕೌನ್ಸಿಲಿಂಗ್ ನಡೆಸಿ ನಂತರ ಪೋಷಕರಿಗೆ ಒಪ್ಪಿಸಿದ್ದಾರೆ. ಪರೀಕ್ಷೆಗೆ ಓದಲು ಸಾಧ್ಯವಾಗದಿದ್ದ ಹಿನ್ನೆಲೆ ಶಾಲೆಗೆ ರಜೆ ನೀಡುವ ಉದ್ದೇಶಕ್ಕೆ ಹುಸಿ ಬಾಂಬ್ ಬೆದರಿಕೆಯ ಇ–ಮೇಲ್ ಕಳುಹಿಸಿದ್ದೆ ಎಂದು ವಿದ್ಯಾರ್ಥಿ ಒಪ್ಪಿಕೊಂಡಿದ್ದಾನೆ.

## ಪಾಕ್ ವಿಮಾನಗಳಿಗೆ ಭಾರತ ವಾಯುಪ್ರದೇಶ ನಿರ್ಬಂಧ: ಸೆ. 24ರವರೆಗೆ ವಿಸ್ತರಣೆ

**ನವದೆಹಲಿ:** ಪಾಕಿಸ್ತಾನದ ವಿಮಾನಗಳಿಗೆ ಭಾರತದ ವಾಯುಪ್ರದೇಶದ ನಿರ್ಬಂಧವನ್ನು ಸೆಪ್ಟೆಂಬರ್ 24ರವರೆಗೆ ವಿಸ್ತರಿಸಲಾಗಿದೆ. ಉಭಯ ರಾಷ್ಟ್ರಗಳು ವಾಯು ಪ್ರದೇಶದ ಮೇಲಿನ ನಿರ್ಬಂಧವನ್ನು ವಿಸ್ತರಿಸುವ ಕುರಿತಂತೆ ವಾಯು ಕಾರ್ಯಾಚರಣೆಗೆ ಸಂಬಂಧಿತ ಪ್ರತ್ಯೇಕ ಸೂಚನೆ ನೀಡಲಾಗಿದೆ ಎಂದು ತಿಳಿದು ಬಂದಿದೆ. ಪಾಕ್ ವಿಮಾನಯಾನ ಸಂಸ್ಥೆಗಳು ನಿರ್ವಹಿಸುವ ಯಾವುದೇ ವಿಮಾನಗಳು, ಪಾಕ್ ಒಡೆತನದ ಅಥವಾ ಗುತ್ತಿಗೆ ಪಡೆದ ಮಿಲಿಟರಿ, ನಾಗರಿಕ ವಿಮಾನಗಳು ಭಾರತದ ವಾಯುಪ್ರದೇಶ ಬಳಸಲು ಅನುಮತಿಸಲಾಗುವುದಿಲ್ಲ ಎಂದು ವರದಿಯಾಗಿದೆ. ಕಾಶ್ಮೀರದ ಪೆಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ 26 ಪ್ರವಾಸಿಗರ ಹತ್ಯೆಯ ನಂತರ ಪಾಕಿಸ್ತಾನ ಜತೆಗಿನ ರಾಜತಾಂತ್ರಿಕ ಸಂಬಂಧ ಕಳಚಿಕೊಂಡು ಭಾರತವು ಅಲ್ಲಿನ ವಿಮಾನಗಳಿಗೆ ನಿರ್ಬಂಧ ಹೇರಿರುವುದನ್ನೂ ಒಳಗೊಂಡು ಹಲವು ಕ್ರಮಗಳನ್ನು ಕೈಗೊಂಡಿತ್ತು. ಭಾರತೀಯ ಕಾಲಮಾನದ ಪ್ರಕಾರ ಮೇ 24ರವರೆಗೆ ವಿಧಿಸಿದ್ದ ನಿರ್ಬಂಧವನ್ನು ಆಗಸ್ಟ್ 24ರವರೆಗೆ ವಿಸ್ತರಿಸಲಾಗಿತ್ತು. ಇದೀಗ ಮತ್ತೆ ಒಂದು ತಿಂಗಳ ಅವಧಿಗೆ (ಸೆಪ್ಟೆಂಬರ್ 24) ನಿರ್ಬಂಧವನ್ನು ವಿಸ್ತರಿಸಲಾಗಿದೆ. ಏತನ್ಮಧ್ಯೆ, ಪಾಕಿಸ್ತಾನವು ಭಾರತದ ವಿಮಾನಗಳಿಗೆ ತನ್ನ ವಾಯುಪ್ರದೇಶ ನಿರ್ಬಂಧವನ್ನು ಸೆಪ್ಟೆಂಬರ್ 24ರವರೆಗೆ ವಿಸ್ತರಿಸಿದೆ.

## 4.4 ತೀವ್ರತೆಯ ಲಘು ಭೂಕಂಪ

**ಕಠ್ಮಂಡು:** ನೇಪಾಳದ ಪೂರ್ವ ಭಾಗದಲ್ಲಿ 4.4 ತೀವ್ರತೆಯ ಲಘು ಭೂಕಂಪ ಸಂಭವಿಸಿದೆ ಎಂದು ರಾಷ್ಟ್ರೀಯ ಭೂಕಂಪ ಮೇಲ್ವಿಚಾರಣೆ ಮತ್ತು ಸಂಶೋಧನಾ ಕೇಂದ್ರ ತಿಳಿಸಿದೆ. ರಾತ್ರಿಯ ವೇಳೆ ಮಾಘಂಗ್ ಪ್ರದೇಶದ ಸಂಖುವಸಭಾ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಲಘು ಭೂಕಂಪವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಘಟನೆಯಲ್ಲಿ ಯಾವುದೇ ರೀತಿಯ ಹಾನಿ ಸಂಭವಿಸಿಲ್ಲ ಎಂದು ಅಧಿಕಾರಿಗಳು ಹೇಳಿದ್ದಾರೆ. ಹಿಮಾಲಯದ ತಪ್ಪಲಿನಲ್ಲಿರುವ ನೇಪಾಳವು ಹೆಚ್ಚಿನ ಭೂಕಂಪನ ಅಪಾಯದ ವಲಯದಲ್ಲಿದೆ. 2015ರಲ್ಲಿ 7.8 ತೀವ್ರತೆಯ ಭೂಕಂಪ ಸಂಭವಿಸಿತ್ತು. ದುರ್ಘಟನೆಯಲ್ಲಿ 9 ಸಾವಿರಕ್ಕೂ ಅಧಿಕ ಮಂದಿ ಮೃತಪಟ್ಟಿದ್ದರು.

## ಆರೋಪ-ಪ್ರತ್ಯಾರೋಪದಲ್ಲಿ ಉಭಯ ದೇಶಗಳು

**ಸಿಯೋಲ್:** ಉತ್ತರ ಕೊರಿಯಾ ಮತ್ತು ದಕ್ಷಿಣ ಕೊರಿಯಾ ದೇಶಗಳ ಗಡಿಯಲ್ಲಿ ಮತ್ತೆ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿದೆ. ಎರಡೂ ದೇಶಗಳು ಪರಸ್ಪರ ಆರೋಪ ಪ್ರತ್ಯಾರೋಪಗಳಿಗೆ ತೊಡಗಿಕೊಂಡಿವೆ. ಗಡಿ ಭಾಗದಲ್ಲಿ ದಕ್ಷಿಣ ಕೊರಿಯಾ ಸೇನೆಯು ನಮ್ಮ ಸೈನಿಕರ ಮೇಲೆ ಎಚ್ಚರಿಕೆಯ ದಾಳಿ ನಡೆಸುವ ಮೂಲಕ ಗಂಭೀರ ಪ್ರಚೋದನೆ ಮಾಡಿದೆ. ದಕ್ಷಿಣ ಕೊರಿಯಾವು ಉದ್ದೇಶ ಪೂರ್ವಕವಾಗಿ ಉದ್ವಿಗ್ನ ಪರಿಸ್ಥಿತಿ ನಿರ್ಮಿಸುತ್ತಿದೆ ಎಂದು ಉತ್ತರ ಕೊರಿಯಾದ ಪೀಪಲ್ಸ್ ಆರ್ಮಿಯ ಜನರಲ್ ಸ್ಟಾಫ್‌ನ ಉಪಾಧ್ಯಕ್ಷ ಕೋ ಜೊಂಗ್ ಚೋಲ್ ಹೇಳಿದ್ದಾರೆ.

ಗಡಿ ಭದ್ರತೆಯನ್ನು ಉತ್ತಮ ಪಡಿಸುವ ಉದ್ದೇಶದಿಂದ ಹಾಗೂ ದಕ್ಷಿಣ ಕೊರಿಯಾದ ಗಡಿಯನ್ನು ಶಾಶ್ವತವಾಗಿ ನಿರ್ಬಂಧಿಸುವ ಸಲುವಾಗಿ ಹಲವು ಕಾಮಗಾರಿ ನಡೆಯುತ್ತಿದೆ. ಈ ಕುರಿತು ದಕ್ಷಿಣ ಕೊರಿಯಾದಲ್ಲಿರುವ ಅಮೆರಿಕ ಸೇನೆಗೆ ಮಾಹಿತಿ ನೀಡಿದ್ದೇವೆ ಎಂದು ಕೋ ಜೊಂಗ್ ಚೋಲ್ ತಿಳಿಸಿದ್ದಾರೆ. ಉತ್ತರ ಕೊರಿಯಾದ ಸೈನಿಕರು ಕೇಂದ್ರ, ಗಡಿ ಭಾಗದಲ್ಲಿ ಅತಿಕ್ರಮವಾಗಿ ಗಡಿಯನ್ನು ದಾಟಲು ಪ್ರಯತ್ನಿಸಿದ್ದರಿಂದ ಎಚ್ಚರಿಕೆಯ ದಾಳಿ ಮೂಲಕ ಎಚ್ಚರಿಕೆ ನೀಡಲಾಗಿದೆ ಎಂದು ದಕ್ಷಿಣ ಕೊರಿಯಾದ ಸೇನಾ ಜಂಟಿ ಮುಖ್ಯಸ್ಥರು ಹೇಳಿದ್ದಾರೆ. ಇತ್ತೀಚಿನ ದಿನಗಳಲ್ಲಿ ಉತ್ತರ ಕೊರಿಯಾ ಸೇನೆಯು ಗಡಿ ದಾಟಿದರೆ ದಕ್ಷಿಣ ಕೊರಿಯಾವು ಎಚ್ಚರಿಕೆಯ ದಾಳಿ ಅಥವಾ ಧ್ವನಿವರ್ಧಕದ ಮೂಲಕ ಎಚ್ಚರಿಕೆ ನೀಡುತ್ತಿದೆ.



## ಯಶ್ ತಾಯಿ ಪುಷ್ಪಗೆ ದೀಪಿಕಾ ದಾಸ್ ತಿರುಗೇಟು

ಪುಷ್ಪಮ್ಮ ಹೇಳಿದ್ದೇನು

ಯಶ್ ತಾಯಿ ಪುಷ್ಪಾ ಅರುಣ್‌ಕುಮಾರ್ ಕೊತ್ತಲವಾಡಿ ಸಿನಿಮಾ ನಿರ್ಮಾಣ ಮಾಡಿ, ತೆರೆಗೆ ತಂದಿದ್ದಾರೆ. ಈ ಸಿನಿಮಾ ರಿಲೀಸ್ ಬಳಿಕ ಖಾಸಗಿ ವಾಹಿನಿಯೊಂದಕ್ಕೆ ಸಂದರ್ಶನ ನೀಡಿದ್ದಾರೆ. ಈ ವೇಳೆ ಎದುರಾದ ಪ್ರಶ್ನೆಗೆ ಉತ್ತರಿಸಿರುವ ಪುಷ್ಪಾ ಅರುಣ್‌ಕುಮಾರ್ ದೀಪಿಕಾ ದಾಸ್ ಬಗ್ಗೆ ಮಾತನಾಡಿದ್ದಾರೆ. ದೀಪಿಕಾ ದಾಸ್ ಅವರಿಗೆ ಮುಂದಿನ ಸಿನಿಮಾದಲ್ಲಿ ಚಾನ್ಸ್ ಕೊಡ್ತಿರಂತೆ ಎನ್ನುವ ಪ್ರಶ್ನೆಗೆ ಉತ್ತರಿಸಿದ ಪುಷ್ಪ ಅರುಣ್‌ಕುಮಾರ್. 'ನಮಗೂ ದೀಪಿಕಾ ದಾಸ್‌ಗೆ ಆಗೊಲ್ಲ. ಅವಳು ಯಾವ ದೊಡ್ಡ ಹೀರೋಯಿನ್ ಅಂತಾ ಆಯ್ಕೆ ಮಾಡಿಕೊಳ್ಳಲಿ, ಅವಳು ಏನು ಸಾಧನೆ ಮಾಡಿದ್ದಾಳೆ. ಅವಳು ಸಂಬಂಧ ಆದರೂ ದೂರದಲ್ಲೇ ಇಟ್ಟಿದ್ದೀವಿ, ಈಥರ ಪ್ರಶ್ನೆ ಕೇಳಬೇಡಿ ನಮ್ಮ ಮಗ ಬೈಯೋದಿಲ್ವಾ..' ಎಂದು ಗರಂ ಆಗಿ ಉತ್ತರಿಸಿದ್ದಾರೆ.

ಪುಷ್ಪ ಅರುಣ್‌ಕುಮಾರ್ ಮಾತನಾಡಿರುವ ಈ ವಿಡಿಯೋ ಜಾಲತಾಣದಲ್ಲಿ ಸಖತ್ ವೈರಲ್ ಆಗ್ತಿದೆ. ಈ ವಿಡಿಯೋ ಬಗ್ಗೆ ನಟಿ ದೀಪಿಕಾ ದಾಸ್ ಸಾಮಾಜಿಕ ಜಾಲತಾಣದ ಮೂಲಕ ತಿರುಗೇಟು ನೀಡಿದ್ದಾರೆ. 'ಹೊಸ ಕಲಾವಿದರನ್ನ ಬೆಳೆಸೋ ಜನರು ಕಲಾವಿದರಿಗೆ ಬೆಲೆ ಕೊಡುವುದನ್ನ ಕಲಿತಿರಬೇಕು. ಇಲ್ಲಿಯವರೆಗೂ ಯಾರ ಹೆಸರನ್ನೂ ಹೇಳಿಕೊಂಡು ಬಂದಿಲ್ಲ ಮುಂದೆನೂ ಬರೊಲ್ಲ. ಕೆಲವರಿಗೆ ಬೆಲೆಕೊಟ್ಟ ಮಾತ್ರಕ್ಕೆ ಯಾರನ್ನು ಕಂಡು ಭಯ ಯಾರಿಗೂ ಇಲ್ಲ. ಅದು ಅಮ್ಮ ಆದರೂ ಸರಿ, ದೊಡ್ಡಮ್ಮ ಆದರೂ ಸರಿ. ವಿಥ್ ಡ್ಯೂ ರೆಸ್ಪೆಕ್ಟ್ ಟು ಸ್ಟಾರ್ ಆಫ್ ಅವರ್ ಇಂಡಸ್ಟ್ರಿ. ನಾನು ಯಾವ ದೊಡ್ಡ ನಟಿ ಅಲ್ಲದಿದ್ದರೂ, ಏನು ಸಾಧನೆ ಮಾಡದಿದ್ದರೂ.. ನನ್ನ ಬಗ್ಗೆ ಹೀನಾಯವಾಗಿ ಮಾತನಾಡುವ ಯೋಗ್ಯತೆ ಯಾರಿಗೂ ಇಲ್ಲ' ಎಂದು ಯಶ್ ತಾಯಿಗೆ ದೀಪಿಕಾ ತಿರುಗೇಟು ನೀಡಿದ್ದಾರೆ.

## ರಾಗಿಣಿ ಎಂಎಂಎಸ್-3ಗೆ ಮಿಲ್ಕಿ ಬ್ಯೂಟಿ

ತಮನ್ನಾ ಭಾಟಿಯಾ ಬಾಲಿವುಡ್‌ನಲ್ಲಿ 'ಆಜ್ ಕಿ ರಾತ್' ಅಂತಾ ಸೊಂಟ ಬಳುಕಿಸುವ ಮೂಲಕ ಪ್ರೇಕ್ಷಕರ ಗಮನ ಸೆಳೆದಿದ್ದರು. ಸ್ತ್ರೀ-2 ಸಿನಿಮಾದ ಹಾಡಿನ ಮೂಲಕ ಬಾಲಿವುಡ್‌ನಲ್ಲೂ ಕಮಾಲ್ ಮಾಡಿದ್ದರು. ಇದಾದ ಬಳಿಕ ಒಂದರ ಮೇಲೊಂದರಂತೆ ತಮನ್ನಾ ಬಾಲಿವುಡ್ ಹಾಗೂ ಟಾಲಿವುಡ್ ಸಿನಿಮಾದಲ್ಲಿ ಬ್ಯುಸಿಯಾಗಿದ್ದಾರೆ. ಒಡೆಲಾ-2 ಹಾಗೂ ರೇಡ್-2 ಸಿನಿಮಾದ ನಂತರ ಇದೀಗ ಮತ್ತೊಂದು ಹೊಸ ಸಿನಿಮಾಗೆ ಸಹಿ ಹಾಕಿದ್ದಾರಂತೆ ಮಿಲ್ಕಿ ಬ್ಯೂಟಿ. ಇನ್ನೊಂದು ವಿಶೇಷ ಅಂದರೆ ತಮನ್ನಾ ಬಾಲಿವುಡ್‌ನಲ್ಲೇ ಸೆಟ್ಲ್ ಆಗಿದ್ದಾರೆ. ಬ್ಯಾಕ್ ಟು ಬ್ಯಾಕ್ 4 ಹಿಂದಿ ಸಿನಿಮಾಗಳನ್ನ ಒಪ್ಪಿಕೊಂಡಿರುವ ತಮನ್ನಾ, ರಾಗಿಣಿ ಎಂಎಂಎಸ್-3 ಸಿನಿಮಾವನ್ನ ಒಪ್ಪಿಕೊಂಡಿದ್ದಾರೆ ಎನ್ನುವ ಮಾಹಿತಿ ಸದ್ಯ ಸಂಚಲನವನ್ನ ಸೃಷ್ಟಿಸಿದೆ. ರಾಗಿಣಿ ಎಂಎಂಎಸ್-2 ಸಿನಿಮಾದಲ್ಲಿ ಮಾಜಿ ನೀಲಿತಾರೆ ಸನ್ನಿ ಲಿಯೋನ್ ನಟಿಸಿದ್ದರು. ಹಸಿ ಬಿಸಿ ದೃಶ್ಯಗಳ ಜೊತೆಗೆ ಹಾರರ್ ಟಚ್ ಕಥೆಯಾಧಾರಿತ ಈ ಸಿನಿಮಾ ಸಖತ್ ಸೌಂಡ್ ಮಾಡಿತ್ತು. ಇದೀಗ ಈ ಸಿನಿಮಾದ ಪಾರ್ಟ್-3 ಬಗ್ಗೆ ನಿರ್ಮಾಪಕ ಏಕ್ತಾ ಯೋಜನೆಯನ್ನ ಹಾಕಿಕೊಂಡಿದ್ದು, ಈ ಸಿನಿಮಾದ ನಾಯಕಿ ಪಾತ್ರಕ್ಕಾಗಿ ತಮನ್ನಾ ಅವರನ್ನ ಅಪ್ರೋಚ್ ಮಾಡಲಾಗಿದೆಯಂತೆ. ಈ ಸಿನಿಮಾ ಬಗ್ಗೆ ವ್ಯಾನ್ ಚಿತ್ರದ ಸೆಟ್‌ನಲ್ಲಿ ಏಕ್ತಾ ಕಪೂರ್ ಚರ್ಚಿಸಿದ್ದಾರಂತೆ. ಅಲ್ಲದೇ ಈ ಸಿನಿಮಾವನ್ನ ಬೇಗನೇ ಶುರುಮಾಡಿ, 2025ಡಿ ವರ್ಷಾಂತ್ಯಕ್ಕೆ ರಿಲೀಸ್ ಮಾಡುವ ಪ್ಲ್ಯಾನ್ ಹಾಕಿಕೊಂಡಿದ್ದಾರೆ ಎನ್ನಲಾಗ್ತಿದೆ.





## ಡಾಲಿ ಹುಟ್ಟುಹಬ್ಬಕ್ಕೆ ಜಿಂಗೋ ಲುಕ್ ಪೋಸ್ಟರ್ ರಿಲೀಸ್

ಡಾಲಿ ಪಿಕ್ಚರ್ಸ್ ಮತ್ತು ತ್ರಿಶೂಲ್ ವಿಜನರಿ ಸ್ಟುಡಿಯೋಸ್ ನಿರ್ಮಾಣದಲ್ಲಿ ಡಾಲಿ ಧನಂಜಯ ಅಭಿನಯದ ಜಿಂಗೋ ಚಿತ್ರದ ಸೆಕೆಂಡ್ ಲುಕ್ ಪೋಸ್ಟರ್ ಅನ್ನು ನಟ ಧನಂಜಯ ಅವರ ಹುಟ್ಟುಹಬ್ಬದ ಸಂದರ್ಭದಲ್ಲಿ ಬಿಡುಗಡೆ ಮಾಡಲಾಗಿದೆ. ಕಳೆದ ವರ್ಷ ಬಿಡುಗಡೆಯಾದ ಚಿತ್ರದ ಅನೌನ್ಸ್ಮೆಂಟ್ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಅಪಾರ ಚರ್ಚೆಯನ್ನು ಸೃಷ್ಟಿಸಿತು, ಡಾಲಿ ಧನಂಜಯ ಅವರ ಜಿಂಗೋ ಮೋನೋಲಾಗ್ ಮತ್ತು ಅದರ ಜೊತೆಗಿನ ಸಂಗೀತ ನರ ನರ ಜಿಂಗೋ ಜನರ ಮೆಚ್ಚುಗೆ ಪಡೆಯಿತು. ಪ್ರೇಕ್ಷಕರ ಅಗಾಧ ಪ್ರತಿಕ್ರಿಯೆಯಿಂದ ಉತ್ಸಾಹಗೊಂಡ ಚಿತ್ರ ನಿರ್ಮಾಪಕರು ಕಥೆಯ ವ್ಯಾಪ್ತಿ ಮತ್ತು ಚಿತ್ರದ ಕ್ಯಾನ್ವಾಸ್ ಅನ್ನು ಗಣನೀಯವಾಗಿ ವಿಸ್ತರಿಸಿದ್ದಾರೆ. ಸಣ್ಣ ಪಟ್ಟಣದ ಕಥೆಯಾಗಿ ಆರಂಭವಾದದ್ದು ಇದೀಗ ಚಿತ್ರ ತನ್ನ ಕ್ಯಾನ್ವಾಸ್ ಅನ್ನು ವಿಸ್ತರಿಸಿಕೊಂಡಿದ್ದು ಒಂದು ಅಪ್ಪಟ ದೊಡ್ಡ ಪರದೆ ವೀಕ್ಷಣೆಗೆ ಸರಿಹೊಂದುವಂತೆ ದೃಶ್ಯಾವಳಿಗಳನ್ನು ಹೆಣೆಯಲಾಗಿದೆ. ನಮಗೆ ಸಿಕ್ಕ ಪ್ರತಿಕ್ರಿಯೆ ನಮ್ಮನ್ನು ದೊಡ್ಡದಾಗಿ ಯೋಚಿಸಲು ಪ್ರೇರೇಪಿಸಿದೆ. 2026ರಲ್ಲಿ ವೀಕ್ಷಕರಿಗೆ ವಿಶಿಷ್ಟ ಚಿತ್ರರಂಗದ ಅನುಭವವನ್ನು ನೀಡುತ್ತದೆ. ಪೊಲಿಟಿಕಲ್ ಸಟೈರ್, ಕಾಮಿಡಿ, ಆಕ್ಷನ್, ಥ್ರಿಲ್ಲರ್ ಅಂಶಗಳನ್ನು ಹದವಾಗಿ ಬೆರೆಸಿ ಪ್ರೇಕ್ಷಕರಿಗೆ ಅತ್ಯುತ್ತಮ ಮನರಂಜನೆ ಕೊಡಬೇಕು ಎಂಬುದೇ ನಮ್ಮ ಗುರಿ. ಸದ್ಯ ಕನ್ನಡ, ತೆಲುಗು ಭಾಷೆಗಳಲ್ಲಿ ನಿರ್ಮಾಣವಾಗುತ್ತಿದ್ದು, ಅತ್ಯುತ್ತಮ ನಟರ ತಾರಾ ಬಳಗವಿರುತ್ತದೆ ಎಂದು ನಿರ್ಮಾಣ ತಂಡ ತಿಳಿಸಿದೆ.



## ಬಿಕಿನಿ ಫೋಟೋ ಹಾಕಿ ಕಾಮೆಂಟ್ಸ್ ಆಫ್


ಆರೇಂಜ್ ಬಿಕಿನಿ ಧರಿಸಿರುವ ಆಲಿಯಾ

ಬಿಟೌನ್ ಬ್ಯೂಟಿ ಆಲಿಯಾ ಭಟ್ ಇದೀಗ ಇನ್ಸ್ಟಾಗ್ರಾಂನಲ್ಲಿ ಪೋಸ್ಟ್ ಮಾಡಿರುವ ಬೋಲ್ಡ್ ಫೋಟೋಗಳು ಭಾರೀ ಕುತೂಹಲಕ್ಕೆ ಕಾರಣವಾಗಿದೆ. ವೆಕೇಷನ್‌ಗೆ ಹೋಗಿರುವ ಆಲಿಯಾ ಬೀಚ್ ಸೈಡ್ ತಂಪು ತಂಗಾಳಿಯಲ್ಲಿ ಹಾಯಾಗಿ ಸಮಯ ಕಳೆಯುತ್ತಿರುವುದು ಕಂಡುಬಂದಿದೆ. ಹಾಗಂತ ಸೂಪರ್ ಅಂತ ಕಾಮೆಂಟ್ ಮಾಡ್ತೀನಿ ಅಂದ್ರೆ ಅದಕ್ಕೆ ಅವಕಾಶ ಕೊಟ್ಟಿಲ್ಲ ಆಲಿಯಾ. ಕಾಮೆಂಟ್ಸ್ ಸೆಕ್ಷನ್‌ನ್ನು ಆಫ್ ಮಾಡಿದ್ದಾರೆ ಆಲಿಯಾ. ಅವರು ಹೀಗ್ ಮಾಡಿರೋದು ಮೊದಲೇನಲ್ಲ. ಕೆಲವೊಂದು ವೈಯಕ್ತಿಕ ಫೋಟೋ ಹಾಕಿದಾಗ ಆಲಿಯಾ ಕಾಮೆಂಟ್ ಸೆಕ್ಷನ್ ಆಫ್ ಮಾಡುವ ಪದ್ಧತಿ ರೂಢಿಸಿಕೊಂಡಿದ್ದಾರೆ. ಬ್ಯಾಡ್ ಕಾಮೆಂಟ್ಸ್‌ಗಳ್ಯಾಕೆ ಅದರಿಂದ ಮನಸ್ಸಿಗೆ ನೋವು ಮಾಡಿಕೊಳ್ಳುವ ತಲೆನೋವ್ಯಾಕೆ ಅನ್ನೋದು ಆಲಿಯಾ ಪಾಲಿಸಿ ಇರಬಹುದು. ಹೀಗಾಗಿ ಈಗ ಪೋಸ್ಟ್ ಮಾಡಿರುವ ಆರೇಂಜ್ ಬಿಕಿನಿ ಧರಿಸಿರುವ ಬೋಲ್ಡ್ ಫೋಟೋಗಳಿಗೂ ಕಾಮೆಂಟ್ಸ್ ಆಫ್ ಮಾಡಿದ್ದಾರೆ. ಮೇಕಪ್ ಇಲ್ಲದೇ ಸುಂದರವಾಗಿ ಕಾಣಿಸುವ ನಟಿಯರಲ್ಲಿ ಆಲಿಯಾ ಕೂಡ ಒಬ್ಬರು. ಅನೇಕ ಬಾರಿ ಮೇಕಪ್ ಇಲ್ಲದೇ ಕಾಣಿಸಿಕೊಳ್ಳೋದುಂಟು. ಇದೀಗ ತಮ್ಮ ನೈಸರ್ಗಿಕ ಅಂದಕ್ಕೆ ಚೆಂದದ ಕ್ಯಾಪ್ಷನ್ ಕೊಟ್ಟಿರುವ ಆಲಿಯಾ ಸಮುದ್ರದ ಉಪ್ಪು ಹಾಗೂ ಸಮುದ್ರದ ತಂಗಾಳಿ ತಮ್ಮ ಕೇಶವಿನ್ಯಾಸ ಮಾಡಿದೆ ಎಂದು ಕ್ರೆಡಿಟ್ ಕೊಟ್ಟಿದ್ದಾರೆ. ಆಲಿಯಾಳ ಈ ನೈಸರ್ಗಿಕ ಅಂದಕ್ಕೆ ಕಾಮೆಂಟ್ಸ್ ಮಾಡೋದಂತೂ ಅಸಾಧ್ಯ, ನೋಡಬಹುದಷ್ಟೇ. ಸಾಮಾನ್ಯವಾಗಿ ಆಲಿಯಾ ಮಗಳು ಹಾಗೂ ಪತಿ ಜೊತೆ ವೆಕೇಷನ್ ಹೋಗೋದು ಸಾಮಾನ್ಯ. ಆದರೆ ಈ ಬಾರಿ ತಾಯಿ ತಂಗಿ ಹಾಗೂ ತಂಗಿಯ ಬಾಯ್‌ಫ್ರೆಂಡ್ ಜೊತೆಯಲ್ಲಿ ಆಲಿಯಾ ಪ್ರವಾಸಕ್ಕೆ ತೆರಳಿದ್ದಾರೆ. ಈ ಹಿಂದೆ ಫೋಟೋ ಪೋಸ್ಟ್ ಮಾಡಿದ್ದರು. ಇದೀಗ ಆಲಿಯಾಳ ಸಿಂಗಲ್ ಸೆಲ್ಫಿ ಕ್ಲಿಕ್‌ಗಳು ವೈರಲ್ ಆಗಿವೆ.

## ದರ್ಶನ್ ಬಳ್ಳಾರಿ ಜರ್ನಿ ಅರ್ಜಿ ವಿಚಾರಣೆ

ರೇಣುಕಾಸ್ವಾಮಿ ಕೊಲೆ ಆರೋಪಿ ದರ್ಶನ್ ಸದ್ಯಕ್ಕೆ ಪರಪ್ಪನ ಅಗ್ರಹಾರ ಜೈಲಿನಲ್ಲಿದ್ದಾರೆ. ಸೆಕ್ಯೂರಿಟಿ ಕಾರಣದಿಂದ ಅವರನ್ನ ಬಳ್ಳಾರಿ ಜೈಲಿಗೆ ಕಳುಹಿಸಲು ಈಗಾಗಲೇ ನ್ಯಾಯಾಲಯಕ್ಕೆ ಜೈಲಧಿಕಾರಿಗಳು ಮನವಿ ಮಾಡಿಕೊಂಡಿದ್ದರು.

ಆಗಸ್ಟ್ 23 ವಿಚಾರಣೆ ನಡೆದಿದ್ದು ಆಕ್ಷೇಪಣೆ ಅರ್ಜಿ ಸಲ್ಲಿಸೋದಕ್ಕೂ ಆರೋಪಿ ಪರ ವಕೀಲರಿಗೆ ಕೋರ್ಟ್ ಅವಕಾಶ ನೀಡಿತ್ತು. ಇದೀಗ ಶನಿವಾರ ನಡೆದ ವಿಚಾರಣೆಯಲ್ಲಿ ಬೇರೆ ಜೈಲಿಗೆ ದರ್ಶನ್ ವರ್ಗಾವಣೆ ವಿಚಾರವನ್ನು ನ್ಯಾಯಾಲಯವು ಮುಂದೂಡಿಕೆ ಮಾಡಿದೆ. ದರ್ಶನ್ ಪರ ವಕೀಲರು ಸಮಯಾವಕಾಶ ಕೇಳಿದ್ದು ಇದೇ ಆಗಸ್ಟ್ 30ಕ್ಕೆ ವರ್ಗಾವಣೆ ಕುರಿತ ವಿಚಾರಣೆ ನಡೆಯಲಿದೆ. ಕೊಲೆ ಆರೋಪಿಗಳಾದ ದರ್ಶನ್, ಪವಿತ್ರಾ ಹಾಗೂ ಒಟ್ಟೂ ಏಳು ಆರೋಪಿಗಳನ್ನು 57ನೇ ಸೆಷನ್ಸ್ ಕೋರ್ಟ್‌ನಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ಜೈಲಿನಿಂದಲೇ ಹಾಜರಾಗಿದ್ದರು. ಕೋರ್ಟ್ ಹಾಲ್ ನಂ 64ರ ನ್ಯಾಯಾಧೀಶರ ಮುಂದೆ ಆರೋಪಿಗಳನ್ನ ಹಾಜರುಪಡಿಸಲಾಗಿತ್ತು. ಪ್ರದೂಷ್ ಪರ ವಕೀಲರಿಂದ ಮಾತ್ರ ವರ್ಗಾವಣೆಗೆ ಆಕ್ಷೇಪಣಾ ಅರ್ಜಿ ಸಲ್ಲಿಕೆಯಾಗಿದೆ.



ಇನ್ನುಳಿದ ಆರೋಪಿಗಳ ಪರವಾಗಿ ಆಗಸ್ಟ್ 30ರ ವರೆಗೆ ವಕೀಲರು ಸಮಯಾವಕಾಶ ಕೇಳಿಕೊಂಡಿದ್ದರು. ಹೀಗಾಗಿ ಅಲ್ಲಿಯವರೆಗೂ ಆರೋಪಿಗಳು ಪರಪ್ಪನ ಅಗ್ರಹಾರದಲ್ಲೇ ಇರ್ತಾರೆ. ಜೊತೆಗೆ ಆರೋಪಿಗಳ ನ್ಯಾಯಾಂಗ ಬಂಧನವೂ ಸಪ್ಟೆಂಬರ್ 9ರ ತನಕವೂ ವಿಸ್ತರಣೆ ಆಗಿದೆ.

## ಬಿಸಿಸಿಐಗೆ ಬಿಗ್ ಶಾಕ್: ಹೊಸ ಕಾನೂನಿನಿಂದ 400 ಕೋಟಿ ರೂ. ನಷ್ಟ ಸಾಧ್ಯತೆ

2025ರ ಏಷ್ಯಾಕಪ್‌ಗೆ ಮುನ್ನ ಬಿಸಿಸಿಐ ಅನಿರೀಕ್ಷಿತ ಆಘಾತವನ್ನು ಎದುರಿಸಿದೆ. ಕೇಂದ್ರ ಸರ್ಕಾರ ಇತ್ತೀಚೆಗೆ ಜಾರಿಗೆ ತಂದಿರುವ ಹೊಸ ಕಾನೂನುಗಳಿಂದಾಗಿ ಬಿಸಿಸಿಐ ಆದಾಯಕ್ಕೆ ಹೊಡೆತ ಬೀಳಲಿದೆ. ಏಕೆಂದರೆ ಕೇಂದ್ರ ಸರ್ಕಾರವು ರಾಷ್ಟ್ರೀಯ ಕ್ರೀಡಾ ಆಡಳಿತ ಕಾಯ್ದೆ 2025 ಅಡಿಯಲ್ಲಿ ಆನ್‌ಲೈನ್ ಗೇಮಿಂಗ್ ಪ್ರಚಾರ ಮತ್ತು ನಿಯಂತ್ರಣ ಕಾನೂನುಗಳನ್ನು ಜಾರಿಗೆ ತಂದಿದೆ. ಈ ಕಾನೂನುಗಳಿಂದಾಗಿ ಆನ್‌ಲೈನ್ ಗೇಮಿಂಗ್ ಕಂಪನಿಗಳೊಂದಿಗಿನ ಬಿಸಿಸಿಐ ಯಾವುದೇ ಪ್ರಾಯೋಜಕತ್ವ ಹೊಂದಬಾರದು. ಇದೇ ಕಾರಣದಿಂದಾಗಿ ಆನ್‌ಲೈನ್ ಗೇಮಿಂಗ್ ಕಂಪನಿಗಳ ಜೊತೆಗಿನ ಒಪ್ಪಂದಗಳನ್ನು ರದ್ದುಗೊಳಿಸಲು ಬಿಸಿಸಿಐ ಸಿದ್ಧವಾಗಿದೆ ಎಂದು ಕಾರ್ಯದರ್ಶಿ ದೇವಜಿತ್ ಸೈಕಿಯಾ ಹೇಳಿದ್ದಾರೆ.

ಆನ್‌ಲೈನ್ ಗೇಮಿಂಗ್ ಪ್ರಚಾರ ಮತ್ತು ನಿಯಂತ್ರಣ ಮಸೂದೆ 2025 ಅನ್ನು ಲೋಕಸಭೆಯಲ್ಲಿ ಅಂಗೀಕರಿಸಲಾಗಿದೆ. ಈ ಕಾನೂನಿನಡಿ ಹಣದ ಗೇಮಿಂಗ್ ಪ್ಲಾಟ್‌ಫಾರ್ಮ್‌ಗಳು ಮತ್ತು ಅವುಗಳ ಪ್ರವರ್ತಕರನ್ನು ನಿಷೇಧಿಸಲಾಗುತ್ತದೆ. ಈ ಕಾನೂನು ಬಿಸಿಸಿಐಗೆ ಆದಾಯದ ಮೇಲೆ ದೊಡ್ಡ ಪರಿಣಾಮ ಬೀರಲಿದೆ. ಏಕೆಂದರೆ ಡ್ರೀಮ್ 11 ಟೀಮ್ ಇಂಡಿಯಾದ ಪ್ರಾಯೋಜಕ. ಅಲ್ಲದೆ, ಮುಂದಿನ ಮೂರು ವರ್ಷಗಳ ಕಾಲ ಐಪಿಎಲ್ ಫ್ಯಾಂಟಸಿ ಹಕ್ಕುಗಳನ್ನು ಮೈ 11 ಸರ್ಕಲ್ ಹೊಂದಿದೆ.

ಇದೀಗ ಹೊಸ ಕಾನೂನುಗಳಿಂದಾಗಿ ಡ್ರೀಮ್ 11 ಹಾಗೂ ಮೈ 11 ಸರ್ಕಲ್ ಜೊತೆಗಿನ ಒಪ್ಪಂದವನ್ನು ಬಿಸಿಸಿಐ ರದ್ದುಗೊಳಿಸಬೇಕಿದೆ.

ಬಿಸಿಸಿಐ ಹಾಗೂ ಡ್ರೀಮ್ 11 ನಡುವೆ 358 ಕೋಟಿಗಳ ಒಪ್ಪಂದವಾಗಿದೆ. ಹಾಗೆಯೇ ಮೈ 11 ಸರ್ಕಲ್ ಕಂಪೆನಿ ಕೂಡ ಐಪಿಎಲ್ ಫ್ರಾಂಚೈಸಿಗಳೊಂದಿಗೆ ಒಪ್ಪಂದವನ್ನು ಹೊಂದಿದೆ. ಇದೀಗ ಈ ಎರಡು ಕಂಪೆನಿಗಳ ಜೊತೆಗಿನ ಒಪ್ಪಂದವನ್ನು ಕೊನೆಗೊಳಿಸುವುದರಿಂದ ಬಿಸಿಸಿಐಗೆ ಸುಮಾರು 400 ಕೋಟಿ ರೂ. ನಷ್ಟವಾಗುವ ಸಾಧ್ಯತೆಯಿದೆ.

ಗೇಮಿಂಗ್ ಕಂಪನಿಗಳಿಂದ ಪ್ರಾಯೋಜಕತ್ವ




ಈ ಬಗ್ಗೆ ಮಾತನಾಡಿದ ಬಿಸಿಸಿಐ ಕಾರ್ಯದರ್ಶಿ ದೇವಜಿತ್ ಸೈಕಿಯಾ, ಈ ಕಾನೂನು ಜಾರಿಗೆ ಬಂದ ನಂತರ ನಾವು ಅದನ್ನು ಪರಿಶೀಲಿಸುತ್ತೇವೆ. ಅನುಮತಿಸಿದರೆ ಮಾತ್ರ, ನಾವು ಆನ್‌ಲೈನ್ ಬೆಟ್ಟಿಂಗ್ ಮತ್ತು ಗೇಮಿಂಗ್ ಕಂಪನಿಗಳಿಂದ ಪ್ರಾಯೋಜಕತ್ವವನ್ನು ಪಡೆಯುತ್ತೇವೆ. ಅನುಮತಿಸದಿದ್ದರೆ, ನಾವು ಏನನ್ನೂ ಮಾಡಲು ಸಾಧ್ಯವಿಲ್ಲ. ಸಿಗರೇಟ್ ಮತ್ತು ಮದ್ಯದ ಬ್ರಾಂಡ್‌ಗಳನ್ನು ನಿಷೇಧಿಸಿದಾಗ ಬಿಸಿಸಿಐ ಅವುಗಳಿಂದ ಯಾವುದೇ ಪ್ರಾಯೋಜಕತ್ವವನ್ನು ಪಡೆದಿರಲಿಲ್ಲ. ಅದೇ ರೀತಿ ಈ ವಿಷಯದಲ್ಲೂ ಮುಂದುವರೆಯಲಿದ್ದೇವೆ ಎಂದು ತಿಳಿಸಿದ್ದಾರೆ.

ಹೊಸ ರಾಷ್ಟ್ರೀಯ ಕ್ರೀಡಾ ಆಡಳಿತ ಕಾಯ್ದೆ 2025 ರಲ್ಲಿ, ಭಾರತವು ಪಾಕಿಸ್ತಾನದೊಂದಿಗಿನ ದ್ವಿಪಕ್ಷೀಯ ಕ್ರಿಕೆಟ್ ಅನ್ನು ನಿಷೇಧಿಸಿರುವುದನ್ನು ಮುಂದುವರಿಸಲಾಗಿದೆ. ಆದಾಗ್ಯೂ, ಅಂತರರಾಷ್ಟ್ರೀಯ ಪಂದ್ಯಾವಳಿಗಳಲ್ಲಿ ಪಾಕ್ ವಿರುದ್ಧ ಆಡಲು ಭಾರತಕ್ಕೆ ಅವಕಾಶ ನೀಡಲಾಗಿದೆ. ಹೀಗಾಗಿ ಮುಂಬರುವ ಏಷ್ಯಾಕ್ ಟಿ20 ಟೂರ್ನಿಯಲ್ಲಿ ಭಾರತ ಮತ್ತು ಪಾಕಿಸ್ತಾನ್ ನಡುವಣ ಪಂದ್ಯ ನಡೆಯುವುದು ಖಚಿತ.

ಆದರೆ ಉಭಯ ದೇಶಗಳ ನಡುವಣ ದ್ವಿಪಕ್ಷೀಯ ಸರಣಿಗೆ ಯಾವುದೇ ಅವಕಾಶವಿಲ್ಲ. ಅದರಂತೆ ಕೇಂದ್ರ ಸರ್ಕಾರ ರೂಪಿಸಿರುವ ಕ್ರೀಡಾ ಸಂಬಂಧಿತ ನೀತಿಗಳನ್ನು ಬಿಸಿಸಿಐ ಸಂಪೂರ್ಣವಾಗಿ ಪಾಲಿಸುತ್ತದೆ. ಆಟಗಾರರು ಮತ್ತು ತಂಡಗಳ ಹಿತಾಸಕ್ತಿಗಳನ್ನು ಗಮನದಲ್ಲಿಟ್ಟುಕೊಂಡು ಸರ್ಕಾರ ಈ ನಿರ್ಧಾರಗಳನ್ನು ತೆಗೆದುಕೊಂಡಿದೆ ಮತ್ತು ಈ ನೀತಿಗಳು ಭಾರತದಲ್ಲಿ ನಡೆಯುವ ಭವಿಷ್ಯದ ಪಂದ್ಯಾವಳಿಗಳಿಗೂ ಅನ್ವಯಿಸುತ್ತವೆ ಎಂದು ದೇವಜಿತ್ ಸೈಕಿಯಾ ಹೇಳಿದ್ದಾರೆ.

## ಭಾರತ ಎ ತಂಡಕ್ಕೆ ರೋಹಿತ್ ಶರ್ಮಾ..!

ಭಾರತ ಏಕದಿನ ತಂಡದ ನಾಯಕ ರೋಹಿತ್ ಶರ್ಮಾ ಇಂಡಿಯಾ ಎ ಪರ ಕಣಕ್ಕಿಳಿಯುವ ಸಾಧ್ಯತೆಯಿದೆ. ರೆವ್‌ಸ್ಪೋರ್ಟ್ಸ್ ವರದಿ ಪ್ರಕಾರ, ಆಸ್ಟ್ರೇಲಿಯಾ ಪ್ರವಾಸದ ತಯಾರಿಯ ಭಾಗವಾಗಿ ಸೆಪ್ಟೆಂಬರ್-ಅಕ್ಟೋಬರ್‌ನಲ್ಲಿ ನಡೆಯಲಿರುವ ಭಾರತ ಎ ಮತ್ತು ಆಸ್ಟ್ರೇಲಿಯಾ ಎ ನಡುವಣ ಏಕದಿನ ಸರಣಿಯಲ್ಲಿ ಹಿಟ್‌ಮ್ಯಾನ್ ಕಣಕ್ಕಿಳಿಯಲಿದ್ದಾರೆ.

ಏಕೆಂದರೆ ಮಾರ್ಚ್‌ನಲ್ಲಿ ನಡೆದ ಚಾಂಪಿಯನ್ಸ್ ಟ್ರೋಫಿಯ ನಂತರ ಭಾರತದ ಏಕದಿನ ನಾಯಕ ರೋಹಿತ್ ಶರ್ಮಾ ಯಾವುದೇ ಅಂತರರಾಷ್ಟ್ರೀಯ ಕ್ರಿಕೆಟ್ ಆಡಿಲ್ಲ.

ಇನ್ನು ಐಪಿಎಲ್ ನಂತರ ಯಾವುದೇ ಪಂದ್ಯದಲ್ಲೂ ಕಾಣಿಸಿಕೊಂಡಿಲ್ಲ. ಇತ್ತ ಸೆಪ್ಟೆಂಬರ್‌ನಲ್ಲಿ ನಡೆಯಲಿರುವ ಏಷ್ಯಾಕಪ್ ಬಳಿಕ ಟೀಮ್ ಇಂಡಿಯಾ ಆಸ್ಟ್ರೇಲಿಯಾ ವಿರುದ್ಧದ ಏಕದಿಕ ಸರಣಿಗೆ ತೆರಳಲಿದೆ.

ಅದಕ್ಕೂ ಮುನ್ನ ಸ್ಪರ್ಧಾತ್ಮಕ ಪಂದ್ಯವಾಡಲು ರೋಹಿತ್ ಶರ್ಮಾ ನಿರ್ಧರಿಸಿದ್ದಾರೆ. ಅದರಂತೆ ಸೆಪ್ಟೆಂಬರ್-ಅಕ್ಟೋಬರ್ ನಡುವೆ ನಡೆಯಲಿರುವ ಭಾರತ ಎ ತಂಡದ ಸರಣಿಯಲ್ಲಿ ಕಣಕ್ಕಿಳಿಯಲು ಹಿಟ್ ಮ್ಯಾನ್ ಮುಂದಾಗಿದ್ದಾರೆ. ಭಾರತ ತಂಡವು ಅಕ್ಟೋಬರ್‌ನಲ್ಲಿ ಆಸ್ಟ್ರೇಲಿಯಾ ಪ್ರವಾಸ ಕೈಗೊಳ್ಳಲಿದ್ದು, ಈ ಸರಣಿಯಲ್ಲಿ ಮೂರು ಏಕದಿನ ಪಂದ್ಯಗಳು ಮತ್ತು ಐದು ಟಿ20 ಪಂದ್ಯಗಳನ್ನು ಆಡಲಾಗುತ್ತದೆ. ಈ ಸರಣಿಗೂ ಮುನ್ನ ಭಾರತ ಎ ತಂಡ ಆಸ್ಟ್ರೇಲಿಯಾದಲ್ಲಿ ಸರಣಿ ಆಡಲಿದೆ. ಈ ಸರಣಿಯಲ್ಲಿ ರೋಹಿತ್ ಶರ್ಮಾ ಕಾಣಿಸಿಕೊಳ್ಳುವ ಸಾಧ್ಯತೆಯಿದೆ. ತರಬೇತಿ ಆರಂಭಿಸಿದ ರೋಹಿತ್ ಶರ್ಮಾ ಮುಂಬರುವ ಸರಣಿಗಾಗಿ ಫಿಟ್‌ನೆಸ್ ತರಬೇತಿಯನ್ನು ಪ್ರಾರಂಭಿಸಿದ್ದಾರೆ. ಟೀಮ್ ಇಂಡಿಯಾದ ಮಾಜಿ ಸಹಾಯಕ ಕೋಚ್ ಅಭಿಷೇಕ್ ನಾಯರ್ ಜೊತೆ ಜಿಮ್‌ನಲ್ಲಿ ಹಿಟ್ ಮ್ಯಾನ್ ಬೆವರಿಳಿಸಲಾರಂಭಿಸಿದ್ದು, ಈ ಮೂಲಕ ಫಿಟ್‌ನೆಸ್‌ನತ್ತ ಹೆಚ್ಚಿನ ಗಮನ ಹರಿಸಲು ಮುಂದಾಗಿದ್ದಾರೆ. ಅಲ್ಲದೆ ಉತ್ತಮ ಫಿಟ್‌ನೆಸ್ ಕಾಪಾಡಿಕೊಳ್ಳುವ ಮೂಲಕ 2027ರ ಏಕದಿನ ವಿಶ್ವಕಪ್ ಆಡುವ ವಿಶ್ವಾಸದಲ್ಲಿದ್ದಾರೆ ರೋಹಿತ್ ಶರ್ಮಾ.

2027ರ ಏಕದಿನ ವಿಶ್ವಕಪ್ ಆಡುವ ವಿಶ್ವಾಸ






## ದೇವದತ್ ಪಡಿಕ್ಕಲ್ 4ನೇ ಅರ್ಧಶತಕ

ಮೈಸೂರಿನ ಶ್ರೀಕಂಠದತ್ತ ನರಸಿಂಹ ರಾಜ ಒಡೆಯರ್ ಮೈದಾನದಲ್ಲಿ ನಡೆಯುತ್ತಿರುವ ಮಹಾರಾಜ ಟ್ರೋಫಿ ಟೂರ್ನಿಯ 23ನೇ ಪಂದ್ಯದಲ್ಲಿ ಹುಬ್ಬಳ್ಳಿ ಟೈಗರ್ಸ್ ತಂಡ ಭರ್ಜರಿ ಜಯ ಸಾಧಿಸಿದೆ. ಈ ಪಂದ್ಯದಲ್ಲಿ ಟಾಸ್ ಗೆದ್ದ ಹುಬ್ಬಳ್ಳಿ ಟೈಗರ್ಸ್ ತಂಡದ ನಾಯಕ ದೇವದತ್ ಪಡಿಕ್ಕಲ್ ಬೌಲಿಂಗ್ ಆಯ್ದುಕೊಂಡಿದ್ದರು. ಅದರಂತೆ ಮೊದಲು ಬ್ಯಾಟ್ ಮಾಡಿದ ಗುಲ್ಬರ್ಗ ಮಿಸ್ಟಿಕ್ಸ್ ಪರ ನಾಯಕ ಸ್ಮರಣ್ ರವಿಚಂದ್ರನ್ 84 ರನ್‌ಗಳ ಸ್ಫೋಟಕ ಅರ್ಧಶತಕ ಬಾರಿಸಿದರು. ಈ ಅರ್ಧಶತಕದ ನೆರವಿನೊಂದಿಗೆ ಗುಲ್ಬರ್ಗ ಮಿಸ್ಟಿಕ್ಸ್ ತಂಡವು 20 ಓವರ್‌ಗಳಲ್ಲಿ 7 ವಿಕೆಟ್ ಕಳೆದುಕೊಂಡು172 ರನ್ ಕಲೆಹಾಕಿತು. 173 ರನ್‌ಗಳ ಗುರಿ ಬೆನ್ನತ್ತಿದ ಹುಬ್ಬಳ್ಳಿ ಟೈಗರ್ಸ್ ಪರ ದೇವದತ್ ಪಡಿಕ್ಕಲ್ ಹಾಗೂ ಮೊಹಮ್ಮದ್ ತಾಹ ಆರಂಭಿಕರಾಗಿ ಕಣಕ್ಕಿಳಿದಿದ್ದರು. ಆದರೆ 17 ರನ್‌ಗಳಿಸಿ ತಾಹ ಬೇಗನೆ ಔಟಾದರು. ಆ ಬಳಿಕ ಜೊತೆಯಾದ ಪಡಿಕ್ಕಲ್ ಹಾಗೂ ಕಾರ್ತಿಕೇಯ ಅದ್ಭುತ ಜೊತೆಯಾಟ ಪ್ರದರ್ಶಿಸಿದರು. ಇದರ ನಡುವೆ ದೇವದತ್ ಪಡಿಕ್ಕಲ್ 47 ಎಸೆತಗಳಲ್ಲಿ 3 ಸಿಕ್ಸ್ ಹಾಗೂ 5 ಫೋರ್‌ಗಳೊಂದಿಗೆ69 ರನ್ ಬಾರಿಸಿದರು. ಇದು ಈ ಸೀಸನ್‌ನಲ್ಲಿನ ಪಡಿಕ್ಕಲ್ ಅವ 4ನೇ ಅರ್ಧಶತಕ ಎಂಬುದು ವಿಶೇಷ. ಇನ್ನು 48 ಎಸೆತಗಳನ್ನು ಎದುರಿಸಿದ ಕಾರ್ತಿಕೇಯ 3 ಸಿಕ್ಸ್ ಹಾಗೂ 8 ಫೋರ್‌ಗಳೊಂದಿಗೆ ಅಜೇಯ 81 ರನ್ ಬಾರಿಸಿದರು. ಈ ಮೂಲಕ 18.2 ಓವರ್‌ಗಳಲ್ಲಿ ಹುಬ್ಬಳ್ಳಿ ಟೈಗರ್ಸ್ ತಂಡವನ್ನು ಗುರಿ ತಲುಪಿಸಿ ಭರ್ಜರಿ 8 ವಿಕೆಟ್‌ಗಳ ಜಯ ತಂದುಕೊಟ್ಟರು.

## ಶುಭ್‌ಮನ್ ಗಿಲ್‌ಗೆ ಅನಾರೋಗ್ಯ

ಮುಂಬರುವ ಟೂರ್ನಿಗೆ ಡೌಟ್




ಟೀಮ್ ಇಂಡಿಯಾ ನಾಯಕ ಶುಭ್‌ಮನ್ ಗಿಲ್ ಮುಂಬರುವ ದುಲೀಪ್ ಟ್ರೋಫಿ ಟೂರ್ನಿಯಿಂದ ಹೊರಗುಳಿಯುವ ಸಾಧ್ಯತೆಯಿದೆ. ಅನಾರೋಗ್ಯದ ಕಾರಣ ಗಿಲ್ ಆಗಸ್ಟ್ 28 ರಿಂದ ಶುರು ಆಗಲಿರುವ ಟೂರ್ನಿಯಿಂದ ಹಿಂದೆ ಸರಿಯಲಿದ್ದಾರೆ ಎಂದು ವರದಿಯಾಗಿದೆ.

ಈ ಬಾರಿಯ ದುಲೀಪ್ ಟ್ರೋಫಿಯಲ್ಲಿ ಶುಭ್‌ಮನ್ ಗಿಲ್ ಉತ್ತರ ವಲಯ ತಂಡದ ನಾಯಕರಾಗಿ ಆಯ್ಕೆಯಾಗಿದ್ದರು.

ಅದರಂತೆ ಆಗಸ್ಟ್ 28 ರಿಂದ ಶುರುವಾಗಲಿರುವ ದುಲೀಪ್ ಟ್ರೋಫಿ ಟೂರ್ನಿಯಲ್ಲಿ ಕಣಕ್ಕಿಳಿಯಬೇಕಿತ್ತು. ಆದರೀಗ ಅನಾರೋಗ್ಯದ ಕಾರಣ ದೇಶೀಯ ಟೆಸ್ಟ್ ಟೂರ್ನಿಯಿಂದ ಹೊರಗುಳಿಯಲು ಗಿಲ್ ನಿರ್ಧರಿಸಿದ್ದಾರೆ ಎಂದು ವರದಿಯಾಗಿದೆ. ಒಂದು ವೇಳೆ ಅವರು ಟೂರ್ನಿ ಆರಂಭಕ್ಕೂ ಮುನ್ನ ಸಂಪೂರ್ಣ ಗುಣಮುಖರಾದರೂ, ಇಡೀ ಟೂರ್ನಿಯಲ್ಲಿ ಕಾಣಿಸಿಕೊಳ್ಳುವುದಿಲ್ಲ. ಏಕೆಂದರೆ ಶುಭ್‌ಮನ್ ಗಿಲ್ ಏಷ್ಯಾಕಪ್ ತಂಡದಲ್ಲಿ ಸ್ಥಾನ ಪಡೆದಿದ್ದಾರೆ. ಏಷ್ಯಾಕಪ್ ಟಿ20 ಟೂರ್ನಿಯುವ ಸೆಪ್ಟೆಂಬರ್ 9 ರಿಂದ ಶುರುವಾಗಲಿದೆ. ಅತ್ತ ದುಲೀಪ್ ಟ್ರೋಫಿ ನಡೆಯುವುದು ಆಗಸ್ಟ್ 28 ರಿಂದ ಸೆಪ್ಟೆಂಬರ್ 15 ರ ನಡುವೆ. ಹೀಗಾಗಿ ಶುಭ್‌ಮನ್ ಗಿಲ್ ಚೇತರಿಸಿಕೊಂಡು ದುಲೀಪ್ ಟ್ರೋಫಿ ಟೂರ್ನಿಯಲ್ಲಿ ಕಾಣಿಸಿಕೊಂಡರೂ ಸೆಪ್ಟೆಂಬರ್ ಮೊದಲ ವಾರದಲ್ಲೇ ಉತ್ತರ ವಲಯ ತಂಡವನ್ನು ತೊರೆಯಲಿದ್ದಾರೆ. ಅಲ್ಲದೆ ಸೆಪ್ಟೆಂಬರ್ ಮೊದಲ ವಾರದಲ್ಲಿ ಟೀಮ್ ಇಂಡಿಯಾವನ್ನು ಕೂಡಿಕೊಳ್ಳುವ ಸಾಧ್ಯತೆಯಿದೆ. ಭಾರತ ತಂಡವು ಏಷ್ಯಾಕಪ್ ಟೂರ್ನಿಗಾಗಿ ಸೆಪ್ಟೆಂಬರ್ ಮೊದಲ ವಾರದಲ್ಲಿ ವಿಶೇಷ ಶಿಬಿರ ಏರ್ಪಡಿಸುವ ಸಾಧ್ಯತೆಯಿದ್ದು, ಈ ಶಿಬಿರದ ಬೆನ್ನಲ್ಲೇ ಟೀಮ್ ಇಂಡಿಯಾ ಆಟಗಾರರು ಯುಎಇಗೆ ತೆರಳಲಿದ್ದಾರೆ. ಇನ್ನು ಶುಭ್‌ಮನ್ ಗಿಲ್ ದುಲೀಪ್ ಟ್ರೋಫಿಗೆ ಅಲಭ್ಯರಾದರೆ ಉತ್ತರ ವಲಯ ತಂಡವನ್ನು ಅಂಕಿ ಕುಮಾರ್ ಮುನ್ನಡೆಸುವ ಸಾಧ್ಯತೆಯಿದೆ.

**ಉತ್ತರ ವಲಯ ತಂಡ:** ಶುಭಂ ಖಜುರಿಯಾ, ಅಂಕಿತ್ ಕುಮಾರ್, ಆಯುಷ್ ಬದೋನಿ, ಯಶ್ ಧುಲ್, ಅಂಕಿತ್ ಕಲ್ಸಿ, ನಿಶಾಂತ್ ಸಂಧು, ಸಾಹಿಲ್ ಲೋತ್ರಾ, ಮಯಾಂಕ್ ದಾಗರ್, ಯುಧ್‌ವೀರ್ ಸಿಂಗ್ ಚರಕ್, ಅರ್ಷದೀಪ್ ಸಿಂಗ್, ಹರ್ಷಿತ್ ರಾಣಾ, ಅನ್ಶುಲ್ ಕಾಂಬೋಜ್, ಕನ್ಹಾವ ಕಾಂಬೋಜ್, ಅಕಿಬ್ ನಬಿ, ಕನ್ಹಯ್ಯ ವಧಾವನ್, ಶುಭಮನ್ ಗಿಲ್ (ಅಲಭ್ಯರಾಗುವ ಸಾಧ್ಯತೆ).

**ಏನಿದು ದುಲೀಪ್ ಟ್ರೋಫಿ** ದುಲೀಪ್ ಟ್ರೋಫಿಯು ಭಾರತದಲ್ಲಿ ಆಡಲಾಗುವ ದೇಶೀಯ ಟೆಸ್ಟ್ ಕ್ರಿಕೆಟ್ ಟೂರ್ನಿ. ಈ ಟೂರ್ನಿಗೆ ಮಾಜಿ ಆಟಗಾರ ದುಲೀಪ್‌ಸಿನ್‌ಜಿ ಅವರ ಹೆಸರನ್ನು ಇಡಲಾಗಿದೆ. 1961 ರಲ್ಲಿ ಶುರುವಾದ ಈ ಪಂದ್ಯಾವಳಿಯಲ್ಲಿ ಭಾರತದ ವಿವಿಧ ಭೌಗೋಳಿಕ ವಲಯಗಳನ್ನು ಪ್ರತಿನಿಧಿಸುವ ತಂಡಗಳು ಕಣಕ್ಕಿಳಿಯುತ್ತವೆ. ಅದರಂತೆ ಉತ್ತರ ವಲಯ, ದಕ್ಷಿಣ ವಲಯ, ಪಶ್ಚಿಮ ವಲಯ, ಕೇಂದ್ರ ವಲಯ, ಈಶಾನ್ಯ ವಲಯ ಹಾಗೂ ಪೂರ್ವ ವಲಯ ತಂಡಗಳು ದುಲೀಪ್ ಟ್ರೋಫಿ ಟೂರ್ನಿಯಲ್ಲಿ ಕಣಕ್ಕಿಳಿಯಲಿವೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966